
ಸಂಪುಟ: 05 ಸಂಚಿಕೆ: 40 ಪುಟಗಳು: 08 ಗುರುವಾರ 24 ಏಪ್ರಿಲ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನೀವು ನಿಮ್ಮ ಹೆಜ್ಜೆ ಗುರುತುಗಳನ್ನು ಕಾಲದ ಮರಳಿನಲ್ಲಿ ಬಿಡಲು ಬಯಸಿದರೆ ನಿಮ್ಮ ಪಾದಗಳನ್ನು ಎಳೆಯಬೇಡಿ.



# ಪಾಕ್ ಹೆಡೆಮುರಿ ಕಟ್ಟಲು ಭಾರತ ತಯಾರಿ

**ನಮೋ ನಿರ್ಧಾರ ದಾಳಿಗೆ ಪ್ರತಿಕಾರ**



**ಉಗ್ರರಿಬ್ಬರ ಹತ್ಯೆ** ಜಮ್ಮು ಮತ್ತು ಕಾಶ್ಮೀರದ ಬಾರಾಮುಲ್ಲಾ ಜಿಲ್ಲೆಯ ನಿಯಂತ್ರಣ ರೇಖೆಯ ಬಳಿ ಒಳನುಸುಳುವಿಕೆ ಪ್ರಯತ್ನದ ಸಂದರ್ಭದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಇಬ್ಬರು ಉಗ್ರರು ಸಾವನ್ನಪ್ಪಿದ್ದಾರೆ ಎಂದು ಸೇನೆ ತಿಳಿಸಿದೆ. ಪಹಲ್ಗಾಮ್ ದಾಳಿಯ ಬೆನ್ನಲ್ಲೆ ಭದ್ರತಾ ಪಡೆಗಳು ಭಯೋತ್ಪಾದಕರ ವಿರುದ್ಧ ಕಾರ್ಯಾಚರಣೆ ಚುರುಕುಗೊಳಿಸಿದ್ದಾರೆ. ಭಾರತೀಯ ಸೇನೆಯ ಚಿನಾರ್ ಕಾರ್ಪ್ಸ್ ತನ್ನ ಎಕ್ಸ್ ಖಾತೆಯ ಮೂಲಕ ಈ ಎನ್‌ಕೌಂಟರ್ ಬಗ್ಗೆ ಮಾಹಿತಿಯನ್ನು ನೀಡಿದೆ. ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ಗುಂಡಿನ ಚಕಮಕಿ ನಡೆದು ಇಬ್ಬರು ಭಯೋತ್ಪಾದಕರು ಸಾವನ್ನಪ್ಪಿದ್ದಾರೆ. ಭದ್ರತಾ ಪಡೆಗಳು ಒಳನುಸುಳುವಿಕೆ ಪ್ರಯತ್ನವನ್ನು ವಿಫಲಗೊಳಿಸಿವೆ. ಈ ಕಾರ್ಯಾಚರಣೆಯ ಸಮಯದಲ್ಲಿ , ಭಯೋತ್ಪಾದಕರಿಂದ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳು, ಗುಂಡುಗಳು ಮತ್ತು ಇತರ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಬರೆಯಲಾಗಿದೆ . ಇದಕ್ಕೂ ಮೊದಲು, ಬಾರಾಮುಲ್ಲಾದ ಉರಿ ನಲ್ಲಾದ ಸರ್ಜೀವನ್ ಪ್ರದೇಶದಿಂದ ಒಳನುಸುಳುವಿಕೆಯ ಬಗ್ಗೆ ಮಾಹಿತಿ ಬಂದಿತ್ತು ಎಂದು ಚಿನಾರ್ ಕಾರ್ಪ್ಸ್ ತಿಳಿಸಿದೆ.

## ರಾಜ್ಯದ ಇಬ್ಬರಿಗೆ ಗಾಯ



ಸೈನ್ಯದ ಸಮವಸ್ತ್ರದಲ್ಲಿದ್ದ ಭಯೋತ್ಪಾದಕರು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ಬಳಿಯ ಬೈಸರನ್ ಕಣಿವೆ ಪ್ರದೇಶದಲ್ಲಿ ನಡೆಸಿದ ಗುಂಡಿನ ದಾಳಿಯಲ್ಲಿ ರಾಜ್ಯದ ಇಬ್ಬರು ಗಾಯಗೊಂಡಿದ್ದು, ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ದಾಳಿಯ ವೇಳೆ 65 ವರ್ಷ ವಯಸ್ಸಿನ ಶಶಿಕುಮಾರಿ ನಾಯಕ್ ಅವರಿಗೆ ಗಾಯ ಆಗಿದ್ದು, ಪಹಲ್ಗಾಮ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಗುಂಡಿನ ದಾಳಿ ವೇಳೆ ಓಡುವ ರಭಸದಲ್ಲಿ ಜಾರಿ ಬಿದ್ದು ಮೂಳೆ ಮುರಿದುಕೊಂಡಿದ್ದಾರೆ. ಅಬ್ಜಯ ಎಂ. ರಾವ್ ಅವರಿಗೂ ಸಣ್ಣ ಪುಟ್ಟ ಗಾಯ ಆಗಿದ್ದು, ಇವರ ಆರೋಗ್ಯ ಸ್ಥಿರವಾಗಿದೆ ಎಂದು ಕೇಂದ್ರ ಸರಕಾರ ಮಾಹಿತಿ ನೀಡಿದೆ.

• **ಉದಯವಾಹಿನಿ, ನವದೆಹಲಿ**

ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಉಗ್ರ ದಾಳಿ ಹಿನ್ನೆಲೆ ಸೌದಿ ಅರೇಬಿಯಾಕ್ಕೆ ಭೇಟಿ ನೀಡಿದ್ದ ಪ್ರಧಾನಿ ಮೋದಿ ಅವರು, ಪ್ರವಾಸ ಮೊಟಕುಗೊಳಿಸಿ ಭಾರತಕ್ಕೆ ವಾಪಸ್ಸಾದರು. ದೆಹಲಿ ವಿಮಾನ ನಿಲ್ದಾಣಕ್ಕೆ ಬಂದಿಳಿದ ಅವರು, ಅಲ್ಲಿಯೇ ಅಧಿಕಾರಿಗಳ ಜೊತೆ ಭದ್ರತೆ ಕುರಿತ ಸಭೆ ನಡೆಸಿದರು. ಉಗ್ರ ದಾಳಿ ಮತ್ತು ಅದರ ವಿರುದ್ಧದ ಮುಂದಿನ ನಡೆಯ ಕುರಿತು ದೆಹಲಿ ವಿಮಾನ ನಿಲ್ದಾಣದಲ್ಲಿ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರೊಂದಿಗೆ ಸಭೆ ನಡೆಸಿದರು. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಕೂಡ ಸಭೆಯಲ್ಲಿ ಭಾಗವಹಿಸಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಣಿವೆಯಲ್ಲಿ ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ನಡೆದ ಅತ್ಯಂತ ಭೀಕರ ದಾಳಿ ಮತ್ತು ಅದರ ವಿರುದ್ಧ ದೇಶಾದ್ಯಂತ ವ್ಯಕ್ತವಾಗುತ್ತಿರುವ ಆಘಾತ ಮತ್ತು ಆಕ್ರೋಶದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಕೇಂದ್ರ ಗೃಹ ಸಚಿವ ಶಾ ಅವರು ಮಂಗಳವಾರ ಸಂಜೆಯೇ ಶ್ರೀನಗರಕ್ಕೆ ತೆರಳಿದ್ದಾರೆ. ಸರಣಿ ಸಭೆ ನಡೆಸಿ ಭದ್ರತಾ ಕ್ರಮಗಳ ಮೇಲೆ ಕಣ್ಣಿಟ್ಟಿದ್ದರೆ. ದಾಳಿ ನಡೆಸಿದ ಭಯೋತ್ಪಾದಕರ ಹೆಡೆಮುರಿ ಕಟ್ಟಿ ನ್ಯಾಯದ ಕಟಕಟೆ ಮುಂದೆ ನಿಲ್ಲಿಸಲಾಗುವುದು ಎಂದು ಪ್ರತಿಜ್ಞೆ ಮಾಡಿದ್ದಾರೆ.

**ಏನಾಯ್ತು....:** ದಕ್ಷಿಣ ಕಾಶ್ಮೀರದ ಪಹಲ್ಗಾಮ್ ನಲ್ಲಿರುವ ಪ್ರಮುಖ ಪ್ರವಾಸಿ ತಾಣದಲ್ಲಿ ಮಂಗಳವಾರ ಭಯೋತ್ಪಾದಕರು ದಾಳಿ ನಡೆಸಿ ಕನಿಷ್ಠ ಇಬ್ಬರು ಕನ್ನಡಿಗರು ಸೇರಿದಂತೆ 28ಕ್ಕೂ ಹೆಚ್ಚು ಜನರನ್ನು ಗುಂಡಿಕ್ಕಿ ಹತ್ಯೆ ಮಾಡಿದ್ದಾರೆ. ಇದರಲ್ಲಿ ಹೆಚ್ಚಿನವರು ಪ್ರವಾಸಿಗರಾಗಿದ್ದಾರೆ. ಹಲವಾರು ಜನರು ಗಾಯಗೊಂಡಿದ್ದಾರೆ. ಮೃತರಲ್ಲಿ ಯುಎಇ ಮತ್ತು ನೇಪಾಳದ ಇಬ್ಬರು ವಿದೇಶಿಯರು ಮತ್ತು ಇಬ್ಬರು ಸ್ಥಳೀಯರೂ ಇದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**10 ಲಕ್ಷ ಪರಿಹಾರ:** ಉಗ್ರರ ದಾಳಿಗೆ ಪ್ರಾಣ ಕಳೆದುಕೊಂಡ 28ಕ್ಕೂ ಹೆಚ್ಚು ಮಂದಿಯ ಕುಟುಂಬಸ್ಥರಿಗೆ ತಲಾ 10 ಲಕ್ಷ ರೂ. ಪರಿಹಾರವನ್ನು ಜಮ್ಮು-ಕಾಶ್ಮೀರ ಸರ್ಕಾರ ಪ್ರಕಟಿಸಿದೆ. ಗಂಭೀರವಾಗಿ ಗಾಯಗೊಂಡವರಿಗೆ 2 ಲಕ್ಷ ರೂ., ಸಣ್ಣಪುಟ್ಟ ಗಾಯಗೊಂಡವರಿಗೆ ಲಕ್ಷ ರೂ. ಪರಿಹಾರ ಪ್ರಕಟಿಸಿದೆ. ನಿನ್ನೆ ನಡೆದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕರ ದಾಳಿಯಲ್ಲಿ ಒಟ್ಟು 28ಕ್ಕೂ ಹೆಚ್ಚು ಮಂದಿ ಸಾವನ್ನಪ್ಪಿದ್ದರು.

**1** 1960ರಿಂದ ಇದ್ದ ಸಿಂಧೂ ಜಲ ಒಪ್ಪಂದ ರದ್ದು ಅಟ್ಟಾರಿ ಗಡಿ ತಕ್ಷಣದಿಂದಲೇ ಬಂದ್

**2** ಪಾಕ್ ಪ್ರಜೆಗಳಿಗೆ ಇನ್ನಿಲ್ಲ ಭಾರತದ ವೀಸಾ


**3** ಭಾರತದಲ್ಲಿನ 25 ಪಾಕ್ ರಾಜತಾಂತ್ರಿಕರ ಉಚ್ಚಾಟನೆ ಭಾರತದ ವೀಸಾ ಪಡೆದ ಪಾಕ್ ಪ್ರಜೆಗಳಿಗೆ ದೇಶ ತೊರೆಯಲು 48 ಗಂಟೆ ಗಡುವು

**4** ಪಾಕ್‌ನಲ್ಲಿರುವ ಭಾರತದ ರಾಜತಾಂತ್ರಿಕರು ವಾಪಸ್

## ಮೋದಿ ನೇತೃತ್ವದ ಸಭೆಯಲ್ಲಿ ಮಹತ್ವದ ನಿರ್ಧಾರ



## ಭಯೋತ್ಪಾದಕರ ವಿರುದ್ಧ ಕಠಿಣ ಕ್ರಮ



'ಭಯೋತ್ಪಾದಕರ ದಾಳಿಯಲ್ಲಿ ಮೃತಪಟ್ಟವರ ಕುಟುಂಬದೊಂದಿಗೆ ಈ ಕಷ್ಟಕಾಲದಲ್ಲಿ ನಾವಿದ್ದೇವೆ. ಈ ಕೃತ್ಯ ಎಸಗಿದವರನ್ನು ಸುಮ್ಮನೆ ಬಿಡುವುದಿಲ್ಲ. ಭಯೋತ್ಪಾದಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಘಟನೆಯ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮಾಹಿತಿ ನೀಡಿದ್ದೇನೆ. ವಿಡಿಯೋ ಕಾನ್ಫರೆನ್ಸ್ ಮೂಲಕ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದೇನೆ. ಶೀಘ್ರದಲ್ಲೇ ಶ್ರೀನಗರಕ್ಕೆ ತೆರಳಿ ಎಲ್ಲಾ ಏಜೆನ್ಸಿಗಳೊಂದಿಗೆ ತುರ್ತು ಭದ್ರತಾ ಪರಿಶೀಲನಾ ಸಭೆ ನಡೆಸುತ್ತೇನೆ ಎಂದು ಅವರು ತಿಳಿಸಿದ್ದಾರೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಟ್ವೀಟ್ ಮಾಡಿದ್ದು, ಇದು ಹೇಡಿತನದ ಕೃತ್ಯ. ಪಹಲ್ಗಾಮ್ ನಲ್ಲಿ ನಡೆದ ಭಯಾನಕ ದಾಳಿಯ ಸುದ್ದಿ ಕೇಳಿ ನನಗೆ ತುಂಬಾ ದುಃಖವಾಗಿದೆ. ಮುಗ್ಧ ನಾಗರಿಕರ ಮೇಲೆ ನಡೆದ ಈ ಹೇಡಿ ದಾಳಿಯನ್ನು ಖಂಡಿಸುತ್ತೇನೆ ಎಂದು ರಾಜನಾಥ್ ಸಿಂಗ್ ಹೇಳಿದ್ದಾರೆ.

## ಕಾಶ್ಮೀರದ ದಾಳಿಗೂ ನಮಗೂ ಸಂಬಂಧವಿಲ್ಲ



ಒಂದು ವಾರದ ಹಿಂದಷ್ಟೇ ಪಾಕಿಸ್ತಾನದ ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್ ಕಾಶ್ಮೀರ ಇಸ್ಲಾಮಾಬಾದ್‌ನ ಕುತ್ತಿಗೆಯ ರಕ್ತನಾಳ ಎಂದು ಹೇಳಿಕೆ ನೀಡಿದ್ದರು. ಕಾಶ್ಮೀರದ ಬಗ್ಗೆ ನಮ್ಮ ನಿಲುವು ಸಂಪೂರ್ಣವಾಗಿ ಸ್ಪಷ್ಟವಾಗಿದೆ. ಅದು ನಮ್ಮ ರಕ್ತನಾಳ, ನಾವು ಅದನ್ನು ಮರೆಯುವುದಿಲ್ಲ. ನಮ್ಮ ಕಾಶ್ಮೀರಿ ಸಹೋದರರನ್ನು ಅವರ ಹೋರಾಟದಲ್ಲಿ ನಾವು ಬಿಡುವುದಿಲ್ಲ ಎಂದು ಪಾಕ್ ಸೇನಾ ಮುಖ್ಯಸ್ಥ ಹೇಳಿದ್ದರು. ಇದು ತೀವ್ರ ಚರ್ಚೆಗೆ ಕಾರಣವಾಗಿತ್ತು. ಅದಾದ ಒಂದೇ ವಾರಕ್ಕೆ ಕಾಶ್ಮೀರದಲ್ಲಿ ಉಗ್ರರ ದಾಳಿ ನಡೆದಿದೆ. ಪಾಕಿಸ್ತಾನದ ರಕ್ಷಣಾ ಸಚಿವ ಖ್ವಾಜಾ ಆಸಿಫ್ ಪಹಲ್ಗಾಮ್‌ನ ದಾಳಿಗೂ ನಮಗೂ ಯಾವುದೇ ಸಂಬಂಧವಿಲ್ಲ, ಎಲ್ಲಾ ರೀತಿಯ ಮತ್ತು ಎಲ್ಲೆಡೆ ಭಯೋತ್ಪಾದನೆಯನ್ನು ನಾವು ಖಂಡಿಸುತ್ತೇವೆ ಎಂದು ಹೇಳಿದ್ದಾರೆ. ಆದರೆ, ಪ್ರಾಥಮಿಕ ತನಿಖೆಯು ನಾಗರಿಕರ ಮೇಲೆ ಗುಂಡು ಹಾರಿಸಿದ ಉಗ್ರರ ಗುಂಪಿನಲ್ಲಿ ಬೇರೆ ದೇಶದವರು ಇದ್ದರೆಂಬುದನ್ನು ಸೂಚಿಸಿರುವುದರಿಂದ ಭಾರತೀಯ ಅಧಿಕಾರಿಗಳು ಪಾಕಿಸ್ತಾನದ ಈ ಹೇಳಿಕೆಯನ್ನು ನಂಬುತ್ತಿಲ್ಲ.

## ಪ್ರಧಾನಿ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ

ಪಹಲ್ಗಾಮ್ ಭಯೋತ್ಪಾದಕ ದಾಳಿಯ ಅಪರಾಧಿಗಳು ಮತ್ತು ಸಂಚುಕೋರರಿಗೆ ಭಾರತವು ಗಟ್ಟಿಯಾದ ಮತ್ತು ಸ್ಪಷ್ಟವಾದ ಪ್ರತ್ಯುತ್ತರವನ್ನು ನೀಡಿಯೇ ನೀಡುತ್ತೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬುಧವಾರ ಎಚ್ಚರಿಕೆ ರವಾನಿಸಿದ್ದಾರೆ. ಪಹಲ್ಗಾಮ್‌ನ ಬೈಸರನ್ ಹುಲ್ಲುಗಾವಲಿನಲ್ಲಿ ಪಾಕಿಸ್ತಾನ ಮೂಲದ ಶಂಕಿತ ಭಯೋತ್ಪಾದಕರು 28ಕ್ಕೂ ಹೆಚ್ಚು ಪುರುಷ ಪ್ರವಾಸಿಗರನ್ನು ಗುಂಡಿಕ್ಕಿ ಕೊಂದು ಹಾಕಿದ್ದಾರೆ. ನಿನ್ನೆ ಪಹಲ್ಗಾಮ್‌ನಲ್ಲಿ ನಿರ್ದಿಷ್ಟ ಜನರನ್ನು ಗುರಿಯಾಗಿಸಿಕೊಂಡು ಭಯೋತ್ಪಾದಕರು ಹೇಡಿತನದ ಕೃತ್ಯ ಎಸಗಿದ್ದಾರೆ. ಇದರಲ್ಲಿ ನಾವು ಅನೇಕ ಮುಗ್ಧ ಜೀವಗಳನ್ನು ಕಳೆದುಕೊಂಡಿದ್ದೇವೆ. ಸರ್ಕಾರವು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ನಾನು ದೇಶವಾಸಿಗಳಿಗೆ ಭರವಸೆ ನೀಡಲು ಬಯಸುತ್ತೇನೆ. ನಾವು ಈ ಕೃತ್ಯದ ಅಪರಾಧಿಗಳನ್ನು ಮಾತ್ರವಲ್ಲದೇ ತೆರೆಮರೆಯಲ್ಲಿರುವ ಸಂಚುಕೋರರಿಗೂ ಬುದ್ಧಿ ಕಲಿಸುತ್ತೇವೆ. ಆರೋಪಿಗಳು ಶೀಘ್ರದಲ್ಲೇ ತಾವು ಮಾಡಿದ ಕೆಲಸಕ್ಕೆ ಪ್ರತಿಫಲವನ್ನು ಪಡೆದುಕೊಳ್ಳಲಿದ್ದಾರೆ. ನಾನು ದೇಶಕ್ಕೆ ಭರವಸೆ ನೀಡಲು ಬಯಸುತ್ತೇನೆ ಎಂದು ರಾಜನಾಥ್ ಸಿಂಗ್ ಹೇಳಿದ್ದಾರೆ.

## ಕಾಶ್ಮೀರದಲ್ಲಿನ ಪರಿಸ್ಥಿತಿ ಪರಿಶೀಲಿಸಿದ ರಕ್ಷಣಾ ಸಚಿವರು


ಜಮ್ಮು ಮತ್ತು ಕಾಶ್ಮೀರದಲ್ಲಿನ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಿದ ನಂತರ ರಕ್ಷಣಾ ಸಚಿವರು ಈ ನೇರ ಎಚ್ಚರಿಕೆ ನೀಡಿದ್ದಾರೆ. ಸುಮಾರು ಎರಡೂವರೆ ಗಂಟೆಗಳ ಕಾಲ ನಡೆದ ಸಭೆಯಲ್ಲಿ ರಾಷ್ಟ್ರೀಯ ಭದ್ರತಾ ಸಲಹೆಗಾರ (ಎನ್‌ಎಸ್‌ಎ) ಅಜಿತ್ ದೋವಲ್, ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ ತ್ರಿಪಾಠಿ ಮತ್ತು ವಾಯುಪಡೆಯ ಮುಖ್ಯಸ್ಥ ಮಾರ್ಷಲ್ ಎಕೆ ಸಿಂಗ್ ಭಾಗವಹಿಸಿದ್ದರು.

## ಹಿಂದುಗಳಲ್ಲಿ ಒಗ್ಗಟ್ಟಿಲ್ಲ



ಯಾರ ಸಹಕಾರ ಇಲ್ಲದೆ ಇಂತಹ ಘಟನೆ ನಡೆಯಲ್ಲ. ಇದರಲ್ಲಿ ಸ್ಥಳೀಯ ಮುಸ್ಲಿಮರ ಸಹಕಾರ ಇದೆ. ಇವತ್ತು ಜಗತ್ತಿನಲ್ಲಿ ನಡೆಯುವ ಅವಘಡಗಳನ್ನ ನೋಡಿದ್ರೆ, ಗೊತ್ತಾಗುತ್ತದೆ. ಮುಸ್ಲಿಮರ ಮನಸ್ಥಿತಿ ಏನು ಅಂತ. ಅದಕ್ಕೆ ಅಂಬೇಡ್ಕರ್ ಅವರು ಪರಿ ಪರಿಯಾಗಿ ಹೇಳಿದ್ರು. ನಮ್ಮ ದೇಶದಲ್ಲಿ ಮುಸ್ಲಿಮರು ಇರೋದು ಬೇಡ ಅಂತ ಹೇಳಿದ್ರು. ತಿಳಿಗೇಡಿ ಹಿಂದುಗಳಿಗೆ ಹೇಳಲು ಬಯಸುತ್ತೇನೆ. ಈಗಲಾದರೂ ಎಚ್ಚೆತ್ತುಕೊಳ್ಳಿ. ಒಗ್ಗಟ್ಟು ಇಲ್ಲದ ಹಿಂದುಗಳ ಬಗ್ಗೆ ಮಾಜಿ ಸಂಸದ ಪ್ರತಾಪ ಸಿಂಹ ಬೇಸರ ವ್ಯಕ್ತಪಡಿಸಿದರು.

## ಸಂತಾಪ ಸೂಚಿಸಿದ ಅಮೆರಿಕ ಉಪಾಧ್ಯಕ್ಷ



4 ದಿನಗಳ ಭಾರತ ಭೇಟಿಯಲ್ಲಿರುವ ಯುನೈಟೆಡ್ ಸ್ಟೇಟ್ಸ್ ಉಪಾಧ್ಯಕ್ಷ ಜೆ.ಡಿ ವ್ಯಾನ್ಸ್ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕ ದಾಳಿಯ ಸಂತ್ರಸ್ತರಿಗೆ ಸಂತಾಪ ಸೂಚಿಸಿದ್ದಾರೆ. ಈ ಭೀಕರ ಭಯೋತ್ಪಾದನಾ ದಾಳಿಯಿಂದ ಬಾಧಿತರಾದ ಕಾಶ್ಮೀರದ ಜನರಿಗೆ ನಮ್ಮ ಸಂತಾಪಗಳು. ನಮ್ಮ ದೇಶದ ಅಧ್ಯಕ್ಷ ಟ್ರಂಪ್ ಈಗಾಗಲೇ ಪ್ರಧಾನಿ ಮೋದಿಯವರೊಂದಿಗೆ ಮಾತನಾಡಿದ್ದಾರೆ. ಸರ್ಕಾರ ಮತ್ತು ಭಾರತದ ಜನರಿಗೆ ನಾವು ನಮ್ಮ ಕೈಲಾದ ಸಹಾಯವನ್ನು ನಾವು ನೀಡುತ್ತಿದ್ದೇವೆ ಎಂದಿದ್ದಾರೆ.

## ಟಿಆರ್‌ಎಫ್ ಕಮಾಂಡರ್ ಸೆರೆ

ಕುಲ್ಗಾಮ್‌ನಲ್ಲಿ ಉಗ್ರರು ಮತ್ತು ಭದ್ರತಾ ಪಡೆಗಳ ನಡುವೆ ಎನ್‌ಕೌಂಟರ್ ಕಾರ್ಯಾಚರಣೆ ನಡೆದಿದೆ. ಈ ಕಾರ್ಯಾಚರಣೆಯಲ್ಲಿ ಟಿಆರ್‌ಎಫ್ ಭಯೋತ್ಪಾದಕ ಸಿಕ್ಕಿಬಿದ್ದಿದ್ದಾನೆ. ಕುಲ್ಗಾಮ್ ಜಿಲ್ಲೆಯ ತಂಗ್‌ಮಾರ್ಗ್ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆಯ ಸಮಯದಲ್ಲಿ ಗುಂಡೇಟಿನ ಶಬ್ದಗಳು ಕೇಳಿಬಂದವು. ಈ ಪ್ರದೇಶವು ಜನಪ್ರಿಯ ಪ್ರವಾಸಿ ತಾಣವಾದ ಪ್ರಸಿದ್ಧ ಅಬರ್ಬಲ್ ಜಲಪಾತದ ಬಳಿ ಇದೆ. ಈ ಪ್ರದೇಶವು ಪೂಂಚ್ ಜಿಲ್ಲೆಯ ಗಡಿಯಲ್ಲಿದೆ. ಎನ್‌ಕೌಂಟರ್ ನಂತರ ಭದ್ರತಾ ಪಡೆಗಳು ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳ ಬೃಹತ್ ಸಂಗ್ರಹವನ್ನು ಹಾಗೂ ಪಾಕಿಸ್ತಾನಿ ಕರೆನ್ಸಿಯನ್ನು ವಶಪಡಿಸಿಕೊಂಡವು.

## ಭಾರತದಿಂದ ಪ್ರತೀಕಾರದ ಭಯ

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯ ನಂತರ, ಗಡಿಯ ಬಳಿ ಪಾಕಿಸ್ತಾನದ ಅನುಮಾನಾಸ್ಪದ ಮಿಲಿಟರಿ ಚಟುವಟಿಕೆಗಳ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಅನೇಕ ವಿಚಾರಗಳು ಹೊರಹೊಮ್ಮಿವೆ. ಪಾಕಿಸ್ತಾನ ವಾಯುಪಡೆಯ ಪ್ರಮುಖ ವಿಮಾನಗಳ ಅಸಾಮಾನ್ಯ ಸಂಚಾರವನ್ನು ತೋರಿಸುವ ವಿಮಾನ ಮೇಲ್ವಿಚಾರಣಾ ವೆಬ್‌ಸೈಟ್ Flightradar24ನ ಸ್ಕ್ರೀನ್ ಶಾಟ್‌ಗಳನ್ನು ಮೈಕ್ರೋಬ್ಲಾಗಿಂಗ್ ಸೈಟ್ ಫ್ ನಲ್ಲಿ ವೈರಲ್ ಆಗುತ್ತಿದೆ. ಈ ಹೇಳಿಕೆಗಳ ಪ್ರಕಾರ, ಕರಾಚಿ ಮೂಲದ ದಕ್ಷಿಣ ವಾಯುಪಡೆಯ ಕಮಾಂಡ್‌ನಿಂದ ಹಲವಾರು ಪಿಎಎಫ್ ವಿಮಾನಗಳು ಲಾಹೋರ್ ಮತ್ತು ರಾವಲ್ಪಿಂಡಿ ಬಳಿಯ ಉತ್ತರದ ವಾಯುನೆಲೆಗಳಿಗೆ ಹಾರಿದ್ದವು. ಈ ವಾಯುನೆಲೆಗಳು ಭಾರತದ ಉತ್ತರ ಗಡಿಗೆ ಅತ್ಯಂತ ಹತ್ತಿರದಲ್ಲಿವೆ ಎಂದು ಪರಿಗಣಿಸಲಾಗಿದೆ. ಲಾಕ್‌ಹೀಡ್ C-130E ಹರ್ಕ್ಯುಲಸ್ ಸಾರಿಗೆ ವಿಮಾನ PAF198 ಮತ್ತು ಎಂಬ್ರೇರ್ ಫೆನಮ್ 100 ಜೆಟ್ PAF101 ಎಂಬ ಎರಡು ವಿಮಾನಗಳ ಚಟುವಟಿಕೆಗಳ ಮೇಲೆ ನಿರ್ದಿಷ್ಟ ಗಮನವನ್ನು ಕೇಂದ್ರೀಕರಿಸಲಾಗಿದೆ. ಇವುಗಳನ್ನು ಸಾಮಾನ್ಯವಾಗಿ ವಿಐಪಿ ಸಾಗಣೆ ಅಥವಾ ಗುಪ್ತಚರ ಕಾರ್ಯಾಚರಣೆಗಳಿಗೆ ಬಳಸಲಾಗುತ್ತದೆ. ಇಲ್ಲಿಯವರೆಗೆ, x ಬಗ್ಗೆ ಮಾಡಲಾದ ಎಲ್ಲಾ ಹೇಳಿಕೆಗಳು ದೃಢೀಕರಿಸಲ್ಪಟ್ಟಿಲ್ಲ ಮತ್ತು ಪಾಕಿಸ್ತಾನ ವಾಯುಪಡೆ ಅಥವಾ ಭಾರತ ಸರ್ಕಾರದಿಂದ ಯಾವುದೇ ಅಧಿಕೃತ ದೃಢೀಕರಣ ಬಂದಿಲ್ಲ.

## ಮೂವರು ಉಗ್ರರ ರೇಖಾಚಿತ್ರ ಬಿಡುಗಡೆ



ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ದಾಳಿ ಮಾಡಿದ ಘಟನೆಗೆ ಸಂಬಂಧಿಸಿದಂತೆ ಲಭ್ಯ ಮಾಹಿತಿಯ ಪ್ರಕಾರ, ಮೂವರು ಭಯೋತ್ಪಾದಕರ ರೇಖಾಚಿತ್ರಗಳನ್ನು ಕೇಂದ್ರದ ಭದ್ರತಾ ಸಂಸ್ಥೆಗಳು ಬುಧವಾರ ಬಿಡುಗಡೆ ಮಾಡಿವೆ. ಸ್ಥಳೀಯ ಪೊಲೀಸರು ಮತ್ತು ಕೇಂದ್ರದ ಅಧೀನಕ್ಕೆ ಬರುವ ಭದ್ರತಾ ಸಂಸ್ಥೆಗಳು ಜಂಟಿ ಕಾರ್ಯಾಚರಣೆ ನಡೆಸುತ್ತಿದ್ದು, ದಾಳಿ ನಡೆಸಿದ ಉಗ್ರರ ಪತ್ತೆಗೆ ಜಾಲ ಬೀಸಿವೆ. ಈ ಭೀಕರ ದಾಳಿಯ ಹಿಂದಿನ ಕ್ರೂರ ಯೋಜನೆಯನ್ನು ಬಯಲು ಮಾಡಲು ಅನುವಾಗುವಂತೆ ಉಗ್ರರ ಚಹರೆಯುಳ್ಳ ರೇಖಾಚಿತ್ರವನ್ನು ಪ್ರಕಟಿಸಿವೆ. ಪಾಕಿಸ್ತಾನದ ಲಷ್ಕರ್-ಎ-ತೊಯ್ಬಾದ (ಎಲ್ ಎಟಿ) ಅಂಗಸಂಸ್ಥೆಯಾದ ರೆಸಿಸ್ಟೆನ್ಸ್ ಫ್ರಂಟ್ ಈ ದಾಳಿ ನಡೆಸಿದ್ದಾಗಿ ಹೇಳಿದೆ. ಈ ಸಂಘಟನೆಗೆ ಸಂಬಂಧಿಸಿದ ಭಯೋತ್ಪಾದಕರನ್ನು ಹಿಡಿಯಲು ಈ ರೇಖಾಚಿತ್ರಗಳು ನೆರವಾಗಲಿವೆ. ಇದರಲ್ಲಿರುವ ಉಗ್ರರ ಗುರುತು ಸಿಕ್ಕಲ್ಲಿ ತಕ್ಷಣವೇ ಮಾಹಿತಿ ನೀಡುವಂತೆ ಜಮ್ಮು ಮತ್ತು ಕಾಶ್ಮೀರ ಪೊಲೀಸರು ಸ್ಥಳೀಯರಲ್ಲಿ ಮನವಿ ಮಾಡಿದ್ದಾರೆ.


## 100% ಬೇಟೆಯಾಡೇ ಆಡ್ತಾರೆ!

ಪೆಹಲ್ಗಾಮ್‌ನಲ್ಲಿ ದಾಳಿ ನಡೆಸಿದ ಉಗ್ರರನ್ನು ಬೇಟೆಯಾಡೇ ಆಡ್ತೀವಿ. ಮೋದಿ, ಅಮಿತ್ ಶಾ ಉಗ್ರರನ್ನು ಬಿಡಲ್ಲ ಎಂದು ಬಿಜೆಪಿ ನಾಯಕ ಕೆ ಅಣ್ಣಾಮಲೈ ಹೇಳಿದ್ದಾರೆ. ಚೆನ್ನೈನಲ್ಲಿ ಪೆಹಲ್ಗಾಮ್ ದಾಳಿಯನ್ನು ಖಂಡಿಸಿದ ಅವರು, ಇದು ಆಘಾತಕಾರಿ ಘಟನೆ, ಹೇಡಿತನದ ಕೃತ್ಯ. ಅಮಾಯಕ ಜನರನ್ನು ಗುರಿಯಾಗಿಸಿ ದಾಳಿ ನಡೆಸಿದ್ದಾರೆ. ಕ್ರಮ ಕೈಗೊಳ್ಳಬೇಕಾದ ಸಂಸ್ಥೆಗಳು ಕ್ರಮ ಕೈಗೊಳ್ಳುತ್ತವೆ ಎಂಬ ಸಂಪೂರ್ಣ ನಂಬಿಕೆ ಇದೆ. ಪ್ರಧಾನಿ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಉಗ್ರರನ್ನು ನೂರಕ್ಕೆ ನೂರರಷ್ಟು ಬೇಟೆಯಾಡ್ತಾರೆ ಎಂದು ಹೇಳಿದರು.

## ಕುಟುಂಬಕ್ಕೆ ತಲಾ 10 ಲಕ್ಷ ರೂ. ಪರಿಹಾರ









ಜಮ್ಮು ಕಾಶ್ಮೀರದ ಪಹಲ್ಗಾಮ ಉಗ್ರರ ದಾಳಿಯಲ್ಲಿ ಮೃತಪಟ್ಟ ಕನ್ನಡಿಗರ ಕುಟುಂಬಕ್ಕೆ ರಾಜ್ಯ ಸರ್ಕಾರ ತಲಾ ಹತ್ತು ಲಕ್ಷ ಪರಿಹಾರವನ್ನು ಘೋಷಣೆ ಮಾಡಿದೆ. ಈ ಕುರಿತಾಗಿ ಸಿಎಂ ಸಿದ್ದರಾಮಯ್ಯ ಅವರ ಕಚೇರಿಯಿಂದ ಅಧಿಕೃತ ಘೋಷಣೆ ಮಾಡಲಾಗಿದೆ. ಮಂಗಳವಾರ ಸಂಜೆ ನಡೆದ ಉಗ್ರರ ದಾಳಿಯಲ್ಲಿ ಪಹಲ್ಗಾಮಕ್ಕೆ ಪ್ರವಾಸಕ್ಕೆ ತೆರಳಿದ್ದ ಶಿವಮೊಗ್ಗದ ಮಂಜುನಾಥ್ ರಾವ್ ಹಾಗೂ ಬೆಂಗಳೂರಿನ ಸಾಫ್ಟ್ ವೇರ್ ಇಂಜಿನಿಯರ್ ಭರತ್ ಭೂಷಣ್ ಮೃತಪಟ್ಟಿದ್ದಾರೆ. ಇವರ ಕುಟುಂಬಕ್ಕೆ ತಲಾ 10 ಲಕ್ಷ ಪರಿಹಾರವನ್ನು ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ. ಕಾಶ್ಮೀರ ಅತ್ಯಂತ ಪ್ರಸಿದ್ಧ ಪ್ರವಾಸಿ ತಾಣ ಪಹಲ್ಗಾಮಕ್ಕೆ ಸಾಕಷ್ಟು ಸಂಖ್ಯೆಯಲ್ಲಿ ಕನ್ನಡಿಗರು ತೆರಳಿದ್ದರು. ಈ ಪೈಕಿ ಶಿವಮೊಗ್ಗ ಜಿಲ್ಲೆಯ ಮಂಜುನಾಥ್ ರಾವ್ ಅವರು ಗುಂಡು ತಗುಲಿ ಮೃತಪಟ್ಟಿದ್ದಾರೆ. ಮಂಜುನಾಥ್ ರಾವ್ ಅವರು ತಮ್ಮ ಪತ್ನಿ ಹಾಗೂ ಮಗನ ಜೊತೆಗೆ ಕಾಶ್ಮೀರ ಪ್ರವಾಸಕ್ಕೆ ತೆರಳಿದ್ದರು. ಇನ್ನು, ಬೆಂಗಳೂರಿನಲ್ಲೇ ನೆಲೆಸಿರುವ ಆಂಧ್ರಪ್ರದೇಶ ಮೂಲದ ಮಧುಸೂಧನ್ ರಾವ್ ಅವರು ಸಾವಿಗೀಡಾಗಿದ್ದಾರೆ. ಒಟ್ಟು ಮೂವರು ಸಾವಿಗೀಡಾದಂತಾಗಿದೆ.









**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,835/Gram24ct ₹9,015/Gram22ct ಬೆಳ್ಳಿ: ₹101.00/Gram

# ಪಹಲ್ಗಾಂ ದಾಳಿ: ಉಗ್ರರಿಂದ ಹತ್ಯೆಯಾದವರ ಕುಟುಂಬಕ್ಕೆ ತಲಾ 1 ಕೋಟಿ ಪರಿಹಾರ ಕೊಡಲಿ

• ಉದಯವಾಹಿನಿ, ಬೆಂಗಳೂರು



ಕಾಶ್ಮೀರದ ಪಹಲ್ಗಾಂ ದಾಳಿಯಲ್ಲಿ ಉಗ್ರರಿಂದ ಹತ್ಯೆಯಾದವರ ಕುಟುಂಬಕ್ಕೆ 1 ಕೋಟಿ ಪರಿಹಾರ ಕೊಡಬೇಕು ಎಂದು ಸಚಿವ ಈಶ್ವರ್ ಖಂಡ್ರೆ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಬುಧವಾರ ಮಾತನಾಡಿದ ಅವರು, ಉಗ್ರರು ಗಡಿಯಲ್ಲಿ ನುಸುಳಿ ಒಳಗಡೆ ಬರ್ತಾರೆ ಅಂದರೆ ಹೇಗೆ ಸಡಿಲಿಕೆ ಇದ್ದಾಗ ಮಾತ್ರ ಇವರಿಗೆ ಒಳಗೆ ಬರಲು ಸಾಧ್ಯ. ಪುಲ್ವಾಮಾ ಹೇಗಾಯ್ತು ಹಾಗಾದ್ರೆ. ನೂರಾರು ಕೆಜಿ ಆರ್ ಡಿ ಎಕ್ಸ್ ತಂದು ಸ್ಫೋಟ ಮಾಡಿದರು. 40 ಜನ ವೀರ ಯೋಧರು ಹುತಾತ್ಮರಾದರು. ಯಾರು ಇದಕ್ಕೆ ಜವಾಬ್ದಾರಿ ಎಂದು ಕಿಡಿಕಾರಿದರು.

ಉಗ್ರರಿಂದ ಹತ್ಯೆಯಾದವರ ಕುಟುಂಬಕ್ಕೆ ಎಷ್ಟು ಹಣ ಕೊಟ್ಟರೂ ಜೀವ ಬರಲ್ಲ. ಅವರಿಗೆ ಸಾಂತ್ವನ ಹೇಳಬೇಕಾಗಿದೆ. ಭಯೋತ್ಪಾದಕರು ಭಯೋತ್ಪಾದಕರೇ. ಅವರು ಎಲ್ಲರ ಮೇಲೂ ದಾಳಿ ಮಾಡಿದ್ದಾರೆ. ಭಾವನಾತ್ಮಕ ವಿಚಾರ ಇಟ್ಟುಕೊಂಡು ಕೆರಳಿಸಿದ್ದಾರೆ. ಇದು ಅಕ್ಷ್ಯಮ್ಯ ಅಪರಾಧ ಎಂದರು. ಕಾಶ್ಮೀರದಲ್ಲಿ ಆರ್ಟಿಕಲ್ 370 ರದ್ದು ಮಾಡಿದ್ದೇವೆ ಅಂತ ಸುಳ್ಳು ಪೊಳ್ಳು ಭರವಸೆ ಕೊಟ್ರು. ನಿಮ್ಮ ಕಾನೂನು ಸುವ್ಯವಸ್ಥೆ ಸರಿ ಇಲ್ಲ. ಎಲ್ಲಾ ರೀತಿ ಹೊಂದಾಣಿಕೆ ಮಾಡಿಕೊಂಡಿದ್ದೀರಾ. ಜನರ ಜೀವದ ಜೊತೆ ಚೆಲ್ಲಾಟ ಆಡ್ತಾ ಇದ್ದೀರಾ ಎಂದು ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದರು.

ಕಾಶ್ಮೀರದಲ್ಲಿ ನಡೆದ ಘಟನೆ ಖಂಡನೀಯವಾದದ್ದು. ಅನೇಕರು ಮೃತ ಪಟ್ಟಿದ್ದಾರೆ. ಮೃತರ ಪರಿವಾರಕ್ಕೆ ನೋವು ತಡೆದುಕೊಳ್ಳುವ ಶಕ್ತಿ ಕೊಡಲಿ. ಇದು ಗುಪ್ತಚರ ಇಲಾಖೆಯ ವೈಫಲ್ಯವಾಗಿದೆ. ಶತ್ರು ರಾಷ್ಟ್ರ ಪಾಕಿಸ್ತಾನ ಉಗ್ರರಿಗೆ ತರಬೇತಿ ಕೊಡ್ತಾ ಇದೆ. ಗಡಿಯಲ್ಲಿ ನುಸುಳುತ್ತಾ ಇದ್ದಾರೆ. ಇವರ ಆಡಳಿತದಲ್ಲಿ ಎಷ್ಟು ಅಮಾಯಕರ ಪ್ರಾಣ ಹೋಗಿದೆ ಎಂದು ಕಿಡಿಕಾರಿದರು. ಉಗ್ರರು ಈ ದುಷ್ಕೃತ್ಯ ಮಾಡಿ ಎಲ್ಲಿ ಅಡಿಗಿದ್ದಾರೆ ಅವರನ್ನ ಸೆದೆ ಬಡಿಯಬೇಕು. ಕಾನೂನು ಕ್ರಮ ಜರುಗಿಸಬೇಕು. ಇದು ಇಂಟಲಿಜೆನ್ಸ್ ಫೈಲುರ್ ಅಲ್ಲದೆ ಇನ್ನೇನು ಕಾಶ್ಮೀರದಲ್ಲಿ ಭಯೋತ್ಪಾದನೆ ಕಡಿಮೆ ಮಾಡಿಕೊಂಡಿದ್ದೇವೆ ಅಂತ ಹೇಳಿಕೊಂಡಿದ್ದರು. ಕಡಿಮೆ ಆಯ್ತಾ ಭಯೋತ್ಪಾದನೆ ಎಂದು ಪ್ರಶ್ನಿಸಿದು.

ಉಗ್ರರ ದಾಳಿಗೆ ಮೃತಪಟ್ಟವರ ಕುಟುಂಬದ ನೋವಲ್ಲಿ ಇಡೀ ದೇಶ ಇದೆ. ನಮ್ಮ ಸೈನಿಕರು ಉತ್ತಮ ಕೆಲಸ ಮಾಡ್ತಾ ಇದ್ದಾರೆ. ಅವರಿಗೆ ಶಕ್ತಿ ಕೊಡುವ ಕೆಲಸ ಆಗಬೇಕು. ತಂತ್ರಜ್ಞಾನ ಮುಂದು ವರೆದಿದೆ. ಅವರಿಗೆ ಬೇಕಾದ ಸಲಕರಣೆ, ವಾಹನ ಹೀಗೆ ಅನೇಕ ವ್ಯವಸ್ಥೆ ಆಗಬೇಕು. ಅವರಿಗೆ ಎಲ್ಲಾ ಸೌಲಭ್ಯ ಕೊಟ್ರೆ ಉತ್ತಮ. ಜೀವದ ಹಂಗು ತೊರೆದು ಕೆಲಸ ಮಾಡ್ತಾ ಇದ್ದಾರೆ. ಕೇಂದ್ರದವರು ರಾಜಕೀಯ ಮಾಡೋದು ಬಿಟ್ರೆ, ಅಮಾಯಕರ ಜೀವ ಉಳಿಸಲು ಏನು ಮಾಡ್ತಾ ಇದ್ದಾರೆ ಎಂದು ವಾಗ್ದಾಳಿ ನಡೆಸಿದರು. ಕಾಶ್ಮೀರ ಪ್ರವಾಸಕ್ಕೆ ತೆರಳಿ ಸಂಕಷ್ಟಕ್ಕೆ ಸಿಲುಕಿರುವ 40ಕ್ಕೂ ಅಧಿಕ ರಾಜ್ಯದ ಪ್ರವಾಸಿಗರನ್ನು ಸುರಕ್ಷಿತವಾಗಿ ತಾಯ್ನಾಡಿಗೆ ಕರೆತರಲು ವಿಶೇಷ ವಿಮಾನದ ವ್ಯವಸ್ಥೆ ಮಾಡುವಂತೆ ಮುಖ್ಯಮಂತ್ರಿಯವರು ಈಗಾಗಲೇ ಸೂಚನೆ ನೀಡಿದ್ದಾರೆ ಎಂದರು. ಸಚಿವ ಸಂತೋಷ್ ಲಾಡ್ ಅವರು ಘಟನಾ ಸ್ಥಳಕ್ಕೆ ಹೋಗಿದ್ದು, ನೊಂದವರಿಗೆ ಸಾಂತ್ವನ ಹೇಳಿದ್ದಾರೆ. ನೊಂದವರ ನೆರವಿಗೆ ನಿಂತಿದ್ದಾರೆ. ರಾಜ್ಯ ಸರ್ಕಾರ ಈ ನೋವಿನ ಸಂದರ್ಭದಲ್ಲಿ ನೊಂದವರ ಜೊತೆ ನಿಲ್ಲುತ್ತದೆ ಎಂದೂ ಹೇಳಿದರು.

**ಈಶ್ವರ್ ಖಂಡ್ರೆ ಆಗ್ರಹ**

## ದಾಸರ ಪದಗಳ ಗಾಯನ



• ಉದಯವಾಹಿನಿ, ಬೆಂಗಳೂರು

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ 1008 ಶ್ರೀಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಏಪ್ರಿಲ್ 24, ಗುರುವಾರ ಸಂಜೆ 6-30ಕ್ಕೆ ಕು. ರಶ್ಮಿ ನಟರಾಜ್ ಮತ್ತು ಕು. ರಕ್ಷಾ ನಟರಾಜ್ ಸಹೋದರಿಯರಿಂದ ದಾಸರ ಪದಗಳ ಗಾಯನ ಕಾರ್ಯಕ್ರಮ ಏರ್ಪಡಿಸಿದ್ದು, ಇವರ ಗಾಯನಕ್ಕೆ ಕೀ-ಬೋರ್ಡ್ ವಾದನದಲ್ಲಿ ವಿದ್ವಾನ್ ಶ್ರೀರುದ್ರಾರಾಧ್ಯ ಮತ್ತು ತಬಲಾ ವಾದನದಲ್ಲಿ ವಿದ್ವಾನ್ ಶ್ರೀಕೆ.ಆರ್. ಗಂಗಾಧರ್ ಸಹಕರಿಸಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದ್ದಾರೆ. ಸ್ಥಳ: ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು-560041

## ಪಹಲ್‌ಗಾಮ್ ಉಗ್ರರ ದಾಳಿ ಖಂಡಿಸಿದ ಸಚಿವ ಜಮೀರ್

• ಉದಯವಾಹಿನಿ, ಬೆಂಗಳೂರು

ಜಮ್ಮು-ಕಾಶ್ಮೀರದ ಪಹಲ್‌ಗಾಮ್ ನಲ್ಲಿ ನಡೆದ ಉಗ್ರರ ಕೃತ್ಯ ಅತ್ಯಂತ ಹೇಯ ಹಾಗೂ ಅಮಾನವೀಯ ಎಂದು ವಸತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್ ತೀವ್ರವಾಗಿ ಖಂಡಿಸಿದ್ದಾರೆ. ಈ ದಾಳಿಯಲ್ಲಿ ಇಬ್ಬರು ಕನ್ನಡಿಗರು ಸೇರಿದಂತೆ 26 ಮಂದಿ ಬಲಿಯಾಗಿರುವುದು ಅತೀವ ನೋವು ತಂದಿದೆ. ಪಹಲ್‌ಗಾಮ್ ಉಗ್ರರ ದಾಳಿಯ ಹಿಂದಿನ ಶಕ್ತಿಗಳನ್ನು ಭಾರತೀಯರೆಲ್ಲರೂ ಒಗ್ಗಟ್ಟಾಗಿ ಎದುರಿಸಬೇಕಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಜಮ್ಮು- ಕಾಶ್ಮೀರ ದಲ್ಲಿ 370 ವಿಧಿ ರದ್ದುಗೊಂಡ ನಂತರ ಶಾಂತಿ ನೆಲೆಸಿದೆ ಎಂದು ಹೇಳಿದ್ದ ಕೇಂದ್ರ ಸರ್ಕಾರ ದೇಶದ ಭದ್ರತೆಯ ವಿಚಾರದಲ್ಲಿ ಬಿಗಿ ಕ್ರಮ ಕೈಗೊಳ್ಳಬೇಕಿದೆ. ಕೃತ್ಯದಲ್ಲಿ ಬಲಿಯಾದವರ ಕುಟುಂಬಗಳಿಗೆ ದುಃಖ ಭರಿಸುವ ಶಕ್ತಿ ದೇವರು ನೀಡಲಿ ಎಂದು ಅವರು ಹೇಳಿದರು.

## ಹೆಚ್ಚುವರಿ 1 ಲಕ್ಷ ಮೆಟ್ರಿಕ್ ಟನ್ ಜೋಳ ಖರೀದಿಸಲು ತೀರ್ಮಾನ

• ಉದಯವಾಹಿನಿ, ಬೆಂಗಳೂರು

ಹೆಚ್ಚಾಗಿ ಜೋಳ ಬೆಳೆಯುವ ಜಿಲ್ಲೆಗಳು ಹಾಗೂ ರಾಜ್ಯಾದ್ಯಂತ ಹಿಂಗಾರು ಹಂಗಾಮಿನ ಅವಧಿಯಲ್ಲಿ ಬೆಳೆಯಲಾದ ಹೆಚ್ಚುವರಿ ಜೋಳವನ್ನು ಬೆಂಬಲ ಬೆಲೆ ಯೋಜನೆಯಡಿ ಒಂದು ಲಕ್ಷ ಮೆಟ್ರಿಕ್‌ಟನ್ ಜೋಳವನ್ನು ರೈತರಿಂದ ನೇರವಾಗಿ ಖರೀದಿ ಕೇಂದ್ರಗಳ ಮೂಲಕ ಖರೀದಿಸಲು ತೀರ್ಮಾನಿಸಲಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದ್ದಾರೆ. ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ರವರ ನೇತೃತ್ವದಲ್ಲಿ ಬಳ್ಳಾರಿ ಜಿಲ್ಲೆಯ ರೈತರು, ಅಧಿಕಾರಿಗಳೊಂದಿಗೆ ವಿಧಾನಸೌಧದಲ್ಲಿ ಸಭೆ ನಡೆಸಿ ಮಾತನಾಡಿದರು.



ಬಳ್ಳಾರಿ, ರಾಯಚೂರು, ವಿಜಯನಗರ ಹೆಚ್ಚಾಗಿ ಜೋಳ ಬೆಳೆಯುವ ಜಿಲ್ಲೆಗಳಾಗಿದ್ದು, ರಾಜ್ಯಾದ್ಯಂತ ಹಿಂಗಾರು ಹಂಗಾಮಿನ ಅವಧಿಯಲ್ಲಿ ಹೆಚ್ಚಿನ ಜೋಳ ಬೆಳೆಯುವ ಜಿಲ್ಲೆಗಳಿಂದ ಬೆಂಬಲ ಬೆಲೆ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ 1 ಲಕ್ಷ ಮೆಟ್ರಿಕ್ ಟನ್ ಜೋಳ ಖರೀದಿಸಲಾಗುವುದು ಎಂದರು. ಪ್ರತಿ ಕ್ವಿಂಟಾಲ್ ಜೋಳದ ದರ ಹೈಬ್ರಿಡ್ 3371 ಮಾಲ್ದಂಡಿ ಜೋಳಕ್ಕೆ ಪ್ರತಿ ಕ್ವಿಂಟಾಲ್‌ಗೆ 3421 ದರವನ್ನು ನಿಗದಿಪಡಿಸಲಾಗಿದೆ. ಈಗಾಗಲೇ ನೊಂದಾಯಿಸಿದ ರೈತರು ಹಾಗೂ ಹೊಸದಾಗಿ ನೊಂದಾಯಿಸುವ ರೈತರು ಸಹ ತಾವು ಬೆಳೆದ ಬೆಲೆಯನ್ನು ನಿರ್ದಿಷ್ಟ ಖರೀದಿ ಕೇಂದ್ರದ ಸ್ಥಳದಲ್ಲಿ ನೊಂದಣಿ ಮಾಡಿಕೊಂಡು ಸರ್ಕಾರಕ್ಕೆ ನೀಡಲು ಕೋರಿದೆ ಎಂದರು. ಅನ್ನಭಾಗ್ಯ ಯೋಜನೆ ಫಲಾನುಭವಿಗಳಿಗೆ ಪ್ರತಿ ವ್ಯಕ್ತಿಗೆ 5 ಕೆಜಿ ಪಡಿತರ ಧಾನ್ಯ ನೀಡುತ್ತಿದ್ದು, ಉತ್ತರ ಕರ್ನಾಟಕದ ಭಾಗದಲ್ಲಿ 2 ಕೆಜಿ ಅಕ್ಕಿಯ ಜೊತೆಗೆ 3 ಕೆಜಿ ಜೋಳವನ್ನು ವಿತರಿಸಲು ತೀರ್ಮಾನಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ, ವಸತಿ ಇಲಾಖೆ ಕಾರ್ಯದರ್ಶಿ ನವೀನ್ ರಾಜ್ ಸಿಂಗ್, ಆಹಾರ ಇಲಾಖೆ ಕಾರ್ಯದರ್ಶಿ ಮನೋಜ್ ಜೈನ್, ರೈತ ಸಂಘದ ರಘುನಾಥ್, ಮಾದವರೆಡ್ಡಿ ಕರೂರ್, ಅಧಿಕಾರಿಗಳು ಇದ್ದರು.

## ಸಾಲಾಗಿ ನಿಲ್ಲಿಸಿ ಹಿಂದೂನಾ ಅಂತ ಕೇಳಿ ಗುಂಡಿಟ್ಟು ಕೊಂದಿದ್ದಾರೆ

• ಉದಯವಾಹಿನಿ, ಬೆಂಗಳೂರು

ಪಹಲ್ಗಾಮ್‌ನಲ್ಲಿ ಸಾಲಾಗಿ ನಿಲ್ಲಿಸಿ ಹಿಂದೂನಾ ಅಂತ ಕೇಳಿ ಗುಂಡಿಟ್ಟು ಕೊಂದಿದ್ದಾರೆ ಎಂದು ದಾಳಿಯಲ್ಲಿ ಮೃತಪಟ್ಟ ಭರತ್ ಭೂಷಣ್ ಅವರ ಅತ್ತೆ ನಿರ್ಮಲಾ ಕಣ್ಣೀರಿಟ್ಟಿದ್ದಾರೆ. ಕಾಶ್ಮೀರಕ್ಕೆ ಏ.18ಕ್ಕೆ ಹೋಗಿದ್ದರು, ಬುಧವಾರ ಬೆಳಗ್ಗೆ 7 ಗಂಟೆಗೆ ಶ್ರೀನಗರದಿಂದ ಬೆಂಗಳೂರಿಗೆ ಬರಬೇಕಿತ್ತು. ಮದ್ವೆಯಾಗಿ 4 ವರ್ಷ ಆಗಿತ್ತು, ಮೂರು ವರ್ಷದ ಮಗು ಇತ್ತು. ಹಿಂದೂನಾ ಅಂತ ಕೇಳಿ ಸಾಲಾಗಿ ನಿಲ್ಲಿಸಿ ಗುಂಡಿಟ್ಟು ಕೊಂದಿದ್ದಾರೆ ಎಂದು ಹೇಳಿದ್ದಾರೆ. ಇವತ್ತು ಬೆಂಗಳೂರಿಗೆ ಬರಬೇಕಿತ್ತು. ಆದರೆ ನಿನ್ನೆ ಈ ರೀತಿಯಾಗಿದೆ. ಘಟನೆ ಯಾದಾಗ ಬಳಿಕ ಮಗಳು ಕರೆ ಮಾಡಿ ವಿಷಯ ತಿಳಿಸಿದಳು. ನಾವೆಲ್ಲ ನಿಂತಾಗ ಸಡನ್ ಆಗಿ ಬಂದು ಹಿಂದೂನಾ ಮುಸ್ಲಿಮಾ ಅಂತ ಕೇಳಿ ಗುಂಡು ಹಾರಿಸಿದ್ದಾರೆ. ಶೂಟ್ ಮಾಡಿದ ತಕ್ಷಣ ನನ್ನ ಮಗಳು ಭರತ್ ಪ್ಯಾಂಟ್‌ನಿಂದ ಮೊಬೈಲ್, ಆಧಾರ್ ಸೇರಿ ಇನ್ನಿತರ ಡಾಕ್ಯುಮೆಂಟ್ ಗಳನ್ನು ಎತ್ತಿಕೊಂಡು ಮಗುವನ್ನು ಕರೆದುಕೊಂಡು ಕುದುರೆಯಲ್ಲಿ ಸ್ಥಳದಿಂದ ಬೇರೆ ಕಡೆಗೆ ಹೋಗಿದ್ದಾಳೆ. ಬಳಿಕ ಭರತ್ ಶವವನ್ನು ಶ್ರೀನಗರಕ್ಕೆ ಕೊಂಡೊಯ್ಯದಿದ್ದಾರೆ ಎಂದು ಮಾಹಿತಿ ನೀಡಿದರು.



ಭಯೋತ್ಪಾದಕರು ಒಬ್ಬರ ನಂತರ ಇನ್ನೊಬ್ಬರ ಮೇಲೆ ಗುಂಡಿನ ದಾಳಿ ನಡೆಸಿದ್ದಾರೆ. ಒಬ್ಬೊಬ್ಬರ ಮೇಲೆ ಐದು ನಿಮಿಷಗಳ ಕಾಲ ಗುಂಡು ಹಾರಿಸಿದ್ದು, ಎಲ್ಲರ ತಲೆಗೆ ಗುಂಡಿಕ್ಕಿ ಕೊಂದಿದ್ದಾರೆ ಎಂದು ಹೇಳಿದರು. ಇನ್ನೂ ಈ ಕುರಿತು ಭೂಷಣ್ ಸೋದರ ಮಾವ ಮಾತ ನಾಡಿ, ಬುಧವಾರ ರಾತ್ರಿ 10:45ಕ್ಕೆ ಸುಂದರ ನಗರದ ನಿವಾಸಕ್ಕೆ ಪಾರ್ಥಿವ ಶರೀರ ಬರಲಿದೆ. ಗುಂಡು ಹಾರಿಸಿ ನಂತರ ಕೆಳಗೆ ಬಿದ್ದ ಗಂಡನನ್ನ ಹೆಂಡತಿ ಪರಿಶೀಲಿಸಿದ್ದಾರೆ. ಆಗ ಉಸಿರು ನಿಂತಿತ್ತು. ಕೂಡಲೇ ಕುಟುಂಬಸ್ಥರಿಗೆ ವಿಷಯ ತಿಳಿಸಿದ್ದಾಳೆ. ಇಂದು ಹೆಬ್ಬಾಳ ಚಿತಾಗಾರದಲ್ಲಿ ಅಂತ್ಯಕ್ರಿಯೆ ನಡೆಯಲಿದೆ

### ಭಯೋತ್ಪಾದನೆ ಹತ್ತಿಕ್ಕಲು ಕೇಂದ್ರ ಸರ್ಕಾರಕ್ಕೆ ಬೆಂಬಲ ನೀಡುತ್ತೇವೆ : ಖರ್ಗೆ

# ಇದು ನಮ್ಮ ಸಂವಿಧಾನದ ಮೇಲೆ ನಡೆದ ದಾಳಿ

• ಉದಯವಾಹಿನಿ, ಬೆಂಗಳೂರು



ಜಮ್ಮು-ಕಾಶೀರದಲ್ಲಿ ನಡೆದ ಉಗ್ರರ ದಾಳಿ ಅತ್ಯಂತ ಖಂಡನೀಯವಾಗಿದ್ದು, ಭಯೋತ್ಪಾದನೆಯನ್ನು ಹತ್ತಿಕ್ಕಲು ಕೇಂದ್ರ ಸರ್ಕಾರ ತೆಗೆದುಕೊಳ್ಳುವ ಕಠಿಣ ಕ್ರಮಗಳಿಗೆ ಕಾಂಗ್ರೆಸ್ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದ್ದಾರೆ.

ನಗರದ ಕೆಪಿಸಿಸಿ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದೊಂದು ಆಕಸ್ಮಿಕವಾದ ಘಟನೆ. ಅಮಾಯಕ ಪ್ರವಾಸಿಗರನ್ನು ಭಯೋತ್ಪಾದಕರು ಹತ್ಯೆ ಮಾಡಿದ್ದಾರೆ. ಉಗ್ರರ ದಾಳಿಯನ್ನು ಯಾರೂ ಸಮರ್ಥಿಸುವುದಿಲ್ಲ. ಇದು ನಮ್ಮ ಸಂವಿಧಾನದ ಮೇಲೆ ನಡೆದ ದಾಳಿ ಎಂದು ಆಕ್ರೋಶ ವ್ಯಕ್ತಪಡಿಸಿದರು. ಘಟನಾ ಸ್ಥಳಕ್ಕೆ ಕೇಂದ್ರ ಗೃಹಸಚಿವ ಅಮಿತ್ ಷಾ ತೆರಳಿದ್ದು, ಜಮು-ಕಾಶೀರದ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಅವರಿಂದ ಮಾಹಿತಿ ಪಡೆದುಕೊಂಡಿದ್ದಾರೆ. ಜಮ್ಮು-ಕಾಶೀರಕ್ಕೆ ಪ್ರವಾಸೋದ್ಯಮವೇ ಪ್ರಮುಖ ಆದಾಯಮೂಲವಾಗಿದ್ದು ಭಯೋತ್ಪಾದಕರ ದಾಳಿಯಿಂದ ಆದಾಯಕ್ಕೆ ಧಕ್ಕೆ ಉಂಟು ಮಾಡಲಾಗಿದೆ ಎಂದು ಓಮರ್ ಅಬ್ದುಲ್ಲಾ ಹೇಳಿರುವುದನ್ನು ಗಮನಿಸಿದ್ದೇವೆ ಎಂದು ಖರ್ಗೆ ತಿಳಿಸಿದರು.

**ದೇಶ ಆತಂಕಕ್ಕೆ ಸಿಲುಕಿದೆ**

ಭಯೋತ್ಪಾದಕರ ದಾಳಿಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷ ಗುರುವಾರ ದೆಹಲಿಯ ಕೇಂದ್ರ ಕಚೇರಿಯಲ್ಲಿ ಕಾರ್ಯಕಾರಿ ಸಮಿತಿಯ ಸಭೆ ಕರೆಯಲಾಗಿದೆ. ಭಯೋತ್ಪಾದಕರ ಕೃತ್ಯದ ವಿರುದ್ಧ ಪಕ್ಷದಿಂದ ನಿರ್ಣಯ ತೆಗೆದುಕೊಳ್ಳಲಾಗುವುದು ಎಂದರು. ಮೃತಪಟ್ಟವರ ಕುಟುಂಬದವರಿಗೆ ತಾವು ಸಾಂತ್ವನ ಹೇಳಿದ್ದು, ಕನ್ನಡಿಗರಾದ ಮಂಜುನಾಥ್, ಭರತ್ ಭೂಷಣ್ ಅವರ ಕುಟುಂಬದವರೊಂದಿಗೆ ಖುದ್ದಾಗಿ ಮಾತನಾಡಿದ್ದೇನೆ. ಸಂಕಷ್ಟದಲ್ಲಿರುವ ಕನ್ನಡಿಗರನ್ನು ಕರೆತರಲು ಕಾರ್ಮಿಕ ಸಚಿವ ಸಂತೋಷ್ ಲಾಡ್ ಕಾಶೀರಕ್ಕೆ ತೆರಳಿದ್ದು, ಈ ಕುರಿತು ವರದಿ ನೀಡುವಂತೆಯೂ ಸೂಚಿಸಲಾಗಿದೆ ಎಂದು ಹೇಳಿದರು.

ಓಮರ್ ಅಬ್ದುಲ್ಲಾ ಅವರೊಂದಿಗೆ ತಾವು ಮಾತುಕತೆ ನಡೆಸಿದ್ದು, ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಅವರು ಸಹಕಾರ ನೀಡುತ್ತಿದ್ದಾರೆ ಎಂದರು. ದೇಶದ ಭದ್ರತೆ ವಿಚಾರದಲ್ಲಿ ರಾಜಕಾರಣ ಮಾಡುವುದು ಬೇಡ. ಕೇಂದ್ರ ಸರ್ಕಾರ ಎಲ್ಲಾ ಪಕ್ಷಗಳನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳಲಿ. ಸರ್ವಪಕ್ಷ ಸಭೆ ಕರೆದು ಎಲ್ಲರ ಅಭಿಪ್ರಾಯ ಸಂಗ್ರಹಿಸಲಿ. ಕೆಲವರ ಸಲಹೆಗಳು ಪರಿಣಾಮ ಕಾರಿಯಾಗಿರಬಹುದು. ಕೇಂದ್ರ ಸರ್ಕಾರ ಅಗತ್ಯ ಎನಿಸಿದ ಸಲಹೆಗಳನ್ನು ಅನುಸರಿಸಬಹುದು.

ಇಲ್ಲವಾದರೆ ಕಡೆಗಣಿಸಬಹುದು. ಸಾವು-ನೋವುಗಳನ್ನು ತಡೆ ಯಲು ಭಯೋತ್ಪಾದನೆಯನ್ನು ಹತ್ತಿಕ್ಕಲು ನಿರ್ದಾಕ್ಷಿಣ್ಯ ಕ್ರಮ ಅಗತ್ಯ ಎಂದರು. ಸಂತ್ರಸ್ತ ಕುಟುಂಬದವರ ಜೊತೆ ನಾವಿದ್ದೇವೆ. ವೈಯಕ್ತಿಕವಾಗಿ ನನಗೆ ಈ ಘಟನೆಯಿಂದ ತುಂಬಾ ನೋವಾಗಿದೆ. ದೇಶ ಆತಂಕಕ್ಕೆ ಸಿಲುಕಿದೆ. ಉಗ್ರರ ಬಗ್ಗೆ ಯಾವುದೇ ಅನು ಕಂಪ ತೋರಿಸದೆ ಕಠಿಣ ಸಂದೇಶ ರವಾನೆಯಾಗಬೇಕು. ಪಾಕಿಸ್ತಾನಕ್ಕೂ ಸಂದೇಶ ತಲುಪಬೇಕು ಎಂದು ಹೇಳಿದರು. ತಮ್ಮ ಪುತ್ರಿ ಆರೋಗ್ಯ ಸರಿಯಿಲ್ಲ. ಹಾಗಾಗಿ ನಾನು ವಾರಕ್ಕೊಮೆ ಬೆಂಗಳೂರಿಗೆ ಬರುತ್ತಿದ್ದೇನೆ. ಇಲ್ಲವಾದರೆ ಜಮ್ಮು-ಕಾಶೀರಕ್ಕೆ ತಕ್ಷಣವೇ ಹೋಗುತ್ತಿದ್ದೆ ಎಂದರು.

> **ಭಯೋತ್ಪಾದನೆಯನ್ನು ಹತ್ತಿಕ್ಕಲು ಎಲ್ಲರೂ ಕೈ ಜೋಡಿ ಸುತ್ತೇವೆ. ದೇಶ ವಿರೋಧಿಗಳ ವಿರುದ್ಧ ನಾವೆಲ್ಲಾ ಒಂದಾಗಿ ಕೇಂದ್ರ ಸರ್ಕಾರಕ್ಕೆ ಸಂಪೂರ್ಣ ಸಹಕಾರ ನೀಡುತ್ತೇವೆ. ಭಯೋತ್ಪಾದಕರ ಕೃತ್ಯಗಳ ಬಗ್ಗೆ ಯಾವುದೇ ರಾಜಿ ಇಲ್ಲ. ದಾಳಿಯಿಂದಾಗಿ ಇಡೀ ದೇಶವೇ ಆಘಾತಕ್ಕೆ ಒಳಗಾಗಿದೆ. ಕೇಂದ್ರ ಸರ್ಕಾರ ತ್ವರಿತ ಕ್ರಮಗಳನ್ನು ಕೈಗೊಳ್ಳಬೇಕು. ಅಲ್ಲಿರುವವರನ್ನು ಸುರಕ್ಷಿತವಾಗಿ ಕರೆತರುವ ಜೊತೆಗೆ ಮುಂದೆ ಅಮರನಾಥ್ ಯಾತ್ರೆಗೂ ಕೂಡ ಅಗತ್ಯ ಭದ್ರತೆ ಒದಗಿಸಬೇಕು. ಭಯೋತ್ಪಾದನಾ ನಿಗ್ರಹವನ್ನು ಸವಾಲಾಗಿ ಸ್ವೀಕರಿಸಬೇಕೆಂದು ಹೇಳಿದರು.**

### ಉಗ್ರರ ಮಟ್ಟ ಹಾಕಿ



**ಕಾಶ್ಮೀರದ ಪಹಲ್ಗಾಂವ್ ನಲ್ಲಿ ಭಯೋತ್ಪಾದಕರು ಪ್ರವಾಸಿಗರ ಮೇಲೆ ನಡೆಸಿರುವ ದಾಳಿ ಅತ್ಯಂತ ಹೇಯ, ಹೇಡಿತನದ ಕೃತ್ಯವಾಗಿದೆ. ಇದಕ್ಕೆ ಕಾರಣರಾದ ಉಗ್ರಗಾಮಿಗಳನ್ನು ಯಾವ ಮುಲಾಜೂ ಇಲ್ಲದೆ ಸದೆಬಡಿಯುವ ಕೆಲಸ ಆಗಬೇಕು ಎಂದು ಬೃಹತ್, ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ.**


## ಪಹಲ್ಗಾಮ್ ಉಗ್ರರ ದಾಳಿ; ಮಾಹಿತಿ ಕೊರತೆ, ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯ

• ಉದಯವಾಹಿನಿ, ಬೆಂಗಳೂರು

ಕಾಶ್ಮೀರದ ಪಹಲ್ಗಾಮ್‌ನ ಉಗ್ರರ ದಾಳಿಯ ಸಂದರ್ಭದಲ್ಲಿ ಕಾಶ್ಮೀರದಿಂದ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಸರ್ಕಾರ ಸಕಲ ವ್ಯವಸ್ಥೆ ಮಾಡಿದೆ ಹಾಗೂ ಉಗ್ರರ ದಾಳಿಯ ಮಾಹಿತಿ ಕೊರತೆ ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಬೆಂಗಳೂರಿನಲ್ಲಿ ಈ ಕುರಿತು ಮಾತನಾಡಿದ ಅವರು, ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಉಗ್ರರ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಅಲ್ಲದೇ ಕರ್ನಾಟಕದ ಪ್ರವಾಸಿಗರಲ್ಲಿ ಮಂಜು ನಾಥ್, ಭರತ್ ಭೂಷಣ್ ಎಂಬವರು ಮೃತರಾಗಿರುವ ಬಗ್ಗೆ ಮಾಹಿತಿ ನೀಡಿದರು. ಕನ್ನಡಿಗರ ರಕ್ಷಣೆ ಇನ್ನಿತರ ವ್ಯವಸ್ಥೆಗಳಿಗಾಗಿ ಅಧಿಕಾರಿಗಳ ತಂಡವನ್ನು ಕಾಶ್ಮೀರಕ್ಕೆ ರವಾನಿಸಲಾಗಿದೆ. ಕಾಶ್ಮೀರಕ್ಕೆ ತೆರಳಿರುವ 40ಕ್ಕೂ ಅಧಿಕ ಕನ್ನಡಿಗರನ್ನು ವಿಶೇಷ ವಿಮಾನ ವ್ಯವಸ್ಥೆ ಮಾಡಿ ಸುರಕ್ಷಿತವಾಗಿ ಕರೆತರಲು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರನ್ನೂ ಕಾಶ್ಮೀರಕ್ಕೆ ಕಳುಹಿಸಲಾಗಿದೆ ಎಂದರು. ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದಿರುವ ಉಗ್ರರ ದಾಳಿ ಪೂರ್ವಯೋಜಿತ ಸಂಚು. ಪ್ರಾಣಹತ್ಯೆ ಮಾಡಿರುವ ಈ ಘಟನೆ ಅತ್ಯಂತ ಖಂಡನೀಯ. ಘಟನೆಯಲ್ಲಿ ಸುಮಾರು 28 ಜನ ಮೃತಪಟ್ಟಿರುವ ಭೀಕರವಾದ ಉಗ್ರರ ದಾಳಿ ನಡೆಯುವ ಮಾಹಿತಿ ಮೊದಲೇ ತಿಳಿಯದಿರುವುದು ಕೇಂದ್ರದ ಗುಪ್ತಚರ ಇಲಾಖೆಯ ವೈಫಲ್ಯವಾಗಿದೆ. ಈ ಹಿಂದೆ ನಡೆದ ಪುಲ್ವಾಮಾ ಘಟನೆಯಲ್ಲಿಯೂ ಗುಪ್ತಚರ ಮಾಹಿತಿಯ ವೈಫಲ್ಯವಿದೆ ಎಂದರು.

### ದೇಶದ ಜನರಿಗೆ ಕೇಂದ್ರ ಭದ್ರತೆ ಒದಗಿಸಬೇಕು

**ಮೃತರ ಕುಟುಂಬಗಳಿಗೆ ಪರಿಹಾರ ನೀಡುವ ಬಗ್ಗೆ ಸರ್ಕಾರ, ಸಕಾರಾತ್ಮಕವಾಗಿ ಚಿಂತಿಸಿ ಪರಿಶೀಲಿಸಲಿದೆ. ಪೆಹಲ್ಗಾಮಿನ ಉಗ್ರರ ದಾಳಿ ಪ್ರಕರಣದಲ್ಲಿ ಕೇಂದ್ರ ಗುಪ್ತಚರ ಇಲಾಖೆ ವಿಫಲವಾಗಿದೆ. ಭಯೋತ್ಪಾದಕರನ್ನು ನಿರ್ಮೂಲನೆಗೊಳಿಸುವ ಜೊತೆಗೆ ದೇಶದ ಜನರಿಗೆ ಭದ್ರತೆ ನೀಡುವ ಕಾರ್ಯವನ್ನು ಕೇಂದ್ರ ಸಮರ್ಥವಾಗಿ ನಿರ್ವಹಿಸಬೇಕು ಎಂದು ಅಭಿಪ್ರಾಯಪಟ್ಟರು.**



# ಶುಲ್ಕ ಕಟ್ಟಿದ್ದೀವಿ, ಆದರೂ 'ಕಾವೇರಿ' ಬರ್ತಿಲ್ಲ

• ಉದಯವಾಹಿನಿ, ಬೆಂಗಳೂರು

ಅರ್ಜಿ ಸಲ್ಲಿಸಿ, ಶುಲ್ಕ ಪಾವತಿಸಿ ವರ್ಷವಾಗುತ್ತಿದ್ದರೂ ನಗರದ ಬನ್ನೇರುಘಟ್ಟ ರಸ್ತೆಯ ಗೊಟ್ಟಿಗೆರೆಯಲ್ಲಿರುವ ಹತ್ತಕ್ಕೂ ಹೆಚ್ಚು ಮನೆಗಳಿಗೆ ಕಾವೇರಿ ನೀರಿನ ಸಂಪರ್ಕ ನೀಡುತ್ತಿಲ್ಲ. ಗೊಟ್ಟಿಗರ ಡ-ಮಾರ್ಟ್ ಹಿಂಭಾಗದಲ್ಲಿರುವ ಇಲ್ಲಿನ ನಿವಾಸಿಗಳು ವರ್ಷದ ಹಿಂದೆ ಹೊಸ ನೀರಿನ ಸಂಪರ್ಕಕ್ಕಾಗಿ ಜಲಮಂಡಳಿಗೆ ಅರ್ಜಿ ಸಲ್ಲಿಸಿ, ಶುಲ್ಕವನ್ನೂ ಪಾವತಿಸಿದ್ದಾರೆ.

**ಗೊಟ್ಟಿಗೆರೆ ನಿವಾಸಿಗಳ ಅಳಲು**

ಕಾವೇರಿ ನೀರು ಪೂರೈಕೆಗಾಗಿ ಮನೆಗಳವರೆಗೆ ಕೊಳವೆ ಗಳನ್ನೂ ಅಳವಡಿಸಿದ್ದಾರೆ. ಹೊಸ ಮೀಟರ್ ಗಳನ್ನು ತಂದು ಮನೆಗಳ ಸಮೀಪ ಜೋಡಿಸಿಟ್ಟಿದ್ದಾರೆ. ಆದರೆ, ಮನೆಗಳಿಗೆ ನೀರು ಸರಬರಾಜು ಮಾಡುತ್ತಿಲ್ಲ. ಗೊಟ್ಟಿಗೆರೆಯಲ್ಲಿರುವ ನಮ್ಮ ಭಾಗದಲ್ಲಿ ಎಂಟರಿಂದ ಹತ್ತು ಮನೆಗಳಿಗಷ್ಟೇ ಕಾವೇರಿ ನೀರು ಬರುತ್ತಿಲ್ಲ. ಪಕ್ಕದ ರಸ್ತೆಯಲ್ಲಿರುವ ಎಲ್ಲಾ ಮನೆಗಳಿಗೂ ನೀರು ಬರುತ್ತದೆ. ಈ ಕುರಿತು ಜಲಮಂಡಳಿ ಎಂಜಿನಿಯರ್‌ಗಳಿಗೆ ದೂರು ಕೊಟ್ಟಿದ್ದೇವೆ. ದೂರು ಪುಸ್ತಕದಲ್ಲೂ ನಮೂದಿಸಿದ್ದೇವೆ. ಆದರೆ ಯಾವುದೇ ಕ್ರಮವಾಗಿಲ್ಲ ಎಂದು ಇಲ್ಲಿನ ನಿವಾಸಿ ಮಧು ಅಳಲು ತೋಡಿಕೊಂಡರು.ಮೊದಲಿನಿಂದಲೂ ಟ್ಯಾಂಕರ್ ನೀರನ್ನೇ ಅವಲಂಬಿ ಸಿದ್ದೇವೆ. ಕಾವೇರಿ 5ನೇ ಹಂತದ ಯೋಜನೆ ಆರಂಭವಾದ ಕೂಡಲೇ, ನಾವೆಲ್ಲ ನೀರಿನ ಸಂಪರ್ಕಕ್ಕಾಗಿ ಅರ್ಜಿ ಸಲ್ಲಿಸಿ, ಸಾವಿರಾರು ರೂಪಾಯಿ ಶುಲ್ಕ ಪಾವತಿಸಿದ್ದೇವೆ. ನೀರೇ ಬರುತ್ತಿಲ್ಲ. ಸಮಸ್ಯೆ ಪರಿಹಾರಕ್ಕೆ ಯಾರನ್ನು ಸಂಪರ್ಕಿಸಬೇಕೆಂದು ತಿಳಿಯುತ್ತಿಲ್ಲ ಎಂದು ಮತ್ತೊಬ್ಬ ನಿವಾಸಿ ಧ್ರುವ ಬೇಸರ ವ್ಯಕ್ತಪಡಿಸಿದರು. ಈ ಭಾಗಕ್ಕೆ ಕಾವೇರಿ ನೀರು ಸರಬರಾಜು ಮಾಡಬೇಕಾದರೆ 80 ಅಡಿ ಮುಖ್ಯ ರಸ್ತೆಯಲ್ಲಿ ಎರಡು ಕೊಳವೆಗಳನ್ನು ಅಳವಡಿಸಬೇಕು. ಅದಕ್ಕೆ ಬೇರೆ ಇಲಾಖೆಯಿಂದ ಅನುಮತಿ ಪಡೆಯಬೇಕಂತೆ. ಶುಲ್ಕ ಪಾವತಿಸಬೇಕಂತೆ. ಹೀಗೆ ಹಲವು ಕಾರಣಗಳನ್ನು ಹೇಳುತ್ತಾ, ನೀರಿನ ಸಂಪರ್ಕ ನೀಡುವುದಕ್ಕೆ ವಿಳಂಬ ಮಾಡುತ್ತಿದ್ದಾರೆ ಎಂದು ನಿವಾಸಿಗಳು ದೂರಿದರು.



ನೀರಿನ ಸಂಪರ್ಕಕ್ಕಾಗಿ ಅರ್ಜಿ ಸಲ್ಲಿಸುವಾಗ, ಶುಲ್ಕ ಪಾವತಿಸುವಾಗ, ಮನೆಗಳಿಗೆ ಕೊಳವೆಗಳನ್ನು ಅಳವಡಿಸುವಾಗ ಏನೂ ಹೇಳದವರು, ಈಗ ಅಡಚಣೆಗಳ ಬಗ್ಗೆ ಹೇಳಿದರೆ ಹೇಗೆ ಎಂಬುದು ಅವರ ಪ್ರಶ್ನೆ.

ಇದೇ ಭಾಗದಲ್ಲಿರುವ ದೊಡ್ಡ ದೊಡ್ಡ ಅಂಗಡಿಗಳಿಗೆ, ಹೋಟೆಲ್‌ಗಳಿಗೆ ರಾತ್ರೋ ರಾತ್ರಿ ಕೊಳವೆಗಳನ್ನು ಅಳವಡಿಸಿ ನೀರು ಕೊಡುವುದಕ್ಕಾಗುತ್ತದೆ. ಆದರೆ, ನಮ್ಮ ಮನೆಗಳಿಗೆ ನೀರಿನ ಸಂಪರ್ಕ ಕೊಡುವುದಕ್ಕೆ ಯಾಕೆ ಆಗುತ್ತಿಲ್ಲ ಎಂದು ನಿವಾಸಿಗಳು ಪ್ರಶ್ನಿಸುತ್ತಾರೆ.

> **ಎಲ್ಲಾ ಬಡಾವಣೆಗಳಿಗೂ ಹಂತ ಹಂತವಾಗಿ ಕಾವೇರಿ ನೀರಿನ ಸಂಪರ್ಕ ನೀಡಲಾಗುತ್ತಿದೆ. ಈ ಬಡಾವಣೆಯಲ್ಲಿ ನೀರು ಪೂರೈಕೆ ಯಾವ ಸ್ಥಿತಿಯಲ್ಲಿದೆ ಎಂದು ತಿಳಿದು ಕ್ರಮ ಕೈಗೊಳ್ಳಲಾಗುತ್ತದೆ.**
> **-ಜಲಮಂಡಳಿ ಅಧಿಕಾರಿಗಳು**

## ತಂಬಾಕು ಜಗಿದರೆ ದಂಡ: ಬಿಎಂಆರ್‌ಸಿಎಲ್ ನಿರ್ಧಾರ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೊ ರೈಲಿನಲ್ಲಿ ಪ್ರಯಾಣಿಕರೊಬ್ಬರು ಪಾನ್ ಮಸಾಲ ಸೇವಿಸಿದ ವಿಡಿಯೋ ಹರಿದಾಡಿದ ಮೇಲೆ ಬಿಎಂಆರ್‌ಸಿಎಲ್ ಎಚ್ಚೆತ್ತುಕೊಂಡಿದೆ. ಮೆಟ್ರೊ ನಿಲ್ದಾಣ, ರೈಲುಗಳ ಒಳಗೆ ತಂಬಾಕು ಆಧರಿತ ಉತ್ಪನ್ನಗಳನ್ನು ಸೇವಿಸುವ ಪ್ರಯಾಣಿಕರಿಗೆ ದಂಡ ವಿಧಿಸಲು ನಿರ್ಧರಿಸಿದೆ. ಗುಟ್ಕಾ, ಪಾನ್ ಮಸಾಲಾದಂತಹ ತಂಬಾಕು ಆಧಾರಿತ ಉತ್ಪನ್ನಗಳನ್ನು ಅಗಿದು ಉಗುಳುವ ಬಗ್ಗೆ ಸಾರ್ವಜನಿಕ ದೂರುಗಳು ಹೆಚ್ಚಾಗುತ್ತಿವೆ.

ಈ ಸಮಸ್ಯೆಯನ್ನು ಪರಿಹಾರಿಸಲು, ಮೆಟ್ರೊ ಆವರಣದಲ್ಲಿ ಉಗುಳುವುದು, ಕಸ ಹಾಕುವುದನ್ನು ತಪ್ಪಿಸಲು ಜನದಟ್ಟಣೆ ಇಲ್ಲದ ಸಮಯಗಳಲ್ಲಿ ಗಸ್ತು ತಿರುಗುವುದನ್ನು ಬಲಪಡಿಸಲಾಗುವುದು. ಮೆಟ್ರೊ ರೈಲು ಮತ್ತು ನಿಲ್ದಾಣಗಳಲ್ಲಿ ಕಣ್ಗಾವಲು ಹೆಚ್ಚಿಸುವ ಕ್ರಮ ಕೈಗೊಳ್ಳಲಾಗುವುದು. ತಪ್ಪಿತಸ್ಥ ಪ್ರಯಾಣಿಕರಿಗೆ ಬಿಎಂಆರ್‌ಸಿಎಲ್ ನಿಯಮಗಳ ಪ್ರಕಾರ ದಂಡ ವಿಧಿಸಲಾಗುವುದು.

ಅಂತಹ ವಸ್ತುಗಳನ್ನು ಲೋಹ ಶೋಧಕಗಳ ಮೂಲಕ ಪತ್ತೆಹಚ್ಚಲು ಸಾಧ್ಯವಾಗದಕಾರಣ, ಎಲ್ಲಾ ಮೆಟ್ರೊ ನಿಲ್ದಾಣಗಳಲ್ಲಿ ಅನುಮಾನ ಬಂದ ಜಾಗಗಳಲ್ಲಿ ಆಗಾಗ ತಪಾಸಣೆ ಮಾಡಲಾಗುವುದು.

ತಂಬಾಕು ಪದಾರ್ಥ ಜಗಿಯುವ ಪ್ರಯಾಣಿಕರನ್ನು ಸೂಕ್ಷ್ಮ ರೀತಿಯಲ್ಲಿ ಗಮನಿಸಲು, ಜನ ರೊಂದಿಗೆ ಈ ಕುರಿತು ಸಂವೇದನಾಶೀಲವಾಗಿ ನಡೆದುಕೊಳ್ಳಲು ಪ್ಲಾಟ್‌ಫಾರ್ಮ್ ಭದ್ರತಾ ಸಿಬ್ಬಂದಿಗೆ ತರಬೇತಿ ನೀಡಲಾಗುವುದು. ಯಾವುದೇ ಉಲ್ಲಂಘನೆಗಳು ಕಂಡು ಬಂದ ಕೂಡಲೇ ಸಂಬಧಿಸಿದ ಪ್ಲಾಟ್ ಫಾರ್ಮ್ ಭದ್ರತಾ ಸಿಬ್ಬಂದಿಗೆ ಎಚ್ಚರಿಕೆ ನೀಡಲು ಕೇಂದ್ರ ಭದ್ರತಾ ಕಣ್ಗಾವಲು ಕೊಠಡಿಗೆ ಸೂಚನೆ ನೀಡಲಾಗಿದೆ. ತಂಬಾಕು ಆಧರಿತ ಉತ್ಪನ್ನಗಳನ್ನು ಬಳಸದಂತೆ ಪ್ರಯಾಣಿಕರಲ್ಲಿ ಜಾಗೃತಿ ಮೂಡಿಸಲು ಅಭಿಯಾನ ನಡೆಸಲಾಗುವುದು ಎಂದು ಬಿಎಂಆರ್‌ಸಿಎಲ್ ಅಧಿ ಕಾರಿಗಳು ತಿಳಿಸಿದ್ದಾರೆ.

## ಪೆಹಲ್ಲಾಮ್ ಉಗ್ರರ ದಾಳಿ ಖಂಡಿಸಿ ಕ್ಯಾಂಡಲ್ ಲೈಟ್ ಮೌನ ಮೆರವಣಿಗೆ

• ಉದಯವಾಹಿನಿ, ಬೆಂಗಳೂರು



ರಾಜಾಜಿನಗರ ಬಿಜೆಪಿ ಮಂಡಲ ಯುವ ಮೋರ್ಚಾ ವತಿಯಿಂದ ಹೌದು ನಾನು ಹಿಂದೂ , ಕಾಶ್ಮೀರ ಪೆಹ ಲ್ಲಾಮ್ ಉಗ್ರರ ದಾಳಿ ಖಂಡಿಸಿ ಹಿಂದೂಗಳ ಜಾಗೃತಿಗಾಗಿ ಸಿಗ್ನೇಚರ್ ಕ್ಯಾಂಪೇನ್ (ಸಹಿ ಸಂಗ್ರಹ) ಹುತಾತ್ಮರಿಗೆ ಪುಷ್ಪನಮನ ಸಲ್ಲಿಸುವ ಕಾರ್ಯಕ್ರಮ. ರಾಜಾಜಿನಗರ ಹಳೆಯ ಪೊಲೀಸ್ ಠಾಣೆಯಿಂದ ಶ್ರೀರಾಮಮಂದಿರ ಡಾ.ರಾಜ್ ಪ್ರತಿಮೆ ವರಗೆ ಕ್ಯಾಂಡಲ್ ಲೈಟ್ ಮೂಲಕ ಮೌನ ಮೆರವಣಿಗೆ ನಡೆಯಿತು. ಮಾಜಿ ಶಿಕ್ಷಣ ಸಚಿವರು, ಶಾಸಕರಾದ ಎಸ್.ಸುರೇಶ್ ಕುಮಾರ್ ರವರು ಕ್ಯಾಂಡಲ್ ಲೈಟ್ ಮೌನ ಮೆರವಣಿಗೆಯಲ್ಲಿ ಭಾಗವಹಿಸಿ, ಹುತಾತ್ಮರಿಗೆ ಪುಷ್ಪನಮನ ಸಲ್ಲಿಸಿದರು. ಶಾಸಕರಾದ ಎಸ್.ಸುರೇಶ್ ಕುಮಾರ್ ರವರು ಮಾತನಾಡಿ ಬಾಲ್ ಕೋಟ್ ನಲ್ಲಿ ಉಗ್ರರು ದಾಳಿ ನಂತರ ಪೆಹಲ್ಲಾಮ್ ದುರಂತದಲ್ಲಿ 27ಜನ ಹುತಾತ್ಮರಾದರು. ಉಗ್ರರು ಕಲ್ಮಾ ಹೇಳಿ ಎಂದು ಕೇಳಿದ್ದಾರೆ ಬರಲ್ಲ ಅಂದವರಿಗೆ ಗುಂಡಕ್ಕಿದ್ದಾರೆ. ಹಾಗದರೆ ನಾವು ಹಿಂದೂ ಎಂದು ಹೇಳುವುದು ತಪ್ಪ.. ಯುವಕ ಮದುವೆಯಾಗಿ ಒಂದು ವಾರವಾಗಿತ್ತು ಮತ್ತು ಕರ್ನಾಟಕದ ಇಬ್ಬರು ಹುತಾತ್ಮರಾಗಿದ್ದಾರೆ. ನಾವು ಎಲ್ಲರು ಒಗ್ಗಾಟ್ಟಿಗಿದ್ದರೆ ಮಾತ್ರ ಬದುಕಲು ಸಾಧ್ಯ. ಎದೆ ತಟ್ಟಿ ಹೇಳಿ ನಾನು ಹಿಂದೂ ಎಂದು . ಪೆಹಾಲ್ಲಾಮ್ ದುರಂತ ಎದಿರೇಟು ನೀಡಲು ಪ್ರಧಾನಿ ನರೇಂದ್ರಮೋದಿ ಸಜ್ಜಾಗಿದ್ದಾರೆ. ಭಾರತದ ಸೈನಿಕರಿಗೆ, ಹುತಾತ್ಮರಾದ ಕುಟುಂಬಗಳಿಗೆ ತಾಯಿ ಚಾಮುಂಡೇಶ್ವರಿ ಶಕ್ತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ.

**ಹೌದು ನಾನು ಹಿಂದೂ**

ಮಂಡಲ ಅಧ್ಯಕ್ಷ ಸುದರ್ಶನ್, ಮಾಜಿ ಪಾಲಿಕೆ ಸದಸ್ಯರುಗಳಾದ ಎಂ.ಮುನಿರಾಜು, ರಾಜಣ್ಣ, ಹೆಚ್.ಆರ್.ಕೃಷ್ಣಪ್ಪ, ಹೆಚ್.ವಿಜಯಕುಮಾರ್, ದೀಪಾ ನಾಗೇಶ್ ಮತ್ತು ಪ್ರಧಾನ ಕಾರ್ಯದರ್ಶಿ ರಾಘವೇಂದ್ರರಾವ್ ಯುವ ಮೋರ್ಚಾ ಅಧ್ಯಕ್ಷ ಸಂಜಯ್ ಕುಮಾರ್ ರವರು, ಸ್ಥಳೀಯ ನಿವಾಸಿಗಳು, ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಬಿಬಿಎಂಪಿ; 25 ಕೋಟಿ ವೆಚ್ಚದ ಕಾಮಗಾರಿಯಲ್ಲಿ ಅಕ್ರಮ

### ದಾಸರಹಳ್ಳಿ: ವರ್ಗಾವಣೆಯಾದ ಇ.ಇಯಿಂದ ಕಾರ್ಯಾದೇಶ; ಸಿಟಿಸಿ, ಹಾಜರಾತಿ ಪುಸ್ತಕ ತಿದ್ದಿರುವ ಆರೋಪ

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿಯ ದಾಸರಹಳ್ಳಿ ವಿಭಾಗದ ವ್ಯಾಪ್ತಿಯಲ್ಲಿ ಮುಖ್ಯಮಂತ್ರಿಯವರ ಅಮೃತ ನಗರೋತ್ಥಾನ ಯೋಜನೆಯಡಿ ನಡೆದಿರುವ 25 ಕೋಟಿ ವೆಚ್ಚದ ಕಾಮಗಾರಿಯಲ್ಲಿ ಲೋಪದೋಷಗಳಿದ್ದು, ಬಿಲ್ ಪಾವತಿಗೆ ತಡೆ ನೀಡಬೇಕು ಎಂದು ಒತ್ತಾಯಿಸಲಾಗಿದೆ. ದಾಸರಹಳ್ಳಿ ವಿಧಾನಸಭೆ ಕ್ಷೇತ್ರದ ಮಾಜಿ ಶಾಸಕ ಆರ್. ಮಂಜುನಾಥ ಅವರು ಈ ಸಂಬಂಧ 44 ಪುಟಗಳ ದಾಖಲೆಯೊಂದಿಗೆ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರಿಗೆ ಪತ್ರ ಬರೆದು, ಈ ಕಾಮಗಾರಿ ಬಗ್ಗೆ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ.

'ಬಿಬಿಎಂಪಿಗೆ ಸೇರಿದ 110 ಹಳ್ಳಿಗಳ ಅಭಿವೃದ್ಧಿ ಯೋಜನೆಯಲ್ಲಿ ದಾಸರಹಳ್ಳಿ ವಲಯದಲ್ಲಿ ಶೆಟ್ಟಿಹಳ್ಳಿ, ಬೃಂದಾವನ ಬಡಾವಣೆ, ಬಾಬಣ್ಣ ಲೇಔಟ್, ಸಪ್ತಗಿರಿ ಬಡಾವಣೆ, ಎನ್‌ಎಂಎಚ್ ಲೇಔಟ್, ಶ್ರೀದೇವಿ ಲೇಔಟ್ ಸುತ್ತಮುತ್ತಲಿನ ರಸ್ತೆ ಹಾಗೂ ಚರಂಡಿ ಅಭಿವೃದ್ಧಿ ಕಾಮಗಾರಿಗಳ ಯೋಜನೆ ನಿರ್ವಹಣೆ ಸಲಹಾ ಸಂಸ್ಥೆಯಾಗಿ, ಮೆಕಾಡೆಜ್ ಕೋರ್ ಟೆಕ್ನಾಲಜಿ ಸಂಸ್ಥೆಗೆ 2024ರ ಮಾ. 24ರಂದು ಕಾರ್ಯಾದೇಶ ನೀಡಲಾಗಿದೆ. ಕಾರ್ಯಾದೇಶ ನೀಡಿರುವ ದಾಸರಹಳ್ಳಿ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ಧರಣೇಂದ್ರ ಕುಮಾರ್ ಅವರು ಮಾರ್ಚ್ 11ರಂದೇ ವರ್ಗಾವಣೆಯಾಗಿದ್ದರು. ವರ್ಗಾವಣೆಯಾದ ಎರಡು ದಿನಗಳ ನಂತರ ಧರಣೇಂದ್ರ ಕುಮಾರ್ ಕಾರ್ಯಾದೇಶಕ್ಕೆ ಸಹಿ ಹಾಕಿರುವುದು ಕಾನೂನುಬಾಹಿರ ಎಂದು ದೂರಿದ್ದಾರೆ. ಎರಡು ಪ್ರಭಾರ ವರ್ಗಾವಣೆಯ ಪ್ರಮಾಣಪತ್ರಗಳನ್ನು ಸಿದ್ದಪಡಿಸಿರುವುದು ಅಪರಾಧವಾಗಿದ್ದು, ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಿರುವುದನ್ನೂ ತಿದ್ದಿದ್ದಾರೆ. ದಾಸರಹಳ್ಳಿ ವಿಭಾಗದ ಹಾಜರಾತಿ ಪುಸ್ತಕದಲ್ಲಿ ಮಾರ್ಚ್ 11ರಿಂದಲೇ ಧರಣೇಂದ್ರ ಕುಮಾರ್ ವರ್ಗಾವಣೆಯಾಗಿದ್ದಾರೆಂದು ಬರೆಯಲಾಗಿದೆ. ಕೇಂದ್ರ ಕಚೇರಿಯಲ್ಲಿರುವ ಟಿವಿಸಿಸಿ ವಿಭಾಗಕ್ಕೆ ವರ್ಗಾವಣೆಯಾಗಿದ್ದ ಧರಣೇಂದ್ರಕುಮಾರ್ ಮಾರ್ಚ್ 12ರಿಂದ ಹಾಜರಾತಿ ಪುಸ್ತಕದಲ್ಲಿ ಅಲ್ಲೂ ಸಹಿ ಮಾಡಿದ್ದಾರೆ. ನಂತರ ಹಾಜರಾತಿ ಪುಸ್ತಕದಲ್ಲಿ ತಿದ್ದಲಾಗಿದೆ' ಎಂದಿರುವ ಮಂಜುನಾಥ್, ಮಾಹಿತಿ ಹಕ್ಕು ಕಾರ್ಯಕರ್ತ ಎಂ.ಎಚ್. ನಂದೀಶ್ ಅವರು ಪಡೆದಿರುವ ದಾಖಲೆಗಳನ್ನೂ ದೂರಿನೊಂದಿಗೆ ಲಗತ್ತಿಸಿದ್ದಾರೆ.

ದಾಸರಹಳ್ಳಿ ವಲಯದ ಮುಖ್ಯ ಎಂಜಿನಿಯರ್ ಆಗಿದ್ದ ಕೆ.ವಿ. ರವಿ ಅವರ ಮಾರ್ಗದರ್ಶನದಲ್ಲಿ ಹಾಜರಾತಿ ಪುಸ್ತಕ ಹಾಗೂ ಸಿಟಿಸಿ ಪ್ರತಿಯಲ್ಲಿ ತಿದ್ದುಪಡಿ ಮಾಡಲಾಗಿದ್ದು, ಅರ್ಹವಿಲ್ಲದ ಸಂಸ್ಥೆಗೆ ಕಾರ್ಯಾದೇಶ ನೀಡಲು ಸಹಕರಿಸಿರುವ ಎಲ್ಲಾ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಕಾರ್ಯಾದೇಶದಂತೆ ಎಲ್ಲಾ ಕಾಮಗಾರಿಗಳೂ ನಡೆದಿಲ್ಲದಿದ್ದರೂ ಬಿಲ್ ಪಾವತಿಸಲು ಅಧಿಕಾರಿಗಳು ಮುಂದಾಗಿದ್ದಾರೆ. ಯಾವುದೇ ರೀತಿಯ ಬಿಲ್‌ಗಳನ್ನು ಪಾವತಿ ಮಾಡಬಾರದು ಮಂಜುನಾಥ್ ಆಗ್ರಹಿಸಿದ್ದಾರೆ.

### ರಾಜಕೀಯದಲ್ಲಿ ನಾವು ಬಲಿ: ಧರಣೇಂದ್ರ ಕುಮಾರ್

**ದಾಸರಹಳ್ಳಿಯಲ್ಲಿ ಹಾಲಿ ಹಾಗೂ ಹಿಂದಿನ ಶಾಸಕರ ನಡುವಿನ ರಾಜಕೀಯದಲ್ಲಿ ನಾವು, ಅಧಿಕಾರಿಗಳು ಬಲಿಯಾಗುತ್ತಿದ್ದೇವೆ. 25 ಕೋಟಿ ವೆಚ್ಚದ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗೆ ನಾನು ಕಾರ್ಯಾದೇಶವನ್ನಷ್ಟೇ ನೀಡಿದ್ದೇನೆ' ಎಂದು ಕಾರ್ಯಪಾಲಕ ಎಂಜಿನಿಯರ್ ಧರಣೇಂದ್ರ ಕುಮಾರ್ ತಿಳಿಸಿದರು. 2024ರ ಮಾರ್ಚ್ 11ಕ್ಕೆ ಕಾರ್ಯಪಾಲಕ ಎಂಜಿನಿಯರ್ ಹುದ್ದೆಯಿಂದ ವರ್ಗಾವಣೆಯಾಯಿತು. ಅಂದೇ ಪ್ರಭಾರ ವರ್ಗಾವಣೆಯ ಪ್ರಮಾಣಪತ್ರ ತಯಾರಿಸಲಾಗಿತ್ತು. ಸಹಿಯನ್ನೂ ಮಾಡಿದ್ದೆ. ಆದರೆ, ದಾಸರಹಳ್ಳಿ ವಲಯದ ಮುಖ್ಯ ಎಂಜಿನಿಯರ್ ಅವರ ಆದೇಶದಂತೆ ಮಾ. 14ರವರೆಗೆ ನಾನು ಅಲ್ಲಿ ಕಾರ್ಯನಿರ್ವಹಿಸಿದ್ದೆ. ಹೀಗಾಗಿ, ಮಾ. 14ರಂದು ಅಧಿಕೃತವಾಗಿ ಸಿಟಿಸಿ ನೀಡಿ ಬಂದಿದ್ದೇನೆ. ಮಾರ್ಚ್ 13ರಂದು ಕಾಮಗಾರಿಗೆ ಕಾರ್ಯಾದೇಶ ನೀಡಿದ್ದೇನೆ ಅಷ್ಟೇ. ಯಾವ ರೀತಿ ಕಾಮಗಾರಿ ನಡೆದಿದೆ ಎಂಬುದು ನನಗೆ ಗೊತ್ತಿಲ್ಲ. ಯಾವುದೇ ತನಿಖೆಗೂ ಸಿದ್ಧ ಎಂದು ಪ್ರತಿಕ್ರಿಯಿಸಿದರು.**

## ಟೋಲ್ ಸಂಗ್ರಹಕ್ಕೆ ರೈತ ಸಂಘ ವಿರೋಧ

• **ಉದಯವಾಹಿನಿ, ಮಳವಳ್ಳಿ**


ಉದಯವಾಹಿನಿ ಚಿತ್ರ

ಪಟ್ಟಣ ಹಾಗೂ ತಾಲ್ಲೂಕಿನಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ-948(209) ಕಾಮಗಾರಿಯು ಅಪೂರ್ಣಗೊಂಡಿದೆ ಎಂದು ಆರೋಪಿಸಿರುವ ಕರ್ನಾಟಕ ಪ್ರಾಂತ ಸಂಘ ಟೋಲ್ ಸಂಗ್ರಹಕ್ಕೆ ವಿರೋಧ ವ್ಯಕ್ತಪಡಿಸಿದೆ.ಕಾಮಗಾರಿಯು ಅಪೂರ್ಣಗೊಂಡಿರುವುದರ ಜೊತೆಗೆ ಕಳಪೆ ಗುಣಮಟ್ಟದಿಂದ ಕೂಡಿದೆ. ಕಳೆದ ತಿಂಗಳು ಟೋಲ್ ಸಂಗ್ರಹಕ್ಕೆ ಮುಂದಾಗಿದ್ದಾಗ ಪ್ರತಿಭಟನೆ ನಡೆಸಿ ಹಲವು ಸಮಸ್ಯೆಗಳನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳ ಗಮನಕ್ಕೆ ತಂದಿದ್ದವು.

ಇದೀಗ ಅವುಗಳನ್ನು ಬಗೆಹರಿಸುವ ಮುನ್ನವೇ ಟೋಲ್ ಸಂಗ್ರಹ ಸರಿಯಲ್ಲ ಎಂದು ಸಂಘದ ಜಿಲ್ಲಾ ಘಟಕದ ಸಂಚಾಲಕ ಎನ್.ಎಲ್.ಭರತ್ ರಾಜ್ ಪತ್ರಿಕಾಗೋಷ್ಠಿಯಲ್ಲಿ ಕಿಡಿ ಕಾರಿದರು. ಹಲವು ಕಡೆ ಅವೈಜ್ಞಾನಿಕವಾಗಿ ಬಸ್ ಶೆಲ್ಟರ್‌ಗಳನ್ನು ನಿರ್ಮಿಸಿ ಗಾಳಿ, ಮಳೆಯಿಂದ ರಕ್ಷಣೆ ಇಲ್ಲದಂತಾಗಿದೆ.

ಅಲ್ಲದೇ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳು ಸರಿಯಾಗಿ ಇಲ್ಲ, ತಾಲ್ಲೂಕಿನ ಜನರ ವಾಹನಗಳ ಮುಕ್ತ ಓಡಾಡದ ಬಗ್ಗೆ ಸ್ಪಷ್ಟತೆ ನೀಡಿಲ್ಲ, ಜೊತೆಗೆ ಸರ್ವಿಸ್ ರಸ್ತೆ ನಿರ್ಮಿಸದೇ ಜನರನ್ನು ರಾಷ್ಟ್ರೀಯ ಹೆದ್ದಾರಿ ವಂಚಿಸುತ್ತಿದೆ ಎಂದು ಆರೋಪಿಸಿದರು.

ಹೊಸಹಳ್ಳಿ ಭಾಗದ ರೈತರ ಜಮೀನುಗಳಿದ್ದ ಮಾರ್ಗವನ್ನು ಬಂದ್ ಮಾಡಿ ಐದಾರು ಕಿಲೋ ಮೀಟರ್ ಸುತ್ತಿಕೊಂಡು ಬರುವ ಪರಿಸ್ಥಿತಿ ರೈತರಿಗೆ ನಿರ್ಮಾಣವಾಗಿದೆ. ಮದ್ದೂರು-ಕುಣಿಗಲ್-ತುಮಕೂರು ರಾಜ್ಯ ರಸ್ತೆಯ ಕಾಮಗಾರಿಯು ಸಹ ಗುಣಮಟ್ಟದಿಂದ ಕೂಡಿಲ್ಲ, ಇಂಥ ಹಲವು ನ್ಯೂನತೆಗಳಿದ್ದರೂ ಏಕಾಏಕಿ ಟೋಲ್ ಸಂಗ್ರಹಕ್ಕೆ ಮುಂದಾಗಿರುವುದು ಸರಿಯಲ್ಲ, ಕೂಡಲೇ ಸುಂಕ ಸಂಗ್ರಹ ನಿಲ್ಲಿಸಬೇಕು. ಇಲ್ಲದಿದ್ದರೆ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಎನ್.ಲಿಂಗರಾಜಮೂರ್ತಿ, ನಂಜುಂಡಸ್ವಾಮಿ, ಮರಿಲಿಂಗೇಗೌಡ ಇದ್ದರು.

## ಹಿಂದೂ ಧಾರ್ಮಿಕ ಭಾವನೆಗೆ ಧಕ್ಕೆ: ಖಂಡನೆ

• **ಉದಯವಾಹಿನಿ, ತುಮಕೂರು**

ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಘಟನೆಗಳು ನಿರಂತರವಾಗಿ ನಡೆಯುತ್ತಿವೆ. ಅಲ್ಪಸಂಖ್ಯಾತರ ತುಷ್ಟೀಕರಣ ಸರ್ಕಾರದ ಗುರಿಯಾಗಿದೆ ಎಂದು ಶಾಸಕ ಜಿ.ಬಿ.ಜ್ಯೋತಿಗಣೇಶ್ ಟೀಕಿಸಿದ್ದಾರೆ. ಬೀದರ್‌ನಲ್ಲಿ ಜನಿವಾರ ಧರಿಸಿದ್ದ ವಿದ್ಯಾರ್ಥಿಗೆ ಸಿಇಟಿ ಪರೀಕ್ಷೆ ಬರೆಯಲು ಅವಕಾಶ ನೀಡಿಲ್ಲ. ಶಿವಮೊಗ್ಗದಲ್ಲಿ ವಿದ್ಯಾರ್ಥಿಗೆ ಜನಿವಾರ ಕಿತ್ತೆಸೆಯುವಂತೆ ಹೇಳಿ ಅಧಿಕಾರಿಗಳು ದರ್ಪ ಮೆರೆದಿದ್ದಾರೆ. ವಿದ್ಯಾರ್ಥಿಯ ಭವಿಷ್ಯಕ್ಕೆ ಕಲ್ಲು ಹಾಕಿದ್ದಾರೆ. ಇಂತಹ ಬೌದ್ಧಿಕ ವಿಕೃತಿ, ಮನುಷ್ಯತ್ವ ಇಲ್ಲದ ನಡೆ ಮತ್ತೊಂದಿಲ್ಲ. ಇದು ಕಾಂಗ್ರೆಸ್‌ನ ಹೀನ ಮನಃಸ್ಥಿತಿಯ ಮುಖವಾಡ ಪ್ರದರ್ಶಿಸಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಪರೀಕ್ಷೆ, ಸಂದರ್ಶನದ ವೇಳೆ ಕೆಲ ವಸ್ತುಗಳಿಗೆ ನಿರ್ಬಂಧ ವಿಧಿಸಿದೆ. ಜನಿವಾರ ತೊಡುವುದು ಭಾರತೀಯ ಸಮುದಾಯದ ಆಚಾರ-ವಿಚಾರಕ್ಕೆ ಸಂಬಂಧಿಸಿದೆ. ಪರೀಕ್ಷೆಯ ಮೇಲೆ ಜನಿವಾರ ಯಾವ ಪ್ರಭಾವ ಬೀರುತ್ತದೆ ಇದಕ್ಕೆ ಸಂಬಂಧಿಸಿದ ಸಚಿವರು, ಸರ್ಕಾರ ಉತ್ತರಿಸಬೇಕು ಎಂದಿದ್ದಾರೆ. ಸರ್ಕಾರ ಧಾರ್ಮಿಕ ಭಾವನೆ ಕೆರಳಿಸುವ ಚಾಳಿ ಮುಂದುವರಿಸಿದರೆ ಜನ ಬೀದಿಗಿಳಿದು ಪ್ರತಿಭಟಿಸುತ್ತಾರೆ. ಇಂತಹ ಘಟನೆ ಮರುಕಳಿ ಸದಂತೆ ಎಚ್ಚರ ವಹಿಸಬೇಕು. ಅನ್ಯಾಯಕ್ಕೆ ಒಳಗಾದ ವಿದ್ಯಾರ್ಥಿಗಳಿಗೆ ನ್ಯಾಯ ದೊರಕಿಸಬೇಕು ಎಂದು ಆಗ್ರಹಿಸಿದ್ದಾರೆ.



ಉದಯವಾಹಿನಿ ಚಿತ್ರ

**ವಾಸ್ತವಕ್ಕೆ ದೂರವಾದ ವರದಿ: ವೀರಶೈವ ಸಮಾಜ** ಹಿಂದುಳಿದ ವರ್ಗಗಳ ಆಯೋಗ ಸರ್ಕಾರಕ್ಕೆ ಸಲ್ಲಿಸಿರುವ ಜಾತಿ ಜನಗಣತಿ ವರದಿ ವಾಸ್ತವಕ್ಕೆ ದೂರವಾಗಿದೆ. ಸಂಪೂರ್ಣ ತಪ್ಪಾಗಿದೆ ಎಂದು ನಗರ ವೀರಶೈವ ಸಮಾಜ ಸೇವಾ ಸಮಿತಿಯ ಅಧ್ಯಕ್ಷ ಎಸ್.ಜಿ.ಚಂದ್ರಮೌಳಿ ತಿಳಿಸಿದ್ದಾರೆ.

ಈ ಹಿಂದೆ ಶೇ 18ರಷ್ಟಿದ್ದ ವೀರಶೈವ ಲಿಂಗಾಯತ ಸಮುದಾಯದ ಜನಸಂಖ್ಯೆಯನ್ನು ಇದ್ದಕಿದ್ದಂತೆ ಶೇ 8ಕ್ಕೆ ಇಳಿಸಲಾಗಿದೆ. ಗಣತಿ ನಡೆಸಿದ ಅಧಿಕಾರಿಗಳ ಎಡವಟ್ಟು, ಸತ್ಯವನ್ನು ಮರೆಮಾಚಿದೆ.

ವರದಿಯ ಆಧಾರದ ಮೇಲೆ ಸರ್ಕಾರದಿಂದ ಸಿಗುವ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸವಲತ್ತುಗಳಿಂದ ಸಮುದಾಯ ವಂಚಿತವಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ವೀರಶೈವ ಲಿಂಗಾಯತ ಸಮುದಾಯ ಅವೈಜ್ಞಾನಿಕ ವರದಿಯನ್ನು ಒಪ್ಪುವುದಿಲ್ಲ. ರಾಜ್ಯದಲ್ಲಿಯೇ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ಸಮುದಾಯವನ್ನು ಜಾತಿ ಜನಗಣತಿ ವರದಿಯಲ್ಲಿ ಅತಿ ಕಡಿಮೆ ಎಂದು ಬಿಂಬಿಸಲಾಗಿದೆ. ಸರ್ಕಾರ ಮರು ಸಮೀಕ್ಷೆಗೆ ಆದೇಶಿಸಿ, ಪ್ರತಿ ಮನೆಗೆ ಅಧಿಕಾರಿಗಳ ತಂಡ ಕಳುಹಿಸಬೇಕು. ಸತ್ಯಾಂಶದಿಂದ ಕೂಡಿದ, ನಿಖರವಾದ ಅಂಕಿ-ಅಂಶಗಳ ವರದಿ ಸಿದ್ಧಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

## ಅಕ್ಕಮಹಾದೇವಿ ಆದರ್ಶ ಸಮಾಜಕ್ಕೆ ದಾರಿದೀಪ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಕುಶಾಲನಗರ**

ಹನ್ನೆರಡನೇ ಶತಮಾನದ ವಚನಗಾರ್ತಿ ಅಕ್ಕಮಹಾದೇವಿ ಈ ನಾಡು ಕಂಡ ಶ್ರೇಷ್ಠ ಶಿವಶರಣೆ. ಅಕ್ಕನ ಆದರ್ಶಗಳು ಸಮಾಜಕ್ಕೆ ದಾರಿದೀಪವಾಗಲಿವೆ' ಎಂದು ಕೆ.ಆರ್.ನಗರ ತಾಲ್ಲೂಕು ಲಾಳನಹಳ್ಳಿಯ ಗುರುಮಲ್ಲೇಶ್ವರ ದಾಸೋಹ ಮಠದ ಶರಣೆ ಜಯದೇವಿ ತಾಯಿ ಹೇಳಿದರು. ಪಟ್ಟಣದ ಅಕ್ಕನ ಬಳಗದಿಂದ ಇಲ್ಲಿನ ಎಪಿಸಿಎಂಎಸ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಶಿವಶರಣೆ ಅಕ್ಕಮಹಾದೇವಿ ಜಯಂತಿ ಆಚರಣೆಯಲ್ಲಿ ಪಾಲ್ಗೊಂಡು ಅವರು ಪ್ರವಚನ ನೀಡಿದರು.

'ಸಮಾಜದ ಸಂಪತ್ತುಗಳಾಗಿ ನಮ್ಮ ಮಕ್ಕಳನ್ನು ನಾವು ಬೆಳೆಸಬೇಕೆಂದರೆ ಮಕ್ಕಳ ಹಣೆಯಲ್ಲಿ ವಿಭೂತಿ ಹಾಗೂ ಅಂಗದ ಮೇಲೆ ಲಿಂಗವನ್ನು ಪ್ರತಿಷ್ಠಾಪಿಸಬೇಕು. ಈ ಮೂಲಕ ಶಿವಶರಣರ ಪಂಥದ ನಮ್ಮ ವೀರಶೈವ ಪರಂಪರೆ ಹಾಗೂ ಸಂಸ್ಕಾರ ರಕ್ಷಿಸಬೇಕು' ಎಂದು ಸಲಹೆ ನೀಡಿದರು.

ಕೊಡ್ಲಿಪೇಟೆಯ ಕಿರಿಕೊಡ್ಲಿ ಮಠದ ಸದಾಶಿವ ಸ್ವಾಮೀಜಿ ಮಾತನಾಡಿ, 'ಇಂದಿನ ಮಹಿಳೆಯರು ಅಕ್ಕಮಹಾದೇವಿ ಅವರ ಆದರ್ಶ ಹಾಗೂ ಚಿಂತನೆಗಳನ್ನು ಹೊಂದುವ ಮೂಲಕ ನಮ್ಮ ಶರಣ ಪರಂಪರೆಯ ಸಂಸ್ಕಾರಗಳನ್ನು ಜೋಪಾನ ಮಾಡಬೇಕು' ಎಂದು ಹೇಳಿದರು. ತೊರೆನೂರು ವಿರಕ್ತ ಮಠದ ಮಲ್ಲೇಶ ಸ್ವಾಮೀಜಿ, ಚಿತ್ರದುರ್ಗದ ಬಸವ ಮಹಾಮನೆಯ ಶರಣೆ ದ್ರಾಕ್ಷಾಯಿಣಿ ದೇವಿ, ಶಿಕ್ಷಕ ಹುಲುಸೆ ಬಸವರಾಜು ಮಾತನಾಡಿದರು.

ಅಖಿಲ ಭಾರತ ವೀರಶೈವ ಮಹಾಸಭಾದ ಕೊಡಗು ಜಿಲ್ಲಾ ಅಧ್ಯಕ್ಷ ಎಚ್.ವಿ.ಶಿವಪ್ಪ, ಬಸವೇಶ್ವರ ಸೌಹಾರ್ದ ಸಹಕಾರ ಸಂಘದ ಅಧ್ಯಕ್ಷ ಸಾಂಬಶಿವಮೂರ್ತಿ, ವೀರಶೈವ ಸರ್ಕಾರಿ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎಸ್.ನಂದೀಶ್, ವೀರಶೈವ ಮಹಾಸಭಾ ಮಹಿಳಾ ಘಟಕದ ಜಿಲ್ಲಾ ಅಧ್ಯಕ್ಷೆ ದೀಪಿಕಾ ಕರುಣ, ಅಕ್ಕನಬಳಗದ ಅಧ್ಯಕ್ಷೆ ಕಮಲಾ ಉದಯಕುಮಾರ್ ಇನ್ನಿತರರಿದ್ದರು.

## ಮಹಾನ್ ನಾಯಕರ ತತ್ವ ಸಿದ್ಧಾಂತ, ಆದರ್ಶಗಳನ್ನು ಪಾಲಿಸಿ

### ದೇಶ ಕಂಡ ಅಪ್ರತಿಮ ರಾಷ್ಟ್ರ ನಾಯಕ ಬಾಬು ಜಗಜೀವನ್ ರಾಮ್

• **ಉದಯವಾಹಿನಿ, ನಂಜನಗೂಡು**

ಬುದ್ಧ ಹುಟ್ಟಿದ ನಾಡಿನಲ್ಲಿ ಅಪ್ರತಿಮ ರಾಜಕಾರಣದ ಬೆಳಕು ಡಾ. ಬಾಬು ಜಗಜೀವನ ರಾಮ್ ಕಡು ಬಡತನದಲ್ಲಿ ಹುಟ್ಟಿ ಉತ್ತಮ ವಿದ್ಯಾಭ್ಯಾಸ ಮಾಡಿ ಶೋಷಿತರ ಬಗ್ಗೆ ಹೋರಾಟ ಮಾಡಿ ವಿದ್ಯಾರ್ಥಿ ದೆಸೆಯಲ್ಲಿ ದೇಶದ ಅಸ್ಪೃಶ್ಯರ ಅಭಿವೃದ್ಧಿಯ ಚಿಂತನೆಯನ್ನು ಮಾಡಿದ ಮಹಾನ್ ನಾಯಕ ಡಾ. ಬಾಬು ಜಗ ಜೀವನ ರಾಮ್ ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ತಿಳಿಸಿದರು. ಸಂಶೋಧನಾ ಪ್ರಾಧ್ಯಾಪಕ ಶ್ರೀನಿವಾಸ್ ರಾಷ್ಟ್ರೀಯ ಹಬ್ಬಗಳ ಆಚರಣ ಸಮಿತಿ ವತಿಯಿಂದ ನಡೆದ ಡಾ. ಬಾಬು ಜಗಜೀವನ್ ರಾಮ್ ರವರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ತಮ್ಮದೇ ಆದ ಕೊಡುಗೆ

ನಂಜನಗೂಡು ಪಟ್ಟಣದ ಜೂನಿಯರ್ ಕಾಲೇಜು ಮೈದಾನದಲ್ಲಿ ಡಾ. ಬಾಬು ಜಗಜೀವನ್ ರಾಮ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಶಾಸಕ ದರ್ಶನ್ ಧ್ರುವನಾರಾಯಣ್ ಮತ್ತು ಎಂಎಲ್‌ಸಿ ಡಾ. ಯತೀಂದ್ರ ಸಿದ್ದರಾಮಯ್ಯ, ಡಾ. ತಿಮ್ಮಯ್ಯ ಕಾರ್ಯ ಕ್ರಮಕ್ಕೆ ಚಾಲನೆ ನೀಡಿದರು.

ನಂತರ ನಂಜನಗೂಡು ನಗರದ ಎಂಜಿ ರಸ್ತೆಯ ಮೂಲಕ ಡೊಳ್ಳು ತಮಟೆ ನಗಾರಿಯ ಮೂಲಕ ಹರ್ಷ ವ್ಯಕ್ತಪಡಿಸು ವುದರ ಜೊತೆಗೆ ಜೈಕಾರದ ಘೋಷಣೆಗಳನ್ನು ಕೂಗಿ ಮೆರವಣಿಗೆ ಹೊರಟು ನಂಜನಗೂಡಿನ ನಂಜುಂಡೇಶ್ವರನ ದೇವಾಲಯದ ಆವರಣದಲ್ಲಿ ಆ ಯೋಜನೆ ಮಾಡಿದ ವೇದಿಕೆ ಕಾರ್ಯಕ್ರಮಕ್ಕೆ ತೆರಳಿದರು. ನಂಜನಗೂಡಿನ ನಂಜುಂಡೇಶ್ವರನ ದೇವಾಲಯದ ಆವರಣದಲ್ಲಿ ಹಮ್ಮಿಕೊಂಡಿದ್ದ ಡಾ .ಬಾಬು ಜಗಜೀವನ್ ರಾಮ್ ಜಯಂತಿ ಕಾರ್ಯಕ್ರಮವನ್ನು ನಂಜನಗೂಡಿನ ಶಾಸಕರಾದ ದರ್ಶನ್ ಧ್ರುವನಾರಾಯಣ್ ವಿಧಾನಪರಿಷತ್ ಸದಸ್ಯರಾದ ಡಾ. ಯತೀಂದ್ರ ಸಿದ್ದರಾಮಯ್ಯ, ಡಾ. ತಿಮ್ಮಯ್ಯ, ರಾಷ್ಟ್ರೀಯ ಹಬ್ಬಗಳ ಆಚರಣ ಸಮಿತಿ ಅಧ್ಯಕ್ಷರಾದ ತಹಶೀಲ್ದಾರ್ ಶಿವಕುಮಾರ ಕಾಸ್ನೂರ್ ದೀಪ ಬೆಳಗುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿದರು.


ಉದಯವಾಹಿನಿ ಚಿತ್ರ

ನಂತರ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ಶಾಸಕ ದರ್ಶನ್ ಧ್ರುವನಾರಾಯಣ ಮಾತನಾಡಿ ರಾಷ್ಟ್ರ ನಾಯಕ ಬಾಬು ಜಗಜೀವನ್ ರಾಮ್ ರವರು ಬರೋಬರಿ 40 ವರ್ಷಗಳ ಕಾಲ ಸಚಿವರಾಗಿ ಸಂಸದರಾಗಿ ದೇಶದಲ್ಲಿ ಉತ್ತಮ ಆಡಳಿತ ನಡೆಸಿದ್ದಾರೆ. ಬಿಹಾರ ರಾಜ್ಯದ ಒಂದು ಪುಟ್ಟ ಹಳ್ಳಿಯಲ್ಲಿ ಹುಟ್ಟಿ ಕಡು ಬಡತನವನ್ನು ಲೆಕ್ಕಿಸದೆ ಉತ್ತಮ ವಿದ್ಯಾಭ್ಯಾಸವನ್ನು ಮಾಡಿ ವಿದ್ಯಾರ್ಥಿ ದೆಸೆಯಲ್ಲಿ ಹೋರಾಟ ಮತ್ತು ಧ್ವನಿಯನ್ನು ಮಾಡುವುದರ ಮೂಲಕ ರಾಜಕಾರಣಕ್ಕೆ ಮುಂದಾಗಿ ದೇಶದಲ್ಲಿ ಶ್ರೀಮತಿ ಇಂದಿರಾಗಾಂಧಿ ಆಡಳಿತ ಅವಧಿಯಲ್ಲಿ ಸಚಿವರಾಗಿ ತಮ್ಮದೇ ಆದ ಕೊಡುಗೆಯನ್ನು ನೀಡಿದ್ದಾರೆ. ದೇಶದಲ್ಲಿ ತಿನ್ನುವ ಆಹಾರಕ್ಕೆ ಸಂಕಷ್ಟ ಎದುರಾದಾಗ ಇಂತಹ ದುಸ್ಥಿತಿಯ ಪರಿಸ್ಥಿತಿಯನ್ನು ಎದುರಿಸಿ ಮೆಟ್ಟಿ ನಿಲ್ಲುವುದರ ಜೊತೆಗೆ ಹೊರದೇಶಗಳಿಗೆ ಸ್ವದೇಶಿ ಆಹಾರ ತಲುಪಿಸಲು ಡಾ. ಬಾಬು ಜಗಜೀವನ್ ರಾಮ್ ಯಶಸ್ವಿಯಾದರು. ಇಂತಹ ಮಹಾನ್ ನಾಯಕರ ತತ್ವ ಸಿದ್ಧಾಂತ ಮತ್ತು ಆದರ್ಶಗಳನ್ನು ಪಾಲಿಸಿ ದೇಶದಲ್ಲಿ ರಾಜ್ಯದಲ್ಲಿ ಒಬ್ಬ ಉತ್ತಮ ಪ್ರಜೆಯಾಗಿ ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದು ಶಾಸಕ ದರ್ಶನ್ ಧ್ರುವನಾರಾಯಣ ಮಾತನಾಡಿದರು.

**ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಡಾ . ಯತೀಂದ್ರ ಸಿದ್ದರಾಮಯ್ಯ ಮಾತನಾಡಿ 70ರ ದಶಕದಲ್ಲಿ ದೇಶದಲ್ಲಿ ಸಾಕಷ್ಟು ಅಸ್ಪೃಶ್ಯತೆ ಆಚರಣೆಯಲ್ಲಿತ್ತು ಕುಡಿಯಲು ನೀರು ಸಿಗದ ಕಾಲಘಟ್ಟದಲ್ಲಿ ಶೋಷಿತರ ಪರವಾಗಿ ನಿಂತು ಧ್ವನಿ ಮಾಡಿ ರಾಜಕಾರಣದಲ್ಲಿ ಉತ್ತಮ ನಾಯಕನಾಗಿ ಭಾರತ ದೇಶದ ಉಪ ಪ್ರಧಾನಿಯಾಗುವುದು ಎಂದರೆ ಅದು ಸಾಮಾನ್ಯ ವಿಚಾರ ಅಲ್ಲ ಬಾಬು ಜಗಜೀವನ್ ರಾಮ್ ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳನ್ನು ಅಳವಡಿಸಿಕೊಂಡು ಸಾಕಷ್ಟು ಜ್ವಾಲಂತ ಹೋರಾಟಗಳಿಗೆ ಪರಿಹಾರ ನೀಡಿದ ಮಹಾನ್ ನಾಯಕರಲ್ಲಿ ಜಗಜೀವನ್ ರಾಮ್ ಕೂಡ ಒಬ್ಬರು ರಕ್ಷಣಾ ಸಚಿವರಾಗಿದಂತಹ ಸಂದರ್ಭದಲ್ಲಿ ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡುವುದರ ಜೊತೆಗೆ ಸೈನಿಕರಿಗೆ ಉತ್ತಮ ಬೆಂಬಲ ನೀಡಿದ ನಾಯಕ ಡಾ .ಬಾಬು ಜಗಜೀವನ್ ರಾಮ್ ಇಂತಹ ನಾಯಕರ ಜಯಂತಿ ಕಾರ್ಯಕ್ರಮವನ್ನು ಸಂಭ್ರಮ ಸಡಗರದಿಂದ ಆಚರಿಸುತ್ತಿರುವುದು ತುಂಬಾ ಖುಷಿ ತರುತಿದೆ**

**-ಡಾ .ಯತೀಂದ್ರ ಸಿದ್ದರಾಮಯ್ಯ, ಎಂಎಲ್‌ಸಿ**

ತಹಶೀಲ್ದಾರ್ ಶಿವಕುಮಾರ್ ಕಾಸ್ನೂರು ಇಓ ಜೆರಾಲ್ಡ್ ರಾಜೇಶ್, ಕಳಲೆ ಕೇಶವಮೂರ್ತಿ, ಮುಖ್ಯ ಭಾಷಣಕಾರರಾದ ಪ್ರಾಧ್ಯಾಪಕ ಶ್ರೀನಿವಾಸ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ಲಿಂಗು ಇನ್ನಿತರರಿದ್ದರು.

## ಬಸ್ ಪಲ್ಟಿ: 40ಕ್ಕೂ ಹೆಚ್ಚು ಪ್ರಯಾಣಿಕರಿಗೆ ಗಾಯ

• **ಉದಯವಾಹಿನಿ, ಕನಕಪುರ**

ಜಾತ್ರೆ ಮುಗಿಸಿ ಪ್ರವಾಸಕ್ಕೆಂದು ತೆರಳುತ್ತಿದ್ದ ಪ್ರಯಾಣಿಕರ ಬಸ್‌ವೊಂದು ಸಂಗಮದ ತಿರುವಿನಲ್ಲಿ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿ ಹೊಡೆದ ಪರಿಣಾಮ 30ಕ್ಕೂ ಹೆಚ್ಚು ಮಂದಿಗೆ ಗಾಯ ಹಾಗೂ ಹತ್ತು ಮಂದಿ ಗಂಭೀರ ಗಾಯಗೊಂಡಿದ್ದಾರೆ. ತಾಲ್ಲೂಕಿನ ಕೋಡಿಹಳ್ಳಿ ಹೋಬಳಿಯ ಬೆಟ್ಟದ ಹಲಸೂರು ಗ್ರಾಮದ ಚರ್ಚ್‌ನಲ್ಲಿ ಸೋಮವಾರ ಮತ್ತು ಮಂಗಳವಾರ ನಡೆದ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡಿದ್ದ ಭಕ್ತರು, ಸಂಗಮಕ್ಕೆ ಪ್ರವಾಸ ಹೋಗುವಾಗ ಈ ಘಟನೆ ನಡೆದಿದೆ.

**ಸಂಗಮದ ತಿರುವಿನಲ್ಲಿ ಅವಘಡ**

ಬೆಟ್ಟದ ಹಲಸೂರಿನ ಚರ್ಚ್‌ನಲ್ಲಿ ವರ್ಷಕ್ಕೊಮ್ಮೆ ಜಾತ್ರಾ ಮಹೋತ್ಸವ ನಡೆಯುತ್ತಿದ್ದು, ಕ್ರೈಸ್ತ ಸಮುದಾಯದವರು ಈ ಜಾತ್ರೆಯಲ್ಲಿ ಪಾಲ್ಗೊಳ್ಳುತ್ತಾರೆ. ಇಲ್ಲಿ ಜಾತ್ರೆ ಮುಗಿಸಿ ಸಂಗಮಕ್ಕೆ ಹೋಗುವುದು ವಾಡಿಕೆ. ಅದರಂತೆ ಜಾತ್ರೆ ಮುಗಿಸಿ ಸಂಗಮಕ್ಕೆ ಹೋಗುವಾಗ ತಿರುವಿನಲ್ಲಿ ಚಾಲಕನ ನಿಯಂತ್ರಣ ತಪ್ಪಿ ಬಸ್ ಪಲ್ಟಿ ಹೊಡೆದು ಚಕ್ರಗಳು ಮೇಲಾಗಿ ನಿಂತಿವೆ. ಅದರ ಹಿಂದೆ ಹೋಗುತ್ತಿದ್ದ ಮತ್ತೊಂದು ಬಸ್ ಚಾಲಕನ ನಿಯಂತ್ರಣ ತಪ್ಪಿ ಮರಕ್ಕೆ ಡಿಕ್ಕಿ ಹೊಡೆದಿದೆ. ಆ ಬಸ್‌ನಲ್ಲಿ ಇದ್ದವರಿಗೆ ಯಾವುದೇ ಸಮಸ್ಯೆಯಾಗಿಲ್ಲ. ಪಲ್ಟಿ ಹೊಡೆದಿರುವ ಬಸ್‌ನಲ್ಲಿ ಸುಮಾರು 50 ಮಂದಿ ಪ್ರಯಾಣಿಸುತ್ತಿದ್ದು, 40 ಮಂದಿಗೆ ಗಾಯಗಳಾಗಿವೆ. ಇವರು ಬೆಂಗಳೂರಿನವರಾಗಿದ್ದಾರೆ. ಸ್ಥಳೀಯರು ಅಪಘಾತದ ಮಾಹಿತಿಯನ್ನು ಮಾಜಿ ಸಂಸದ ಡಿ.ಕೆ.ಸುರೇಶ್ ಗಮನಕ್ಕೆ ತಂದಿದ್ದಾರೆ. ಸುರೇಶ್ ಅವರು ಡಿಎಚ್‌ಒ ಮತ್ತು ಪೊಲೀಸ್ ಅಧಿಕಾರಿಗಳಿಗೆ ಮಾಹಿತಿ ನೀಡಿ ಶೀಘ್ರ ರಕ್ಷಣಾ ಕ್ರಮ ಕೈಗೊಂಡಿದ್ದಾರೆ.


ಉದಯವಾಹಿನಿ ಚಿತ್ರ

**ಗಾಯಳುಗಳು ಆಸ್ಪತ್ರೆಗೆ ದಾಖಲು**

**ಕನಕಪುರದಿಂದ ತಕ್ಷಣವೇ ಬಂದ ಎಂಟು ಆಂಬುಲೆನ್ಸ್‌ಗಳು ಗಾಯಾಳುಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರ, ದೊಡ್ಡಾಲಹಳ್ಳಿ ಮತ್ತು ಕನಕಪುರ ಸಾರ್ವಜನಿಕ ಆಸ್ಪತ್ರೆಗೆ ಸ್ಥಳಾಂತರಿಸಿದ್ದಾರೆ. ತೀವ್ರ ಗಾಯಗೊಂಡವರಿಗೆ ಪ್ರಾಥಮಿಕ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ದಯಾನಂದ ಸಾಗರ್,' ನಿಮ್ಹಾನ್ಸ್ ಮತ್ತಿತರ ಆಸ್ಪತ್ರೆಗೆ ಕಳುಹಿಸಲಾಗಿದೆ.**

ಸಂಗಮದ ಬಳಿ ಈ ಅಪಘಾತ ಮೊದಲಲ್ಲ. ಇದೇ ಜಾಗದಲ್ಲಿ ಅನೇಕ ಬಾರಿ ಅಪಘಾತಗಳು ಸಂಭವಿಸುತ್ತಿರುತ್ತಲೇ ಇರುತ್ತವೆ. ಹಾಗಾಗಿ ಕಡಿದಾದ ತಿರುವುಗಳಲ್ಲಿ ತಡೆಗೋಡೆ ನಿರ್ಮಿಸಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

## ನೆಲಕಚ್ಚಿದ ಚೆಂಡು ಬೆಲೆ: ರಸ್ತೆಗೆ ಸುರಿದ ಹೂ

• **ಉದಯವಾಹಿನಿ, ಮುಳಬಾಗಿಲು**

ಮಾರುಕಟ್ಟೆಯಲ್ಲಿ ಚೆಂಡು ಹೂವುಗಳ ಬೆಲೆ ಸಂಪೂರ್ಣವಾಗಿ ಕುಸಿದ ಪರಿಣಾಮವಾಗಿ ಮಾರಾಟಕ್ಕೆ ತಂದಿದ್ದ ಹೂಗಳ ಮೂಟೆಗಳು ಮಾರುಕಟ್ಟೆಯಲ್ಲಿಯೇ ರಾಶಿ ರಾಶಿಯಾಗಿ ಬಿದ್ದಿವೆ. ಚೆಂಡು ಹೂವಿನ ಬೆಲೆ ಕೇಳಿ ಇನ್ನೂ ಕೆಲವರು ತೋಟಗಳಲ್ಲಿಯೇ ಹೂವುಗಳನ್ನು ಬಿಟ್ಟಿದ್ದಾರೆ. ತಾಲ್ಲೂಕಿನಲ್ಲಿ ಬಹುತೇಕ ರೈತರು ತಮಿಳುನಾಡಿನ ಚೆನ್ನೈ, ನಂಗಲಿಯ ಹೂವಿನ ಮಾರುಕಟ್ಟೆಗಳನ್ನು ನಂಬಿ ನೂರಾರು ಎಕರೆ ಭೂಮಿಯಲ್ಲಿ ಚೆಂಡು ಹೂವನ್ನು ಬೆಳೆದಿದ್ದಾರೆ. ಆದರೆ ಹೂಗಳು ಸಮೃದ್ಧವಾಗಿ ಬಿಟ್ಟಿದ್ದರೂ ಮಾರುಕಟ್ಟೆಯಲ್ಲಿ ಬೆಲೆ ಇಲ್ಲದ ಕಾರಣ ಕೆಲವರು ಹೂಗಳು ತೋಟಗಳಲ್ಲಿ ಕೊಳೆಯುವುದು ನೋಡಲಾರದೆ ಮಾರುಕಟ್ಟೆಗೆ ಸಾಗಿಸಿದರೆ, ಮತ್ತೆ ಕೆಲವರು ಹೂಗಳನ್ನು ಕೀಳುವ ಕೂಲಿಯೂ ಸಿಗಿವುದಿಲ್ಲ ಎಂದು ತೋಟಗಳಲ್ಲಿಯೇ ಬಿಟ್ಟಿದ್ದಾರೆ.

ಸಾಮಾನ್ಯವಾಗಿ ಹಬ್ಬಗಳ ಸಂದರ್ಭಗಳಲ್ಲಿ ಚೆಂಡು ಹೂಗಳಿಗೆ ಉತ್ತಮ ಬೆಲೆ ಸಿಗುತ್ತದೆ. ಮುಂದೆಯೂ ಬೆಲೆ ಸಿಗಬಹುದು ಎಂದು ನಂಬಿ ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಹೂಗಳನ್ನು ಬೆಳೆಸಿದ್ದಾರೆ. ಹಬ್ಬಗಳ ನಂತರ ನೆಲಕಚ್ಚಿದ ಬೆಲೆ ಇದುವರೆಗೂ ಮತ್ತೆ ಮೇಲೇಳಲೇ ಇಲ್ಲ. ಒಂದು ಕೆಜಿ 3, 4ಕ್ಕೆ ಮಾರಾಟವಾದರೆ, ಒಂದು ಮೂಟೆ ಹೂವಿನ ಬೆಲೆ ಕೇವಲ 50ರಿಂದ 100ರಷ್ಟು ಬಿದ್ದಂತಾಗುತ್ತದೆ. ಇದೂ ಸಾಲದೆಂಬಂತೆ ಮಾರುಕಟ್ಟೆಗೆ ಹೂಗಳು ಹೆಚ್ಚಾದರೆ ಮಾರಾಟವೇ ಆಗುವುದಿಲ್ಲ. ಹೂಗಳನ್ನು ನಂಬಿ ಬದುಕು ಕಟ್ಟಿಕೊಳ್ಳಬಹುದು ಎಂದು ನಂಬಿದ್ದ ರೈತರು ತಲೆ ಮೇಲೆ ಕೈ ಇಟ್ಟು ಕೂರುವಂತಾಗಿದೆ.


ಉದಯವಾಹಿನಿ ಚಿತ್ರ

ಹೂಗಳು ಬೆಳೆಯಲು ಒಂದು ಎಕರೆ ಪ್ರದೇಶದಲ್ಲಿ ಕೂಲಿ, ಗೊಬ್ಬರ, ಔಷಧ, ಡ್ರಿಪ್ ಮತ್ತಿತರ ಎಲ್ಲಾ ಖರ್ಚುಗಳೂ ಸೇರಿ ಸುಮಾರು 60ರಿಂದ70 ಸಾವಿರ ಖರ್ಚಾಗುತ್ತದೆ. ನಂತರ ಹೂಗಳನ್ನು ಕೀಳಲು ಒಬ್ಬರಿಗೆ ಸುಮಾರು 350ರಿಂದ ?400 ಕೂಲಿ ನೀಡಬೇಕಾಗುತ್ತದೆ. ಹೀಗಾಗಿ, ಹೂ ಬೆಳೆಗಾರರು ಯಾಕಾದರೂ ಹೂ ಬೆಳೆದವೋ ಎಂದು ಕೊರಗುತ್ತಿದ್ದಾರೆ. ಇನ್ನು ಹೂಗಳಿಗೆ ಬೆಲೆಯೇ ಇಲ್ಲದೆ ಇರುವ ಪರಿಣಾಮ ತಾಲ್ಲೂಕಿನಾದ್ಯಂತ ಹೂಗಳು ತೋಟಗಳಲ್ಲಿ ಕೊಳೆತು ಒಣಗುತ್ತಿರುವುದು ಒಂದೆಡೆಯಾದರೆ, ರಸ್ತೆ ಬದಿಗಳಲ್ಲಿ, ಮಾರುಕಟ್ಟೆಗಳ ಮುಂಭಾಗ ರಾಶಿ ರಾಶಿಯಾಗಿ ಬಿದ್ದಿದ್ದು ರೈತರ ಸ್ಥಿತಿಗೆ ಹಿಡಿದ ಕನ್ನಡಿಯಂತಾಗಿದೆ. ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 75ರ ಉದ್ದಕ್ಕೂ ಸುಮಾರು ನೂರಾರು ಮೂಟೆಗಳ ಹೂವುಗಳ ರಾಶಿ ಕಾಣಿಸಿಕೊಂಡರೆ, ನಂಗಲಿ ಹೂ ಮಾರುಕಟ್ಟೆಯ ಮುಂಭಾಗ ಮೂಟೆಮೂಟೆ ಹೂವುಗಳು ಕೊಳೆತು ನಾರುತ್ತಿವೆ. ಲಾಭದ ಕನಸು ಕಂಡ ಬೆಳೆದ ಬೆಳೆ ನಷ್ಟವನ್ನುಂಟು ಮಾಡಿದೆ. ಮುಂದೇನು ಎನ್ನುವುದೇ ತಿಳಿಯದಂತಾಗಿದೆ ಎಂದು ರೈತ ಕೀಲಾಗಾಣಿ ಮಂಜುನಾಥ ಸ್ವಾಮಿ ಅಳಲು ತೋಡಿಕೊಂಡರು.

## ಹಲ್ಲೆಕೋರರ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ವಿಧಾನಸೌಧ ಮುಂದೆ ಆತ್ಮಹತ್ಯೆ

## ವಿನಾಕಾರಣ ಅವಾಚ್ಯ ಶಬ್ದಗಳಿಂದ ನಿಂದನೆ

• **ಉದಯವಾಹಿನಿ, ಕೋಲಾರ**

ಕೂಲಿ ಕೆಲಸಕ್ಕೆ ಹೋಗಲು ನಿರಾಕರಿಸಿದ್ದಕ್ಕೆ ನೀರು ಹಿಡಿಯುವ ವಿಚಾರವನ್ನು ಮುಂದಿಟ್ಟು ಕೊಂಡು ನಮ್ಮನ್ನು ಮನೆಯಿಂದ ಬೀದಿಗೆ ಎಳೆದು ಹೆಣ್ಣು ಎಂಬುವುದನ್ನು ಪರಿಗಣಿಸದೆ, ಗುಂಪು ಕಟ್ಟಿ ಕೊಂಡು ಹಲ್ಲೆ ಮಾಡಿ ಬಟ್ಟೆಗಳನ್ನು ಹರಿದು ದೌರ್ಜನ್ಯ ನಡೆಸಿ ಪ್ರಾಣ ಬೆದರಿಕೆ ಹಾಕಿದ್ದಾರೆ. ಇವರಿಗೆ ಶಾಸಕ ಕೆ.ವೈ. ನಂಜೇಗೌಡರು ಶ್ರೀರಕ್ಷೆಯಾಗಿದ್ದು ಪೊಲೀಸರು ಯಾವುದೇ ಕ್ರಮ ಕೈಗೊಳ್ಳದಂತೆ ರಾಜಕೀಯದ ಒತ್ತಡ ಹೇರುತ್ತಿದ್ದು ನಮಗೆ ಗ್ರಾಮದಲ್ಲಿ ಶಾಂತಿ ನೆಮ್ಮದಿಯಿಂದ ಬಾಳ್ವೆ ನಡೆಸಲು ಅವಕಾಶ ಕೊಡದೆ ಪದೇ ಪದೇ ಹಲ್ಲೆ ಮಾಡುತ್ತಿದ್ದಾರೆ. ನಮಗೆ ನ್ಯಾಯ ದೊರಕಿಸದಿದ್ದರೆ ವಿಧಾನಸೌಧದ ಮುಂದೆ ಆತ್ಮಹತ್ಯೆ ಮಾಡಿ ಕೊಳ್ಳುವುದಾಗಿ ಸಿ.ಎನ್. ಲಕ್ಷ್ಮೀ ಕೋಂ ವಿಜಯ ಕುಮಾರ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ತಮಗೆ ಆಗಿರುವ ಅನ್ಯಾಯಕ್ಕೆ ನ್ಯಾಯ ದೊರಕಿಸುವಂತೆ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಮಾಲೂರು ತಾಲ್ಲೂಕಿನ ತೊರ್ನಹಳ್ಳಿ ಗ್ರಾಮದ ಆದಿ ಕರ್ನಾಟಕ ಜಾತಿಗೆ ಸೇರಿದ ಕೂಲಿಯಿಂದ ಬಾಡಿಗೆ ಜೀವನ ನಡೆಸುತ್ತಿರುವ ನಾವುಗಳು ಗ್ರಾಮದಲ್ಲಿ ತಿಮ್ಮರಾಯಪ್ಪ ಎಂಬುವರ ಬಳಿ ನಮ್ಮ ಪತಿ ವಿಜಯಕುಮಾರ್ ಕೆಲಸಕ್ಕೆ ಹೋಗುತ್ತಿದ್ದರು. ಈ ಸಂದರ್ಭದಲ್ಲಿ ಮುಂಗಡವಾಗಿ 50 ಸಾವಿರ ರೂ. ಪಡೆದಿದ್ದರು. ನಂತರದಲ್ಲಿ ತಿಮ್ಮರಾಯಪ್ಪನವರ ಬಳಿ ಕೆಲಸ ಮಾಡಲು ವಿಜಯ ಕುಮಾರ್ ಅವರಿಗೆ ಇಷ್ಟವಿಲ್ಲದೆ ಮುಂಗಡವನ್ನು ವಾಪಸ್ ಮಾಡಿದ್ದಾರೆ ಎಂದರು.


ಉದಯವಾಹಿನಿ ಚಿತ್ರ

**ನಾವು ಬಡವರು ಎಂಬ ಹಿನ್ನಲೆಯಲ್ಲಿ ನಮಗೆ ಆಗಿರುವ ಅನ್ಯಾಯಕ್ಕೆ ನ್ಯಾಯ ದೊರಕಿಸುತ್ತಿಲ್ಲ. ಆರೋಪಿಗಳನ್ನು ಬಂಧಿಸದೆ ಜಾಮೀನು ಸಿಗುವಂತೆ ಮಾಡಿದಲ್ಲಿ ಅಂದೇ ಬೆಂಗಳೂರಿನ ವಿಧಾನ ಸೌಧ ಮುಂದೆ ಆತ್ಮ ಹತ್ಯೆ ಮಾಡಿ ಕೊಳ್ಳುತ್ತೇನೆ. ನನಗೆ ಆಗಿರುವ ಅನ್ಯಾಯಕ್ಕೆ ನ್ಯಾಯ ಸಿಗದ ಹಿನ್ನಲೆಯಲ್ಲಿ ನಾನು ಆತ್ಮಹತ್ಯೆಗೆ ನಿರ್ಧರಿಸಿದ್ದೇನೆ. ನನ್ನ ಸಾವಿಗೆ ನಮ್ಮ ಮೇಲೆ ಹಲ್ಲೆ ಮಾಡಿ ಅವಾಚ್ಯ ಶಬ್ದಗಳಿಂದ ನಿಂದಿಸಿದ ಆರೋಪಿಗಳೇ ಕಾರಣವಾಗಿರುತ್ತಾರೆ ಎಂದರು.**

ಏ.6ರ ಶ್ರೀರಾಮ ನವಮಿಯಂದು ಮಧ್ಯಾಹ್ನ ಪಂಚಾಯಿತ್ತಿಯವರು ಹಾಕಿಸಿರುವ ನಲ್ಲಿಯಲ್ಲಿ ನೀರು ಹಿಡಿಯುತ್ತಿದ್ದ ಸಂದರ್ಭದಲ್ಲಿ ನಮ್ಮೂರಿನ ನಾಗಪ್ಪ ಎಂಬಾತ ತಿಮ್ಮರಾಯಪ್ಪನವರ ಬಳಿ ಕೆಲಸಕ್ಕೆ ಹೋಗದೆ ಇರುವುದರಿಂದ ವಿನಾಕಾರಣ ಅವಾಚ್ಯ ಶಬ್ದಗಳಿಂದ ನಿಂದಿಸಿದನು. ನಂತರ ಮನೆಯ ಬಳಿ ನಾಗಪ್ಪ, ತಿಮ್ಮರಾಯಪ್ಪ. ರಾಧಮ್ಮ, ಮುನೀರ್, ಲೋಕೇಶ್ ಎಂಬುವರು 5 ಮಂದಿ ಗುಂಪು ಕಟ್ಟಿ ಕೊಂಡು ಬಂದು ನೀರಿನ ವಿಚಾರವನ್ನು ಮುಂದು ಮಾಡಿ ನನ್ನನ್ನು, ನನ್ನ ಪತಿ ವಿಜಯ ಕುಮಾರ್, ಮುನಿತಾಯಮ್ಮ ಸೇರಿದಂತೆ ಮೂರು ಮಂದಿಯನ್ನು ಬೀದಿಗೆ ಎಳೆದು ಹೆಂಗಸ ರೆಂದು ಕನಿಷ್ಟ ಮಾನವೀಯತೆ ಇಲ್ಲದೆ ಬಟ್ಟೆಗಳನ್ನು ಹರಿದು ದೊಣ್ಣೆ ಹಾಗೂ ಕೈಗಳಿಂದ ಗುದ್ದಿ ತೀವ್ರವಾಗಿ ಹಲ್ಲೆ ಮಾಡಿ ಅವಾಚ್ಯ ಶಬ್ದಗಳಿಂದ ನಿಂದಿಸಿ ಪ್ರಾಣ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿದರು.

**ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ**

**ಈ ಗಲಾಟೆಯಿಂದ ಗಾಯಗೊಂಡಿದ್ದ ನಾವು ಮಾಲೂರಿಗೆ ತೆರಳಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಬಂದು ತಡವಾಗಿ ಮಾಲೂರು ಪೊಲೀಸರಿಗೆ ಏ,11 ರಂದು ದೂರು ನೀಡಿದ್ದೇವು. ಪೊಲೀಸರು ಪ್ರಕರಣ ದಾಖಲಿಸಿ ಕೊಂಡು ಆರೋಪಿಗಳನ್ನು ಬಂಧಿಸದೆ ಶಾಸಕರಾದ ನಂಜೇಗೌಡರ ರಾಜಕೀಯ ಒತ್ತಡದ ಹಿನ್ನಲೆಯಲ್ಲಿ ಆರೋಪಿಗಳಿಗೆ ರಕ್ಷಣೆಯಾಗಿದ್ದಾರೆ. ಶಾಸಕರು ಆರೋಪಿಗಳಿಗೆ ಕುಮ್ಮಕ್ಕು ಇರುವುದರಿಂದ ಪೊಲೀಸರು ಯಾವುದೇ ಕ್ರಮ ಕೈಗೊಳ್ಳದೆ ನಿರ್ಲಕ್ಷಿಸಿದ್ದಾರೆ ಎಂದು ದೂರಿದರು.**

## ಕಾಡಂಚಿನ ಜನರನ್ನು ಮಾನವೀಯತೆಯಿಂದ ನೋಡಿ

• **ಉದಯವಾಹಿನಿ, ಮಡಿಕೇರಿ**

ಕಾಡಂಚಿನಲ್ಲಿ ವಾಸಿಸುವ ಜನರಿಗೆ ಸುರಕ್ಷತೆ ಒದಗಿಸುವುದು ಅಗತ್ಯವಾಗಿದೆ. ಆ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಕಾನೂನು ಸಲಹೆಗಾರ ಹಾಗೂ ಶಾಸಕ ಎ.ಎಸ್.ಪೊನ್ನಣ್ಣ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಪೊನ್ನಂಪೇಟೆ ತಾಲ್ಲೂಕಿನ ಬಿರುನಾಣಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತೆರಾಲು ಗ್ರಾಮ ವ್ಯಾಪ್ತಿ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕೈಗೊಳ್ಳಲಾಗಿರುವ ಹುಲಿ ಹಿಡಿಯುವ ಕಾರ್ಯಾಚರಣೆ ಸ್ಥಳಕ್ಕೆ ಅವರು ಮಂಗಳವಾರ ಭೇಟಿ ನೀಡಿ ವೀಕ್ಷಿಸಿ ಈ ಸೂಚನೆ ನೀಡಿದರು. ಬಡವರು, ಆದಿವಾಸಿಗಳು ಸಹ ವಾಸಿಸಬೇಕು. ಆ ನಿಟ್ಟಿನಲ್ಲಿ ಅವರಿಗೆ ಭೂಮಿ ಒದಗಿಸಬೇಕು. ಆದಿವಾಸಿಗಳಿಗೆ ವಸತಿ ಕಲ್ಪಿಸುವ ನಿಟ್ಟಿನಲ್ಲಿ ಈಗಾಗಲೇ ಭರವಸೆ ನೀಡಲಾಗಿದೆ. ಅದರಂತೆ ನಡೆದುಕೊಳ್ಳಬೇಕು. ಮಾನವೀಯತೆಯಿಂದ ನೋಡಬೇಕು ಎಂದು ಎ.ಎಸ್.ಪೊನ್ನಣ್ಣ ತಿಳಿಸಿದರು.

ಅರಣ್ಯ ಅಂಚಿನಲ್ಲಿಯೂ ಸಾಕಷ್ಟು ಭೂಮಿ ಒತ್ತುವರಿಯಾಗಿದೆ. ಆದಿವಾಸಿಗಳು, ಬಡವರಿಗೆ ಸಹ ವಾಸಕ್ಕೆ ಜಾಗ ಒದಗಿಸಬೇಕಿದೆ ಎಂದು ಹೇಳಿದರು. ಹುಲಿ ಸೆರೆ ಕಾರ್ಯಾಚರಣೆಗೆ ದುಬಾರೆ ಸಾಕಾನೆ ಶಿಬಿರದಿಂದ ಗೋಪಿ ಮತ್ತು ಶ್ರೀರಾಮ ಎರಡು ಸಾಕಾನೆಗಳನ್ನು ಬಳಸಿಕೊಳ್ಳಲಾಗಿದೆ. ಈ ಸಂಬಂಧ 5 ದಿನಗಳಿಂದ ಹುಲಿ ಸೆರೆ ಹಿಡಿಯುವ ಕಾರ್ಯಾಚರಣೆ ಆರಂಭಿಸಲಾಗಿದೆ ಎಂದರು. ಈ ಸಂಬಂಧ ಅರಣ್ಯ ಸಚಿವರ ಜೊತೆ ಚರ್ಚಿಸಲಾಗಿದ್ದು, ಎರಡು ಹುಲಿಯನ್ನು ಸೆರೆ ಹಿಡಿಯಲು ಅನುಮತಿ ದೊರೆತಿದ್ದು, ಕಾರ್ಯಾಚರಣೆ ಆರಂಭವಾಗಿದೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಅರಣ್ಯ ಇಲಾಖೆ ಸಿಬ್ಬಂದಿ ಹಾಗೂ ಪೊಲೀಸರು ಸೈನಿಕರಂತೆ ಜೀವದ ಹಂಗು ತೊರೆದು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ಅವರು ಶ್ಲಾಘಿಸಿದರು. ಈ ವೇಳೆ ಜನರು ತಕ್ಷಣ ಹುಲಿ ಸೆರೆ ಹಿಡಿಯಿರಿ, ನಮ್ಮನ್ನು ಕಾಪಾಡಿ' ಎಂದು ಮೊರೆ ಇಟ್ಟರು. ಉಪ ಅರಣ್ಯ ಸಂರಕ್ಷಣಾಧಿಕಾರಿ ನೆಹರು ಮಾತನಾಡಿ, ಅರಣ್ಯ ಅಧಿಕಾರಿಗಳು, ಪಿಡಿಒ, ಸ್ಥಳೀಯರು ಒಳಗೊಂಡ ವಾಟ್ಸ್ಆ್ಯಪ್ ಗ್ರೂಪ್ ಮಾಡಿ, ತಕ್ಷಣವೇ ಮಾಹಿತಿ ನೀಡಿದ್ದಲ್ಲಿ ಹುಲಿ ಸೆರೆ ಹಿಡಿಯಲು ಸಹಕಾರಿಯಾಗುತ್ತದೆ. ಸ್ಥಳೀಯರು ಸಹಕಾರ ನೀಡಬೇಕು' ಎಂದು ಕೋರಿದರು. ಉಪ ಅರಣ್ಯ ಸಂರಕ್ಷಣಾಧಿಕಾರಿ ಜಗನ್ನಾಥ್ ಮಾತನಾಡಿ, 'ಇರ್ಪು ವಿನಿಂದ ಕೂಟಿಯಾಲವರೆಗೂ ಹುಲಿಯ ಚಲನವಲನದ ಬಗ್ಗೆ ನಿಗಾ ವಹಿಸಲಾಗುತ್ತಿದೆ. ಈ ಸಂಬಂಧ ಕ್ಯಾಂಪ್‌ಗಳನ್ನು ಮಾಡಿ ಹುಲಿ ಸೆರೆ ಹಿಡಿಯಲು ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಮಾಕುಟ್ಟ- ಶ್ರೀಮಂಗಲ ವನ್ಯಜೀವಿ ವಿಭಾಗ, ತಿತಿಮತಿ ಆರ್‌ಆರ್‌ಟಿ ವಿಭಾಗ ಹಾಗೂ ಇಟಿಎಫ್ ವಿಭಾಗ ಸೇರಿದಂತೆ ಒಟ್ಟು 60 ಸಿಬ್ಬಂದಿ ಹುಲಿ ಸೆರೆ ಕಾರ್ಯಾಚರಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ' ಎಂದು ವಿವರಿಸಿದರು.

## ಮಿನಿ ನ್ಯೂಸ್

### ದಾರಿ ವಿಚಾರವಾಗಿ ಗಲಾಟೆ; ರೈತನ ಮೇಲೆ ಗುಂಡು ಹಾರಿಸಿದ ಗಣಿ ಮಾಲೀಕ

• **ಉದಯವಾಹಿನಿ, ಮಂಚೇನಹಳ್ಳಿ**

ತಾಲ್ಲೂಕಿನ ಬಂಡಿರಾಮನಹಳ್ಳಿ, ಕನಗಾನಕೊಪ್ಪ, ರಾಯನಕಲ್ಲು ಗ್ರಾಮಗಳ ಸಮೀಪದ ಬೆಟ್ಟಗುಡ್ಡಗಳಲ್ಲಿ ಕಲ್ಲುಗಣಿಗಾರಿಕೆ ಹಾಗೂ ಗಣಿಗಾರಿಕೆ ಲಾರಿಗಳ ಓಡಾಟಕ್ಕೆ ದಾರಿ ಮಾಡುವ ವಿಚಾರವಾಗಿ ಎರಡು ಗುಂಪುಗಳ ನಡುವೆ ಬುಧವಾರ ಗಲಾಟೆ ನಡೆದಿದೆ. ಗಣಿ ಮಾಲೀಕ ಸಕಲೇಶ್ ಎಂಬಾತ ಸ್ಥಳೀಯ ರೈತ ರವಿ ಎಂಬುವವರ ಮೇಲೆ ಗುಂಡು ಹಾರಿಸಿದ್ದಾನೆ. ಗಣಿಗಾರಿಕೆ ಲಾರಿಗಳ ಓಡಾಟ, ರಸ್ತೆ ನಿರ್ಮಾಣ ವಿರೋಧಿಸಿ ಫೆಬ್ರುವರಿಯಲ್ಲಿ ಮಂಚೇನಹಳ್ಳಿಯಲ್ಲಿ ರೈತ ಸಂಘ, ಮಂಚೇನಹಳ್ಳಿ ತಾಲ್ಲೂಕು ಪರಿಸರ ಹಿತರಕ್ಷಣಾ ಸಮಿತಿ ಕಾರ್ಯಕರ್ತರು ಪ್ರತಿಭಟಿಸಿದರು. ಬೆಟ್ಟದ ತಪ್ಪಲಿನಲ್ಲಿ ಮುನೇಶ್ವರ ಗುಡಿ, ತಿಮ್ಮರಾಯನಗುಡಿ ಇದೆ. ಸ್ವಚ್ಛಗಾಳಿ, ನೀರು, ಮೇವು ನೀಡುತ್ತಿರುವ ನಮ್ಮ ಊರಿನ ಬೆಟ್ಟ ಗುಡ್ಡಗಳಲ್ಲಿ ಗಣಿಗಾರಿಕೆ ಮಾಡಲು ಬಿಡುವುದಿಲ್ಲ ಎಂದು ಪ್ರತಿಭಟನಕಾರರು ಆಕ್ರೋಶ ವ್ಯಕ್ತಪಡಿಸಿದರು. ದಾರಿ ವಿಚಾರವಾಗಿ ಪೊಲೀಸ್ ಠಾಣೆಯಲ್ಲಿ ಸಭೆಗಳು ಸಹ ನಡೆದಿದ್ದವು.

ಬುಧವಾರ ಸಕಲೇಶ್ ಮತ್ತು ಆತನ ಕಡೆಯವರು ಜೆಸಿಬಿಗಳ ಮೂಲಕ ರಸ್ತೆ ನಿರ್ಮಿಸಲು ಮುಂದಾಗಿದ್ದರು. ಆಗ ಸ್ಥಳೀಯರು ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದಾರೆ. ಎರಡು ಗುಂಪುಗಳ ನಡುವೆ ಗಲಾಟೆ ನಡೆದಿದೆ. ಆಗ ಸಕಲೇಶ್, ರಿವಾಲ್ವರ್ ಹಿಡಿದು 'ಯಾರು ಬರುತ್ತಿರೊ ಬರ್ರೊ' ಎನ್ನುತ್ತ ರವಿ ಮೇಲೆ ಗುಂಡು ಹಾರಿಸಿದ್ದಾನೆ. ರವಿ ತೊಡೆಗೆ ಗುಂಡು ತಗುಲಿದೆ. ಗಾಯಾಳುವನ್ನು ಚಿಕಿತ್ಸೆಗೆ ದಾಖಲಿಸಲಾಗಿದೆ. ಸ್ಥಳಕ್ಕೆ ಮಂಚೇನಹಳ್ಳಿ ಮತ್ತು ಗೌರಿಬಿದನೂರು ಪೊಲೀಸರು ಭೇಟಿ ನೀಡಿದ್ದು ಬಿಗುವಿನ ವಾತಾವರಣವಿದೆ.

### ಕ್ಷಯ ರೋಗ ತಡೆಗೆ ಬಿಸಿಜಿ ಲಸಿಕೆ

• **ಉದಯವಾಹಿನಿ, ಬೇತಮಂಗಲ**

ಆರೋಗ್ಯ ಇಲಾಖೆಯಿಂದ ಬಸಿಜಿ ಲಸಿಕ ಹಾಕುವ ಕಾರ್ಯಕ್ರಮಕ್ಕೆ ಗ್ರಾಮ ಪಂಚಾಯಿತಿ ಕಚೇರಿಯ ಆವರಣದಲ್ಲಿ ಆರೋಗ್ಯ ಇಲಾಖೆ ಅಧಿಕಾರಿಗಳು ಹಾಗೂ ಗಣ್ಯರು ಚಾಲನೆ ನೀಡಿದರು. ಕ್ಷಯ ರೋಗ ಬರದಂತೆ ತಡೆಯುವಲ್ಲಿ ಬಿಸಿಜಿ ಲಸಿಕೆ ಮಹತ್ವದ ಪಾತ್ರವಹಿಸಲಿದೆ, ಅದರಿಂದ ಪ್ರತಿಯೊಬ್ಬರೂ ಆರೋಗ್ಯ ಸಿಬ್ಬಂದಿಯ ಸಲಹೆ ಪಡೆದು ಲಸಿಕೆ ಹಾಕಿಸಿಕೊಳ್ಳಬೇಕು ಎಂದು ಬೇತಮಂಗಲ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಸಂಸ್ಕೃತಿ ಹೇಳಿದರು. ಈಗಾಗಲೇ ಬಿಸಿಜಿ ಲಸಿಕೆ ಬಗ್ಗೆ ಆರೋಗ್ಯ ಇಲಾಖೆ ಆಶಾ ಕಾರ್ಯಕರ್ತೆಯರ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡ ಲಾಗಿದೆ, ಆರೋಗ್ಯವನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಲಸಿಕೆ ಹಾಕಿಸಿ ಕೊಳ್ಳಬೇಕು. ಆದರೆ, ಗರ್ಭಿಣಿಯರು ಯಾವುದೇ ಕಾರಣಕ್ಕೂ ಬಿಸಿಜಿ ಲಸಿಕೆ ಹಾಕಿಸಿಕೊಳ್ಳಬಾರದು ಎಂದರು.

ಗ್ರಾಪಂ ಅಧ್ಯಕ್ಷ ವಿನೂ ಕಾರ್ತಿಕ್, ಕಾರ್ಯದರ್ಶಿ ವೆಂಕಟೇಶ್, ಗ್ರಾಮ ಪಂಚಾಯಿತಿ ಸದಸ್ಯರಾದ ರೇಣುಕಾ ಸೋಮಣ್ಣ, ಸುಕನ್ಯಾ ಜಯಕುಮಾರ್, ಏಜಾಜ್ ಪಾಷ, ಡೈರಿ ಆನಂದ್, ಡೈರಿ ಮಂಜುನಾಥ್, ಓಂ ಸುರೇಶ್, ಆರೋಗ್ಯ ಇಲಾಖೆಯ ದಿವ್ಯ, ವಿದ್ಯಾ ಸೇರಿದಂತೆ ಗ್ರಾಪಂ ಸಿಬ್ಬಂದಿ, ಆಶಾ ಕಾರ್ಯಕರ್ತೆಯರ ಹಾಜರಿದ್ದರು.

### ಉಗ್ರರ ದಾಳಿ: ಎಸ್‌ಡಿಪಿಐ ಖಂಡನೆ

• **ಉದಯವಾಹಿನಿ, ಮೈಸೂರು**

ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಭಯಾನಕ ಉಗ್ರ ದಾಳಿಯನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ. ನಿರಪರಾಧಿ ಜೀವಗಳನ್ನು ಹತ್ಯೆ ಮಾಡಿರುವ ಈ ಕೃತ್ಯ ಮನುಷ್ಯತ್ವವಿಲ್ಲದ ಕ್ರೂರತೆಗೆ ನಿದರ್ಶನವಾಗಿದೆ. ಇಂತಹ ಹಿಂಸಾತ್ಮಕ ಕೃತ್ಯಗಳಿಗೆ ನಾಗರಿಕ ಸಮಾಜದಲ್ಲಿ ಸ್ಥಾನವಿಲ್ಲ ಎಂದು ಎಸ್‌ಡಿಪಿಐ ರಾಜ್ಯ ಘಟಕದ ಅಧ್ಯಕ್ಷ ಅಬ್ದುಲ್ ಮಜೀದ್ ಹೇಳಿದ್ದಾರೆ. ಈ ಬಗ್ಗೆ ಪ್ರಕಟಣೆ ನೀಡಿರುವ ಅವರು, ಸಂತ್ರಸ್ತ ಕುಟುಂಬಗಳಿಗೆ ನಾವು ತೀವ್ರ ಸಂತಾಪವನ್ನು ವ್ಯಕ್ತಪಡಿಸುತ್ತೇವೆ. ಈ ದುಃಖದ ಸಂದರ್ಭದಲ್ಲಿ ನಮ್ಮ ಪ್ರಾರ್ಥನೆಗಳು ಅವರ ಜೊತೆಗಿವೆ ಎಂದು ಹೇಳಿದ್ದಾರೆ. ಕಾಶ್ಮೀರದಿಂದ ವರದಿಯಾಗುತ್ತಿರುವ ಭದ್ರತಾ ವೈಫಲ್ಯ ತುಂಬಾ ಚಿಂತೆಗೆ ಕಾರಣವಾಗಿದೆ. ನಿರಪರಾಧಿಗಳ ಜೀವವನ್ನು ಅಪಾಯಕ್ಕೊಳಪಡಿಸುವ ಈ ರೀತಿಯ ನಿರ್ಲಕ್ಷ್ಯ ಕ್ಷಮಿಸಲಾಗದು. ತಪ್ಪು ಮಾಡಿದವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು ಹಾಗೂ ಭವಿಷ್ಯದಲ್ಲಿ ಇಂತಹ ದೌರ್ಬಲ್ಯಗಳು ಮರುಕಳಿಸದಂತೆ ತ್ವರಿತ ಮತ್ತು ಪರಿಣಾಮಕಾರಿಯಾದ ಕ್ರಮಗಳನ್ನು ಕೈಗೊಳ್ಳಬೇಕೆಂದು ಆಗ್ರಹಿಸುತ್ತೇವೆ ಎಂದಿದ್ದಾರೆ.

### ಆರ್ಟಿಕಲ್ 370 ತೆಗೆದಿದ್ದೇ ಪಹಲ್ಗಾಮ್ ನರಮೇಧಕ್ಕೆ ಕಾರಣ: ಬಂಡಿಸಿದ್ದೇಗೌಡ

• **ಉದಯವಾಹಿನಿ, ಮಂಡ್ಯ**

ಜಮ್ಮು ಮತ್ತು ಕಾಶ್ಮೀರದಲ್ಲಿ ಆರ್ಟಿಕಲ್ 370 ತೆಗೆದಿರುವುದೇ ಪಹಲ್ಗಾಮ್ ಘಟನೆ ಕಾರಣ ಎಂದು ಶಾಸಕ ರಮೇಶ್ ಬಂಡಿಸಿದ್ದೇಗೌಡ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಶ್ರೀರಂಗಪಟ್ಟಣದಲ್ಲಿ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯ ಕುರಿತು ಮಾತನಾಡಿದ ಅವರು, ಆರ್ಟಿಕಲ್ 370 ತೆಗೆಯೋದಕ್ಕೂ ಮೊದಲು ಯೋಚನೆ ಮಾಡಬೇಕಿತ್ತು. ಪ್ರಧಾನಿ ಮೋದಿ ಮತ್ತು ಕೇಂದ್ರ ಗೃಹಸಚಿವ ಅಮಿತ್ ಶಾ ಅವರ ಅತಿಯಾದ ಆತ್ಮವಿಶ್ವಾಸದಿಂದ ಘಟನೆ ನಡೆದಿದೆ ಎನ್ನುವ ಮೂಲಕ ಘಟನೆಗೆ ಪರೋಕ್ಷವಾಗಿ ಬಿಜೆಪಿ ಕಾರಣ ಎಂದಿದ್ದಾರೆ. ಆರ್ಟಿಕಲ್ 370 ತೆಗೆಯುವ ಮುನ್ನ ಕಾಶ್ಮೀರದಲ್ಲಿ ಮುನ್ನೆಚ್ಚರಿಕೆ ಕ್ರಮ ವಹಿಸಬೇಕಿತ್ತು. ಅವರ ದುಡುಕಿನ ನಿರ್ಧಾರದಿಂದ ಈ ಘಟನೆ ನಡೆದಿದೆ. ಜನರ ಭಾವನೆ ಅರ್ಥ ಮಾಡಿಕೊಂಡು ಆರ್ಟಿಕಲ್ 370 ತೆಗೆಯಬೇಕಿತ್ತು ಎಂದು ಕಿಡಿಕಾರಿದ್ದಾರೆ.



### ಭೂಮಿ ಕೊರೆಯುವುದು ನಿಲ್ಲಬೇಕು

• **ಉದಯವಾಹಿನಿ, ಶ್ರೀರಂಗಪಟ್ಟಣ**

ಅಭಿವೃದ್ಧಿಯ ಕಾರಣ ನೀಡಿ ಭೂಮಿಯನ್ನು ಮನಸೋ ಇಚ್ಛೆ ಕೊರೆಯುವುದು ಸರಿಯಲ್ಲ ಎಂದು ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಎಂ.ಡಿ. ರೂಪಾ ಹೇಳಿದರು.




ಉದಯವಾಹಿನಿ ಚಿತ್ರ

ಪಟ್ಟಣದ ಕೃಷಿಕ ಸಮಾಜ ಭವನದಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಕೃಷಿ ಇಲಾಖೆ, ಕೃಷಿಕ ಸಮಾಜ ಏರ್ಪಡಿಸಿದ್ದ ವಿಶ್ವ ಭೂಮಿ ದಿನಾಚರಣೆಯಲ್ಲಿ ಅವರು ಮಾತನಾಡಿದರು. ಗಣಿಗಾರಿಕೆ. ಕೊಳವೆ ಬಾವಿ ಇತರ ಉದ್ದೇಶಗಳಿಗೆ ಭೂಮಿಯನ್ನು ಅಡೆತಡೆಯಿಲ್ಲದೆ ಕೊರೆಯಲಾಗುತ್ತಿದೆ. ಇದರಿಂದ ಭೂಮಿಯ ಪದರಗಳಲ್ಲಿ ವ್ಯತ್ಯಾಸಗಳು ಉಂಟಾಗುತ್ತಿವೆ. ಭೂಮಿ ಕೊರೆಯುವ ಪ್ರಕ್ರಿಯೆ ಹೀಗೇ ಮುಂದುವರೆದರೆ ಭವಿಷ್ಯದಲ್ಲಿ ತೊಂದರೆ ತಪ್ಪಿದ್ದಲ್ಲ ಎಂದು ಎಚ್ಚರಿಸಿದರು.

ಅಂತರಾಳದಿಂದ.. EDITORIAL

# ಉರ್ದು ಭಾರತೀಯ ಭಾಷೆ 'ಸುಪ್ರೀಂ' ನಿಲುವು ಸ್ವಾಗತಾರ್ಹ

ಉರ್ದು ಭಾರತೀಯ ಭಾಷೆ: ಮರಾಠಿ, ಹಿಂದಿ, ಸಂಸ್ಕೃತ ಅಥವಾ ಭಾರತದ ಇತರ ಯಾವುದೇ ಭಾಷೆಯಂತೆ ಉರ್ದು ಕೂಡ ಭಾರತೀಯವಾದುದಾಗಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಸುಪ್ರೀಂ ಕೋರ್ಟ್ ಈ ಹೇಳಿಕೆಯು ಸ್ವಾಗತಾರ್ಹವಾದುದು. ಈ ಭಾಷೆಗೆ ಸಾಂವಿಧಾನಿಕ ಸ್ಥಾನಮಾನವಿದೆ, ಚಾರಿತ್ರಿಕ ಮಹತ್ವವಿದೆ ಮತ್ತು ದೇಶದ ಹಲವು ಭಾಗಗಳಲ್ಲಿ ದಿನನಿತ್ಯದ ವ್ಯವಹಾರಕ್ಕೆ ಬಳಕೆಯಲ್ಲಿದೆ. ನಮ್ಮ ಸಂವಿಧಾನದ ಎಂಟನೇ ಪರಿಚ್ಛೇದದಲ್ಲಿ ಸೇರ್ಪಡೆಯಾಗಿರುವ 21 ಭಾಷೆಗಳಲ್ಲಿ ಉರ್ದು ಕೂಡ ಒಂದು. ಇತರ ಎಲ್ಲಾ ಭಾಷೆಗಳ ಹಾಗೆಯೇ ಉರ್ದು ಕೂಡ ನಮ್ಮ ಭಾಷಿಕ ಪರಂಪರೆಯ ಭಾಗವಾಗಿದೆ. ದೇಶದ ಉತ್ತರ, ವಾಯವ್ಯ ಮತ್ತು ಇತರ ಭಾಗಗಳಲ್ಲಿ ಲಕ್ಷಾಂತರ ಜನರು ಈ ಭಾಷೆಯನ್ನು ಮಾತನಾಡುತ್ತಾರೆ. ಹೆಚ್ಚಿನ ಸಂಖ್ಯೆಯ ಮುಸ್ಲಿಮರು ಉರ್ದು ಮಾತನಾಡುತ್ತಾರಾದರೂ ಇತರ ಧರ್ಮದವರೂ ಈ ಭಾಷೆ ಮಾತನಾಡುತ್ತಾರೆ. ಕರ್ನಾಟಕದಲ್ಲಿ ಶೇ 10ಕ್ಕಿಂತ ಹೆಚ್ಚು ಜನರು ಈ ಭಾಷೆ ಮಾತನಾಡುತ್ತಾರೆ. ಈ ಭಾಷೆಗೆ ಉತ್ಕೃಷ್ಟವಾದ ಸಾಹಿತ್ಯ ಪರಂಪರೆ ಇದೆ. ಉರ್ದು ಶಾಯಿರಿ ದೇಶದ ಹಲವು ಭಾಗಗಳಲ್ಲಿ ಜನಜೀವನದ ಅವಿಭಾಜ್ಯ ಅಂಗವಾಗಿದೆ. ಉತ್ತರಪ್ರದೇಶ, ಆಂಧ್ರಪ್ರದೇಶ, ಜಮ್ಮು-ಕಾಶ್ಮೀರ, ಜಾರ್ಖಂಡ್, ಪಶ್ಚಿಮ ಬಂಗಾಳ, ಬಿಹಾರ, ತೆಲಂಗಾಣ ಮತ್ತು ದೆಹಲಿಯಲ್ಲಿ ಉರ್ದುವನ್ನು ಅಧಿಕೃತ ಭಾಷೆ ಎಂದೇ ಗುರುತಿಸಲಾಗಿದೆ ಎಂಬುದರತ್ತಲೂ ನ್ಯಾಯಾಲಯವು ಬೆಳಕು ಚೆಲ್ಲಿದೆ.



ವ್ಯಾಪಕ ಬಳಕೆ ಮತ್ತು ಪರಂಪರೆ ಇದ್ದರೂ ಉರ್ದು ಭಾಷೆಯನ್ನು ಇತ್ತೀಚಿನ ದಿನಗಳಲ್ಲಿ ಪೂರ್ವಗ್ರಹದಿಂದ ನೋಡಲಾಗುತ್ತಿದೆ. ಮುಸ್ಲಿಮರ ಭಾಷೆ, ಶತ್ರುವಿನ ಭಾಷೆ' ಎಂದೂ ಉರ್ದುವನ್ನು ಪರಿಗಣಿಸಲಾಗುತ್ತಿದೆ. ಅಲ್ಪಸಂಖ್ಯಾತರಿಗೆ ಸಂಬಂಧಿಸಿದ ಪ್ರತಿಯೊಂದನ್ನೂ ದೂರ ವಿರಿಸುವ ಮನಃಸ್ಥಿತಿಯ ಫಲವಾಗಿ ಭಾಷೆಯನ್ನು ಹೀಗೆ ನೋಡಲಾಗುತ್ತಿದೆ. ಜನರನ್ನು ವಿಭಜಿಸುವ ಪ್ರತಿಯೊಂದು ವಿಚಾರದ ಹಾಗೆಯೇ ಇದು ಕೂಡ ಅಜ್ಞಾನ ಮತ್ತು ಪೂರ್ವಗ್ರಹದ ಪರಿಣಾಮ ಎಂದು ಹೇಳಬಹುದು. ನಮ್ಮ ದೇಶದಲ್ಲಿ ಭಾಷೆಯು ಅತ್ಯಂತ ಭಾವನಾತ್ಮಕ ವಿಚಾರಗಳಲ್ಲಿ ಒಂದು. ಹಾಗಾಗಿ, ಭಾಷೆಯನ್ನು ಕೂಡ ಅಸ್ಮಿತೆಯ ರಾಜಕಾರಣಕ್ಕೆ ಬಳಸಿಕೊಳ್ಳಲಾಗುತ್ತಿದೆ. ನ್ಯಾಯಾಲಯದ ಮುಂದೆ ಬಂದಿರುವ ಪ್ರಕರಣದ ಮೂಲವನ್ನು ನೋಡಿದರೆ ಈ ಪೂರ್ವಗ್ರಹ ಎಷ್ಟು ಗಾಢವಾಗಿ ಬೇರುಬಿಟ್ಟಿದೆ ಎಂಬುದು ಅರಿವಾಗುತ್ತದೆ. ಮಹಾರಾಷ್ಟ್ರದ ಅಕೋಲ ಜಿಲ್ಲೆಯ ಪಾತುರ್ ನಗರ ಸ್ಥಳೀಯಾಡಳಿತ ಸಂಸ್ಥೆಯ ದ್ವಿಭಾಷಾ ಸೂಚನಾ ಫಲಕವೊಂದರ ಕುರಿತಂತೆ ವಿವಾದ ಸೃಷ್ಟಿಯಾಗಿತ್ತು. ಫಲಕದಲ್ಲಿ ಮರಾಠಿ ಮತ್ತು ಉರ್ದು ಭಾಷೆಯನ್ನು ಬಳಸಲಾಗಿದೆ. ಸ್ಥಳೀಯಾಡಳಿತ ಸಂಸ್ಥೆಯ ಮಾಜಿ ಸದಸ್ಯರು ಉರ್ದು ಬಳಕೆಯನ್ನು ಪ್ರಶ್ನಿಸಿ ಬಾಂಬೆ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು. ಬಳಿಕ ಅದು ಸುಪ್ರೀಂ ಕೋರ್ಟ್‌ವರೆಗೆ ಬಂದಿದೆ. ಭಾಷೆಯ ಸ್ಥಾನಮಾನದ ಕುರಿತು ಸುಪ್ರೀಂ ಕೋರ್ಟ್ ಸರಿಯಾದ ನಿಲುವನ್ನೇ ತಳೆದಿದೆ. ನ್ಯಾಯಾಲಯವು ಕೊಟ್ಟ ಸಂದೇಶವು ಬಹಳ ಸ್ಪಷ್ಟವಾಗಿಯೂ ದೃಢವಾಗಿಯೂ ಇದೆ. 'ಭಾಷೆ ಎಂಬುದು ಧರ್ಮವಲ್ಲ... ಭಾಷೆಯು ಸಂಸ್ಕೃತಿ... ಹತ್ತಾರು ಭಾಷೆಗಳು ಮತ್ತು ಇತರ ವೈವಿಧ್ಯಗಳನ್ನು ಗೌರವಿಸಲು, ಸಂಭ್ರಮಿಸಲು ನಾವು ಕಲಿಯಬೇಕಿದೆ' ಎಂದು ನ್ಯಾಯಾಲಯ ಹೇಳಿದೆ. ಉರ್ದು ಭಾಷೆಯು 'ಗಂಗಾ- ಜಮುನಿ ತೆಹಜೀಬ್'ನ ಅತ್ಯುತ್ಕೃಷ್ಟ ಮಾದರಿಯಾಗಿದೆ ಎಂದು ಕೋರ್ಟ್ ಹೇಳಿದೆ. ಉರ್ದುವನ್ನು ಮುಸ್ಲಿಮರ ಭಾಷೆ ಎಂದು ನೋಡುವುದು ವಾಸ್ತವವನ್ನು ಮರೆಮಾಚುವ ಕರುಣಾಜನಕ ಸ್ಥಿತಿಯಾಗಿದೆ; ವೈವಿಧ್ಯದಲ್ಲಿ ಏಕತೆ ಎಂಬುದಕ್ಕೆ ಮಾಡುವ ಅವಮಾನವಾಗಿದೆ ಎಂದು ನ್ಯಾಯಾಲಯ ಹೇಳಿದೆ. ಹಿಂದಿ ಮತ್ತು ಉರ್ದು ಎರಡೂ ಭಾಷೆಗಳು ಒಂದೇ ಭಾಷಿಕ ಮೂಲದಿಂದ ಅಭಿವೃದ್ಧಿ ಹೊಂದಿವೆ. ನಮ್ಮ ದೇಶದಲ್ಲಿ ಉರ್ದು ಭಾಷೆಯನ್ನು ಶತಮಾನಗಳಿಂದ ಮಾತನಾಡಲಾಗುತ್ತಿದೆ. ಈ ಭಾಷೆಯನ್ನು ತಿರಸ್ಕರಿಸುವುದು, ನಿಂದಿಸುವುದು ದೇಶದಲ್ಲಿ ವ್ಯಾಪಕವಾಗಿ ಕಾಣಿಸುತ್ತಿರುವ ವಿಭಜನೆಯ ಮನಃಸ್ಥಿತಿಯ ಭಾಗವಾಗಿದೆ. ಉರ್ದು ಸೇರಿದಂತೆ ಭಾರತದ ಭಾಷೆಗಳು, ಧರ್ಮಗಳು, ಜನಾಂಗಗಳು, ಇತರ ವೈವಿಧ್ಯಗಳು ನಮ್ಮ ಸಂಸ್ಕೃತಿಯನ್ನು ರೂಪಿಸಿವೆ. ಈ ಮಹತ್ವದ ವಿಚಾರವನ್ನು ಸುಪ್ರೀಂ ಕೋರ್ಟ್ ಪುನರುಚ್ಚರಿಸಿದೆ.

# ರಾಮಾಯಣ



## ಸುಮಿತ್ರಾದೇವಿಯು ಕೌಸಲ್ಯಾ ದೇವಿಗೆ ಧೈರ್ಯ ಹೇಳಿದ್ದು

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

ಶ್ರೀರಾಮನು ಮಹಾಭುಜಬಲಪರಾಕ್ರಮಗಳುಳ್ಳವನು. ಪುರುಷೋತ್ತಮನು. ಅಸಹಾಯ ಶೂರನು. ಅರಣ್ಯದಲ್ಲಿದ್ದರೂ ಮನೆಯಲ್ಲಿರುವಂತೆ ಸುಖವಾಗಿರುವನು. ಆತನು ಶರಸಂಧಾನ ಮಾಡಿದಮಾತ್ರದಲ್ಲೇ ಸಮಸ್ತ ಶತ್ರುಗಳೂ ಲಯವಾಗುವರು. ಲೋಕದಲ್ಲಿ ಆತನಿಗೆ ಅಂಜದವರಾರು ಶೀಘ್ರದಲ್ಲಿ ವನವಾಸವನ್ನು ಪೂರ್ತಿಮಾಡಿ ತಿರುಗಿ ಬಂದು ರಾಜ್ಯವನ್ನು ಪರಿಪಾಲನಮಾಡುವನು. ಆತನು ಸೂರ್ಯನಿಗೆ ಪ್ರತಿಸೂರ್ಯನಾಗಬಲ್ಲನು! ಆತನು ಅಗ್ನಿಗೆ ಪ್ರತ್ಯಗ್ನಿ. ಪ್ರಭುವಿಗೆ ಪ್ರಭು. ಐಶ್ವರ್ಯಕ್ಕೆ ಐಶ್ವರ್ಯವು. ಕೀರ್ತಿಗೆ. ಕೀರ್ತಿ. ಕ್ಷಮೆಗೆ ಕ್ಷಮೆ. ದೇವತೆಗಳಿಗೆ ದೇವತೆ. ಮನುಷ್ಯರಲ್ಲಿ ಶ್ರೇಷ್ಠ. ಆತನಲ್ಲಿಲ್ಲದ ಸದ್ಗುಣವೇ ಇಲ್ಲ ಆತನು ವನದಿಂದ ತಿರುಗಿ ಬಂದು ಭೂದೇವಿಯೊಡನೆಯೂ ಮಹಾಲಕ್ಷ್ಮಿಯೊಡನೆಯೂ ಸೀತಾದೇವಿಯೊಡನೆಯೂ ಕೂಡಿ ಪಟ್ಟಾಭಿಷೇಕೋತ್ಸವವನ್ನು ಅನುಭವಿಸುವನು. ಅಯೋಧ್ಯಾ ಪಟ್ಟಣದ ಜನಸಮೂಹವು ಪಟ್ಟಣದಿಂದ ವನವಾಸಕ್ಕೆ ಹೊರಟ ಶ್ರೀರಾಮನನ್ನು ಕಂಡು ಶೋಕಾತಿಶಯದಿಂದ ಕಣ್ಣೀರನ್ನು ಬಿಡುತ್ತಿರಲು ನಾರುಬಟ್ಟೆಯನ್ನುಟ್ಟು ಮುನಿವೇಷವನ್ನು ಧರಿಸಿ ವನಕ್ಕೆ ಹೋದ ಆತನ ಹಿಂದೆ ಸೀತಾದೇವಿಯು ಹೋದಂತೆ ರಾಜ್ಯಲಕ್ಷ್ಮಿಯೂ ಆತನೊಡನೆ ಹೋದಳು! ಬಿಲ್ಲುಬಾಣ ಖಡ್ಗಗಳನ್ನು ಧರಿಸಿಕೊಂಡು ಲಕ್ಷ್ಮಣನು ಅಗ್ನಿಸ್ವರೂಪನಾಗಿ ಆತನ ಮುಂದೆ ನಡೆಯುತ್ತಿರುವಾಗ ಅವರಿಗೆ ಯಾರು ಲೋಕದಲ್ಲಿ ಎದುರಾಗುವರು? ಶ್ರೀರಾಮನು ವನದಿಂದ ಸುಖವಾಗಿ ತಿರುಗಿ ಬರುವನು. ನೀನು ದುಃಖವನ್ನು ಬಿಡು. ನನ್ನ ಮಾತನ್ನು ಸತ್ಯವೆಂದೆಣಿಸು. ಆತನು ಚಂದ್ರೋದಯವಾದಂತೆ ವನದಿಂದ ತಿರುಗಿ ಬಂದು ನಿನ್ನ ಪಾದಗಳಿಗೆ ನಮಸ್ಕಾರವನ್ನು ಮಾಡುವುದನ್ನು ನೀನು ನೋಡಿ ಸಂತೋಷಪಟ್ಟು ಆತನಿಗೆ ಪಟ್ಟಾಭಿಷೇಕ ಮಾಡುವುದನ್ನೂ ಕಾಣುವೆ. ಆತನ ಬಳಿಗೆ ದುಃಖಾದಿ ಅಮಾಂಗಲ್ಕಗಳು ಸುಳಿಯಲಾರವು. ಸೀತಾಲಕ್ಷ್ಮಣಸಮೇತನಾಗಿ ಬರುವ ಶ್ರೀರಾಮನನ್ನು ಕಂಡು ಅಯೋಧ್ಯಾಪಟ್ಟಣದಲ್ಲಿರುವ ಸಮಸ್ತ ಜನರೂ ಸಂತೋಷಪಡುವರು ಕೌಸಲ್ಯಾದೇವಿ, ಯಾವಕಾರಣ ವ್ಯಥೆಪಡುತ್ತೀಯೆ ಲೋಕದಲ್ಲಿ ನಿನ್ನ ಮಗನಂಥ ಸನ್ಮಾರ್ಗಪ್ರವರ್ತಕರೊಬ್ಬರೂ ಇಲ್ಲ. ಅಂಥ ಸತ್ಪುರುಷನನ್ನು ಪಡೆದ ನೀನು ಏಕೆ ದುಃಖಪಡುತ್ತಿದ್ದೀಯೆ ಈ ದುಃಖವನ್ನು ಬಿಡು. ಆತನು ವನದಿಂದ ಬಂದು ಅಯೋಧ್ಯಾ ಪಟ್ಟಣವನ್ನು ಪ್ರವೇಶಿಸಿ ಕೋಮಲವಾದ ತನ್ನ ಹಸ್ತದಿಂದ ನಿನ್ನ ಪಾದಸೇವೆಯನ್ನು ಮಾಡುವನು. ವನದಿಂದ ಬಂದ ನಿನ್ನ ಪ್ರಿಯಪುತ್ರನನ್ನು ನೋಡಿ ವರ್ಷಾಕಾಲದ ಮೇಘವನ್ನು ಕಂಡ ಹೆಣ್ಣುನವಿಲಂತೆ ಆನಂದಾಶ್ರುಗಳನ್ನು ಬಿಡುವೆ ಎಂದು ಚಾತುರ್ಯದಿಂದಲೂ ನುಡಿಜಾಣ್ಮೆಯಿಂದಲೂ ಸಂತವಿಡಲು ಕೌಸಲ್ಯಾದೇವಿಯು ತನ್ನ ಮನಸ್ಸಿನಲ್ಲಿದ್ದ ಶೋಕವನ್ನು ಬಿಟ್ಟು ನಿರ್ಮಲಚಿತ್ತೆಯಾದಳು.

### ಶ್ರೀರಾಮನು ತಮಸಾನದೀತೀರವನ್ನು ಸೇರಿದ್ದು

ಆ ಬಳಿಕ ಸತ್ಯದಲ್ಲಿಯೂ ಪರಾಕ್ರಮದಲ್ಲಿಯೂ ಅತ್ಯಂತ ದೃಢಚಿತ್ತನಾದ ಶ್ರೀರಾಮನಿಗೆ ಅನುಕೂಲರಾದ ಪ್ರರಜನಗಳು ತಾವೂ ಆತನೊಡನೆ ವನವಾಸಮಾಡಬೇಕೆಂದು ಆತನ ಸ್ನೇಹಿತರು ಎಷ್ಟು ತಡೆದರೂ ಅಯೋಧ್ಯಾ ಪಟ್ಟಣಕ್ಕೆ ತಿರುಗದೆ ಆತನ ಹಿಂದೆ ತೆರಳುತ್ತಿದ್ದರು. ಅತ್ಯಂತ ಕೀರ್ತಿವಂತನಾಗಿ ಸದ್ಗುಣವಂತನಾದ ಶ್ರೀರಾಮನು ಅಯೋಧ್ಯಾಪಟ್ಟಣದಲ್ಲಿದ್ದ ಸಮಸ್ತ ಪ್ರಜೆಗಳಿಗೂ ಪೂರ್ಣಚಂದ್ರನಂತೆ ಮನಸ್ಸಿಗೆ ಹರ್ಷವನ್ನುಂಟುಮಾಡುತ್ತಿದ್ದನು. ತನ್ನ ಪ್ರಜೆಗಳಿಂದ ವನವಾಸಕ್ಕೆ ಹೋಗಬಾರದೆಂದು ತಡೆಯಲ್ಪಟ್ಟವನಾದರೂ ತನ್ನ ತಂದೆಯಾದ ದಶರಥರಾಯನ ಸತ್ಯಪ್ರತಿಜ್ಞೆಯನ್ನು ಪರಿಪಾಲಿಸಬೇಕೆಂದು ವನಕ್ಕೆ ತೆರಳಿದನು.

ಮುಂದುವರಿಯುವುದು...

ಎಂ.ಇ,ಐ.ಎಲ್‌ಗೆ ಎನ್ ಪಿಸಿಐಎಲ್ ನ 12,800 ಕೋಟಿ ಮೌಲ್ಯದ ಪರಮಾಣು ವಿದ್ಯುತ್ ಯೋಜನೆಗೆ ಖರೀದಿ ಆದೇಶ ಹಸ್ತಾಂತರ

# ವೃತ್ತಿಪರ ಸಾಧನೆಯಲ್ಲ, ಹೆಮ್ಮೆ, ಮನ್ನಣೆ, ಆಳವಾದ ಜವಾಬ್ದಾರಿಯಿಂದ ತುಂಬಿದ ಕ್ಷಣ

• ಉದಯವಾಹಿನಿ, ಬೆಂಗಳೂರು

ದೇಶದ ವಿದ್ಯುತ್ ಉತ್ಪಾದನಾ ಕ್ಷೇತ್ರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾಗಿರುವ ತಲಾ 700 ಮೆಘಾ ವ್ಯಾಟ್ ಪರಮಾಣು ವಿದ್ಯುತ್ ಉತ್ಪಾದನೆಯ ಕೈಗಾ ಸ್ಥಾವರದ 5, 6ನೇ ಘಟಕ ನಿರ್ಮಾಣಕ್ಕೆ ಸಂಬಂಧಿಸಿದಂತೆ ನ್ಯೂಕ್ಲಿಯರ್ ಪವರ್ ಕಾರ್ಪೊರೇಷನ್ ಆಫ್ ಇಂಡಿಯಾ ಲಿಮಿಟೆಡ್ ನಿಂದ ದೇಶದ ಪ್ರಮುಖ ಮೂಲ ಸೌಕರ್ಯ ಸಂಸ್ಥೆ ಎಂಇಐಎಲ್‌ಗೆ 12,800 ಕೋಟಿ ಮೊತ್ತದ ಇಪಿಸಿ ಒಪ್ಪಂದದ ಖರೀದಿ ಆದೇಶವನ್ನು ಹಸ್ತಾಂತರಿಸಿದೆ.

ಇದು ಎನ್ಪಿಸಿಐಎಲ್ ಈವರೆಗಿನ ಅತಿದೊಡ್ಡ ಆದೇಶವಾಗಿದ್ದು, ಭಾರತದ ಇಂಧನ ಭವಿಷ್ಯವನ್ನು ರೂಪಿಸಲು ಸಹಾಯ ಮಾಡುವ ಕ್ಷೇತ್ರವಾದ ಪರಮಾಣು ಇಂಧನ ವಲಯಕ್ಕೆ ಎಂ.ಇ,ಐ.ಎಲ್‌ನ ಪ್ರಮುಖ, ಚೊಚ್ಚಲ ಹೆಜ್ಜೆಯಾಗಿದೆ. ಈ ಆದೇಶವನ್ನು ಎನ್ ಪಿಸಿಐಎಲ್ ನ ಮುಂಬೈ ಪ್ರಧಾನ ಕಚೇರಿಯಲ್ಲಿ ಎಂ.ಇ.ಐ.ಎಲ್ ನ ನಿರ್ದೇಶಕ (ಯೋಜನೆಗಳು) ಸಿಹೆಚ್. ಪಿ.



☛ ಉದಯವಾಹಿನಿ ಚಿತ್ರ

ಸುಬ್ಬಯ್ಯ, ಅವರ ತಂಡಕ್ಕೆ ಔಪಚಾರಿಕವಾಗಿ ಹಸ್ತಾಂತರಿಸಲಾಯಿತು. ಇದು ಕೇವಲ ವೃತ್ತಿಪರ ಸಾಧನೆಯಲ್ಲ, ಹೆಮ್ಮೆ, ಮನ್ನಣೆ ಮತ್ತು ಆಳವಾದ ಜವಾಬ್ದಾರಿಯಿಂದ ತುಂಬಿದ ಕ್ಷಣವಾಗಿತ್ತು ಎಂದು ಸಂಸ್ಥೆಯು ಬಣ್ಣಿಸಿದೆ. ಮೊದಲ ಬಾರಿಗೆ, ಎನ್‌ಪಿಸಿ ಐಎಲ್ ಈ ಯೋಜನೆಯನ್ನು ನೀಡಲು ಗುಣಮಟ್ಟ-ಜತೆ- ವೆಚ್ಚ-ಆಧಾರಿತ ಆಯ್ಕೆ ವಿಧಾನವನ್ನು ಬಳಸಿದೆ - ಗುಣಮಟ್ಟ, ವೆಚ್ಚದ ನಡುವೆ ಎಚ್ಚರಿಕೆಯ ಸಮತೋಲನವನ್ನು ಸಾಧಿಸುವುದು. ಬಿಹೆಚ್‌ಇಎಲ್ ಮತ್ತು ಎಲ್ ಅಂಡ್ ಟಿ ಯಂತಹ ಉದ್ಯಮ ದೈತ್ಯರೊಂದಿಗೆ ಸ್ಪರ್ಧೆ ನಡುವೆ ಎಂಇಐಎಲ್ ಅನ್ನು ಅದರ ಬಲವಾದ ತಾಂತ್ರಿಕ ವಿಧಾನ ಮತ್ತು ಸ್ಪರ್ಧಾತ್ಮಕ ಬೆಲೆ ನಿಗದಿಗಾಗಿ ಆಯ್ಕೆ ಮಾಡಲಾಗಿದೆ. ಸುರಕ್ಷತೆ, ಗುಣಮಟ್ಟ, ಕಾಳಜಿಯ ಅತ್ಯುನ್ನತ ಮಾನದಂಡಗಳನ್ನು ಕಾಯ್ದುಕೊಳ್ಳುವಾಗ, ಯೋಜನೆ ಯನ್ನು ಸಮಯಕ್ಕೆ ಸರಿಯಾಗಿ ತಲುಪಿಸುವ ತಂಡದ ಸಾಮರ್ಥ್ಯಕ್ಕೆ ಎಂಇಐಎಲ್ ನಾಯಕತ್ವವು ವಿಶ್ವಾಸಾರ್ಹತೆಗೆ ಹೆಸರುವಾಸಿಯಾಗಿದೆ, ಎಂಇಐಎಲ್ ಭಾರತದ ಪ್ರಮುಖ ಮೂಲಸೌಕರ್ಯ ಕಂಪನಿಗಳಲ್ಲಿ ಒಂದಾಗಿದೆ, ವಿದ್ಯುತ್, ನೀರು, ಹೈಡ್ರೋ ಕಾರ್ಬನ್‌ಗಳು, ನೀರಾವರಿ, ತೈಲ, ರಿಗ್‌ಗಳು, ರಕ್ಷಣೆ, ಸಾರಿಗೆ, ಸಂಕುಚಿತ ಅನಿಲ ವಿತರಣೆ, ವಿದ್ಯುತ್ ಸರಬರಾಜು ಮತ್ತು ಈಗ ಪರಮಾಣು ಶಕ್ತಿ ಸೇರಿದಂತೆ ಮೂಲ ಸೌಕರ್ಯ ಕ್ಷೇತ್ರದಲ್ಲಿ ತನ್ನ ಇರುವಿಕೆಯನ್ನು ಸಾಬೀತು ಪಡಿಸಿದೆ. ಪ್ರಾಯೋಗಿಕ ವಿಧಾನ, ಬಲವಾದ ಕಾರ್ಯಗತಗೊಳಿಸುವಿಕೆ, ಭವಿಷ್ಯದ ದೃಷ್ಟಿಕೋನಕ್ಕೆ ಹೆಸರುವಾಸಿಯಾದ ಎಂಇಐಎಲ್, ಭಾರತದ ಮೂಲ ಸೌಕರ್ಯ ಪ್ರಯಾಣಕ್ಕೆ ಅರ್ಥಪೂರ್ಣವಾಗಿ ಕೊಡುಗೆ ನೀಡುವುದನ್ನು ಮುಂದುವರೆಸಿದೆ.

**ಎಂಇಐಎಲ್ ನಾಯಕತ್ವವು ವಿಶ್ವಾಸಾರ್ಹತೆಗೆ ಹೆಸರುವಾಸಿ**

### ಪ್ರಯಾಣಕ್ಕೆ ಹೊಸ ಅಧ್ಯಾಯ

**ಭಾರತ, ವಿದೇಶಗಳಲ್ಲಿ ದೊಡ್ಡ ಪ್ರಮಾಣದ ಯೋಜನೆಗಳನ್ನು ತಲುಪಿಸುವ ಘನ ದಾಖಲೆಯೊಂದಿಗೆ, ಎಂಇಐಎಲ್ ಈ ಹೊಸ ಜವಾಬ್ದಾರಿಯನ್ನು ಬಲವಾದ ಉದ್ದೇಶ, ಸಮರ್ಪಣೆಯೊಂದಿಗೆ ವಹಿಸುತ್ತಿದೆ. ಪರ ಮಾಣು ಶಕ್ತಿಯತ್ತ ಈ ಹೆಜ್ಜೆ ಎಂಇಐಎಲ್‌ನ ಪ್ರಯಾಣಕ್ಕೆ ಹೊಸ ಅಧ್ಯಾಯವನ್ನು ಸೇರಿಸುತ್ತದೆ, ಭಾರತದ ಮೂಲಸೌಕರ್ಯ, ಇಂಧನ ಭವಿಷ್ಯವನ್ನು ರೂಪಿಸುವಲ್ಲಿ ಅದರ ಬೆಳೆಯುತ್ತಿರುವ ಪಾತ್ರವನ್ನು ಬಲಪಡಿಸುತ್ತದೆ ಎಂದು ಸಂಸ್ಥೆಯು ಹರ್ಷ ವ್ಯಕ್ತಪಡಿಸಿದೆ.**


**ಪ್ರಯಾಣಕ್ಕೆ ಅರ್ಥಪೂರ್ಣ ಕೊಡುಗೆ**

# ಡಾ. ರಾಜ್ ಕುಮಾರ್‌ರವರ 96ನೇ ವರ್ಷದ ಜನ್ಮದಿನಾಚರಣೆ



ಕಲಾ ಸಾಹಿತ್ಯ
**ಕೃಷ್ಣಪ್ಪ**
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

ಡಾ. ರಾಜ್ ಕುಮಾರ್ ರವರು 1929 ಏ. 24ರಂದು ಪುಟ್ಟಸ್ವಾಮಯ್ಯ, ಲಕ್ಷ್ಮಮ್ಮ ದಂಪತಿಗಳಿಗೆ ಮಗನಾಗಿ ಗಾಜನೂರಿನಲ್ಲಿ ಜನಿಸಿದರು. ಓದಿದ್ದು ನಾಲ್ಕನೇ ತರಗತಿವರೆಗೆ, ಗಳಿಸಿದ್ದು ಮುಗಿಲೆತ್ತರಕ್ಕೆ. ರಂಗಭೂಮಿ ನಟರಾಗಿ, ಚಲನಚಿತ್ರ ಕಲಾವಿದರಾಗಿ, ಬದುಕಿನ ಅಪಾರ ಅನುಭವಗಳಿಂದಾಗಿ, ಅವರು ಪಡೆದ ಶಿಕ್ಷಣವೇ ಅವರನ್ನು ವಿದ್ಯಾವಂತ ಸುಸಂಸ್ಕೃತ,ನಾಗರೀಕರನ್ನಾಗಿ ರೂಪಿಸಿತು. ಕಲಾವಿದರಾಗಿ ಜೀವನ ಮೌಲ್ಯಗಳನ್ನು ಗ್ರಹಿಸಿ ಅವುಗಳನ್ನು ಬದುಕಿನಲ್ಲಿಯೂ ಆಚರಿಸಿ ತೋರಿಸುವ ಓರ್ವ ಪರಿ ಪೂರ್ಣ ಮಾನವರಾಗಿ ಬಾಳಿದರು. 1954ರಲ್ಲಿ ಡಾ. ರಾಜಕುಮಾರ್ ಅವರು ಚಲನಚಿತ್ರಕ್ಕೆ ಪ್ರವೇಶ ಮಾಡಿ ಬೇಡರ ಕಣ್ಣಪ್ಪ ಅವರ ಪ್ರಥಮ ಚಿತ್ರವಾಯಿತು. ಪೌರಾಣಿಕ, ಚಾರಿತ್ರಿಕ, ಸಾಮಾಜಿಕ, ಜಾನಪದ ಹೀಗೆ ವಿವಿಧ ಬಗೆಯ 207 ಚಿತ್ರಗಳಲ್ಲಿ ನಾಯಕರಾಗಿ, ವಿಭಿನ್ನ ಪಾತ್ರಗಳಲ್ಲಿ ಶ್ರೇಷ್ಠ ಅಭಿನಯ ನೀಡಿದರು.




ಡಾ.ರಾಜಕುಮಾರ್ ಅವರಿಗೆ ಸಂದ ಪ್ರಶಸ್ತಿಗಳು ಹಲವಾರು; ಮೈಸೂರು ವಿಶ್ವವಿದ್ಯಾಲಯ ನೀಡಿದ ಗೌರವ ಡಾಕ್ಟರೇಟ್ ಪದವಿ, ಭಾರತ ಸರ್ಕಾರ ನೀಡಿದ ಪದ್ಮಭೂಷಣ ಪ್ರಶಸ್ತಿ, ಕರ್ನಾಟಕ ಸರ್ಕಾರ ನೀಡಿದ ಕರ್ನಾಟಕ ರತ್ನ ಮತ್ತು ರಾಜ್ಯೋತ್ಸವ ಪ್ರಶಸ್ತಿ, ಅತ್ಯುತ್ತಮ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಇನ್ನೂ ಹಲವಾರು ಪ್ರಶಸ್ತಿ ದೊರಕಿವೆ. ರಸಿಕರ ರಾಜ, ಕನ್ನಡ ಕಂಠೀರವ, ನಟಸಾರ್ವಭೌಮ, ಗಾನಗಂಧರ್ವ ಮೊದಲಾದ ಬಿರುದುಗಳನ್ನು ಅವರ ಅಭಿಮಾನಿ ದೇವತೆಗಳಾದ ಕನ್ನಡಿಗರಿಂದ ಪಡೆದು ಕನ್ನಡ ನಾಡು-ನುಡಿಗೆ ಅಪಾರ ಸೇವೆ ಸಲ್ಲಿಸಿ ಕನ್ನಡಿಗರ ಮನದಲ್ಲಿ ಚಿರಸ್ಥಾಯಿಯಾಗಿದ್ದಾರೆ. ಡಾ. ರಾಜಕುಮಾರ್ ಅವರು ಅಪಾರ ಬಂಧು-ಬಳಗ, ಅಭಿಮಾನಿಗಳನ್ನು ಅಗಲಿ 2006 ಏ. 12 ರಂದು ನಿಧನರಾದರು. ಕನ್ನಡ ನಾಡು ಅಗಲಿದ ಮಹಾನ್ ಕಲಾವಿದನಿಗೆ ಶ್ರದ್ಧಾಂಜಲಿ ಅರ್ಪಿಸಿತು. ಡಾ.ರಾಜಕುಮಾರ್ ಅವರು ಇಡೀ ಕನ್ನಡನಾಡಿನ ಅಭಿಮಾನಿಗಳ ಮನ, ಮನೆಯಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ.

ಡಾ.ರಾಜ್ ಕುಮಾರ್ ಅವರ 96 ನೇ ವರ್ಷದ ಜನ್ಮದಿನಾಚರಣೆಯ ದಿನವಾದ ಇಂದು ಸ್ಮರಿಸಿ ನೆನೆಯುತ್ತಾ ಕಲಾದೇವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲೆಂದು ನಾನು ಸಮಸ್ತ ಎಲ್ಲಾ ಕನ್ನಡನಾಡಿನ ಸಜ್ಜನ ಅಭಿಮಾನಿಗಳ ಪರವಾಗಿ ಆ ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

# ಆಯುರ್ವೇದಕ್ಕೆ 'ಕಿವಿ' ಕೊಡೋಣ

ನವೀನನಿಗೆ ಹದಿನೆಂಟರ ಹರೆಯ. ಮನೆಯಂಗಳಕ್ಕೆ ಬೈಕ್ ಇಳಿದು ಓಡೋಡಿ ಬಂದ. ನಡಾಕ್ಷೇ ನನಗೆ ಕಿವಿ ಕೇಳ್ತಿಲ್ಲ ಕಿವಿಯೊಳಗೆ ಸದಾ ಕಾಲ ಸಾಗರದ ಅಲೆಗಳ ಭೋರ್ಗರೆತ. ಏನನ್ನೂ ಕೇಳಿಸಲಾಗದ ಸ್ಥಿತಿ. ಆಗ ತಾನೇ ಕೊರೊನಾಯುಗ ಕಳೆದಿತ್ತು. ಆಗ ಅಂಟಿದ ಒಂದು ಚಪಲ, ಅವನ ಎರಡೂ ಕಿವಿಗಳ ಶ್ರವಣಶಕ್ತಿಯನ್ನು ಕಸಿದುಕೊಂಡಿತ್ತು. ಸದಾ ಕಾಲ ಕಿವಿಗಳಿಗೆ



ಇಯರ್ ಫೋನ್, ಹೆಡ್ ಹಾಕಿ ಹಾಡುಗಳಿಗೋ, ಇನ್ನಿತರ ಸಂಗತಿಗೋ ಅಂಟಿಕೊಂಡ ಗೀಳು ನವೀನನ ನೂರ್ಕಾಲದ ಬದುಕಿಗೆ ಆಪತ್ತು ತಂದಿತ್ತು. ಆಯುರ್ವೇದದ ಒಂದು ಸಾದಾ ಮುನ್ನಚ್ಚರಿಕೆ. ಎಲ್ಲಾ ಇಂದ್ರಿಯಗಳಿಗೆ ಅನ್ವಯ. ಅತಿ, ಹೀನ, ಮಿಥ್ಯಾ ಮತ್ತು ಸಮ್ಯಗ್ಯೋಗ ಕಿವಿಗಳಿಗೆ ಕೇಳುವ ಇತಿ ಮಿತಿ ಇದೆ. ಅದು ಸಹದ್ದು ಮೀರಿದರೆ ಅತಿಯೋಗ, ಗಟ್ಟಿ ಮತ್ತು ಕಿವಿತಮಟೆಗೆ ಸಮೀಪದ ಹೆಡ್ ಫೋನ್ ಅತಿ ಬಳಕೆ ಮಿಥ್ಯಾಯೋಗ. ಸುಶ್ರುತರಿಗೆ ಅಂದೇ ಅಂತಹ ಕಾಯಿಲೆಯ ಅರಿವಿತ್ತು ಅದಕ್ಕೆ ಪ್ರಣಾದ' ಎಂಬ ಹೆಸರಿಟ್ಟರು. ಸುಶ್ರುತರ ಪ್ರಕಾರ ಕಿವಿಯ ಆರೋಗ್ಯಕ್ಕೆ ಮೃತಪಾನ ಮೊದಲ ಹೆಜ್ಜೆ. ತ್ರಿಫಲ ಧೃತಸೇವನೆಯಿಂದ ಅಂತಹ ಫಲ ಖಂಡಿತ. ರಸಾಯನ, ಅಂದರೆ ಚ್ಯವನಪ್ರಾಶ ಮುಂತಾದ ಲೇಹದ ಸೇವನೆಯಿಂದ ದೇಹಬಲ ಹೆಚ್ಚಳ. ಕರ್ಣಾರೋಗ್ಯ ಸಾಧಕ. ಬ್ರಹ್ಮಚರ್ಯದ ಎಚ್ಚರದ ನುಡಿಯೂ ಕಿವಿಯ ನೂರ್ಕಾಲ ಕೇಳುವಿಕೆಯ ಮೆಟ್ಟಲು. ಮಂಜು, ಮಳೆಹನಿ, ಬೀಸುಗಾಳಿಗೆ ಎದುರಾಗಿ ಜಾಗಿಂಗ್, ವಾಕಿಂಗ್ ಹೋಗುವ ಪರಿಪಾಠವು ಕಿವಿಕಾಯಿಲೆಗೆ ದಾರಿ ಎನ್ನುತ್ತದೆ, ಆಯುರ್ವೇದ. ಇಂಥಹ ಸಂದರ್ಭಗಳಲ್ಲಿ ಬೆಚ್ಚನೆಯ ಮುಚ್ಚುಟೋಪಿಯನ್ನು ಧರಿಸಬೇಕಾದೀತು. ಕಿವಿಯನ್ನು ಚುಚ್ಚಿ ಆಭರಣ ಹಾಕುವ ಕರ್ಣವೇಧನ ಸಂಸ್ಕಾರವು ಸುಶ್ರುತೋಕ್ತ. ಮಿದುಳಿನ ಕೆಲವು ನರನಾಡಿಗಳನ್ನು ಉದ್ದೀಪಿಸಿ ದೀರ್ಘಜೀವನ ಸಾಧಿಸುವ ಹಂತಗಳಿವು.

# ಇಂಗು ಐದಾರು
## ಆರೋಗ್ಯ ಸಮಸ್ಯೆಗಳಿಗೆ ಉಪಯುಕ್ತ

ಸಾಮಾನ್ಯವಾಗಿ ಒಗ್ಗರಣೆಯ ಸಮಯದಲ್ಲಿ ಚಿಟಿಕೆಯಷ್ಟು ಇಂಗನ್ನು ಬಳಸುತ್ತೇವೆ ಅದು ಬಿಟ್ಟರೆ ಉಪ್ಪಿನ ಕಾಯಿ ಹಾಕುವಾಗಲೂ ಇಂಗನ್ನು ತಪ್ಪದೇ ಹಾಕಲಾಗುತ್ತದೆ. ಇನ್ನು ನಮ್ಮ ಹಿರಿಯರು ಹೇಳುವ ಪ್ರಕಾರ ಅಡುಗೆಯಲ್ಲಿ ಇಂಗು ಇದ್ದರೆ ಗ್ಯಾಸ್ ಅಥವಾ ಹೂಸು ಹೋಗುವ ಸಮಸ್ಯೆ ಆಗುವುದಿಲ್ಲ ಎಂಬ ನಂಬಿಕೆ ಇದೆ. ಆದರೆ ಇದರ ಹೊರತಾಗಿ ಇನ್ನಷ್ಟು ಪ್ರಯೋಜನಗಳು ಇಂಗಿನಲ್ಲಿ ಕಂಡು ಬರುತ್ತವೆ.

ನಮ್ಮ ಹಿರಿಯರ ಕಾಲದಿಂದಲೂ ಕೂಡ ಬಳಸಿಕೊಂಡು ಬರಲಾಗುತ್ತಿರುವ ಸಾಂಪ್ರದಾಯಿಕ ಮಸಾಲ ಪದಾರ್ಥಗಳು ಆರೋಗ್ಯ ರಕ್ಷಣೆ, ಔಷಧೀಯ ಗುಣಗಳನ್ನು ಒಳಗೊಂಡಿರುವುದು ನಮಗೆಲ್ಲಾ ಗೊತ್ತೇ ಇದೆ.ಅವುಗಳಲ್ಲಿ ಇಂಗು ಸಹ ಔಷಧೀಯ ಮಸಾಲ ಪದಾರ್ಥಗಳಲ್ಲಿ ಒಂದು. ತನ್ನಲ್ಲಿ ಗಾಢವಾದ ಪರಿಮಳ ಹಾಗೂ ರುಚಿಯನ್ನು ಹೊಂದಿರುವ ಹಿಂಗು ಆಯುರ್ವೇದ ಔಷಧ ಪದ್ಧತಿಯಲ್ಲಿ ಕೂಡ ಒಳ್ಳೆಯ ಸ್ಥಾನಮಾನವಿದೆ. ಆರೋಗ್ಯ ಪಂಡಿತರು ಮನುಷ್ಯನ ಎಷ್ಟೋ ದೀರ್ಘಕಾಲದ ಸಮಸ್ಯೆಗಳಿಗೆ ತಾವು ತಯಾರು ಮಾಡುವ ಔಷಧಿಗ ಳಲ್ಲಿ ಹಿಂಗಿನ ಉಪಯೋಗದಿಂದ ಪರಿಹಾರಗಳನ್ನು ಕಂಡು ಹಿಡಿದಿದ್ದಾರೆ...






**ತನ್ನಲ್ಲಿ ಔಷಧಿಗಳ ಭಂಡಾರವನ್ನೇ ಒಳಗೊಂಡಿದೆ:** ಕೇವಲ ರುಚಿ ಮತ್ತು ಗ್ಯಾಸ್ಟ್ರಿಕ್ ಆಗದೇ ಇರುವುದು ಮಾತ್ರವೇ ಇಂಗಿನ ಪ್ರಯೋಜನಗಳಿಗೆ ಮೀಸಲಾಗಿಲ್ಲ, ಬದಲಿಗೆ ಇನ್ನೂ ಹಲವಾರು ಪ್ರಯೋಜನಗಳಿವೆ. ಇಂಗು ಬ್ಯಾಕ್ಟೀರಿಯಾ ನಿವಾರಕ, ಉರಿಯೂತ ನಿವಾರಕ, ವೈರಸ್ ನಿವಾರಕ ಗುಣ ಹೊಂದಿರುವ ಕಾರಣ, ಚಿಟಿಕೆಯಷ್ಟು ಇಂಗನ್ನು ತಮ್ಮ ದೈನಂದಿನ ಆಹಾರಪದ್ಧತಿಯಲ್ಲಿ ಸೇರಿಸಿಕೊಳ್ಳುವುದರಿಂದ, ಹೊಟ್ಟೆಗೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆಗಳಗಳನ್ನು ನಿವಾರಿಸಲು ನೆರವಾಗುತ್ತದೆ. ಅದರಲ್ಲೂ ಪ್ರಮುಖವಾಗಿ ಹೊಟ್ಟೆ ಉಬ್ಬರಿಕೆ, ಜೀರ್ಣಾಂಗಗಳಿಗೆ ಸಂಬಂಧ ಪಟ್ಟ ಸಮಸ್ಯೆಗಳ ನಿವಾರಣೆಗೆ, ಹೊಟ್ಟೆಯಲ್ಲಿ ಉರಿ, ಪದೇಪದೇ ಹೂಸು ಹೋಗುವ ಸಮಸ್ಯೆ ಮೊದಲಾದವನ್ನು ಇಲ್ಲವಾಗಿಸಲು ಇಂಗನ್ನು ಔಷಧಿಯ ರೂಪದಲ್ಲಿ ಬಳಸಲಾಗುತ್ತದೆ. ಬನ್ನಿ ಇಂದಿನ ಲೇಖನದಲ್ಲಿ ಇಂಗಿನಲ್ಲಿ ಏನೆಲ್ಲಾ ಆರೋಗ್ಯ ಪ್ರಯೋಜನಗಳು ಅಡಗಿವೆ ಎನ್ನುವುದನ್ನು ನೋಡುತ್ತಾ ಹೋಗೋಣ

**ಜೀರ್ಣಕ್ರಿಯೆ ಸಮಸ್ಯೆ ಇರುವವರಿಗೆ:** ಈಗಾಗಲೇ ನಾವು ಹೇಳಿದ ಹಾಗೆ ಇಂಗಿನಲ್ಲಿ ಕಂಡುಬರುವ ಔಷಧೀಯ ಗುಣಗಳು ಅಜೀರ್ಣ ಸಮಸ್ಯೆಗೆ ಬಹಳ ಪ್ರಯೋಜನಕಾರಿ. ಖಾಲಿ ಹೊಟ್ಟೆಗೆ ಒಂದು ಚಿಟಿಕೆಯಷ್ಟು ಇಂಗನ್ನು ನೀರಿಗೆ ಬೆರೆಸಿ ಕುಡಿಯುವುದರಿಂದ ಹೊಟ್ಟೆಗೆ ಸಂಬಂಧಿಸಿದ ಸಮಸ್ಯೆಗಳಿಂದ ಪರಿಹಾರ ಸಿಗುತ್ತದೆ. ಅಜೀರ್ಣ ಅಥವಾ ಜೀರ್ಣಾಂಗ ವ್ಯವಸ್ಥೆಗೆ ಸಂಬಂಧಿಸಿದ ಸಮಸ್ಯೆಗಳನ್ನು ನಿವಾರಣೆ ಮಾಡಲು,ವೈದ್ಯರ ಸಲಹೆಯ ಮೇರೆಗೆ ಇಂಗು ಸೇವಿಸಿ.

**ಬಿಪಿ ಸಮಸ್ಯೆ ಇರುವವರಿಗೆ:** ಇಂಗು ರಕ್ತ ಹೆಪ್ಪುಗಟ್ಟುವುದನ್ನು ತಡೆಯುತ್ತದೆ ಮತ್ತು ರಕ್ತ ಪರಿಚಲನೆ ಸುಧಾರಿಸುತ್ತದೆ. ಹೀಗಾಗಿ ಪ್ರತಿದಿನ ಬೆಳಗ್ಗೆ ಚಿಟಿಕೆಯಷ್ಟು ಇಂಗನ್ನು ನೀರಿಗೆ ಬೆರೆಸಿ ಕುಡಿಯುವುದರಿಂದ ರಕ್ತದೊತ್ತಡ ನಿಯಂತ್ರಿಸಲು ಸಹಾಯವಾಗು ತ್ತದೆ. ಹೀಗಾಗಿ ಯಾರಿಗೆ ರಕ್ತದ ಒತ್ತಡ ಸರಿಯಾದ ರೀತಿಯಲ್ಲಿ ನಿಯಂತ್ರಣಕ್ಕೆ ಬರುತ್ತಿಲ್ಲವೋ ಅಂತಹವರು ಹಿಂಗು ಬೆರೆಸಿದ ನೀರನ್ನು ಸೇವನೆ ಮಾಡುವ ಅಭ್ಯಾಸ ಇಟ್ಟುಕೊಂಡರೆ, ಈ ಸಮಸ್ಯೆಯಿಂದ ಸುಲಭವಾಗಿ ಪಾರಾಗ ಬಹುದು. **ತಲೆನೋವು ಸಮಸ್ಯೆ ಇದ್ದರೆ:** ಒಂದು ವೇಳೆ ಪದೇ ಪದೇ ತಲೆನೋವಿನಿಂದ ಬಳಲುತ್ತಿದ್ದರೆ ಪ್ರತಿ ದಿನ ಚಿಟಿಕೆಯಷ್ಟು ಹಿಂಗು ಸೇವನೆ ಮಾಡುತ್ತಾ ಬಂದರೆ ತಲೆ ನೋವಿನ ಸಮಸ್ಯೆಯಿಂದ ಶೀಘ್ರದಲ್ಲಿ ಮುಕ್ತಿ ಕಾಣಬಹುದು. ಇಂಗುವಿನಲ್ಲಿ ದೇಹದಲ್ಲಿ ಉಂಟಾಗಿರುವ ಉರಿಯೂತವನ್ನು ದೂರ ಮಾಡುವ ಆರೋಗ್ಯಕಾರ ಅಂಶಗಳು ಕಂಡುಬರುತ್ತದೆ.ಇನ್ನು ವಿಪರೀತ ತಲೆ ನೋವು ಇದ್ದವರು ಒಂದು ಗ್ಲಾಸ್ ಉಗುರು ಬೆಚ್ಚಗಿನ ನೀರಿಗೆ ಚಿಟಿಕೆಯಷ್ಟು ಇಂಗನ್ನು ಬೆರೆಸಿ ಕುಡಿಯುವ ಅಭ್ಯಾಸ ಮಾಡಿಕೊಂಡರೆ ಒಳ್ಳೆಯದು,. ಯಾವುದಕ್ಕೂ ಒಮ್ಮೆ ವೈದ್ಯರನ್ನು ಸಂಪರ್ಕಿಸಿದ ನಂತರ ಈ ಮನೆಮದ್ದು ಅನುಸರಿಸಿದರೆ ಒಳ್ಳೆಯದು.

**ಉಸಿರಾಟದ ಸಮಸ್ಯೆ ಇರುವವರಿಗೆ:** ಇನ್ನು ಇಂಗಿನ ಬಗ್ಗೆ ಇನ್ನಷ್ಟು ನೋಡುವುದಾದರೆ, ಮನುಷ್ಯನಿಗೆ ಕಾಡುವ ಉಸಿರಾಟಕ್ಕೆ ಸಂಬಂಧಿಸಿದ ತೊಂದರೆಗಳಾದ ಅಸ್ತಮಾ, ಸರಿಯಾಗಿ ಉಸಿರಾಡಲು ಆಗದಿರುವುದು, ಶ್ವಾಸಕೋಶದ ಸಮಸ್ಯೆ, ಮೂಗು ಕಟ್ಟುವುದು ಮೊದಲಾದ ತೊಂದರೆಗಳ ನಿವಾರಣೆಗೂ ಕೂಡ ಇಂಗು ನೆರವಿಗೆ ಬರುತ್ತದೆ.

# ಅಂಕಗಳ ಬೆನ್ನೇರಿ



☛ ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ


ಎಲ್ಲಾರೂ ನೂರಕ್ಕೆ ನೂರು ಅಂಕ ತೆಗೆದುಕೊಂಡ ಬಗ್ಗೆಯೇ ಮಾತಾಡುತ್ತಿದ್ದಾರೆ? ಅದು ಖಂಡಿತ ಸಾಧನೆಯೇ, ಜ್ಞಾನದಿಂದ ಬರೆದಿರಲಿ, ಕಂಠಪಾಠ ಮಾಡಿರಲಿ, ಎಲ್ಲಾದಕ್ಕೂ ಪ್ರಯತ್ನ ಅವಶ್ಯ.. ಮಕ್ಕಳಿಗೆಲ್ಲ ಶುಭಾಷಯಗಳನ್ನು ಹೇಳಲೇಬೇಕು. ಆದರೆ, ಪಾಲಕರಾಗಿ ನಾವಿಷ್ಟೇ ಮಾಡಿದರೆ ಸಾಕೇ..ನಾಗರೀಕರಾಗಿ ನಮ್ಮ ಶಿಕ್ಷಣ ವ್ಯವಸ್ಥೆಯನ್ನು ಆಗಾಗ ಓರೆಗೆ ಹಚ್ಚಿ ಪರೀಕ್ಷಿಸುವ ಜವಾಬ್ದಾರಿ ನಮ್ಮದಲ್ಲವೇ, ನಮ್ಮ ಶಿಕ್ಷಣ ಹೇಗಿದೆ ಅಂದರೆ ಬಿ.ಕಾಂ ಮಾಡಿದವನಿಗೆ ಚೆಕ್ ಬುಕ್ ಕೊಟ್ಟು ಪೇಮೆಂಟ್ ರೆಡಿ ಮಾಡು ಅಂದ್ರೆ, ಚೆಕ್ ಬರ್ಯೋಕೆ ಬರಲ್ಲ.



ಬ್ಯಾಂಕ್‌ಗೆ ಕಳಿಸಿ ಡಿಡಿ ತಗೊಂಬಾ ಅಂದ್ರೆ, ಡಿಡಿ ಫಾರಂ ಫಿಲಪ್ ಮಾಡೊಕೆ ಅಲ್ಲಿಗೆ ಬಂದಿರೊರ ಹೆಲ್ಪ ತಗೊತಾನೆ? ಇಂಡಸ್ಟ್ರಿಯಲ್ ಪ್ರೊಡಕ್ಶನ್ ಇಂಜಿನಿ ಯರ್ ಒಬ್ಬನಿಗೆ quote to cash process ಹೇಳೊ ಅಂದ್ರೆ, ಖರೀದಿ, ಬಟವಡೆ, ಮಾರಾಟ, ವಸೂಲಿ ಅಂತ ಮಾತು ಮುಗಿಸ್ತಾನೆ? ಬಿ.ಎಡ್ ಮಾಡಿ ಬಂದಿರೊ ವಿಜ್ಞಾನ ಶಿಕ್ಷಕ ಪೆಂಡೂಲಮ್ ತಯಾರಿಸಲು ಬೇಕಾದ ವಸ್ತುಗಳಿಗಾಗಿ ಪೇಟೆಗೆ ಹೊಗ್ತಾನೆ? ಮನೇಲಿ ಸುಟ್ಟ ಬಲ್ಬ ಚೇಂಜ್ ಮಾಡೊಕೂ ಯೂಟ್ಯೂಬ್ ವಿಡಿಯೋ ನೋಡೊ ಕಾಲ ಇದು. ಎಲ್ಲಿಯವರೆಗೆ ಸಾಮಾನ್ಯ ಜ್ಞಾನಕ್ಕೆ, ಜೀವನ ಕೌಶಲ್ಯಗಳಿಗೆ ಶಾಲೆಗಳಲ್ಲಿ ಜಾಗವಿಲ್ಲವೊ ಅಲ್ಲಿವರೆಗೆ ನೂರು ಬಂದರೂ ಅಷ್ಟೇ, ಸಾವಿರ ಬಂದರೂ ಅಷ್ಟೇ.

ನನ್ನ ಪ್ರಕಾರ ನಿಮ್ಮ ಮಕ್ಕಳು ಹತ್ತನೇ ತರಗತಿ ತೇರ್ಗಡೆಯಾಗುವುದರೊಳಗೆ ಈ ಕೆಳಗಿನ ಕೆಲಸ ಮಾಡಲು ಬರುತ್ತಾ ಅಂತ ಪಾಲಕರು ಖಚಿತಪಡಿಸಿಕೊಳ್ಳಲೇಬೇಕು ಹೆಣ್ಣು -ಗಂಡು ಬೇಧವಿಲ್ಲದೇ, ಅವರವರ ಶೂ, ಬಟ್ಟೆಯನ್ನು ಅವರೇ ಕೈಯಲ್ಲಿ ಒಗೆದು, ಒಣಗಿಸಿ, ಇಸ್ತ್ರಿ ಮಾಡಿಟ್ಟುಕೊಳ್ತಾರಾ.. ವಾಶಿಂಗ್ ಮಶೀನ್ (ಇದ್ದರೆ) ಉಪಯೊಗಿಸೊಕೆ ಬರುತ್ತಾ?

- **ಮನೆಯಲ್ಲಿ ಒಂದೆರಡು ದಿನ ಒಬ್ಬರನ್ನೇ ಬಿಟ್ಟು ಹೋದರೆ (ಸುರಕ್ಷತಾ ವಿಷಯ ಹೊರತಾಗಿ) ತನಗೆ ಬೇಕಾದ ಅನ್ನ, ಸಾರು, ಮೊಸರು (ಹಾಲು ಹೆಪ್ಪಾಕಿ) ಮಾಡಿಕೊಳ್ತಾರಾ? (ಪಾರ್ಸಲ್ ತಂದ್ಕೊಂಡು ತಿನ್ನೊದಲ್ಲ).. ಕುಕರ್ ಕೂಗ್ಸೊಕೆ, ಮಿಕ್ಸರ್ ನಲ್ಲಿ ರುಬ್ಬೊಕೆ ಬರುತ್ತಾ? ಪಾತ್ರೆ ತೊಳೆದು ತೆಗೆದಿಡ್ತಾರಾ?**
- **ಕಸ ಗುಡಿಸೊದು, ನೆಲ ಒರೆಸೊದು, ವ್ಯಾಕ್ಯೂಮ್ ಕ್ಲೀನರ್ (ಇದ್ದರೆ) ಉಪಯೋಗಿಸೋದು ಮಾಡಲು ಬರುತ್ತಾ?**
- **ಮನೇಲಿ ಬಲ್ಬ ಚೇಂಜ್, ಹ್ಯಾಂಡ್ ಶವರ್ ಚೇಂಜ್, ಸಣ್ಣಗೆ ಲೀಕಾಗ್ತಿರೊ ನೀರಿನ ಪೈಪ್ ಸೀಲ್, ಗಡಿಯಾರದ ಸೆಲ್ ಚೇಂಜ್, ಮುಂತಾದ ಸಣ್ಣ ಪುಟ್ಟ ರಿಪೇರಿ ಕೆಲಸ ಮಾಡೊಕೆ ಬರುತ್ತಾ?**
- **ದೂರ ಪ್ರಯಾಣ ಹೊರಡುವಾಗ ತಮಗೆ ಬೇಕಾದ ಎಲ್ಲಾ ಸಾಮಾನು ಸರಂಜಾಮಿನೊಂದಿಗೆ, ಬಟ್ಟೆ ಬರೆಗಳೊಂದಿಗೆ ತನ್ನ ಬ್ಯಾಗ್ ನ ತಾವೇ ಪ್ಯಾಕ್ ಮಾಡ್ಕೊತಾರಾ?**
- **ಲಿಸ್ಟ ಮಾಡಿ ಕೊಟ್ರೆ ಅಂಗಡಿಗೆ ಹೊಗಿ ದಿನಸಿ, ಹಣ್ಣು ಹಂಪಲು, ಸೊಪ್ಪು ತರಕಾರಿ ತರೊಕೆ ಗೊತ್ತಾ? ಆ ಕೆಲ್ಸಾನಾ ಎಷ್ಟು ದಕ್ಷತೆಯಿಂದ ಮಾಡ್ತಾರೆ?**
- **ಬ್ಯಾಂಕ್ ಸೊಸೈಟಿಗೆ ಹೊಗಿ ಹಣ ಡ್ರಾ ಮಾಡೊದು, ನೆಫ್ಟ ಮಾಡೊದು, ಡಿಡಿ ತರೊದು, ಮಾಡ್ತಾರಾ? ಮುಖ್ಯವಾಗಿ ಹಣಕಾಸು ಸಂಬಂಧಿ ಆಪ್ ಗಳ ಬಗ್ಗೆ ತಾಂತ್ರಿಕ ಜ್ಞಾನ ಎಷ್ಟಿದೆ?**
- **ತಿಂಗಳಿಗೆ ಮನೆಯ ಖರ್ಚು ವೆಚ್ಚಗಳ ಅಂದಾಜಿದೆಯಾ (ದಿನಸಿ, ಹಾಲು, ಕರೆಂಟ್ ಬಿಲ್, ಶಾಲಾ ಫೀ, ಪೆಟ್ರೊಲ್ ವೆಚ್ಚ ಇತ್ಯಾದಿ ಎಲ್ಲವೂ).. ಮನೆಯಲ್ಲಿ ಉಪಯೊಗಿಸುವ ಅವಶ್ಯಕ ವಸ್ತುಗಳ, ಮಶೀನುಗಳ ಬೆಲೆಯ ಅಂದಾಜಿದೆಯೇ?**
- **ಸರಕಾರಿ ಅರ್ಜಿ ತುಂಬೊದು, ಅರ್ಜಿ ಬರೆಯೊದು, ತಕ್ಕಮಟ್ಟಿಗೆ ವ್ಯವಹರಿಸೊದು ಗೊತ್ತಾ?**
- **ಮನೆಯ ಎಲ್ಲರ ಗುರುತಿನ ಚೀಟಿಗಳು, ವಿಮಾ ಪಾಲಿಸಿ, ಆಸ್ತಿ, ಬ್ಯಾಂಕ್ ಎಕೌಂಟ್ ಗಳ ವಿವರ ಎಲ್ಲಿದೆ ಅಂತ ಗೊತ್ತಿದೆಯಾ? ಅದನ್ನ ಓದಿ / ನೊಡಿ ಅರ್ಥೈಸಲು ತಿಳಿದಿದೆಯಾ? (ಮುಖ್ಯವಾಗಿ ಒಂದೇ ಮಗುವಾಗಿದ್ದರೆ..)**



ಇದರಲ್ಲಿ ಏನೇನು ಗೊತ್ತಿಲ್ಲವೊ ಅದನ್ನ ಕಲಿಸಿ, ಗೊತ್ತಿದ್ದರೆ ಎಷ್ಟು ನಿಪುಣರೊ ನೋಡಿ. ಇದರ ಆಧಾರದ ಮೇಲೆ ನೀವೇ ಒಂದು ಅಂಕ ಪಟ್ಟಿ ತಯಾರಿಸಿ ನೋಡಿಕೊಳ್ಳಿ, ಹಾಗೇ ಪಡೆದ ಅಂಕಗಳು ಮಕ್ಕಳದ್ದಲ್ಲ.. ನಿಮ್ಮದು, ಪಾಲಕರಾಗಿ ನೀವೇನು ಮಾಡಿದ್ದೀರಾ ಅನ್ನೊದಕ್ಕೆ ಪ್ರಮಾಣ. ಈಗ ಈ ಮೇಲಿನ ಕೆಲಸಗಳಿಗೆ ಸಿಕ್ಕ ಅಂಕಗಳನ್ನು, ನಿಮ್ಮ ಮಗು ಪಡೆದ ಶಾಲಾ ಅಂಕಕ್ಕೆ ಸೇರಿಸಿ ಶೇಕಡಾವಾರು ತೆಗೆದು ನೊಡಿ,ಆ ಶೇಕಡಾವಾರು ಅಂಕ ನಿಮ್ಮ ಮಗುವಿನದು. ನಿಮ್ಮ ಮಗು ಬದುಕಿನಲ್ಲಿ ಎಷ್ಟರಮಟ್ಟಿಗೆ ಯಶಸ್ಸುಗಳಿಸುತ್ತದೆ, ನೆಮ್ಮದಿಯಿಂದ ಬದುಕುತ್ತದೆ ಎಂಬುದನ್ನು ಸೂಚ್ಯವಾಗಿ ತಿಳಿಸುವ ದಿಕ್ಸೂಚಿ.

ಕೆಡಿಪಿಯಲ್ಲಿ ವರದಿ ಮಂಡಿಸಿರುವ ಇಲಾಖೆಗಳ ಆರ್ಥಿಕ ಮತ್ತು ಭೌತಿಕ ಪ್ರಗತಿಯಲ್ಲಿ ಸಾಧನೆ ಆಗಿರುವುದು ತೃಪ್ತಿ ತಂದಿದೆ

# ಯೋಜನೆಗಳ ಜಾರಿಗೆ ಸಿದ್ಧತೆ ಆರಂಭಿಸಿ: ಸಚಿವ ಸಂತೋಷ ಎಸ್.ಲಾಡ್


• ಉದಯವಾಹಿನಿ ಧಾರವಾಡ

ಕಳೆದ ಮೂರು ಕೆಡಿಪಿ ತ್ರೈಮಾಸಿಕ ಸಭೆಗಳಿಗೆ ಹೋಲಿಸಿದರೆ ಈ ವರ್ಷದ ಕೊನೆಯ ಕೆಡಿಪಿಯಲ್ಲಿ ವರದಿ ಮಂಡಿಸಿರುವ ಇಲಾಖೆಗಳ ಆರ್ಥಿಕ ಮತ್ತು ಭೌತಿಕ ಪ್ರಗತಿಯಲ್ಲಿ ಸಾಧನೆ ಆಗಿರುವುದು ತೃಪ್ತಿ ತಂದಿದೆ ಎಂದು ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಅವರು ಹೇಳಿದರು. ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ 2024-25 ನೇ ಸಾಲಿನ ಮಾರ್ಚ್-2025ರ ಅಂತ್ಯಕ್ಕೆ ಕೊನೆಗೊಂಡ 4ನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಇಂದಿನ ಸಭೆಯಲ್ಲಿ ಇಲಾಖಾವಾರು ಅನುದಾನ ಬಿಡುಗಡೆ ಬಳಕೆ ಮತ್ತು ಭೌತಿಕ ಗುರಿ ಸಾಧನೆಯನ್ನು ಪರಿಶೀಲಿಸಲಾಯಿತು. ಇದನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಪ್ರಸಕ್ತ ವರ್ಷದ ಕ್ರಿಯಾ ಯೋಜನೆಯನ್ನು ಈಗಿನಿಂದಲೇ ಪರಿಶೀಲಿಸಿ, ಅನುಮೋದಿಸಲು ಸಂಬಂಧಿಸಿದ ಇಲಾಖೆ ಮುಖ್ಯಸ್ಥರಿಗೆ ಸೂಚನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಮಳೆಗಾಲ ಆರಂಭವಾಗುವದರಿಂದ ಸಾಂಕ್ರಾಮಿಕ ರೋಗ, ಕುಡಿಯುವ ನೀರಿನ ಸ್ವಚ್ಛತೆ ಬಗ್ಗೆ ಆರೋಗ್ಯ ಇಲಾಖೆ ಮುಂಜಾಗ್ರತೆವಹಿಸಬೇಕು. ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ತಕ್ಷಣ ಪರಿಹರಿಸಬೇಕು ಎಂದು ತಾಲ್ಲೂಕು ಪಂಚಾಯತ ಇಓ ಅವರಿಗೆ ಸಚಿವರು ಆದೇಶಿಸಿದರು.

ಕೃಷಿ, ಮೀನುಗಾರಿಕೆ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಉತ್ತಮವಾಗಿ ಸರಕಾರಿ ಯೋಜನೆಗಳನ್ನು ಜಾರಿಗೊಳಿಸಿದ್ದು, ಅವುಗಳಿಗೆ ಹೆಚ್ಚು ಪ್ರಚಾರ ನೀಡುವ ಮೂಲಕ ರೈತರಿಗೆ ಪರಿಚಯಿಸಬೇಕು ಎಂದು ಹೇಳಿದರು. ಸಭೆಯಲ್ಲಿ ಶಾಸಕಾರದ ಎನ್.ಎಚ್.ಕೋನರಡ್ಡಿ, ಮಹೇಶ ಟೆಂಗಿನಕಾಯಿ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ, ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕಿ ವೈಶಾಲಿ, ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ ಸೇರಿದಂತೆ ಇತರರು ಮಾತನಾಡಿದರು. ಸಭೆಯಲ್ಲಿ ಸಚಿವರು, ಕೃಷಿ, ತೋಟಗಾರಿಕೆ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ, ಲೋಕೋಪಯೋಗಿ, ಹೆಸ್ಕಾಂ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ, ಆರೋಗ್ಯ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಮಾಡಿ, ಅಧಿಕಾರಿಗಳಿಂದ ವರದಿ ಪಡೆದರು.


ಉದಯವಾಹಿನಿ ಚಿತ್ರ

**ಕೆಡಿಪಿ ಪ್ರಗತಿ ಪರಿಶೀಲನಾ ಸಭೆ**

> ನರೇಗಾ ಯೋಜನೆ ಉತ್ತಮವಾಗಿ ಅನುಷ್ಠಾನಗೊಳಿಸಬೇಕು. ಕೃಷಿ, ಪಂಚಾಯತ ರಾಜ್, ತೋಟಗಾರಿಕೆ, ಅರಣ್ಯ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ಜರುಗಿಸಿ, ಮಾನವ ದಿನಗಳ ಗರಿಷ್ಠ ಬಳಕೆ ಹಾಗೂ ಹೆಚ್ಚು ಅನುದಾನ ಬಳಕೆಗೆ ಕ್ರಮವಹಿಸಲಾಗುವುದು. ಹೊಸ ವಿಚಾರಗಳೊಂದಿಗೆ ಅಧಿಕಾರಿಗಳು ಭಾಗವಹಿಸಬೇಕೆಕು
> -ಸಂತೋಷ ಲಾಡ್, ಸಚಿವ

ತಹಶೀಲ್ದಾರ ಮಜ್ಜಗಿ ಅವರಿಗೆ ಸನ್ಮಾನ: 2023 ನೇ ಸಾಲಿನ ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಬಾಜನರಾಗಿ ಪ್ರಶಸ್ತಿ ಪುರಸ್ಕೃತರಾದ ಹುಬ್ಬಳ್ಳಿ ತಹಶೀಲ್ದಾರ ಜೆ.ಬಿ.ಮಜ್ಜಗಿ ಅವರನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಅವರು ಕೆಡಿಪಿ ಸಭೆ ಆರಂಭದ ಪೂರ್ವದಲ್ಲಿ ಸನ್ಮಾನಿಸಿ, ಗೌರವಿಸಿದರು.

**ಗ್ರಂಥಾಲಯಗಳಿಗೆ ಕಂಪ್ಯೂಟರ್ ವಿತರಣೆ:** ಜಿಲ್ಲಾ ಪಂಚಾಯತಿಯಿಂದ ಅರಿವು ಯೋಜನೆಯಡಿ ಜಿಲ್ಲೆಯ 84 ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಕಂಪ್ಯೂಟರ್‌ಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಇಂದು ಬೆಳಿಗ್ಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ವಿತರಿಸಿದರು. ಸಭೆಯಲ್ಲಿ ಜಿಲ್ಲಾ ಕೆಡಿಪಿ ಸಭೆಯ ನಾಮ ನಿರ್ದೇಶಿತ ಸದಸ್ಯರು, ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು. ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಬಿ.ಎಸ್. ಮೂಗನೂರಮಠ ಸ್ವಾಗತಿಸಿ, ಸಭೆ ನಿರ್ವಹಿಸಿದರು. ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ ವಂದಿಸಿದರು.

### ಗೈರಾದ ಅಧಿಕಾರಿ ಅಮಾನತ್ತು

ಸಣ್ಣ ನೀರಾವರಿ ಇಲಾಖೆ ಕಾರ್ಯಪಾಲಕ ಅಭಿಯಂತರ ದೇವರಾಜ ಶಿಗ್ಗಾಂವಿ ಅವರು ಅನುಮತಿ ಪಡೆಯದೆ ಇಂದಿನ ಕೆಡಿಪಿ ಸಭೆಗೆ ಗೈರಾಗಿದ್ದರು ಮತ್ತು ಅವರ ಇಲಾಖೆಯ ಪ್ರಗತಿ ತೃಪ್ತಿಕರವಾಗಿರಲಿಲ್ಲ ಎಂದು ತಿಳಿದು ಜಿಲ್ಲಾ ಉಸ್ತುವಾರಿ ಸಚಿವರು ಅಮಾನತ್ತುಗೊಳಿಸಿ, ಶಿಸ್ತುಕ್ರಮ ಜರುಗಿಸಲು ಸಭೆಯಲ್ಲಿ ಆದೇಶಿಸಿದರು.

## ವಿಶ್ವಗುರು ಬಸವಣ್ಣನವರ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸೋಣ

• ಉದಯವಾಹಿನಿ ಬೀದರ

ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಜಯಂತಿಯನ್ನು ಏ.30 ರಂದು ಜಿಲ್ಲೆಯಲ್ಲಿ ಅತ್ಯಂತ ವಿಜೃಂಭಣೆಯಿಂದ ಆಚರಿಸೋಣ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ತಿಳಿಸಿದರು. ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏ.30 ರಂದು ನಡೆಯುವ ಬಸವ ಜಯಂತಿ ಆಚರಣೆ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಏಪ್ರಿಲ್.30 ರಂದು ಬೆಳಿಗ್ಗೆ 8: 30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ಬಸವೇಶ್ವರ ವೃತ್ತದಲ್ಲಿರುವ ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮತ್ತು ಪೂಜೆ ಸಲ್ಲಿಸಲಾಗುವುದು. ನಂತರ ಮೆರವಣಿಗೆಗೆ ನಡೆಯಲಿದೆ ಮತ್ತು ಸಂಜೆ ವೇದಿಕೆ ಕಾರ್ಯಕ್ರಮ ನಡೆಯಲಿದೆ ಹಾಗೂ ಡಿಜೆ ಬಳಕೆಗೆ ಸಂಬಂಧಿಸಿದಂತೆ ಪೋಲಿಸ್ ಇಲಾಖೆಯಿಂದ ಅನುಮತಿ ಪಡೆಯಬೇಕು ಅಂದು ಎಲ್ಲಾ ಸರ್ಕಾರಿ ಮತ್ತು ಅರೆ ಸರ್ಕಾರಿ ಕಛೇರಿ, ಶಾಲಾ-ಕಾಲೇಜುಗಳಲ್ಲಿ ಬಸವಣ್ಣನವರ ಭಾವ ಚಿತ್ರಕ್ಕೆ ಕಡ್ಡಾಯವಾಗಿ ಪೂಜೆ ಸಲ್ಲಿಸಬೇಕೆಂದರು. ಪೋಲಿಸ್ ಇಲಾಖೆ ವತಿಯಿಂದ ಬಂದೋಬಸ್ತ್ ನೀಡಲಾಗುವುದು ಎಂದು ತಿಳಿಸಿದರು.

ಬಸವ ಜಯಂತಿ ಉತ್ಸವ ಸಮಿತಿ ಅಧ್ಯಕ್ಷರಾದ ಜೈರಾಜ್ ಖಂಡ್ರೆ ಅವರು ಮಾತನಾಡಿ, ನಾವು ಬಸವ ಜಯಂತಿಯನ್ನು ಏಪ್ರಿಲ್ 28,29 ಮತ್ತು 30 ರವರೆಗೆ ಆಚರಿಸಲು ನಿರ್ಧಾರ ಕೈಗೊಳ್ಳಲಾಗಿದೆ, ಏ.28 ರಂದು ಬೆಳಿಗ್ಗೆ ಗುಂಪಾದಿಂದ ಪಾಪನಾಶದವರೆಗೆ ಬೈಕ್ ರ್ಯಾಲಿ ನಡೆಯಲಿದೆ ಹಾಗೂ ಸಂಜೆ 6 ಗಂಟೆಗೆ ಬಸವ ಜಯಂತಿ ಉತ್ಸವ ಉದ್ಘಾಟನಾ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಚಾಲನೆ ನೀಡಲಿದ್ದಾರೆ. ಏ.29ಕ್ಕೆ ರಂಗಮಂದಿರದಲ್ಲಿ ವಚನ ಸಂಗೀತ ಕಾರ್ಯಕ್ರಮ, ಬಸವಾದಿ ಶರಣರ ವೇಷಭೂಷಣ ಮತ್ತು ನಾಟಕ ಕಾರ್ಯಕ್ರಮಗಳು ನಡೆಯಲಿವೆ ಮತ್ತು ಏ.30 ರಂದು ಸಂಜೆ 6 ಗಂಟೆಗೆ ಬಸವೇಶ್ವರ ವೃತ್ತದಲ್ಲಿ ಜಿಲ್ಲಾಧಿಕಾರಿಗಳು ವಚನ ಬೋಧಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಬೇಕು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

> ಬೀದರ ಜಿಲ್ಲೆಗೆ ಬಾಗಲಕೋಟೆ ಜಿಲ್ಲೆಯಿಂದ ಅನುಭವ ಮಂಟಪ ಬಸವಾದಿ ಶರಣರ ವೈಭವ ಕಾರ್ಯಕ್ರಮದ ರಥಯಾತ್ರೆ ಇದೇ ಏ. 23 ರಂದು ಜಿಲ್ಲೆಗೆ ಬರಲಿದ್ದು, ಏ.24ಕ್ಕೆ ಬೆಳಿಗ್ಗೆ 9:30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ರಥಯಾತ್ರೆಗೆ ಪೂಜೆ ಸಲ್ಲಿಸಲಾಗುವುದು -ಸಿದ್ರಾಮ ಸಿಂಧೆ
> ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ

## ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆ

• ಉದಯವಾಹಿನಿ ಗದಗ

ಜಿಲ್ಲೆಯಲ್ಲಿ ಕುಡಿಯುವ ನೀರು ಸರಬರಾಜು ಸಮರ್ಪಕ ನಿರ್ವಹಣೆಗೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರು, ಜಾನುವಾರು ಮೇವಿನ ಸ್ಥಿತಿಗತಿಯ ಸಮರ್ಪಕವಾಗಿ ಯಾವುದೇ ತೊಂದರೆಯಾಗದಂತೆ ನಿರ್ವಹಿಸಬೇಕು. ಕುಡಿಯುವ ನೀರು, ಮೇವಿನ ಸ್ಥಿತಿಗತಿ ಸಂಬಂಧಿಸಿದಂತೆ ಯಾವುದೇ ದೂರುಗಳಿಗೆ ಆಸ್ಪದ ನೀಡದಂತೆ ಕಾರ್ಯ ನಿರ್ವಹಿಸಬೇಕು.

ಒಂದು ವೇಳೆ ನೀರಿನ ಸಮಸ್ಯೆಯು ಉದ್ಭವಿಸಿದರೆ ಮುಂಜಾಗ್ರತೆಯಾಗಿ ಖಾಸಗಿ ಬೋರ್‌ವೆಲ್‌ಗಳ ಮೂಲಕ ನೀರು ಸರಬರಾಜು ಮಾಡಲು ಅಂತಹ ಬೋರ್‌ವೆಲ್‌ಗಳ ಸುಸ್ಥಿತಿಯಲ್ಲಿವೆಯೋ ಹೇಗೆ ಎಂಬುದರ ಕುರಿತು ಪರಿಶೀಲಿಸಬೇಕು. ಪ್ರಸಕ್ತ ಪೂರ್ವ ಮುಂಗಾರು ಮಳೆ ಉತ್ತಮವಾಗಿ ಶುರುವಾಗಿದ್ದು ಮುಂಗಾರು ಮಳೆಯೂ ಕೂಡ ಉತ್ತಮವಾಗುವ ನಿರೀಕ್ಷೆಯಿದೆ ಎಂದರು.


ಉದಯವಾಹಿನಿ ಚಿತ್ರ

ರೋಣ ಮತ್ತು ನರಗುಂದ ತಾಲ್ಲೂಕಿನ ಬಹುಗ್ರಾಮ ಕುಡಿಯುವ ನೀರಿನ ಕೆರೆಗಳಿಗೆ ನವಿಲುತೀರ್ಥ ಜಲಾಶಯದಿಂದ ನೀರು ಬಿಡುಗಡೆ ಮಾಡುವ ಕುರಿತು ಚರ್ಚೆ ನಡೆಸಿದ ನಂತರ ಮಾತನಾಡಿದ ಜಿಲ್ಲಾಧಿಕಾರಿಗಳು ಅನಗತ್ಯವಾಗಿ ನೀರು ಪೋಲಾಗದಂತೆ ಅದನ್ನು ಮರು ಬಳಕೆ ಮಾಡುವ ಕುರಿತು ಯೋಚಿಸಿ ನೀರಿನ ಸಂಪನ್ಮೂಲಗಳ ಸಮರ್ಪಕ ಬಳಕೆಯಾಗುವಂತೆ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನಿರ್ದೇಶನ ನೀಡಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಭರತ್ ಎಸ್ ಅವರು ಮಾತನಾಡಿ ಎಲ್ಲಾ ನೀರಿನ ಮೂಲಗಳಲ್ಲಿ ನೀರು ಕುಡಿಯಲು ಯೋಗ್ಯ ಎಂಬುದರ ಕುರಿತು ಪರೀಕ್ಷೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

## ಒಳ ಮೀಸಲಾತಿ ಜಾರಿಗೆ ಆಗ್ರಹ

• ಉದಯವಾಹಿನಿ ಸವದತ್ತಿ

ಮಾದಿಗ ಸಮಾಜಕ್ಕೆ ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ರಾಜ್ಯವ್ಯಾಪಿ ಸಂಚರಿಸಿದ ಕ್ರಾಂತಿಕಾರಿ ಜಾಥಾ ಪಟ್ಟಣಕ್ಕೆ ಬುಧವಾರ ಆಗಮಿಸಿತು.

ಜಾಥಾವನ್ನು ಸ್ವಾಗತಿಸಿದ ಮಾದಿಗ ಸಮಾಜದ ಪ್ರಮುಖರು ಶಿವಾಜಿ ವೃತ್ತ, ಬಸವೇಶ್ವರ ವೃತ್ತ ಮತ್ತು ರಾಯಣ್ಣ ವೃತ್ತಗಳಲ್ಲಿ ಪ್ರತಿಮೆಗಳಿಗೆ ಮಾಲಾರ್ಪಣೆ ಸಲ್ಲಿಸಿ, ತಮಟೆ ಬಾರಿಸುತ್ತ ಬೈಕ್ ರ್ಯಾಲಿ ನಡೆಸಿದರು.

ಡಿಎಸ್‌ಎಸ್ ಪ್ರಮುಖ ಬಿ.ಆರ್. ಭಾಸ್ಕರ್ ಪ್ರಸಾದ ಮಾತನಾಡಿ, 'ಸಮಾಜ ಸಂಘಟಿಸುವ ಜೊತೆಗೆ ಮಾದಿಗರಿಗೆ ಒಳ ಮೀಸಲಾತಿ ಜಾರಿಗಾಗಿ ಕ್ರಾಂತಿಕಾರಿ ಜಾಥಾ ರಾಜ್ಯಾದ್ಯಂತ ಸಂಚರಿಸುತ್ತಿದೆ. ಜೂನ್ 9ರಂದು ಬೆಂಗಳೂರು ತಲುಪಿ ಬೃಹತ್ ಸಮಾವೇಶ ಜರುಗಲಿದೆ. ಸಮಾವೇಶದೊಳಗಾಗಿ ಮೀಸಲಾತಿ ಕುರಿತು ಸರ್ಕಾರ ಕ್ರಮವಹಿಸಬೇಕು.

ಸರ್ಕಾರಿ ಹುದ್ದೆ ಭರ್ತಿ ಹಾಗೂ ಬಡ್ತಿಯನ್ನು ಒಳಮೀಸಲಾತಿ ಜಾರಿಯ ನಂತರವೇ ಮಾಡುವುದಾಗಿ ತಿಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತಿಗೆ ತಪ್ಪಿದ್ದಾರೆ ಎಂದು ಆರೋಪಿಸಿದರು. ಅಧಿಕಾರಿಗಳು ಮತ್ತು ರಾಜಕಾರಣಿಗಳು ಸೇರಿ ಸಮಾಜಕ್ಕೆ ಮೋಸ ಮಾಡುತ್ತಿದ್ದಾರೆ. ಜಾತಿ ಸಮೀಕ್ಷೆಗಾಗಿ ರಚಿಸಲಾದ ಸಮನ್ವಯ ಸಮಿತಿಯಲ್ಲಿ ಮಾದಿಗರಿಗೆ ಅವಕಾಶವನ್ನೇ ನೀಡಿಲ್ಲ. ಸಮಾಜದ ಪ್ರತಿನಿಧಿ ಇಲ್ಲದೇ ನಮ್ಮ ಅಳಲನ್ನು ಹೇಳುವದಾದರೂ ಹೇಗೆ? ಕೂಡಲೇ ಸಮಾಜದಿಂದ ಪ್ರತಿನಿಧಿಯನ್ನು ಸಮಿತಿಗೆ ಆಯ್ಕೆ ಮಾಡಿ ಸಮೀಕ್ಷೆ ಮುಂದುವರೆಸಿರಿ. ಸಮೀಕ್ಷೆ ನಡೆಸುತ್ತಲೇ ಕಾಲಹರಣ ಮಾಡದೇ, ಶೀಘ್ರ ವರದಿ ಜಾರಿ ಮಾಡಬೇಕು' ಎಂದು ಆಗ್ರಹಿಸಿದರು.

ಎಂ. ಮಲ್ಲಪ್ಪ, ವೈ.ವೈ, ಕಾಳಪ್ಪನವರ, ಪ್ರಕಾಶ ಹಾಸಟ್ಟಿ, ಎಂ.ಎ. ಬಡ್ಡಿ, ರಾಜು ದೊಡ್ಡಮನಿ, ಸಂತೋಸ ಮಾದರ. ಎಸ್.ಎಸ್. ಕಾಳಪ್ಪನವರ, ಕೃಷ್ಣಾ ಮಲ್ಲೂರ, ಶಿವಾನಂದ ಮಾದರ, ಅಪ್ಪು ಕಾಳಪ್ಪನವರ, ಮುತ್ತು ಮಾದರ, ಕಳಸಪ್ಪ ಮಾದರ, ಗದಿಗೆಪ್ಪ ದೊಡಮನಿ, ಯಲ್ಲಪ್ಪ ಕುಲಮನಟ್ಟಿ ಇದ್ದರು.


ಉದಯವಾಹಿನಿ ಚಿತ್ರ

## ಶಾಂತಿ ಮತ್ತು ನೆಮ್ಮದಿ ಬದುಕಿಗೆ ಧರ್ಮಾಚರಣೆ ಮುಖ್ಯ

• ಉದಯವಾಹಿನಿ ವಿಜಯಪುರ

ಗುಡ್ಡಾಪುರದ ಶಾಂತವೀರೇಶ್ವರ ಸಂಸ್ಥಾನ ಹಿರೇಮಠವು ಐತಿಹಾಸಿಕ, ಧಾರ್ಮಿಕ, ಸಾಮಾಜಿಕ ಪರಂಪರೆಯ ಮಠವಾಗಿದ್ದು, ಇವತ್ತು ಈ ಮಠದ ಇತಿಹಾಸದಲ್ಲಿ ಸುವರ್ಣಾಕ್ಷರಗಳಲ್ಲಿ ಬರೆದಿಡುವ ದಿನವಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರ ಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಜತ್ತ ತಾಲೂಕಿನ ಸುಕ್ಷೇತ್ರ ಗುಡ್ಡಾಪುರದಲ್ಲಿ ಶಾಂತವೀರ ಶಿವಾಚಾರ್ಯ ಹಿರೇಮಠದ ನೂತನ ಮಠದ ಶಿಲಾನ್ಯಾಸ ಮತ್ತು ಭೂಮಿಪೂಜೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಜಗದ್ಗುರು ರೇಣುಕಾಚಾರ್ಯರಿಂದ ಅಗಸ್ತ್ಯ ಮಹರ್ಷಿಗಳು, ಶ್ರೀಶೈಲದ ಜಗದ್ಗುರು ಚಂದ್ರಗುಂಡ ಶಿವಾಚಾರ್ಯರಿಂದ ಭಕ್ತಿ ಭಂಡಾರಿ ಬಸವಣ್ಣನವರು, ಕೂಡಲಸಂಗಮದ ಸಾರಂಗಮಠದ ಜಾತವೇದ ಮುನಿ ಶಿವಾಚಾರ್ಯರಿಂದ ಕಡಕೋಳದ ಮಡಿವಾಳಪ್ಪನವರು, ಚಿನಮಗೇರಿ ಮಹಾಂತಲಿಂಗ ಶಿವಾಚಾರ್ಯರು, ಕಲಕೇರಿ ಮರುಳಸಿದ್ದರಿಂದ ಕಲಬುರ್ಗಿ ಶರಣಬಸವೇಶ್ವರರು, ಉಡುತಡಿಯ ಗುರುಲಿಂಗ ಶಿವಾಚಾರ್ಯರಿಂದ ಹುಬ್ಬಳ್ಳಿಯ ಸಿದ್ಧಾರೂಢರು ದೇವರ ಭೂಪುರದ ಗಜದಂಡ ಶಿವಾಚಾರ್ಯರು ಇವರೆಲ್ಲರ ಜೀವನ ಉಜ್ವಲಗೊಂಡಿರುವದು ಇತಿಹಾಸ ಪ್ರಸಿದ್ಧ. ಅದರಂತೆಯೇ ಗುಡ್ಡಾಪುರದ ದಾನಮ್ಮದೇವಿ ಶ್ರೀಗುರು ಶಾಂತವೀರ ಶಿವಾಚಾರ್ಯರಿಂದ ಅನುಗ್ರಹಿತರಾಗಿ ಲೋಕಕ್ಕೆ ಆಧ್ಯಾತ್ಮಿಕ ಬೆಳಗನ್ನು ಬೆಳಗಿಸಿದ್ದನ್ನು ಎಂದಿಗೂ ಮರೆಯಲಾಗದು. ಅವರೆಲ್ಲರ ಸ್ಮರಣೆ ಮಾಡುತ್ತಾ, ದೈನಂದಿನ ಬದುಕಿನಲ್ಲಿ ಧರ್ಮದ ಆದರ್ಶ ಮೌಲ್ಯಗಳನ್ನು ರೂಢಿಸಿಕೊಂಡು ಸಾಗಬೇಕು. ಅಂದಾಗ ಶಿಷ್ಟಾಚಾರದ ಜೀವನ ಪ್ರಾಪ್ತವಾಗುತ್ತದೆ ಎಂದು ಹೇಳಿದರು. ಮಾನವ ಯಾವಾಗಲೂ ಸುಖಾಪೇಕ್ಷಿ. ಸಂತೃಪ್ತಿ ಸಮೃದ್ಧಿಗಾಗಿ ಜೀವನ ಮೌಲ್ಯಗಳನ್ನು ಪಾಲಿಸಬೇಕಾಗುತ್ತದೆ. ಜೀವನದ ಶ್ರೇಯಸ್ಸಿಗಾಗಿ ಧರ್ಮ ಮುಖ್ಯ. ಶಾಂತಿ ಮತ್ತು ನೆಮ್ಮದಿ ಬದುಕಿಗೆ ಧರ್ಮಾಚರಣೆ ಮುಖ್ಯ ಎಂದು ಅಭಿಪ್ರಾಯಪಟ್ಟರು.


ಉದಯವಾಹಿನಿ ಚಿತ್ರ

> ಇಡೀ ಮಹಿಳಾ ಕುಲಕ್ಕೆ ಅಕ್ಕಮಹಾದೇವಿಯು ಗೌರವ ತಂದುಕೊಟ್ಟವಳು. ಕಡಕೋಳ ಮಡಿವಾಳಪ್ಪರು ನಿಷ್ಠುರವಾಗಿ ಬಾಳಿಬದುಕಿದ ಶರಣರಾಗಿದ್ದು, ಅವರ ತತ್ವಪದಗಳನ್ನು ಅರ್ಥೈಸಿಕೊಳ್ಳಬೇಕು. ಶಾಂತವೀರ ಶಿವಾಚಾರ್ಯರಿಂದ ಲಿಂಗದೀಕ್ಷೆಯನ್ನು ಪಡೆದುಕೊಂಡು, ಅನುಷ್ಠಾನ, ಅನುಸಂಧಾನದಂತಹ ಸೇವೆಗಳಿಂದ ಅನೇಕ ಮನೆತನದ ಆರಾಧ್ಯದೇವಿಯಾದ ದಾನಮ್ಮದೇವಿಯ ಕೃಪೆಗೆ ಎಲ್ಲರೂ ಪಾತ್ರರಾಗಬೇಕು. ಮಠದ ಶಿಷ್ಯ ಪರಂಪರೆಯು ಈ ಮಠದ ಏಳ್ಗೆ ಕೈಂಕರ್ಯ ಮಾಡಿ, ಮಠದ ಶ್ರೇಷ್ಠತೆಯನ್ನು ಎತ್ತಿ ಹಿಡಿಯಬೇಕು
> -ರಂಭಾಪುರಿ ಜಗದ್ಗುರುಗಳು

## ರೈತ ಆತ್ಮಹತ್ಯೆ; ಶವ ಇಟ್ಟು ಪ್ರತಿಭಟನೆ

• ಉದಯವಾಹಿನಿ ರಾಣೆಬೆನ್ನೂರು

ತಾಲ್ಲೂಕಿನ ಮುಷ್ಟೂರು ಗ್ರಾಮದ ರೈತ ಹನುಮಂತಪ್ಪ ತಿರಕಪ್ಪ ಯಲ್ಲಕ್ಕನವರ (65) ಅವರು ತಮ್ಮ ಜಮೀನಿನಲ್ಲಿ ವಿಷ ಕುಡಿದು ಆತ್ಮಹತ್ಯೆ ಮಾಡಿಕೊಂಡ ಘಟನೆ ಬುಧವಾರ ನಡೆದಿದೆ. ಹಲಗೇರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತರ ಹೆಸರಿನಲ್ಲಿ 3 ಎಕರೆ ಜಮೀನಿದ್ದು, ಅವರಿಗೆ ಪತ್ನಿ ಮತ್ತು ಮೂವರು ಪುತ್ರಿಯರು ಮತ್ತು ಪುತ್ರ ಇದ್ದಾರೆ.

ಮನೆತನಕ್ಕೆ ಮತ್ತು ಕೃಷಿ ಚಟುವಟಿಕೆಗಾಗಿ ಗ್ರಾಮದ ವಿಎಸ್‌ಎಸ್ ಬ್ಯಾಂಕ್, ಮಾಕನೂರು ಕಾರ್ಪೋರೇಷನ್ ಬ್ಯಾಂಕ್ ಮತ್ತು ಖಾಸಗಿ ಸೇರಿದಂತೆ ಒಟ್ಟು 6 ಲಕ್ಷಕ್ಕೂ ಹೆಚ್ಚು ಸಾಲ ಮಾಡಿದ್ದರು. ಸಾಲದ ಹೊರೆ ತೀರಿಸಲಾಗದೇ ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

**ಪ್ರತಿಭಟನೆ:** ಮೃತ ರೈತ ಹನುಮಂತಪ್ಪ ಯಲ್ಲಕ್ಕನವರ (65) ಅವರ ಕುಟುಂಬಕ್ಕೆ ಸರ್ಕಾರ ಸೂಕ್ತ ಪರಿಹಾರ ನೀಡಬೇಕು ಹಾಗೂ ಸಾಲಮನ್ನಾ ಮಾಡಬೇಕು ಎಂದು ಆಗ್ರಹಿಸಿ ರಾಜ್ಯ ರೈತ ಸಂಘದ ಪದಾಧಿಕಾರಿಗಳು ನಗರದ ಹಲಗೇರಿ ರಸ್ತೆಯ ಸರ್ಕಾರಿ ಆಸ್ಪತ್ರೆಯ ಶವಾಗಾರದ ಬಳಿ ಶವ ಇಟ್ಟು ಪ್ರತಿಭಟನೆ ನಡೆಸಿದರು. ಸಾಲದ ಸುಳಿಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ರೈತರ ಸಂಖ್ಯೆ ರಾಜ್ಯದಲ್ಲಿ ಹೆಚ್ಚುತ್ತಿದೆ. ಇಂತಹ ಅನ್ಯಾಯದ ಸಾವಿಗೆ ಕಾರಣವಾದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೂಡಲೇ ರೈತರ ನೆರವಿಗೆ ಧಾವಿಸಬೇಕು. ಮೃತರ ಕುಟುಂಬಕ್ಕೆ 125 ಲಕ್ಷ ಪರಿಹಾರ ನೀಡಬೇಕು' ಎಂದು ಪ್ರತಿಭಟನಕಾರರು ಒತ್ತಾಯಿಸಿದರು.

ರೈತ ಮುಖಂಡ ರವೀಂದ್ರಗೌಡ ಪಾಟೀಲ, ಬಸವರಾಜ ಯಲ್ಲಕ್ಕನವರ, ಯಲ್ಲಪ್ಪ ಓಲೇಕಾರ, ಮಲ್ಲಪ್ಪ ಲಿಂಗದಹಳ್ಳಿ, ಧರ್ಮರಾಜ ಕುಪ್ಪೇಲೂರ ಪ್ರತಿಭಟನೆಯಲ್ಲಿ ಇದ್ದರು.

## ದಾಸ್ತಾನು ಮಾಡಲಾಗಿದ್ದ ಕಾಳುಮೆಣಸು ಕದ್ದಿದ್ದ ಕಳ್ಳರ ಬಂಧನ

• ಉದಯವಾಹಿನಿ ಚಿಕ್ಕಮಗಳೂರು

ಮನೆಯ ಮುಂದೆ ದಾಸ್ತಾನು ಮಾಡಲಾಗಿದ್ದ ಕಾಳುಮೆಣಸನ್ನು ಕಳವು ಮಾಡಿದ್ದ 5 ಮಂದಿಯನ್ನು ಮೂಡಿಗೆರೆ ಠಾಣಾ ಪೊಲೀಸರು ಬಂಧಿಸಿ 1.03 ಲಕ್ಷ ಮೌಲ್ಯದ 145 ಕೆಜಿ ಕಾಳುಮೆಣಸು ಮತ್ತು ಕೃತ್ಯಕ್ಕೆ ಬಳಸಿದ್ದ ದ್ವಿಚಕ್ರ ವಾಹನವನ್ನು ವಶಪಡಿಸಿಕೊಂಡಿದ್ದಾರೆ.

ಹಾಸನ ಜಿಲ್ಲೆಯ ಬೈಲಹಳ್ಳಿ ಗ್ರಾಮದ ದರ್ಶನ್ (21), ಚಿಕ್ಕಮಗಳೂರು ಜಿಲ್ಲೆಯ ಕುಂದೂರಿನ ಗಿರೀಶ (27), ರಮೇಶ (20), ಅಕ್ಷಯ(27) ಹಾಗೂ ಪ್ರಶಾಂತ ಬಂಧಿತ ಆರೋಪಿಗಳು.

ಮೂಡಿಗೆರೆ ತಾಲ್ಲೂಕಿನ ಮಾಕೋನಹಳ್ಳಿ ಗ್ರಾಮದ ಕೃಷಿಕ ರಾಮಚಂದ್ರಪ್ಪ ಎಂಬುವವರು ಮನೆಯ ಮುಂದಿನ ಜಗಲಿಯ ಮೇಲೆ 145 ಕೆಜಿ ಕಾಳುಮೆಣಸನ್ನು ಒಣಗಿಸಿ ಮೂಟೆಯಲ್ಲಿ ಕಟ್ಟಿ ದಾಸ್ತಾನು ಮಾಡಿದ್ದರು. ಕೆಲಸದ ನಿಮಿತ್ತ ದಂಪತಿ ಮೂಡಿಗೆರೆ ಪಟ್ಟಣಕ್ಕೆ ತೆರಳಿ ವಾಪಸ್ ಮನೆಗೆ ಬಂದಾಗ ಕಾಳುಮೆಣಸು ಮೂಟೆಗಳು ಕಳುವಾಗಿರುವುದು ಬೆಳಕಿಗೆ ಬಂದಿದೆ. ಕೂಡಲೇ ಮೂಡಿಗೆರೆ ಠಾಣೆಗೆ ದೂರು ನೀಡಿದ್ದರು. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಂ ಆಮಟೆ, ಎಎಸ್‌ಪಿ ಜಯಕುಮಾರ್, ಶೈಲೇಂದ್ರ ಅವರ ಮಾರ್ಗದರ್ಶನದಲ್ಲಿ ವೃತ್ತನಿರೀಕ್ಷಕ ರಾಜಶೇಖರ್, ಶ್ರೀನಾಥರೆಡ್ಡಿ, ವೈಭವ್, ಸಜ್ಜನ್, ವಿನಯ್, ಮೆಹಬೂಬ್, ನಯಾಜ್ ಅವರುಗಳನ್ನೊಳಗೊಂಡ ತಂಡ ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸಿ ಕದ್ದ ಮಾಲನ್ನು ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ.


ಉದಯವಾಹಿನಿ ಚಿತ್ರ

## ಮಿನಿ ನ್ಯೂಸ್

### ಮಗಳ ಮೇಲೆ ಅತ್ಯಾಚಾರ ಎಸಗಿದ ಅಪ್ಪನಿಗೆ ಜೀವಾವಧಿ

• ಉದಯವಾಹಿನಿ ಕೊಪ್ಪಳ

ಮಗಳ ಮೇಲೆ ಅತ್ಯಾಚಾರ ಎಸಗಿದ ತಂದೆಗೆ ಜೀವಾವಧಿ ಜೈಲು ಶಿಕ್ಷೆ ಹಾಗೂ 80 ಸಾವಿರ ದಂಡ ವಿಧಿಸಿ ಇಲ್ಲಿನ ಪೋಕ್ಸೋ ನ್ಯಾಯಾಲಯ ಆದೇಶ ಮಾಡಿದೆ. ಕೊಪ್ಪಳ ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯ ಗ್ರಾಮವೊಂದರ ಯಂಕಪ್ಪ ಗೊಲ್ಲರ ಎಂಬಾತ ವರ್ಷದ ಹಿಂದೆ ಕಿರಿಯ ವಯಸ್ಸಿನ ಮಗಳ ಮೇಲೆ ದನ ಮೇಯಿಸಲು ವೆಂಕಟಾಪುರ ಮತ್ತು ಹೊಸೂರ ಸೀಮಾದಲ್ಲಿರುವ ಗುಡ್ಡಕ್ಕೆ ಕರೆದುಕೊಂಡು ಹೋದ ಸಮಯದಲ್ಲಿ ಕುಡಿದ ಅಮಲಿನಲ್ಲಿ ಹೆದರಿಸಿ ಮಗಳ ಮೇಲೆ ಅತ್ಯಾಚಾರ ಮಾಡಿದ್ದಾನೆ.

ವಿಷಯವನ್ನು ಯಾರಿಗಾದರೂ ಹೇಳಿದರೆ ಸಾಯಿಸುವುದಾಗಿ ಹೆದರಿಸಿದ್ದು ಬಾಲಕಿಗೆ ಹೊಟ್ಟೆನೋವು ಕಾಣಿಸಿಕೊಂಡಿದ್ದು ಕೆಲ ತಿಂಗಳ ಬಳಿಕ ಗಂಡು ಮಗುವಿಗೆ ಜನ್ಮನೀಡಿದ್ದಾಳೆ. ಈ ಆರೋಪದ ಹಿನ್ನೆಲೆಯಲ್ಲಿ ಕೊಪ್ಪಳ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಆಗ ಪಿಎಸ್‌ಐ ಆಗಿದ್ದ ಸುರೇಶ ಡಿ. ಪ್ರಕರಣದ ಪ್ರಥಮ ಹಂತದ ತನಿಖೆ ನಿರ್ವಹಿಸಿದ್ದರು. ಮುಂದಿನ ತನಿಖೆಯನ್ನು ಅಂದಿನ ಕೊಪ್ಪಳ ಸಿಪಿಐ ರವಿ ಉಕ್ಕುಂದ ನಿರ್ವಹಿಸಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.

### ಅಭಿವೃದ್ಧಿ ನೆಪದಲ್ಲಿ ಮರಗಳಿಗೆ ಕೊಡಲಿ

• ಉದಯವಾಹಿನಿ ಉಡುಪಿ

ಅಭಿವೃದ್ಧಿ ನೆಪದಲ್ಲಿ ವಿವಿಧ ಯೋಜನೆಗಾಗಿ ಸಾವಿರಾರು ಮರಗಳನ್ನು ಕಡಿದು ಹಾಕಲಾಗುತ್ತಿದ್ದು, ಇದರಿಂದ ಪರಿಸರ ನಾಶದ ಜೊತೆಗೆ ಶುದ್ಧಗಾಳಿಗೂ ಸಂಚಕಾರ ಬಂದಿದೆ ಎಂದು ಸಮಾನ ಮನಸ್ಕ ಕನ್ನಡಿಗರ ವೇದಿಕೆಯ ಸದಸ್ಯ ರಾಘವೇಂದ್ರ ಹೇಳಿದರು.

ಕಾತ್ಯಾಯಿನಿ ನಗರದಲ್ಲಿ ಸಮಾನ ಮನಸ್ಕ ಕನ್ನಡಿಗರ ವೇದಿಕೆ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವಭೂಮಿ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೆರೆಗಳು ಮಾಯವಾಗಿ ಕಾಂಕ್ರೀಟ್ ಕಾಡುಗಳಾಗಿರುವ ಪರಿಣಾಮ ಭೂಮಿಯಲ್ಲಿ ಅಂತರ್ಜಲ ಮಟ್ಟ ಕಡಿಮೆಯಾಗಿ, ಬೇಸಿಗೆಯಲ್ಲಿ ನೀರಿಗಾಗಿ ಪರಿತಪಿಸುವಂತಾಗಿದೆ. ಒಂದು ಮರ ಕಡಿಯುವ ಮೊದಲು 5 ಸಸಿಗಳನ್ನು ನೆಟ್ಟು ಪೋಷಿಸಬೇಕು. ಕೆರೆಗಳಲ್ಲಿ ಹೂಳನ್ನು ತೆಗೆದು ನೀರು ನಿಲ್ಲುವಂತೆ ಮಾಡಬೇಕು ಎಂದರು.

ವೇದಿಕೆಯ ಅಧ್ಯಕ್ಷ ಶ್ರೀನಿವಾಸ್ ರಾವ್ ಕೆ. ಮಾತನಾಡಿ, ನಮಗೆ ಇರುವುದೊಂದೇ ಭೂಮಿ. ಇಲ್ಲಿ ಬಿಟ್ಟರೆ ಯಾವ ಗ್ರಹದಲ್ಲಿಯೂ ಪ್ರಾಣಿಗಳು ಬದುಕುವುದಿಲ್ಲ. ಆದ್ದರಿಂದ ಭೂಮಿಯನ್ನು ಕಾಪಾಡುವುದು ನಮ್ಮೆಲ್ಲರ ಕರ್ತವ್ಯವಾಗಬೇಕು ಎಂದು ಹೇಳಿದರು.

### ತೋಟಗಾರಿಕೆಗೆ ಯಾವುದೇ ಅನುದಾನ ಮೀಸಲಿಟ್ಟಿಲ್ಲ: ಜಿ. ಸತೀಶ

• ಉದಯವಾಹಿನಿ ಭಟ್ಕಳ

ಭಟ್ಕಳ ತಾಲ್ಲೂಕು ಪಂಚಾಯಿತಿ 2025-26ನೇ ಸಾಲಿನ ಅಂದಾಜು 91.49 ಕೋಟಿ ಅನುದಾನ ನಿಗದಿಪಡಿಸಿ ತಯಾರಿಸಲಾದ ಮುಂಗಡ ಪತ್ರವನ್ನು ಆಡಳಿತಾಧಿಕಾರಿ ಜಿ. ಸತೀಶ ಅವರು ಮಂಡಿಸಿದರು.

ತಾಲ್ಲೂಕು ಪಂಚಾಯಿತಿ ಸಭಾಭವನದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಮಾತನಾಡಿದರು. ಕಳೆದ ಸಾಲಿಗಿಂತ ಈ ಬಾರಿಯ ಮುಂಗಡ ಪತ್ರವು ಶೇ 17ರಷ್ಟು ಹೆಚ್ಚುವರಿಯಾಗಿರುತ್ತದೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಪ್ರಾಥಮಿಕ ಶಿಕ್ಷಣಕ್ಕಾಗಿ 53.57 ಕೋಟಿ, ಪ್ರೌಢ ಶಿಕ್ಷಣಕ್ಕಾಗಿ 10.80 ಕೋಟಿ, ವೈದ್ಯಕೀಯ, ಜನಾರೋಗ್ಯ ಇಲಾಖೆಗೆ 65.21 ಲಕ್ಷ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ 17.70 ಲಕ್ಷ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ 7.12ಕೋಟಿ, ಕೃಷಿ ಇಲಾಖೆಗೆ 27.73 ಲಕ್ಷ, ಪಶು ಸಂಗೋಪನೆ ಇಲಾಖೆಗೆ 69.88 ಲಕ್ಷ ಹಾಗೂ ತಾಲ್ಲೂಕು ಪಂಚಾಯಿತಿ ಕಾರ್ಯಕ್ರಮಗಳಿಗೆ 4.16 ಕೋಟಿ ಮೀಸಲಿಡಲಾಗಿದ್ದು, ತೋಟಗಾರಿಕಾ ಕಾರ್ಯಕ್ರಮಕ್ಕಾಗಿ ಯಾವುದೇ ಅನುದಾನ ಮೀಸಲಿಟ್ಟಿಲ್ಲ ಎಂದು ಸಭೆಯಲ್ಲಿ ತಿಳಿಸಿದರು.

ಲಿಂಕ್ ಡಾಕ್ಯುಮೆಂಟ್ ಅನುದಾನದ ಹೊರತಾಗಿ ಕಟ್ಟಡ ಬಾಡಿಗೆ ಮತ್ತು ಇತರೆ ಮೂಲದಿಂದ 20 ಲಕ್ಷ ಹಾಗೂ ಅನಿರ್ಬಂಧಿತ ಅನುದಾನದಡಿ 1.63 ಕೋಟಿ ಅನುದಾನವನ್ನು ನಿರೀಕ್ಷಸಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು. ನಂತರ ತಾಲ್ಲೂಕಿನ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು. ತಾಲ್ಲೂಕಿನ ಗ್ರಾಮೀಣ ಭಾಗಗಳಲ್ಲಿ ಮಂಗನ ಕಾಯಿಲೆ, ಚಿಕನ್‌ಗುನ್ಯ, ಡೆಂಘಿ ರೋಗಗಳ ಬಗ್ಗೆ ಮುನ್ನೆಚ್ಚರಿಕೆ ವಹಿಸುವಂತೆ ಸೂಚನೆ ನೀಡಿದರು. ತಾಲ್ಲೂಕಿನ ಪ್ರಾಥಮಿಕ ಶಾಲೆಗಳ ಜೊತೆ ಪದವಿ ಪೂರ್ವ ಕಾಲೇಜುಗಳಿಗೆ ವಿದ್ಯುತ್ ಸಂಪರ್ಕ ನೀಡಲು ಆದೇಶವಾಗಿದ್ದು, ವಸತಿ ನಿಲಯಗಳಿಗೂ ವಿದ್ಯುತ್ ಸಂಪರ್ಕ ನೀಡಲು ಆದೇಶವಾಗಿರುವ ಕುರಿತು ಅಧಿಕಾರಿಗಳು ಸಭೆಗೆ ತಿಳಿಸಿದರು.

ಕಲ್ಯಾಣದ ನೆಲದಲ್ಲಿ ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ಮನುಕುಲದ ಕಲ್ಯಾಣಕ್ಕೆ ಶ್ರಮಿಸಿರುವುದು ಶ್ಲಾಘನೀಯ

# ಸಶಕ್ತ ಸಮಾಜ ಕಟ್ಟಿದ ಮಹಾನ್ ಸಂತ ಡಾ.ಚನ್ನಬಸವ ಪಟ್ಟದ್ದೇವರು: ರಾಜ್ಯಪಾಲ

• ಉದಯವಾಹಿನಿ ಭಾಲ್ಕಿ

12ನೆಯ ಶತಮಾನದಲ್ಲಿ ಬಸವಾದಿ ಶರಣರು ನಡೆದಾಡಿದ ಕಲ್ಯಾಣದ ನೆಲದಲ್ಲಿ ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ಮನುಕುಲದ ಕಲ್ಯಾಣಕ್ಕೆ ಶ್ರಮಿಸಿರುವುದು ಶ್ಲಾಘನೀಯ ಕಾರ್ಯ ಎಂದು ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದರು. ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಆಯೋಜಿಸಿದ್ದ ವಚನ ಜಾತ್ರೆ-2025 ಮತ್ತು ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರ 26 ನೆಯ ಸ್ಮರಣೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಧಾರ್ಮಿಕ, ಅಧ್ಯಾತ್ಮಿಕ, ಸಾಮಾಜಿಕ, ಶೈಕ್ಷಣಿಕ ಸೇವೆ ಮೂಲಕ ಪೂಜ್ಯರು ಸಶಕ್ತ ಆತ್ಮನಿರ್ಭರ ಸಮಾಜ ನಿರ್ಮಾಣಕ್ಕೆ ಶ್ರಮಿಸಿದರ ಬಗ್ಗೆ ತಿಳಿದು ಕೊಂಡಿದ್ದೇನೆ. ಜತೆಗೆ ಗಡಿಭಾಗವನ್ನು ಕನ್ನಡ ನೆಲದಲ್ಲಿ ಉಳಿಸಲು ದಿಟ್ಟತನ ಪ್ರದರ್ಶಿಸಿರುವುದು ಮಾದರಿ ಎನಸಿದೆ. ಬಸವಾದಿ ಶರಣರು ವಚನ ಸಾಹಿತ್ಯದ ಮೂಲಕ ಸಮಾಜಕ್ಕೆ ಅದ್ಭುತ ಕೊಡುಗೆ ನೀಡಿದ್ದಾರೆ.

ಬಸವಣ್ಣನವರು ಜಾತಿಭೇದ ಎನ್ನದೇ ಎಲ್ಲ ವರ್ಗಕ್ಕೆ ನ್ಯಾಯ ಕಲ್ಪಿಸಿದರು. ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಿದ್ದರು. ಕಂದಾಚಾರ, ಮೌಢ್ಯದ ವಿರುದ್ಧ ಸಮರ ಸಾರಿದ್ದರ. ಬಸವಾದಿ ಶರಣರ ವಿಚಾರಧಾರೆಗಳನ್ನು ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ಮುಂದುವರೆಸಿ ಸುಂದರ ಸಮಾಜಕ್ಕೆ ನಿರ್ಮಾಣಕ್ಕೆ ತಮ್ಮ ಬದುಕು ಮುಡಿಪಾಗಿಟ್ಟಿರುವುದು ಹೆಮ್ಮೆಯ ಸಂಗತಿ.

ಅಂತಹ ಸಂತರ ಆದರ್ಶಗಳು ನಮ್ಮೆಲ್ಲರಿಗೂ ಪ್ರೇರಣೆಯಾಗಬೇಕು. ಮಕ್ಕಳಿಗೆ ಚಿಕ್ಕವಯಸ್ಸಿನಿಂದಲೇ ಧರ್ಮದ ಮಹತ್ವ ಮತ್ತು ಮಹಾತ್ಮರ ಬದುಕಿನ ತತ್ವದ ಬಗ್ಗೆ ತಿಳಿ ಹೇಳುವ ಕೆಲಸ ಆಗಬೇಕು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮಾತನಾಡಿ, ಗಡಿಭಾಗದಲ್ಲಿ ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ಸ್ವಾತಂತ್ರ್ಯ ಪೂರ್ವ ಮತ್ತು ನಂತರದಲ್ಲಿ ಬೇರುರಿದ್ದ ಅಂಧಕಾರ, ಅಂಧಶ್ರದ್ಧೆ, ಮೌಢ್ಯತೆ ಹೋಗಲಾಡಿಸಲು ಶ್ರಮಿಸಿದ್ದರು.

ಶೈಕ್ಷಣಿಕ, ಧಾರ್ಮಿಕ, ಸಾಮಾಜಿಕ ಸೇವೆ ಮೂಲಕ ಈ ಭಾಗದ ಬೆಳವಣಿಗೆಗೆ ನಾಂದಿ ಹಾಡಿದ್ದಾರೆ. ಅವರ ವಿಚಾರಧಾರೆಗಳನ್ನು ಎಲ್ಲರೂ ಅನುಸರಿಸಬೇಕು ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ನ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, 12ನೆಯ ಶತಮಾನದಲ್ಲಿ ಬಸವಾದಿ ಶರಣರು ಸಮಾನತೆ ಸಾರಿದರು. ಅದೇ ಪರಂಪರೆಯನ್ನು ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ತಮ್ಮ ಬದುಕಿನುದ್ದಕ್ಕೂ ಅನುಸರಿಸಿ ನಮ್ಮೆಲ್ಲರಿಗೂ ಆದರ್ಶಪ್ರಾಯರಾಗಿದ್ದಾರೆ ಎಂದು ತಿಳಿಸಿದರು. ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಹುಮನಾಬಾದ್, ಸಂಸದ ಸಾಗರ ಖಂಡ್ರೆ, ಮಾಜಿ ಶಾಸಕ ಪ್ರಕಾಶ ಖಂಡ್ರೆ, ನಾರಂಜಾ ಸಕ್ಕರೆ ಕಾರಖಾನೆ ಅಧ್ಯಕ್ಷ ಡಿ.ಕೆ.ಸಿದ್ರಾಮ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಎಸ್ಪಿ ಪ್ರದೀಪ ಗುಂಟಿ ಇದ್ದರು. ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಸ್ವಾಗತಿಸಿದರು. ಹಾಸ್ಯಕಲಾವಿದ ನವಲಿಂಗ ಪಾಟೀಲ್ ನಿರೂಪಿಸಿದರು. ಡಾ.ಅಮಿತ ಅಷ್ಟೂರೆ ವಂದಿಸಿದರು.

> ಬಸವಣ್ಣನವರ ಸಮಾನತೆ ಸಂದೇಶ ಸಾರಿದ ಭೂಮಿಗೆ ರಾಜ್ಯಪಾಲರು ಆಗಮಿಸಿರುವುದು ಸಾಕಷ್ಟು ಖುಷಿ ತಂದು ಕೊಟ್ಟಿದೆ. ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು 109 ವರ್ಷಗಳ ಗಂಧದಂತೆ ಬದುಕು ಸವೆದು ವಚನ ಸಾಹಿತ್ಯವನ್ನು ಜನಮಾನಸಕ್ಕೆ ಮುಟ್ಟಿಸುವ ಕೆಲಸ ಮಾಡಿದ್ದಾರೆ.
> -ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು
> ಹಿರೇಮಠ ಸಂಸ್ಥಾನ ಭಾಲ್ಕಿ



ಉದಯವಾಹಿನಿ ಚಿತ್ರ

**ಸಮಾಜಕ್ಕೆ ಅದ್ಭುತ ಕೊಡುಗೆ**

### ವರ್ಷದಲ್ಲಿ ಅನುಭವ ಮಂಟಪ ಪೂರ್ಣ

ಬಸವಣ್ಣನವರ ಕರ್ಮಭೂಮಿ ಕಲ್ಯಾಣದ ನೆಲದಲ್ಲಿ ನಿರ್ಮಾಣ ಹಂತದಲ್ಲಿರುವ ಅನುಭವ ಮಂಟಪ ಕಟ್ಟಡದ ಕಾಮಗಾರಿ ಒಂದು ವರ್ಷದಲ್ಲಿ ಪೂರ್ಣಗೊಳ್ಳಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು. 12ನೆಯ ಶತಮಾನದಲ್ಲಿ ಬಸವಣ್ಣನವರು ಅನುಭವ ಮಂಟಪದ ಎಲ್ಲಾ ವರ್ಗದ ಶರಣ ಶರಣೆಯರಿಗೆ ಆಶ್ರಯ ಕಲ್ಪಿಸಿ ವಿಶ್ವಕ್ಕೆ ಪ್ರಜಾಪ್ರಭುತ್ವ ಮತ್ತು ಸಮ ಸಮಾಜದ ಪರಿಕಲ್ಪನೆ ಸಾರಿದ್ದರು. ಬಸವಾದಿ ಶರಣರ ವಿಚಾರಧಾರೆಗಳನ್ನು ಮತ್ತೆ ಗತವೈಭವಿಸಬೇಕು ಎನ್ನುವ ಸದಾಶಯದೊಂದಿಗೆ ಆಧುನಿಕ ಅನುಭವ ಮಂಟಪ ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ ಎಂದು ತಿಳಿಸಿದರು.

> ಬಸವಣ್ಣನವರು ಸಾರಿದ ಕಾಯಕವೇ ಕೈಲಾಸ ಸಂದೇಶ ಪ್ರತಿಯೊಬ್ಬರು ಜೀವನದಲ್ಲಿ ಅನುಸರಿಸಿದೇ ಬದುಕು ಸುಂದರವಾಗಿ ರೂಪಗೊಳ್ಳಲಿದೆ. ಬಸವಾದಿ ಶರಣರ ವಿಚಾರಧಾರೆಗಳನ್ನು ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ಅನುಸರಿಸಿ ಈ ಭಾಗದ ಸಮೃದ್ಧಿಗೆ ಶ್ರಮಿಸಿರುವುದು ಮಾದರಿ ಎನಸಿದೆ. -ಥಾವರ್ ಚಂದ್ ಗೆಹ್ಲೋಟ್, ರಾಜ್ಯಪಾಲರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** – ಕುಟುಂಬದ ಸದಸ್ಯರ ಜೊತೆ ಸ್ವಲ್ಪ ತೊಂದರೆ ಹೊಂದಿದ್ದರೂ ಇದು ನಿಮ್ಮ ಮನಶ್ಶಾಂತಿಯನ್ನು ಹಾಳು ಮಾಡಲು ಅವಕಾಶ ನೀಡಬೇಡಿ. ಪ್ರೀತಿ ಪಾತ್ರರು ನಿಮ್ಮನ್ನು ಸಂತೋಷವಾಗಿರಿಸಲು ಕೆಲಸಗಳನ್ನು ಮಾಡುತ್ತಾರೆ.

**ವೃಷಭ** – ಉಚಿತ ಸಮಯದಲ್ಲಿ ಯಾವುದೇ ಪುಸ್ತಕವನ್ನು ಓದಬಹುದು. ಆದಾಗ್ಯೂ ನಿಮ್ಮ ಮನೆಯ ಉಳಿದ ಸದಸ್ಯರು ನಿಮ್ಮ ಏಕಾಗ್ರತೆಗೆ ಭಂಗ ಉಂಟುಮಾಡಬಹುದು.

**ಮಿಥುನ** – ಹೊರಾಂಗಣ ಚಟುವಟಿಕೆಗಳು ಇಂದು ದಣಿವು ಮತ್ತು ಒತ್ತಡ ತರುತ್ತವೆ. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ.

**ಕರ್ಕಾಟಕ** – ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳೆರಡಕ್ಕೂ ಪ್ರಯೋಜನಕಾರಿಯಾಗುತ್ತದೆ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ.

**ಸಿಂಹ** – ಇಂದು, ನೀವು ಪ್ರೀತಿ ಎಲ್ಲದಕ್ಕೂ ಪರ್ಯಾಯವಾಗಿದೆ ಎಂದು ಅರ್ಥ ಮಾಡಿಕೊಳ್ಳುತ್ತೀರಿ. ನೀವು ಬಹಳಷ್ಟು ಸಾಧಿಸುವ ಸಾಮರ್ಥ್ಯ ಹೊಂದಿದ್ದೀರಿ ಆದ್ದರಿಂದ ನಿಮಗೆ ದೊರಕುವ ಅವಕಾಶಗಳನ್ನು ಉಪಯೋಗಿಸಿಕೊಳ್ಳಿ.

**ಕನ್ಯಾ** – ಇಂದು ಪ್ರಣಯಕ್ಕಾಗಿ ಸಂಕೀರ್ಣ ಜೀವನವನ್ನು ತೃಜಿಸಿ. ಹೊಸ ಉದ್ಯಮಗಳು ಆಕರ್ಷಕವಾಗಿರುತ್ತವೆ ಮತ್ತು ಒಳ್ಳೆಯ ಆದಾಯದ ಭರವಸೆ ಕಾಣಿಸುತ್ತದೆ. ನಿಮ್ಮ ಹಾಸ್ಯಪ್ರಜ್ಞೆ ನಿಮ್ಮ ಮಹಾನ್ ಆಸ್ತಿಯಾಗಿದೆ.

**ತುಲಾ** – ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು.

**ವೃಶ್ಚಿಕ** – ನಿಮ್ಮ ಗೌಪ್ಯ ಮಾಹಿತಿಯನ್ನು ನಿಮ್ಮ ಸಂಗಾತಿಯ ಜೊತೆ ಹಂಚಿ ಕೊಳ್ಳುವ ಮೊದಲು ಯೋಚಿಸಿ. ಅವಳು ಅದನ್ನು ಬೇರೆಯವರಿಗೆ ಹೇಳಬಹುದಾದ್ದರಿಂದ ಸಾಧ್ಯವಾದರೆ ಅದನ್ನು ತಪ್ಪಿಸಲು ಪ್ರಯತ್ನಿಸಿ.

**ಧನಸ್ಸು** – ವಾದಗಳು ಮತ್ತು ಜಗಳಗಳು, ಇತರರ ಜೊತೆ ಅನಾವಶ್ಯಕವಾಗಿ ದೋಷ ಕಂಡು ಹಿಡಿಯುವುದನ್ನು ತಪ್ಪಿಸಿ. ಪ್ರಣಯ ಸಂಬಂಧದಲ್ಲಿ ನಿಮ್ಮನ್ನು ತಪ್ಪಾಗಿ ತಿಳಿದುಕೊಳ್ಳುವ ಸಾಧ್ಯತೆಯಿದೆ.

**ಮಕರ** – ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳೆರಡಕ್ಕೂ ಪ್ರಯೋಜನಕಾರಿಯಾಗುತ್ತದೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ.

**ಕುಂಭ** – ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಇಂದು ನಿಮ್ಮ ಪ್ರೀತಿಯ ಜೀವನದಲ್ಲಿ ಅದ್ಭುತ ದಿನವಾಗಿದೆ. ದೀರ್ಘಕಾಲ ಬಾಕಿಯಿರುವ ನಿರ್ಧಾರಗಳು ತೀರ್ಮಾನವಾಗುತ್ತವೆ.

**ಮೀನ** – ಪ್ರಕೃತಿಯು ನಿಮ್ಮಲ್ಲಿ ಗಮನಾರ್ಹ ವಿಶ್ವಾಸ, ಬುದ್ಧಿವಂತಿಕೆ ಯನ್ನಿರಿಸಿದೆ – ಅದನ್ನು ಸಾಧ್ಯವಾದಷ್ಟೂ ಬಳಸಿಕೊಳ್ಳಿ. ಹಣಕಾಸು ಸ್ಥಿತಿ ಊಹಾ ಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ.

### ಸಮಗ್ರ ಅಭಿವೃದ್ಧಿ ಸೂಚ್ಯಂಕ ನಿರ್ಧರಿಸುವ ಅಂಶಗಳಿಗೆ ಒತ್ತು ನೀಡಲು ಡಿ.ಸಿ. ವೆಂಕಟೇಶ್ ಸೂಚನೆ

# ಏ.28ರಂದು ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸಭೆ

• ಉದಯವಾಹಿನಿ ಚಿತ್ರದುರ್ಗ

ರಾಜ್ಯ ಸರ್ಕಾರವು ಆರ್ಥಿಕ ತಜ್ಞ ಪ್ರೊ. ಎಂ. ಗೋವಿಂದ ರಾವ್ ಅವರ ಅಧ್ಯಕ್ಷತೆಯಲ್ಲಿ ರಚಿಸಿರುವ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯು ಏ. 28 ರಂದು ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ಬೆಂಗಳೂರು ವಿಭಾಗ ಮಟ್ಟದ ಜಿಲ್ಲೆಗಳ ಜನಪ್ರತಿನಿಧಿಗಳು, ಆರ್ಥಿಕ ಮತ್ತು ಶೈಕ್ಷಣಿಕ ತಜ್ಞರು, ಕೈಗಾರಿಕಾ ಕ್ಷೇತ್ರದ ತಜ್ಞರೊಂದಿಗೆ ಸಂವಾದ ಸಭೆಯನ್ನು ನಡೆಸಲಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯ ತಾಲ್ಲೂಕುವಾರು ಸಮಗ್ರ ಅಭಿವೃದ್ಧಿ ಸೂಚ್ಯಂಕವನ್ನು ನಿರ್ಧರಿಸುವ ಅಂಶಗಳಿಗೆ ಒತ್ತು ನೀಡಿ, ವರದಿ ಸಿದ್ಧಪಡಿಸಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸಭೆಯ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಹಿಂದೆ ಡಾ. ಡಿ.ಎಂ. ನಂಜುಂಡಪ್ಪ ಅವರು ಸಲ್ಲಿಸಿದ್ದ ವರದಿಯ ಅನುಷ್ಠಾನದಿಂದ ಅಭಿವೃದ್ಧಿ ಹೊಂದಿರುವ ಹಾಗೂ ಹೊಂದದೇ ಇರುವ ತಾಲ್ಲೂಕುಗಳನ್ನು ಗುರುತಿಸಿ, ಹೊಸದಾಗಿ ಸೂಚ್ಯಂಕವನ್ನು ಕಂಡುಹಿಡಿದು, ಪ್ರಾದೇಶಿಕ ಅಸಮತೋಲನ ನಿವಾರಣೆ ಮಾಡುವ ಸಲುವಾಗಿ ರಾಜ್ಯ ಸರ್ಕಾರ ಆರ್ಥಿಕ ತಜ್ಞ ಪ್ರೊ. ಎಂ. ಗೋವಿಂದ ರಾವ್ ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯನ್ನು ರಚಿಸಿದೆ. ಬೆಂಗಳೂರು ವಿಭಾಗದ ಜಿಲ್ಲೆಗಳಾದ ಚಿತ್ರದುರ್ಗ, ತುಮಕೂರು, ದಾವಣಗೆರೆ ಮತ್ತು ಶಿವಮೊಗ್ಗ ಜಿಲ್ಲೆಗಳನ್ನು ಒಳಗೊಂಡಂತೆ ಸಮಿತಿಯು ಏ. 28 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಂವಾದ ಸಭೆಯನ್ನು ನಡೆಸಲಿದ್ದು, ಇದರಲ್ಲಿ ಈ ಎಲ್ಲಾ ಜಿಲ್ಲೆಗಳ ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ವಿವಿಧ ಕ್ಷೇತ್ರಗಳ ತಜ್ಞರು ಭಾಗವಹಿಸಲಿದ್ದಾರೆ.

ಈ ಎಲ್ಲಾ ನಾಲ್ಕೂ ಜಿಲ್ಲೆಗಳನ್ನು ಹೋಲಿಸಿದಾಗ ಚಿತ್ರದುರ್ಗ ಜಿಲ್ಲೆಯು ಅತ್ಯಂತ ಹಿಂದುಳಿದ ಜಿಲ್ಲೆಯಾಗಿದ್ದು, ಈ ಹಿಂದುಳಿದಿರುವಿಕೆಯನ್ನು ನಿವಾರಿಸಲು ಅಭಿವೃದ್ಧಿ ಅಗತ್ಯವಾಗಿರುತ್ತದೆ. ಈ ಕುರಿತಂತೆ ನಿಖರವಾಗಿ ಅಂಕಿ-ಅಂಶಗಳೊಂದಿಗೆ ವರದಿ ಸಲ್ಲಿಸಬೇಕಿರುತ್ತದೆ. ಕೃಷಿಗೆ ಸಂಬಂಧಿಸಿದಂತೆ ಬಿತ್ತನೆ ಪ್ರದೇಶ, ಆಹಾರ ಧಾನ್ಯ ಮತ್ತು ವಾಣಿಜ್ಯ ಬೆಳೆ ಪ್ರದೇಶ ಪ್ರಮಾಣ, ನೀರಾವರಿ ಮತ್ತು ಮಳೆ ಆಶ್ರಿತ ಪ್ರದೇಶ ಪ್ರಮಾಣ. ರಸಗೊಬ್ಬರದ ಬಳಕೆ ಪ್ರಮಾಣ, ಕೃಷಿ ಯಂತ್ರೋಪಕರಣಗಳ ಬಳಕೆ ಪ್ರಮಾಣ, ಕೃಷಿಗೆ ತಲಾ ಬ್ಯಾಂಕ್ ಸಾಲ ಪ್ರಮಾಣ ವಿವರಗಳನ್ನು ಒದಗಿಸಬೇಕು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿನಿರ್ದೇಶಕ ಆನಂದ್, ಜಿ.ಪಂ. ಮುಖ್ಯ ಯೋಜನಾಧಿಕಾರಿ ಗಾಯತ್ರಿ, ಡಿಹೆಚ್‌ಓ ಡಾ. ರೇಣುಪ್ರಸಾದ್, ಡಿಡಿಪಿಐ ಮಂಜುನಾಥ್, ಡಿಡಿಪಿಯು ಪುಟ್ಟಸ್ವಾಮಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

**ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸುವಂತೆ ಸೂಚನೆ**

ಸಂವಾದ ಸಭೆಗೆ ಜಿಲ್ಲೆಯ ಆರ್ಥಿಕ ಮತ್ತು ಶೈಕ್ಷಣಿಕ ತಜ್ಞರು, ಕೈಗಾರಿಕಾ ತಜ್ಞರನ್ನು ಆಹ್ವಾನಿಸಿ, ಸಭೆಯಲ್ಲಿ ಪಾಲ್ಗೊಳ್ಳುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಬೆಂಗಳೂರು ವಿಭಾಗ ಮಟ್ಟದ ಜಿಲ್ಲೆಗಳಿಂದ ಆಗಮಿಸುವ ಲೋಕಸಭಾ ಸದಸ್ಯರು, ವಿಧಾನಸಭೆ ಮತ್ತು ವಿಧಾನಪರಿಷತ್ ಸದಸ್ಯರ ವಿವರವನ್ನು ಸಂಗ್ರಹಿಸಿ, ಸೂಕ್ತ ಶಿಷ್ಟಾಚಾರ ಕಲ್ಪಿಸುವುದು, ವಾಸ್ತವ್ಯಕ್ಕೆ ವ್ಯವಸ್ಥೆ, ಊಟೋಪಹಾರದ ವ್ಯವಸ್ಥೆ ಅಲ್ಲದೆ ಅಗತ್ಯ ವ್ಯವಸ್ಥೆ ಮಾಡಿಕೊಳ್ಳಲು ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಜವಾಬ್ದಾರಿಯುತವಾಗಿ ತಮ್ಮ ಕರ್ತವ್ಯ ನಿರ್ವಹಿಸುವಂತೆ ಜಿಲ್ಲಾಧಿಕಾರಿಗಳು ಇದೇ ಸಂದರ್ಭದಲ್ಲಿ ಸೂಚನೆ ನೀಡಿದರು.

**ಅಂಶಗಳನ್ನು ನಿಖರವಾಗಿ ಸಂಗ್ರಹಿಸಿ**

ಕೈಗಾರಿಕೆ ಮತ್ತು ಹಣಕಾಸು ಕ್ಷೇತ್ರ ಸಂಬಂಧಿಸಿದಂತೆ ಪ್ರತಿ ಲಕ್ಷ ಜನಸಂಖ್ಯೆಗೆ ಕೈಗಾರಿಕೆ ಘಟಕಗಳ ಸಂಖ್ಯೆ, ಕಾರ್ಮಿಕರ ಸಂಖ್ಯೆ, ಬ್ಯಾಂಕುಗಳಿಂದ ಅಭಿವೃದ್ಧಿ ಸಾಲ, ಪ್ರತಿ ಲಕ್ಷ ಜನಸಂಖ್ಯೆಗೆ ವ್ಯಾಪಾರ, ಹೋಟೆಲ್ ಮತ್ತು ಸಾರಿಗೆಯಲ್ಲಿ ತೊಡಗಿರುವ ಉದ್ಯಮಗಳು. ಜನಸಂಖ್ಯೆಗೆ ಅನುಗುಣವಾಗಿ ಅಂಚೆಕಚೇರಿಗಳು, ರಸ್ತೆಗಳು, ಸಹಕಾರ ಸಂಘಗಳು, ಕೃಷಿ ಉತ್ಪನ್ನ ಮಾರುಕಟ್ಟೆಗಳ ವಿವರ, ಮೂಲ ಸೌಕರ್ಯಗಳ ಸೂಚ್ಯಂಕವನ್ನು ನಿರ್ಧರಿಸುವ ಸಾಕ್ಷರತಾ ಪ್ರಮಾಣ, ಆಸ್ಪತ್ರೆಗಳು ಮತ್ತು ವೈದ್ಯರ ಪ್ರಮಾಣ, ವಾಹನಗಳ ಸಂಖ್ಯೆ, ವಿದ್ಯಾರ್ಥಿ-ಶಿಕ್ಷಕರ ಅನುಪಾತ, ಪ್ರಾಥಮಿಕ ಶಾಲೆಗಳು, ಪ್ರೌಢ ಶಿಕ್ಷಣ ಮತ್ತು ಕಾಲೇಜುಗಳು, ಉನ್ನತ ಶಿಕ್ಷಣ ಸಂಸ್ಥೆಗಳು ಸರ್ಕಾರಿ ಮತ್ತು ಖಾಸಗಿ ಎರಡೂ ವಿವರಗಳನ್ನು ಒದಗಿಸಬೇಕು. ಲಿಂಗಾನುಪಾತ, ನಗರ ಮತ್ತು ಗ್ರಾಮೀಣ ಭಾಗದಲ್ಲಿನ ಜನಸಂಖ್ಯೆ ಪ್ರಮಾಣ ಸೇರಿದಂತೆ ಸಮಗ್ರ ಅಭಿವೃದ್ಧಿ ಸೂಚ್ಯಂಕ ನಿಗದಿಪಡಿಸುವ ಅಂಶಗಳನ್ನು ನಿಖರವಾಗಿ ಸಂಗ್ರಹಿಸಿ, ವರದಿ ಸಿದ್ಧಪಡಿಸಬೇಕು ಎಂದು ಸೂಚನೆ ನೀಡಿದರು.

## ಉದಯವಾಹಿನಿ ಸುದ್ದಿ ವರದಿಗೆ ಎಚ್ಚೆತ್ತುಕೊಂಡ ಅಧಿಕಾರಿಗಳು

### ವಿದ್ಯುತ್ ಸ್ಥಂಭ ಸ್ಥಳಾಂತರಿಸಿದ ಕೆಇಬಿ ಅಧಿಕಾರಿ ನೂರ್ ಫಾತಿಮಾ

• ಉದಯವಾಹಿನಿ ಕಾರಟಗಿ

ಪಟ್ಟಣದ 21ನೆ ವಾರ್ಡಿನಲ್ಲಿ ನೂತನ ರಸ್ತೆ ನಿರ್ಮಾಣ ಮಾಡುವ ಬರದಲ್ಲಿ ರಸ್ತೆ ಮಧ್ಯದಲ್ಲಿರುವ ವಿದ್ಯುತ್ ಸ್ಥಂಭವನ್ನು ಸ್ಥಳಾಂತರಿಸದೆ ರಸ್ತೆಯ ಡಾಂಬರೀಕರಣ ಕಾಮಗಾರಿಗೆ ಪುರಸಭೆ ಅಧಿಕಾರಿಗಳು ಮುಂದಾಗಿದ್ದರು. ಈ ಕುರಿತು **ಉದಯವಾಹಿನಿ** ದಿನ ಪತ್ರಿಕೆಯಲ್ಲಿ ವರದಿ ಬಿತ್ತರಿಸಲಾಗಿತ್ತು.

ಅಧಿಕಾರಿಗಳು ಸಾರ್ವಜನಿಕ ಹಿತಾಸಕ್ತಿಯನ್ನು ಬದಿಗೊತ್ತಿ ಆಡಿದ್ದೆ ಆಟ ಮಾಡಿದ್ದೆ ಪಾಠ ಎನ್ನುವ ಸರ್ವಾಧಿಕಾರಿ ಧೋರಣೆಯನ್ನು ಅನುಸರಿಸುತ್ತಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶಕ್ಕೆ ಅಧಿಕಾರಿಗಳು ಗುರಿಯಾಗುತ್ತಿದ್ದಾರೆ ಎಂದು ರಸ್ತೆ ಮಧ್ಯದಲ್ಲಿ ವಿದ್ಯುತ್ ಸ್ಥಂಭ ಕಾಮಗಾರಿಗೆ ಸಾರ್ವಜನಿಕರ ಆಕ್ರೋಶ ಶೀರ್ಷಿಕೆ ಅಡಿಯಲ್ಲಿ ಸುದ್ದಿ ಪ್ರಕಟಣೆಗೊಂಡಿತ್ತು

ಪಟ್ಟಣದ 21ನೇ ವಾರ್ಡ್ ನಜೀರ್ ಸಾಬ್ ಕಾಲೋನಿಯಲ್ಲಿ ನಡೆಯುತ್ತಿರುವ ನೂತನ ರಸ್ತೆ ಅಭಿವೃದ್ಧಿ ಕಾಮಗಾರಿ ಯಲ್ಲಿ ನಡೆಯುತ್ತಿರುವ ಲೋಪದೋಷಗಳನ್ನು ಸರಿಪಡಿಸಬೇಕು.

ರಸ್ತೆ ಮಧ್ಯದಲ್ಲಿರುವ ವಿದ್ಯುತ್ ಸ್ತಂಭವನ್ನು ಸ್ಥಳಾಂತರಿಸಬೇಕು ವಾರ್ಡಿನ ಜನರ ಆಕ್ರೋಶವನ್ನು ಪ್ರಕಟಿಸಿ ಅಧಿಕಾರಿಗಳ ಗಮನ ಸೆಳೆಯಲಾಗಿತ್ತು, ಕೆಇಬಿ ಗುಲ್ಬರ್ಗ ವಿದ್ಯುತ್ ಸರಬರಾಜು ನಿಗಮ ನಿಯಮಿತ ಕಾರಟಗಿ ವಲಯದ ಜೆಇಯವರಾದ ಶ್ರೀಮತಿ ನೂರ್ ಫಾತಿಮಾ ಅವರು ರಸ್ತೆ ಡಾಂಬರೀಕರಣ ಕಾಮಗಾರಿ ನಡೆಸಿದಂತೆ ಪುರಸಭೆ ಅಧಿಕಾರಿಗಳಿಗೆ ಈ ಹಿಂದೆಯೇ ಸೂಚನೆ ನೀಡಿದರು.

ವಿದ್ಯುತ್ ಸ್ಥಂಭವನ್ನು ಸ್ಥಳಾಂತರಿಸುವವರೆಗೆ ರಸ್ತೆ ಅಭಿವೃದ್ಧಿ ಕಾರ್ಯ ಮಾಡಿದಂತೆ ತಿಳಿಸಿದ್ದರು ಆದರೆ ಪುರಸಭೆ ಅಧಿಕಾರಿಗಳು ಇದು ಯಾವುದನ್ನು ಲೆಕ್ಕಿಸದೆ ಗುತ್ತಿಗೆದಾರರಿಗೆ ಡಾಂಬರೀಕರಣ ಕಾಮಗಾರಿ ಪ್ರಾರಂಭಿಸಲು ಸೂಚನೆ ನೀಡಿರುವುದು ಯಾಕೆ ?

ಇವರಿಗೆ ಸಾರ್ವಜನಿಕ ಹಿತಾಸಕ್ತಿಯ ಅರಿವು ಇಲ್ಲವೇ ಎನ್ನುವಂತಾಗಿತ್ತು, ಪುರಸಭೆ ಅಧಿಕಾರಿಗಳು ಮಾಡಿರುವ ಎಡವಟ್ಟಿನಿಂದ ಕೆಇಬಿ ಅಧಿಕಾರಿಗಳಿಗೆ ತಲೆನೋವಾಗಿ ಪರಿಣಮಿಸಿತು, ಕೂಡಲೇ ಕೆಇಬಿ ಜೆಇ ಶ್ರೀಮತಿ ನೂರ್ ಫಾತಿಮಾ ಅವರು ಲೈನ್ ಮ್ಯಾನ್ ಗಳ ಮೂಲಕ ರಸ್ತೆ ಮಧ್ಯದಲ್ಲಿರುವ ವಿದ್ಯುತ್ ಸ್ಥಂಭವನ್ನು ಸ್ಥಳಾಂತರಿಸಿ ಕರ್ತವ್ಯ ಪ್ರಜ್ಞೆ ಮೆರೆದಿದ್ದಾರೆ.




ಉದಯವಾಹಿನಿ ಚಿತ್ರ


ಸಾರ್ ನನಗೇನು ಗೊತ್ತಿಲ್ಲ! ನಂದು ಈ ಊರಲ್ಲಾ!
ಪುರಸಭೆಯ ಅಧಿಕಾರಿಗಳು ಹೇಳಿದಂತೆ ಮಾಡೋದೇ ನನ್ನ ಕೆಲಸ!
ರಸ್ತೆ ಮಧ್ಯದಲ್ಲಿ ವಿದ್ಯುತ್ ಸ್ಥಂಭ: ಕಾಮಗಾರಿಗೆ ಆಕ್ರೋಶ
ಸ್ಥಂಭವನ್ನು ಸ್ಥಳಾಂತರಿಸಬೇಕು

ಉದಯವಾಹಿನಿ ಫಲಶ್ರುತಿ IMPACT

## ಶ್ರೀವೀರಭದ್ರೇಶ್ವರ ಜಾತ್ರಾಮಹೋತ್ಸವದ ರಥೋತ್ಸವ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಸುಲೇಪೇಟ ಗ್ರಾಮದ ನೂರಾರು ವರ್ಷಗಳ ಇತಿಹಾಸವುಳ್ಳ ಶ್ರೀವೀರಭದ್ರೇಶ್ವರ ದೇವರ ಏ.26 ರಂದು ಅದ್ದೂರಿಯಾಗಿ ರಥೋತ್ಸವ ನಡೆಯಲಿದೆ ಎಂದು ಗ್ರಾಮದ ಸಮಿತಿ ಮುಖಂಡ ಮಲ್ಲಿಕಾರ್ಜುನ ದೇಸಾಯಿ ತಿಳಿಸಿದ್ದಾರೆ. ಶ್ರೀ ವೀರಭದ್ರೇಶ್ವರ ದೇವಾಸ್ಥಾನದ ಸಮಿತಿ ವತಿಯಿಂದ ಕರೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಜಾತ್ರಾ ಮಹೋತ್ಸವ ಪ್ರಯುಕ್ತ ಏ.24ರಂದು 2009ನೇ ಎಸ್‌ಎಸ್‌ಎಲ್‌ಸಿ ಬ್ಯಾಚ್ ಯಿಂದ ವೀರಗಾಸೆ ಪುರವಂತರ ಸೇವೆ,ಏ.25ರಂದು ಬೆಳಿಗ್ಗೆ 8ಗಂಟೆಗೆ ಅಗ್ನಿ ಕುಂಡ ಪೂಜೆ ಹಾಗೂ ಸಾಯಂಕಾಲ 7ಗಂಟೆಗೆ ಗ್ರಾಮದ ಸುಮಂಗಲಿಯರಿಂದ ದೀಪೋತ್ಸವ ಕಾರ್ಯಕ್ರಮ ಜರಗುವುದು.

ಏ.26ರಂದು ಬೆಳಿಗ್ಗೆ 7ಗಂಟೆಗೆ ಸಾವಿರಾರು ಭಕ್ತರ ಸಮ್ಮೂಹದಲ್ಲಿ ಪ್ರಭಾವಳಿ ಉತ್ಸವ ನಡೆಯಲಿದೆ ಅಂದು ಸಂಜೆ 6ಗಂಟೆಗೆ ತೇರ್ ಮೈದಾನದಲ್ಲಿ 6ಗಂಟೆಗೆ ಬೃಹತ್ ರಥೋತ್ಸವ ನಡೆಯಲಿದೆ,ಸುಲೇಪೇಟ ವ್ಯಾಪಾರಸ್ಥರಿಂದ ಅನ್ನದಾಸೋಹ ನಡೆಯಲಿದೆ,ಮತ್ತು ರಾತ್ರಿ 10ಗಂಟೆಗೆ ಉಚ್ಚಾಯಿ ಮೇರವಣಿಗೆ ಮತ್ತು ಭಜನೆ,ಕಿರ್ತನೆ ಹಾಗೂ ಪ್ರಸಿದ್ಧ ಗಾಯಕರಿಂದ ಸಂಗೀತಾ ಲವಾಣಿ, ಗಿಗಿಪದ ವಿವಿಧ ಮನೋರಂಜನಾ ಕಾರ್ಯಕ್ರಮ ನಡೆಯಲಿದೆ, ಏ.27ರಂದು ಬೆಳಿಗ್ಗೆ ಮತ್ತು ಸಾಯಂಕಾಲ ಜಂಗ್ಗಿ ಕುಸ್ತಿ ರಾತ್ರಿ ಓಕಳಿ ಮದ್ದು ಸುಡುವುದು,ರಾಕಿಬಾಯಿ ಗೆಳೆಯರ ಬಳಗದಿಂದ ಸಾಯಂಕಾಲ 7:30ಕ್ಕೆ ಹಾಸ್ಯ ಪ್ರದರ್ಶನ ಮತ್ತು ಸಂಗೀತ ಕಾರ್ಯಕ್ರಮ ನೃತ್ಯ ಪ್ರದರ್ಶನ ಕಾರ್ಯಕಮಗಳು ನಡೆಯಲಿವೆ.



ಉದಯವಾಹಿನಿ ಚಿತ್ರ

ಈ ಸಕಲ ಕಾರ್ಯಕ್ರಮದಲ್ಲಿ ಸುತ್ತಮುತ್ತಲಿನ ಗ್ರಾಮಗಳು ಸರ್ವ ಭಕ್ತರು ಬಂದು ಜಾತ್ರೆ ಯಶಸ್ವಿಗೋಳಿಸಿ ವೀರಭದ್ರೇಶ್ವರ ದೇವರ ದರ್ಶನ ಪಡೆದು ಪುನೀತರಾಗಬೇಕು ಎಂದರು.

ಈ ಸಂದರ್ಭದಲ್ಲಿ ಮುರಗೆಪ್ಪಾ ಕುಕಡಿ, ಶರಣಬಸಪ್ಪಾ ಪಡಶೆಟ್ಟಿ,ರಮೇಶ ದೇಸಾಯಿ, ನಾಗೇಶ ಚಾಂಗಲೇರ್, ಸಿದ್ದಯ್ಯಸ್ವಾಮಿ ಖಜ್ಜಿ, ಚೇತನಕುಮಾರ ಅಣವಾರ ಇದ್ದರು.

## ಕಾಂಗ್ರೆಸ್ ಸದಸ್ಯತ್ವ ಸ್ಥಾನಕ್ಕೆ ಅಂಗಡಗೇರಿ ರಾಜಿನಾಮೆ

### ● ಸಿ.ಎಸ್.ನಾಡಗೌಡರ ಬಳಿ ತೆರಳಿ ಬಹಿರಂಗವಾಗಿಯೇ ರಾಜೀನಾಮೆ

• ಉದಯವಾಹಿನಿ ಮುದ್ದೇಬಿಹಾಳ

ಪುರಸಭೆ ಮಾಜಿ ಅಧ್ಯಕ್ಷೆ, ಹಾಲಿ ಸದಸ್ಯೆ, ತಾಲ್ಲೂಕು ಕಾಂಗ್ರೆಸ್ ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿ ಪ್ರತಿಭಾ ರುದ್ರಗೌಡ ಅಂಗಡಗೇರಿ ಅವರು ಕಾಂಗ್ರೆಸ್ ಪಕ್ಷದ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದಾರೆ. ಬುಧವಾರ ಬೆಳಿಗ್ಗೆ ಹುಡ್ಕೋದ ಹಸಿರು ತೋರಣ ಗಾರ್ಡನ್‌ನಲ್ಲಿ ಪುರಸಭೆ ವತಿಯಿಂದ ಏರ್ಪಡಿಸಿದ್ದ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿದ್ದ ಶಾಸಕ, ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಸಿ.ಎಸ್. ನಾಡಗೌಡರ ಬಳಿ ತೆರಳಿ ಬಹಿರಂಗವಾಗಿಯೇ ತಮ್ಮ ರಾಜೀನಾಮೆ ಪತ್ರ ಸಲ್ಲಿಸಿದರು. ಪತ್ರ ಸ್ವೀಕರಿಸಿದ ನಾಡಗೌಡರು ಆಯ್ತು, ನೋಡೋಣ ಎಂದಷ್ಟೇ ಹೇಳಿ ಸ್ಥಳದಿಂದ ನಿರ್ಗಮಿಸಿದರು.

ಪುರಸಭೆ ಮುಖ್ಯಾಧಿಕಾರಿ, ಸಿಬ್ಬಂದಿಯವರು ಯಾವುದೇ ಕೆಲಸ ಕಾರ್ಯಗಳನ್ನು ಸರಿಯಾಗಿ ನಿರ್ವಹಿಸುತ್ತಿಲ್ಲ. ನಿಖರವಾದ ಮಾಹಿತಿಗಳನ್ನು ಕೊಡುತ್ತಿಲ್ಲ. ಈ ಕುರಿತು ಹಲವು ಬಾರಿ ನಿಮ್ಮ (ಶಾಸಕರ) ಗಮನಕ್ಕೆ ತಂದರೂ ಪ್ರಯೋಜನವಾಗಿಲ್ಲ. ಇದರಿಂದ ನೊಂದು ಸ್ವ ಇಚ್ಛೆಯಿಂದ ಪಕ್ಷದ ಸದಸ್ಯತ್ವಕ್ಕೆ ರಾಜೀನಾಮೆ ನೀಡುತ್ತಿರುವುದಾಗಿ ಪತ್ರದಲ್ಲಿ ತಿಳಿಸಿದ್ದಾರೆ. ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ, ಸ್ಥಾಯಿ ಸಮಿತಿ ಅಧ್ಯಕ್ಷ ಯಲ್ಲಪ್ಪ ನಾಯ್ಕಮಕ್ಕಳ, ಉಪಾಧ್ಯಕ್ಷೆ ಪ್ರೀತಿ ದೇಗಿನಾಳ, ಕಾಂಗ್ರೆಸ್‌ನ ಪುರಸಭೆ ಸದಸ್ಯರು, ಹಸಿರು ತೋರಣ ಬಳಗದ ಪದಾಧಿಕಾರಿಗಳು, ಸದಸ್ಯರು, ಸಾರ್ವಜನಿಕರು ಇದ್ದರು.



ಉದಯವಾಹಿನಿ ಚಿತ್ರ

5 ವರ್ಷಗಳ ಹಿಂದೆ ಪುರಸಭೆಗೆ ಚುನಾವಣೆ ನಡೆದಾಗ ಜೆಡಿಎಸ್ ಪಕ್ಷದಿಂದ ಆಯ್ಕೆಯಾಗಿದ್ದ ಪ್ರತಿಭಾ ಅವರು ತಮ್ಮ ಹತ್ತಿರದ ಬಂಧುಗಳೂ ಆಗಿರುವ ನಾಡಗೌಡರಿಗೆ ಬೆಂಬಲ ಸೂಚಿಸಿ ಕಾಂಗ್ರೆಸ್ ಸೇರ್ಪಡೆಗೊಂಡರು. ನಂತರ ಪುರಸಭೆಯ ಮೊದಲ ಅವಧಿಗೆ ಅಧ್ಯಕ್ಷರಾಗಿ ಆಯ್ಕೆಯಾಗಿ ಕಾರ್ಯನಿರ್ವಹಿಸಿದ್ದರು.

ನಾಡಗೌಡರ ಆಪ್ತ ಬಳಗದಲ್ಲಿದ್ದ ಪ್ರತಿಭಾ ಅವರ ರಾಜೀನಾಮೆ ಪಕ್ಷದ ಆಂತರಿಕ ವಲಯದಲ್ಲಿ ಸಂಚಲನ ಮೂಡಿಸಿದ್ದು ಸಾಕಷ್ಟು ಚರ್ಚೆಗೆ ಅವಕಾಶ ಮಾಡಿಕೊಟ್ಟಿದೆ.

**ಸಾಕಷ್ಟು ಚರ್ಚೆಗೆ ಅವಕಾಶ**

ಶಾಸಕರಿಗೆ ಪತ್ರ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆಯೂ ರಾಜೀನಾಮೆ ಪ್ರಸ್ತಾಪ ಇಡಲಾಗಿತ್ತು. ಪುರಸಭೆಯಲ್ಲಿ ವ್ಯವಸ್ಥೆ ಸರಿ ಹೋಗುವ ನಿರೀಕ್ಷೆ ಇತ್ತು. ಆದರೆ ಸಮಸ್ಯೆಯನ್ನು ಬಗೆಹರಿಸಲು ಗಂಭೀರವಾಗಿ ಪ್ರಯತ್ನಿಸದಿರುವುದರಿಂದ ನೊಂದುಕೊಂಡು ರಾಜೀನಾಮೆ ನೀಡಿದ್ದೇನೆ. ಪಕ್ಷದ ಬ್ಲಾಕ್ ಅಧ್ಯಕ್ಷರು ಸೇರಿ ಸಂಬಂಧಿಸಿದವರೆಲ್ಲರಿಗೂ ರಾಜೀನಾಮೆ ಪತ್ರ ಕಳಿಸುತ್ತೇನೆ. ಪಕ್ಷದ ಎಲ್ಲಾ ಚಟುವಟಿಕೆಗಳಿಂದ ತಟಸ್ಥಳಾಗಿ ಉಳಿಯುತ್ತೇನೆ ಎಂದು ಗದ್ಗದಿತರಾಗಿ ತಿಳಿಸಿದರು.


## ಏ.27ರಂದು ಶಿಕ್ಷಣ ಶಿಲ್ಪಿ ಅಭಿನಂದನ ಗ್ರಂಥ ಲೋಕಾರ್ಪಣೆ

• ಉದಯವಾಹಿನಿ ಮುದ್ದೇಬಿಹಾಳ

ತಾಲ್ಲೂಕಿನ ನೆರಬೆಂಚಿಯ ಬಹುಮುಖ ವ್ಯಕ್ತಿತ್ವದ ನಿವೃತ್ತ ಶಿಕ್ಷಕ, ವಾಸ್ತು ತಜ್ಞ, ಸ್ಥಳೀಯ ಎಚ್ಚರೇಶ್ವರ ದೇವಸ್ಥಾನದ ಪ್ರಪ್ರಥಮ ಕಬ್ಬಿಣದ ತೇರು ನಿರ್ಮಾಣದ ಪ್ರೋತ್ಸಾಹಕ, ಶರಣ ಸಂಸ್ಕೃತಿಯ ಪರಿಪಾಲಕ ಎನ್.ಎಸ್.ಪೋಲೇಶಿ ಅವರ ಕುರಿತು ಸಂಪಾದಿಸಲಾದ ಶಿಕ್ಷಣ ಶಿಲ್ಪಿ ಅಭಿನಂದನಾ ಗ್ರಂಥದ ಲೋಕಾರ್ಪಣೆ ಸಮಾರಂಭವನ್ನು ಸಾರ್ಥಕ ರೂಪದಲ್ಲಿ ನೆರವೇರಿಸಲು ತೀರ್ಮಾನಿಸಲಾಗಿದೆ ಎಂದು ಗ್ರಂಥ ಸಂಪಾದಕ, ಎಂಜಿವಿಸಿ ಕಾಲೇಜಿನ ಕನ್ನಡ ಪ್ರಾಧ್ಯಾಪಕ ಡಾ.ಪ್ರಕಾಶ ನರಗುಂದ ತಿಳಿಸಿದರು. ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿ ಮಾಹಿತಿ ನೀಡಿದ ಅವರು, ಅಪಾರ ಶಿಷ್ಯಬಳಗ ಹೊಂದಿರುವ ಪೋಲೇಶಿ ಗುರುಗಳ ಬಗ್ಗೆ ನಾಡಿನ ಹೆಸರಾಂತ ಧರ್ಮದರ್ಶಿಗಳು, ಮಠಾಧೀಶರು, ಸ್ವಾಮೀಜಿಗಳು, ಗಣ್ಯರು, ಸಾಹಿತಿಗಳು, ಬರಹಗಾರರು, ಉನ್ನತ ಹುದ್ದೆಗಳಲ್ಲಿರುವ ಅವರ ಶಿಷ್ಯಂದಿರ ಬರಹಗಳನ್ನು ಗ್ರಂಥದಲ್ಲಿ ಸಂಗ್ರಹಿಸಿಡಲಾಗಿದೆ ಎಂದರು.

ಏ.27ರಂದು ಬೆಳಿಗ್ಗೆ 10-30 ಗಂಟೆಗೆ ನೆರಬೆಂಚಿಯ ಎಚ್ಚರಸ್ವಾಮಿ ದೇವಸ್ಥಾನ ಆವರಣದಲ್ಲಿ ಗ್ರಂಥ ಲೋಕಾರ್ಪಣೆ, 208ನೇ ಶಿವಾನುಭವ ಗೋಷ್ಠಿ ನಡೆಯಲಿದೆ. ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಗುರುಪೀಠದ ಶ್ರೀ ಬಸವಜಯ ಮೃತ್ಯುಂಜಯ ಸ್ವಾಮೀಜಿ, ಇಟಗಿ ಭೂಕೈಲಾಸ ಮೇಲುಗದ್ದುಗೆ ಹಿರೇಮಠದ ಡಾ।ಗುರುಶಾಂತ ಶಿವಾಚಾರ್ಯರು ದಿವ್ಯಸಾನಿಧ್ಯ, ಹಿರೇಮುರಾಳ ಗ್ರಾಮ ಪಂಚಾಯಿತಿ ಅಧ್ಯಕ್ಷ ಸಂಗಯ್ಯ ಹಾಲಗಂಗಾಧರಮಠ ಅಧ್ಯಕ್ಷತೆ ವಹಿಸುವರು. ಎಸ್‌ಜಿವಿಸಿ ವಿದ್ಯಾಪ್ರಸಾರಕ ವಿಶ್ವಸ್ಥನಿಧಿಯ ಕಾರ್ಯದರ್ಶಿಗಳಾದ ಅಶೋಕ ತಡಸದ ಉದ್ಘಾಟಿಸುವರು. ಧಾರವಾಡದ ಹಿರಿಯ ಸಾಹಿತಿ, ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ.ಸಂಗಮನಾಥ ಲೋಕಾಪುರ ಅವರು ಕೃತಿ ಪರಿಚಯ ಮಾಡಿಕೊಡುವರು. ಆಲೂರಿನ ಗಣ್ಯರಾದ ಗುರುಲಿಂಗಪ್ಪಗೌಡ ಹಿರೇಗೌಡರ, ನಾಲತವಾಡ ಶರಣ ವೀರೇಶ್ವರ ಪದವಿಪೂರ್ವ ಕಾಲೇಜಿನ ನಿವೃತ್ತ ಪ್ರಾಚಾರ್ಯ ಎಸ್.ಎನ್. ಕಂಗಳ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಆಲೂರಿನ ಶರಣಮ್ಮ ಹಿರೇಗೌಡರ ಉಪಸ್ಥಿತರಿರುವರು.

ಬೂದಿಹಾಳದ ಗಂಗಾಯಪೀಠದ ಸ್ವಾಮೀಜಿ, ಹಿರೇಮುರಾಳದ ಶಿವಣ್ಣಶರಣರು ಗುಡಗುಂಟಿ, ಅಗಸಬಾಳದ ಬಸನಗೌಡ ಪಾಟೀಲ, ಚಿರ್ಚನಕಲ್ಲನ ಡಾ.ರಾಜಶೇಖರ ಹತ್ತರಸಂಗ, ನಿವೃತ್ತ ಪ್ರಾಚಾರ್ಯ ಬಿ.ಪಿ.ಪಾಟೀಲ, ನಿವೃತ್ತ ಮುಖ್ಯಾಧ್ಯಾಪಕ ಜಿ.ಎಚ್.ಪಾಟೀಲ, ಎಂ.ಎಸ್.ಬಿರಾದಾರ, ವಾಗ್ಮಿ ಪರಶುರಾಮ ಚೌಡಕೇರ ಅನುಭವ ಗೋಷ್ಠಿ ನಡೆಸಿಕೊಡಲಿದ್ದಾರೆ ಎಂದು ತಿಳಿಸಿದರು. ಈ ಭಾಗದಲ್ಲಿ ಇದೊಂದು ವಿನೂತನ ಸಮಾರಂಭವಾಗಿರಲಿದ್ದು ಸಾರ್ವಜನಿಕರು, ಪೋಲೇಶಿ ಅವರ ಶಿಷ್ಯಬಳಗದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಡಾ.ಪ್ರಕಾಶ ಮನವಿ ಮಾಡಿದರು.




ಉದಯವಾಹಿನಿ ಚಿತ್ರ

## 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ

• ಉದಯವಾಹಿನಿ, ಚಿತ್ರದುರ್ಗ

2020-26ನೇ ಸಾಲಿನಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಅಜಾದ್ ಮಾದರಿ ಶಾಲೆಗಳಿಗೆ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಆನ್‌ಲೈನ್‌ನಲ್ಲಿ ಸೇವಾಸಿಂಧು ತಂತ್ರಾಂಶದ ಮೂಲಕ ಸಲ್ಲಿಸಬಹುದಾಗಿರುತ್ತದೆ. ಮೇ 10 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಶಾಲೆಗಳು ಹಾಗೂ ಅಲ್ಪಸಂಖ್ಯಾತರ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು. ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in ನಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

## ಭಾರಿ ಗಾಳಿಗೆ ಮೇಲ್ಛಾವಣಿ ತಗಡು ಹಾರಿ ಬಿದ್ದು ಮಹಿಳೆ ಸಾವು

• ಉದಯವಾಹಿನಿ, ವಿಜಯಪುರ

ಭಾರಿ ಗಾಳಿಗೆ ಪತ್ರಾಸ ಮನೆಯ ಮೇಲ್ಛಾವಣಿ ತಗಡು ಹಾರಿ, ಮಹಿಳೆಯ ಮೇಲೆ ಬಿದ್ದ ಪರಿಣಾಮ ಮಹಿಳೆ ಸಾವಿಗೀಡಾದ ಘಟನೆ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಇಂಗಳೇಶ್ವರ ಗ್ರಾಮದಲ್ಲಿ ನಡೆದಿದೆ. ಕೊಪ್ಪ ತಾಂಡಾ ನಿವಾಸಿ ಸುನೀತಾ ಕಾಂತು ರಾಠೋಡ (35) ಮೃತಪಟ್ಟ ದುರ್ದೈವಿ. ಸುನೀತಾ ರಾಠೋಡ ಮನೆಯ ಹೊರಗೆ ಇದ್ದ ವೇಳೆ ಜೋರಾದ ಗಾಳಿ ಬೀಸಿದಕ್ಕೆ, ಮೇಲ್ಛಾವಣಿ ತಗಡು ಹಾರಿ ಬಿದ್ದು, ತೀವ್ರ ಪೆಟ್ಟಾಗಿ ಅಸುನೀಗಿದ್ದಾಳೆ. ಬಸವನಬಾಗೇವಾಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಗಾಂಜಾ ಮಾರಾಟ: ಇಬ್ಬರ ಬಂಧನ

• ಉದಯವಾಹಿನಿ ಕಲಬುರಗಿ

ಸಬ್-ಅರ್ಬನ್ ಪೊಲೀಸರು ಕಾರ್ಯಾಚರಣೆ ನಡೆಸಿ ಇಬ್ಬರನ್ನು ಬಂಧಿಸಿ 6.50 ಲಕ್ಷ ರೂ.ಮೌಲ್ಯದ 6.915 ಕೆಜಿ ನಿಷೇಧಿತ ಗಾಂಜಾ ವಶಪಡಿಸಿಕೊಂಡಿದ್ದಾರೆ. ಆಜಾದಪುರ ರಸ್ತೆಯ ಉಮರ್ ಕಾಲೋನಿಯ ಶಹಾಬಾಜ್ ತಂದೆ ಅಬ್ದುಲ್ ರಶೀದ್ (30) ಮತ್ತು ಹಾಗರಗಾ ರಸ್ತೆಯ ಅಮನ್ ನಗರದ ಬಾನು ಗಂಡ ಮಹ್ಮದ್ ಇಸ್ಮಾಯಿಲ್ (31) ಬಂಧಿತ ಆರೋಪಿಗಳಾಗಿದ್ದಾರೆ. ಉಮರ್ ಕಾಲೋನಿಯ ಅಬ್ಬು ಶೇಖ್ ಅಲಿಯಾಸ್ ಸ್ಪೀಡ್ ಅಬ್ಬು ತಂದೆ ನವಾಬ್ ಶೇಖ್, ಬಾಪು ನಗರದ ರಮೇಶ ತಂದೆ ವಿಜಯಕುಮಾರ ಕಾಳೆ ಎಂಬುವವರಿಗೆ ಮಾರಾಟ ಮಾಡಲು ಮಹಾರಾಷ್ಟ್ರ ರಾಜ್ಯದ ಜಲಗಾಂವದಿಂದ ನಿಷೇಧಿತ ಗಾಂಜಾ ತಂದಿರುವುದಾಗಿ ಆರೋಪಿಗಳು ವಿಚಾರಣೆ ವೇಳೆ ಒಪ್ಪಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಶಹಾಬಾಜ್ ಮತ್ತು ಬಾನು ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದ್ದು, ಅಬ್ಬು ಶೇಖ್ ಮತ್ತು ರಮೇಶ ಕಾಳೆ ವಿರುದ್ಧ ಸಬ್-ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ನಗರದಲ್ಲಿ ನಡೆಯುವ ಅಪರಾಧ ಹಾಗೂ ಅಕ್ರಮ ಚಟುವಟಿಕೆಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ನಗರ ಪೊಲೀಸ್ ಆಯುಕ್ತರಾದ ಡಾ.ಶರಣಪ್ಪ ಎಸ್.ಡಿ.ಅವರ ನಿರ್ದೇಶನದಂತೆ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ ಅವರ ಮಾರ್ಗದರ್ಶನದಲ್ಲಿ ಉತ್ತರ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಚಂದ್ರಶೇಖರ ಜಿ.ಅವರ ನೇತೃತ್ವದಲ್ಲಿ ಸಬ್-ಅರ್ಬನ್ ಪೊಲೀಸ್ ಠಾಣೆಯ ಪಿಐ ಸಂತೋಷ ಎಲ್. ತಟ್ಟೆಪಳ್ಳಿ, ಸಿಬ್ಬಂದಿಗಳಾದ ಫಿರೋಜ್, ಶಶಿಕಾಂತ, ಮಹಾಂತೇಶ ಅವರನ್ನು ಒಳಗೊಂಡ ತಂಡ ಕಾರ್ಯಾಚರಣೆ ನಡೆಸಿ ನಗರದ ಲಂಗಾರ ಹನುಮಾನ ಗುಡಿ ಹತ್ತಿರ ಗಾಂಜಾ ಮಾರಾಟ ಮಾಡುತ್ತಿದ್ದ ವೇಳೆ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

### ಮುಂದಿನ ದಿನಗಳಲ್ಲಿ ಹುಬ್ಬಳ್ಳಿ ಅಥವಾ ಬೆಳಗಾವಿಯಲ್ಲಿ ಉದ್ಯೋಗ ಮೇಳ ಆಯೋಜನೆ

# ಪ್ರತಿ ಜಿಲ್ಲೆಯಲ್ಲಿ ಮಲ್ಟಿ ಸ್ಕೀಲಿಂಗ್ ಸೆಂಟರ್ ಸ್ಥಾಪನೆ

• ಉದಯವಾಹಿನಿ ಹುಬ್ಬಳ್ಳಿ

ಪ್ರತಿ ಜಿಲ್ಲೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜ್, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಟ್ರಾಮಾ ಸೆಂಟರ್ ಹಾಗೂ ಕ್ಯಾನ್ಸರ್ ಸೆಂಟರ್ ಸ್ಥಾಪನೆ ಮಾಡಲು ಯೋಜನೆ ಹಾಕಿಕೊಳ್ಳಲಾಗಿದೆ. ಮೂರು ವರ್ಷದಲ್ಲಿ ಸ್ಥಾಪನೆ ಮಾಡುವ ಗುರಿ ಹೊಂದಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಹೇಳಿದರು.

ಕೆಎಂಸಿಆರ್‌ಐನ ಗೋಲ್ಡನ್ ಜುಬ್ಲಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಮೈಸೂರು, ಕೊಪ್ಪಳ ಹಾಗೂ ಕಲ್ಬುರ್ಗಿ ಜಿಲ್ಲೆಯ ಸ್ಥಾಪಿಸಲಾಗಿರುವ ಮಲ್ಟಿ ಸ್ಕಿಲಿಂಗ್ ಸೆಂಟರ್ ನಂತೆ ಪ್ರತಿ ಜಿಲ್ಲೆಯಲ್ಲಿ ಮಲ್ಟಿ ಸ್ಕಿಲಿಂಗ್ ಸೆಂಟರ್ ಸ್ಥಾಪನೆ ಮಾಡಲಾಗುವುದು. ಈಗಾಗಲೇ ಹಲವು ಜಿಲ್ಲೆಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ. ಮುಂದಿನ ಒಂದು ವರ್ಷದಲ್ಲಿ ಜಯದೇವ ಆಸ್ಪತ್ರೆ ನಿರ್ಮಿಸಲಾಗುವುದು.

ಮುಂದಿನ ದಿನಗಳಲ್ಲಿ ಹುಬ್ಬಳ್ಳಿ ಅಥವಾ ಬೆಳಗಾವಿಯಲ್ಲಿ ಉದ್ಯೋಗ ಮೇಳ ಆಯೋಜನೆ ಮಾಡಲಾಗುವುದು. ಕಲಿಕೆ ಜೊತೆ ಕೌಶಲ್ಯ ಯೋಜನೆಯನ್ನು ಜಾರಿಗೆ ತರಲಾಗಿದೆ. 800 ಪದವಿ ಹಾಗೂ 750 ಸ್ನಾತಕೋತ್ತರ ಪದವಿ ಮೆಡಿಕಲ್ ಸೀಟ್ ನೀಡುವಂತೆ ರಾಷ್ಟ್ರೀಯ ಮೆಡಿಕಲ್ ಆಯೋಗಕ್ಕೆ ಮನವಿ ಮಾಡಲಾಗಿದೆ. ಬಜೆಟ್‌ನಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿ ಹೆಚ್ಚಿನ ಅನುದಾನ ಒದಗಿಸಲಾಗಿದೆ ಎಂದರು.

ಸುಮಾರು ರೂ.6 ಕೋಟಿ ವೆಚ್ಚದಲ್ಲಿ ಆಡಿಟೋರಿಯಂ ನಿರ್ಮಿಸಲಾಗಿದೆ. ಸುಮಾರು 25 ಲಕ್ಷ ವೆಚ್ಚದಲ್ಲಿ ಜೀವಾಮೃತ ತಾಯಿ ಹಾಲು ಭಂಡಾರ ತೆರೆಯಲಾಗಿದೆ. ರೂ.90 ಲಕ್ಷದಲ್ಲಿ 300 ಆಸನವುಳ್ಳ ಮಲ್ಟಿ ಫಂಕ್ಷನ ಹಾಲ್ ಸ್ಥಾಪಿಸಲಾಗಿದೆ. ಕೃತಕ ಕಾಲು ಜೋಡಣೆ ಚಿಕಿತ್ಸಾ ಘಟಕ ತೆರೆಯಲಾಗಿದೆ.

ನರ್ಸಿಂಗ್ ಕಾಲೇಜ್ ಸಾಂಸ್ಕೃತಿಕ ಸಭಾಂಗಣವನ್ನು ರೂ.75 ಲಕ್ಷ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತಿದೆ. ರೂ.5 ಕೋಟಿ ಮೊತ್ತದಲ್ಲಿ ವಿದ್ಯಾರ್ಥಿ, ವಿದ್ಯಾರ್ಥಿನಿಯರ ವಸತಿ ನಿಲಯಗಳ ನವೀಕರಣ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ರೂ.5 ಕೋಟಿ ವೆಚ್ಚದಲ್ಲಿ ಅಗ್ನಿ ಅವಘಡ ಸುರಕ್ಷತಾ ವ್ಯವಸ್ಥೆ ಅಳವಡಿಸಲಾಗುತ್ತಿದೆ.

ರೂ.25 ಮೊತ್ತದಲ್ಲಿ ಹೊರರೋಗಿ ವಿಭಾಗದಲ್ಲಿ ನೋಂದಣಿ ಹೆಚ್ಚುವರಿ ಕೌಂಟರ್‌ಗಳ ಸ್ಥಾಪನೆ ಮಾಡಲಾಗುವುದು. ರೂ. 60 ಲಕ್ಷ ವೆಚ್ಚದಲ್ಲಿ ಹೊಸ ಮೂರು ಲಿಫ್ಟಗಳ ಅಳವಡಿಕೆ ಕಾಮಗಾರಿ ನಡೆಯುತ್ತಿದೆ. ಮುಖ್ಯ ಔಷಧಿ ಮಳಿಗೆ ಕಟ್ಟಡ ವಿಸ್ತರಣೆ ಹಾಗೂ ದುರಸ್ತಿ ಕಾಮಗಾರಿಯನ್ನು ರೂ.90 ಲಕ್ಷ ವೆಚ್ಚದಲ್ಲಿ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.



ಉದಯವಾಹಿನಿ ಚಿತ್ರ

**ಮೂರು ವರ್ಷದಲ್ಲಿ ಸ್ಥಾಪನೆ**

**ಕಿತ್ತೂರು ಕರ್ನಾಟಕ ಭಾಗದ ಜನರಿಗೆ ಉತ್ತಮ ಚಿಕಿತ್ಸೆ**

ಬೆಂಗಳೂರು ಹೊರತು ಪಡಿಸಿದರೆ ಹುಬ್ಬಳ್ಳಿಯ ಕೆಎಂಸಿಆರ್‌ಐನಲ್ಲಿ ಹೆಚ್ಚಿನ ಜನರು ಚಿಕಿತ್ಸೆ ಪಡೆಯುತ್ತಾರೆ. ಕೆಎಂಸಿಆರ್‌ಐನಲ್ಲಿ ಕಿತ್ತೂರು ಕರ್ನಾಟಕ ಭಾಗದ ಜನರಿಗೆ ಉತ್ತಮ ಚಿಕಿತ್ಸೆ ನೀಡಲಾಗುತ್ತಿದೆ. ಗುಣಮಟ್ಟದ ಔಷಧಿಗಳನ್ನು ಜನರಿಗೆ ಒದಗಿಸುವುದು ಸರ್ಕಾರದ ಮೂಲ ಉದ್ದೇಶವಾಗಿದೆ. ಆ ನಿಟ್ಟಿನಲ್ಲಿ ಔಷಧಿಗಳ ಕೊರತೆ ಆಗದಂತೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಬಿಪಿಎಲ್ ಕಾರ್ಡ್ ಹೊಂದಿದವರಿಗೆ ಉಚಿತ ಚಿಕಿತ್ಸೆ ನೀಡಲಾಗುತ್ತಿದೆ. ಎರಡು ವರ್ಷದಲ್ಲಿ 35 ಕಿಡ್ನಿ ಟ್ರಾನ್ಸಪ್ಲಾಂಟ್ ಮಾಡಲಾಗಿದೆ. ಅಲ್ಲದೇ ಸ್ಕಿನ್ ಬ್ಯಾಂಕ್ ಸ್ಥಾಪನೆ ಮಾಡಲಾಗುವುದು ಎಂದು ಅವರು ತಿಳಿಸಿದರು.

## ಸಿಡಿಲು ಬಡಿದು ಬಾಲಕಿ ಸಾವು

• ಉದಯವಾಹಿನಿ, ಬೆಳಗಾವಿ

ತಾಲ್ಲೂಕಿನ ಖನಗಾಂವ ಬಿ.ಕೆ ಗ್ರಾಮದಲ್ಲಿ ಬುಧವಾರ ಸಿಡಿಲು ಬಡಿದು ಬಾಲಕಿಯೊಬ್ಬಳು ಮೃತಪಟ್ಟಿದ್ದಾಳೆ. ಅಕ್ಷಾ ಮೆಹಬೂಬ್ ಜಮಾದಾರ (14) ಮೃತ ಬಾಲಕಿ. ಶಾಲೆಗೆ ಬೇಸಿಗೆ ರಜೆ ಇದ್ದ ಕಾರಣ. ಅಕ್ಷಾ ನಮಗೆ ಕೆಲಸಕ್ಕೆ ಸಹಾಯ ಮಾಡಲು ಕೃಷಿ ಭೂಮಿಗೆ ಬಂದಿದ್ದಳು. ಮೋಡ ಕವಿದ ವಾತಾವರಣ ಇದ್ದ ಕಾರಣ. ನಾವೆಲ್ಲರೂ ವಾಹನಗಳಲ್ಲಿ ಮನೆಗೆ ಮರಳುತ್ತಿದ್ದೆವು. ಆದರೆ, ಅಕ್ಷಾ ನಡೆದುಕೊಂಡು ಹೋಗಲು ಇಷ್ಟಪಟ್ಟಳು. ಗುಡುಗು ಸಹಿತವಾಗಿ ಮಳೆ ಆರಂಭವಾಯಿತು. ಇತರರೊಂದಿಗೆ ಮರದ ಕೆಳಗೆ ಆಶ್ರಯ ಪಡೆದಾಗ ಸಿಡಿಲು ಬಡಿದು ಸಾವನ್ನಪ್ಪಿದ್ದಾಳೆ ಎಂದು ತಂದೆ ಮೆಹಬೂಬ್ ಕಣ್ಣೀರು ಸುರಿಸಿದರು. ಬೆಳಗಾವಿ ನಗರ ಮತ್ತು ತಾಲ್ಲೂಕಿನ ಕೆಲವು ಭಾಗಗಳಲ್ಲಿ ಮಧ್ಯಾಹ್ನದ ಗುಡುಗು ಸಹಿತವಾಗಿ ಕೆಲಕಾಲ ಮಳೆಯಾಯಿತು. ಚನ್ನಮ್ಮನ ಕಿತ್ತೂರು ಮತ್ತು ರಾಮದುರ್ಗದಲ್ಲೂ ಮಳೆಯಾಯಿತು.

ಬಿರುಗಾಳಿಯಿಂದ ಬೆಳಗಾವಿ ತಾಲ್ಲೂಕಿನ ಮುತಗಾ ಗ್ರಾಮದ ಬಳಿ ಮರ ಉರುಳಿಬಿದ್ದು, ಬೆಳಗಾವಿ-ಬಾಗಲಕೋಟೆ ರಸ್ತೆಯಲ್ಲಿ ಸಂಚಾರ ಅಸ್ತವ್ಯಸ್ತವಾಯಿತು. ಪೊಲೀಸ್ ಸಿಬ್ಬಂದಿ ಮರ ತೆರವುಗೊಳಿಸಿ ರಸ್ತೆಯನ್ನು ಸಂಚಾರಕ್ಕೆ ಮುಕ್ತಗೊಳಿಸಿದರು.

# ಮದುವೆಯಾದ 7 ದಿನದಲ್ಲಿ ಪತ್ನಿ ಎದುರು ಪತಿ ಮೇಲೆ ಗುಂಡಿನ ದಾಳಿ

**ಚಂಡೀಗಢ:** ಮದುವೆ ಆಗಿ 7 ದಿನದಲ್ಲಿ ಕೊನೆಯ ವರೆಗೂ ಜೊತೆಯಲ್ಲಿ ಇರಬೇಕಾಗಿದ್ದ ಪತಿಯನ್ನ ಪತ್ನಿಯ ಕಣ್ಣೆದುರು ಗುಂಡಿಕ್ಕಿ ಕೊಲ್ಲುವುದನ್ನು ಯಾವ ಹೆಣ್ಣು ನೋಡಲು ಸಾಧ್ಯ. ಇಂತಹ ಸಂದರ್ಭ ಯಾವ ಹೆಣ್ಣಿಗೂ ಕೂಡ ಬರಬಾರದು. ಇಂತಹ ಕೃತ್ಯ ಎಸಗಿರುವವರನ್ನು ಕಂಡ ಕಂಡಲ್ಲಿ ಗುಂಡು ಹಾರಿಸಿ ಕೊಲ್ಲಬೇಕು. ಹೀಗಂತ ಇಡೀ ದೇಶವೇ ಸಾರಿ ಸಾರಿ ಹೇಳುತ್ತಿದೆ. ನಮ್ಮ ದೇಶದ ಜನರ ಪ್ರಾಣವನ್ನು ತೆಗೆದವರ ಪ್ರಾಣವನ್ನು ನೀವು ತೆಗೆಯಿರಿ ಎಂದು ಇಡೀ ದೇಶವೇ ಕೂಗಿ ಹೇಳುತ್ತಿದೆ. ಹೌದು ಜಮ್ಮು ಮತ್ತು ಕಾಶ್ಮೀರದಲ್ಲಿ ಉಗ್ರರ ಅಟ್ಟಹಾಸ ಎಲ್ಲೆ ಮೀರಿದೆ. ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ಹೇಡಿತನದ ದಾಳಿಯಲ್ಲಿ ಹಲವಾರು ಜನ ಪ್ರವಾಸಿಗರು ಪ್ರಾಣ ಕಳೆದುಕೊಂಡಿದ್ದಾರೆ. ಪ್ರವಾಸಿಗರನ್ನೇ ಗುರಿಯಾಗಿಸಿಕೊಂಡು ಭಯೋತ್ಪಾದಕರು ಗುಂಡಿನ ದಾಳಿ ಮಾಡಿದ್ದು ಭಾರತೀಯ ನೌಕಾಪಡೆಯ ಅಧಿಕಾರಿ ವಿನಯ್ ನರ್ವಾಲ್ ಈ ದಾಳಿಯಲ್ಲಿ ಉಸಿರು ಚೆಲ್ಲಿದ್ದಾರೆ. ಇನ್ನೂ ಬಾಳಿ ಬದುಕಬೇಕಿದ್ದ ವಿನಯ್ ನರ್ವಾಲ್ ಅವರನ್ನು ಪತ್ನಿ ಎದುರು ಗುಂಡಿಕ್ಕಿ ಕೊಲ್ಲಲಾಗಿದೆ. ಕೊಚ್ಚಿಯಲ್ಲಿ ನಿಯೋಜನೆಗೊಂಡಿದ್ದ ಭಾರತೀಯ ನೌಕಾಪಡೆ ಅಧಿಕಾರಿ ವಿನಯ್ ನರ್ವಾಲ್ ಅವರು ಏಪ್ರಿಲ್ 16 ರಂದು ವಿವಾಹವಾದರು.

ಏ. 22ರಂದು ಪಹಲ್ಗಾಮ್‌ನಲ್ಲಿ ಪತ್ನಿಯೊಂದಿಗೆ ಪ್ರವಾಸದಲ್ಲಿ ಇದ್ದಾಗ ಅವರ ಮೇಲೆ ಉಗ್ರರು ಗುಂಡು ಹಾರಿಸಿ ಅಟ್ಟಹಾಸ ಮೆರೆದಿದ್ದಾರೆ. ಭಯೋತ್ಪಾದಕರ ಈ ದಾಳಿಯಲ್ಲಿ 16 ಜನರು ಸಾವನ್ನಪ್ಪಿದ್ದು,



**ಜಮ್ಮು ಕಾಶ್ಮೀರದಲ್ಲಿ ಉಗ್ರರ ದಾಳಿಗೆ ಮತ್ತೊಬ್ಬ ಕನ್ನಡಿಗ ಬಲಿ ವಿನಯ್ ನರ್ವಾಲ್ ಮೂಲತಃ ಕರ್ನಾಲ್ ಜಿಲ್ಲೆಯ ಭುಸ್ಲಿ ಗ್ರಾಮದ ನಿವಾಸಿ. ಅವರ ಕುಟುಂಬ ಸೆಕ್ಟರ್ -7 ರಲ್ಲಿ ವಾಸಿಸುತ್ತಿದೆ. ಬಿ.ಟೆಕ್ ಮಾಡಿದ ನಂತರ ಅವರು ಭಾರತೀಯ ನೌಕಾಪಡೆಗೆ ಸೇರಿದರು. 3 ವರ್ಷಗಳ ಹಿಂದೆ ಲೆಫ್ಟಿನೆಂಟ್ ಆಗಿ ನೌಕಾಪಡೆಗೆ ಸೇರಿದರು. ಕೊಚ್ಚಿಯಲ್ಲಿ ಅವರ ಕರ್ತವ್ಯವಿತ್ತು. ವಿನಯ್ ಅವರ ತಂದೆ ಪಾಣಿಪತ್‌ನ ಕಸ್ಟಮ್ಸ್ ಇಲಾಖೆಯಲ್ಲಿ ಸೂಪರಿಂಟೆಂಡೆಂಟ್ ಆಗಿ ನೇಮಕಗೊಂಡಿದ್ದಾರೆ. ಅಜ್ಜ ಹವಾ ಸಿಂಗ್ ಹರಿಯಾಣ ಪೊಲೀಸ್ ಆಗಿದ್ದಾರೆ.**

**ಭಯೋತ್ಪಾದಕರ ಹೇಡಿತನದ ದಾಳಿ**

### ಏಪ್ರಿಲ್ 16 ರಂದು ಮದುವೆ

**ಹರಿಯಾಣದ ಲೆಫ್ಟಿನೆಂಟ್ ಅಧಿಕಾರಿಯಾದ ಬಳಿಕ ವಿನಯ್ ನರ್ವಾಲ್ ಅವರು ಏಪ್ರಿಲ್ 16 ರಂದು ಮದುವೆ ಮಾಡಿಕೊಂಡರು. ನಂತರ ಪತ್ನಿಯೊಂದಿಗೆ ಪಹಲ್ಗಾಮ್‌ಗೆ ತೆರಳಿದ್ದರು. ಈ ವೇಳೆ ಬಂದ ಉಗ್ರರು ಅವರ ಹೆಸರು ಕೇಳಿದ್ದಾರೆ. ಅವರು ಹಿಂದೂ ಎಂದು ಗೊತ್ತಾದ ಬಳಿಕ ಶೂಟ್ ಮಾಡಿ ಕಾಲ್ಕಿತ್ತಿದ್ದಾರೆ. ವಿನಯ್ ನರ್ವಾಲ್ ಅವರ ಪತ್ನಿ ಈ ಬಗ್ಗೆ ಹೇಳಿಕೊಂಡಿದ್ದಾರೆ. ನಾನು ನನ್ನ ಪತಿಯೊಂದಿಗೆ ಭೇಲ್ಪುರಿ ತಿನ್ನುತ್ತಿದ್ದೆ, ಅಷ್ಟರಲ್ಲಿ ಒಬ್ಬ ವ್ಯಕ್ತಿ ಬಂದನು. ನೀವು ಮುಸ್ಲಿಂ ಅಥವಾ ಹಿಂದೂನಾ' ಎಂದು ಹೇಳುತ್ತಿದ್ದಾರೆ. ನನ್ನ ಪತಿ ಮುಸ್ಲಿಂ ಅಲ್ಲ ಎಂದು ಹೇಳಿದರು. ನಂತರ ಅವನು ಪತಿಗೆ ಗುಂಡು ಹಾರಿಸಿದ. ಪ್ರಸ್ತುತ ವಿನಯ್ ಕುಟುಂಬ ಜಮ್ಮು ಮತ್ತು ಕಾಶ್ಮೀರಕ್ಕೆ ತೆರಳಿದೆ.**

ಹೈದರಾಬಾದ್‌ನಲ್ಲಿ ನಿಯೋಜಿತವಾಗಿದ್ದ ಐಬಿ ಸೆಕ್ಷನ್ ಅಧಿಕಾರಿ ಮನೀಶ್ ರಂಜನ್ ಕೂಡ ಭಯೋತ್ಪಾದಕ ದಾಳಿಯಲ್ಲಿ ಸಾವನ್ನಪ್ಪಿದ್ದಾರೆ. ಹೀಗೆ ತಮ್ಮವರನ್ನು ಕಳೆದುಕೊಂಡ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

ಪಹಲ್ಗಾಮ್‌ನಲ್ಲಿ ಭಯೋತ್ಪಾದಕ ದಾಳಿಯ ನಂತರ ಕಾಶ್ಮೀರದಲ್ಲಿನ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಶ್ರೀನಗರಕ್ಕೆ ಆಗಮಿಸಿದ್ದಾರೆ. ಪ್ರವಾಸಿಗರ ಮೇಲೆ ದಾಳಿ ನಡೆದ ಕೆಲವು ಗಂಟೆಗಳ ನಂತರ ಶಾ ಶ್ರೀನಗರ ತಲುಪಿದರು, ವಿಮಾನ ನಿಲ್ದಾಣದಿಂದ ನೇರವಾಗಿ ರಾಜಭವನಕ್ಕೆ ಹೋದರು. ಜಮ್ಮು ಮತ್ತು ಕಾಶ್ಮೀರ ಪೊಲೀಸ್ ಮಹಾನಿರ್ದೇಶಕ ನಳಿನ್ ಪ್ರಭಾತ್ ಅವರು ಗೃಹ ಸಚಿವರು ಸ್ಥಳಕ್ಕೆ ಆಗಮಿಸಿದಾಗ ಘಟನೆಯ ಬಗ್ಗೆ ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ, ಕೇಂದ್ರ ಗೃಹ ಕಾರ್ಯದರ್ಶಿ ಗೋವಿಂದ ಮೋಹನ್ ಮತ್ತು ಗುಪ್ತಚರ ಬ್ಯೂರೋ ನಿರ್ದೇಶಕ ತಪನ್ ದೇಕಾ ಉಪಸ್ಥಿತರಿದ್ದರು. ಕಾಶ್ಮೀರದ ಪಹಲ್ಗಾಮ್ ಪಟ್ಟಣದ ಪ್ರಸಿದ್ಧ ಮೈದಾನದಲ್ಲಿ ಮಂಗಳವಾರ ಮಧ್ಯಾಹ್ನ ಭಯೋತ್ಪಾದಕರು ಗುಂಡು ಹಾರಿಸಿ 26 ಜನರನ್ನು ಕೊಂದಿದ್ದಾರೆ. ಭಯೋತ್ಪಾದಕ ದಾಳಿಯಲ್ಲಿ ಸಾವನ್ನಪ್ಪಿದವರಲ್ಲಿ ಹೆಚ್ಚಿನವರು ಪ್ರವಾಸಿಗರಾಗಿದ್ದರು. ಈ ದಾಳಿಯನ್ನು 2019 ರ ಪುಲ್ವಾಮಾ ದಾಳಿಯ ನಂತರ ಕಣಿವೆಯಲ್ಲಿ ನಡೆದ ಅತ್ಯಂತ ಮಾರಕ ದಾಳಿ ಎನ್ನಲಾಗಿದೆ. ಮೃತರಲ್ಲಿ ಇಬ್ಬರು ವಿದೇಶಿಯರು ಮತ್ತು ಇಬ್ಬರು ಸ್ಥಳೀಯರು ಸೇರಿದ್ದಾರೆ.

## ಮಿನಿ ನ್ಯೂಸ್

### ಉಗ್ರರ ದಾಳಿಗೆ ಮೃತಪಟ್ಟ ಪ್ರವಾಸಿಗರಿಗೆ ಪಾಕಿಸ್ತಾನ ಸಂತಾಪ

**ಇಸ್ಲಾಮಾಬಾದ್:** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕ ದಾಳಿಯಲ್ಲಿ 26 ಮಂದಿ ಬಲಿತೆಗೆದುಕೊಂಡ ಪ್ರವಾಸಿಗರ ಸಾವಿಗೆ ಪಾಕಿಸ್ತಾನ ಸಂತಾಪ ಸೂಚಿಸಿದೆ.

ಜಮ್ಮು-ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯಲ್ಲಿ ನಡೆದ ದಾಳಿಯಲ್ಲಿ ಪ್ರವಾಸಿಗರು ಉಗ್ರರ ಗುಂಡಿನ ದಾಳಿಗೆ ಮೃತಪಟ್ಟ ಬಗ್ಗೆ ನಾವು ಕಳವಳ ವ್ಯಕ್ತಪಡಿಸುತ್ತೇವೆ. ಮೃತರ ಕುಟುಂಬಸ್ಥರು ಮತ್ತು ಸಮೀಪ ಬಂಧುಗಳಿಗೆ ಸಂತಾಪ ಸೂಚಿಸುತ್ತೇವೆ, ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸುತ್ತೇವೆ ಎಂದು ದಾಳಿಯ ಕುರಿತು ಮಾಧ್ಯಮ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ವಿದೇಶಾಂಗ ಕಚೇರಿಯ ವಕ್ತಾರರು ತಿಳಿಸಿದ್ದಾರೆ. ನಿನ್ನೆ ಮಧ್ಯಾಹ್ನ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ಹಾರಿಸಿದ ಗುಂಡಿನ ದಾಳಿಗೆ ಜಮ್ಮು-ಕಾಶ್ಮೀರಕ್ಕೆ ಪ್ರವಾಸ ತೆರಳಿದ್ದ 26 ಜನರು ಮೃತಪಟ್ಟ 2019 ರಲ್ಲಿ ಪುಲ್ವಾಮಾ ದಾಳಿಯ ನಂತರ ಕಣಿವೆಯಲ್ಲಿ ನಡೆದ ಅತ್ಯಂತ ಭೀಕರ ದಾಳಿ ಇದಾಗಿದೆ.

### ನಿರಾಶ್ರಿತರಿದ್ದ ಶಾಲೆ ಮೇಲೆ ಇಸ್ರೇಲ್ ದಾಳಿ: ಸಾವಿನ ಸಂಖ್ಯೆ 23ಕ್ಕೆ ಏರಿಕೆ

**ದೀರ್ ಅಲ್ ಬಲಾಹ್:** ಗಾಜಾ ಪಟ್ಟಣದಲ್ಲಿ ನಿರಾಶ್ರಿತರಿದ್ದ ಶಾಲೆಯ ಮೇಲೆ ಇಸ್ರೇಲ್ ರಾತ್ರೋರಾತ್ರಿ ನಡೆಸಿದ ದಾಳಿಯಲ್ಲಿ ಮೃತಪಟ್ಟವರ ಸಂಖ್ಯೆ 23ಕ್ಕೆ ಏರಿಕೆಯಾಗಿದೆ ಎಂದು ಗಾಜಾದ ಆರೋಗ್ಯ ಅಧಿಕಾರಿಗಳು ಬುಧವಾರ ಹೇಳಿದ್ದಾರೆ. ಇಸ್ರೇಲ್ ಹಾಗೂ ಗಾಜಾ ನಡುವಿನ ಯುದ್ಧವನ್ನು ಕೊನೆಗೊಳಿಸಲು 5ರಿಂದ 7 ವರ್ಷಗಳ ಅವಧಿಗೆ ಒಪ್ಪಂದ ಮಾಡಿಕೊಂಡು ಎಲ್ಲಾ ಒತ್ತೆಯಾಳುಗಳನ್ನು ಬಿಡುಗಡೆಗೊಳಿಸುವ ಬಗ್ಗೆ ಅರಬ್‌ನ ಮಧ್ಯಸ್ಥಿಕೆದಾರರು ಮಾತುಕತೆ ನಡೆಸುತ್ತಿರುವ ಬೆನ್ನಲ್ಲೇ ಈ ದಾಳಿ ನಡೆದಿದೆ.

ದಾಳಿ ಕುರಿತಂತೆ ಗಾಜಾದ ಆರೋಗ್ಯ ಸಚಿವಾಲಯದ ಅಧಿಕಾರಿ ಜಹೇರ್ ಅಲ್ ವಹೇದಿ ಮಾಹಿತಿ ನೀಡಿದ್ದು, ದಾಳಿಯಲ್ಲಿ ಗಾಯಗೊಂಡಿರುವವರನ್ನು ಶಿಫಾ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದಿದ್ದಾರೆ. ಆದರೆ, ಇಸ್ರೇಲ್ ಸೇನೆ ಈ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

### ಜಾಗ ತೆರವುಗೊಳಿಸಲು ಪರಿಶಿಷ್ಟ ಕುಟುಂಬಗಳಿಗೆ ನೀಡಿದ್ದ ನೋಟಿಸ್ ರದ್ದು

**ಹಾಪುಡ:** ಉತ್ತರ ಪ್ರದೇಶದ ಗಢಮುಕ್ತೇಶ್ವರದಲ್ಲಿ ಪರಿಶಿಷ್ಟ ಜಾತಿ ಕುಟುಂಬಗಳು ಅಕ್ರಮವಾಗಿ ಜಾಗ ಒತ್ತುವರಿ ಮಾಡಿಕೊಂಡ ಆರೋಪದ ಮೇರೆಗೆ ಆ ಜಾಗ ತೆರವುಗೊಳಿಸುವಂತೆ ಸೂಚಿಸಿ ನೀಡಲಾಗಿದ್ದ ನೋಟಿಸ್ ಅನ್ನು ಹಾಪುಡ ಜಿಲ್ಲಾಡಳಿತವು ತಾತ್ಕಾಲಿಕವಾಗಿ ರದ್ದುಗೊಳಿಸಿದೆ. ಪರಿಶಿಷ್ಟ ಜಾತಿಯ ಕುಟುಂಬಗಳಿಗೆ ಏಪ್ರಿಲ್ 8 ರಂದು ನೋಟಿಸ್ ನೀಡಿದ್ದ ನಗರ ಪಾಲಿಕೆಯು, 15 ದಿನಗಳಲ್ಲಿ ಜಾಗ ತೆರವುಗೊಳಿಸಬೇಕು ಎಂದು ಸೂಚಿಸಿತ್ತು.

ಈ ಕುರಿತು ಶನಿವಾರ ಪ್ರತಿಕ್ರಿಯಿಸಿದ ಹಾಪುಡ ಜಿಲ್ಲೆಯ ಹೆಚ್ಚುವರಿ ಜಿಲ್ಲಾಧಿಕಾರಿ ಸಂದೀಪ್ ಕುಮಾರ್, 'ಜಾಗ ತೆರವುಗೊಳಿಸುವಂತೆ ಸೂಚಿಸಿ 41 ನಿವಾಸಿಗಳಿಗೆ ನಗರಪಾಲಿಕೆ ನೀಡಿದ್ದ ನೋಟಿಸ್ ಅನ್ನು ಹಿಂಪಡೆಯಲಾಗಿದೆ. ಈ ಪ್ರಕರಣದ ಇತ್ಯರ್ಥಕ್ಕಾಗಿ ಜಿಲ್ಲಾಧಿಕಾರಿ ಮೂವರು ಸದಸ್ಯರ ಸಮಿತಿಯೊಂದನ್ನು ರಚಿಸಿದ್ದಾರೆ. ಈ ಪ್ರಕರಣದಲ್ಲಿನ ಎಲ್ಲ ಪಕ್ಷಗಳ ಅಭಿಪ್ರಾಯಗಳನ್ನು ಸಂಗ್ರಹಿಸಿ, 15 ದಿನಗಳಲ್ಲಿ ವರದಿ ನೀಡಲಿದೆ' ಎಂದಿದ್ದಾರೆ.

### ನಿಜವಾದ ಪ್ರೀತಿಯ ಸಂಕೇತ: ಕುಟುಂಬ ಸಮೇತ ತಾಜ್ ಮಹಲ್‌ಗೆ ಜೆ.ಡಿ. ವ್ಯಾನ್ಸ್

**ಆಗ್ರಾ:** ನಾಲ್ಕು ದಿನಗಳ ಭಾರತ ಪ್ರವಾಸದಲ್ಲಿರುವ ಅಮೆರಿಕ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್, ಕುಟುಂಬ ಸಮೇತ ವಿಶ್ವಪ್ರಸಿದ್ಧ ತಾಜ್ ಮಹಲ್‌ಗೆ ಭೇಟಿ ನೀಡಿದ್ದಾರೆ. ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್, ಪತ್ನಿ ಉಷಾ ವ್ಯಾನ್ಸ್ ಮತ್ತು ದಂಪತಿಯ ಮೂವರು ಮಕ್ಕಳಾದ ಇವಾನ್, ವಿವೇಕ್ ಮತು ಮಿರಾಬೆಲ್, ತಾಜ್ ಮಹಲ್‌ನ ದೃಶ್ಯ ವೈಭವದಿಂದ ಪುಳಕಿತಗೊಂಡಿದ್ದು, ಸುಮಾರು ಒಂದು ತಾಸು ಕಳೆದಿದ್ದಾರೆ. ತಾಜ್ ಮಹಲ್ ನಿಜಕ್ಕೂ ಅದ್ಭುತವಾಗಿದೆ. ನಿಜವಾದ ಪ್ರೀತಿಯ ಸಂಕೇತವಾಗಿದ್ದು, ಮಾನವನ ಕೌಶಲ್ಯ ಮತ್ತು ಮಹಾನ್ ಭಾರತ ದೇಶಕ್ಕೆ ಸಂದ ಗೌರವವಾಗಿದೆ' ಎಂದು ಸಂದರ್ಶಕರ ಪುಸ್ತಕದಲ್ಲಿ ವ್ಯಾನ್ ಬರೆದಿದ್ದಾರೆ.

ಇಂದು ಜೈಪುರದಿಂದ ಆಗ್ರಾ ವಿಮಾನ ನಿಲ್ದಾಣಕ್ಕೆ ಬಂದಿಳಿದ ವ್ಯಾನ್ ಕುಟುಂಬವನ್ನು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸ್ವಾಗತಿಸಿದ್ದಾರೆ. ಬಳಿಕ ರಸ್ತೆ ಮಾರ್ಗವಾಗಿ ತಾಜ್ ಮಹಲ್‌ಗೆ ಸಂಚರಿಸಿದರು. ರಸ್ತೆ ಬದಿಯಲ್ಲಿ ಸಾಲುಗಟ್ಟಿ ನಿಂತಿದ್ದ ಶಾಲಾ ಮಕ್ಕಳು ಭಾರತ ಹಾಗೂ ಅಮೆರಿಕದ ಧ್ವಜವನ್ನು ಬೀಸುತ್ತಾ ಬರಮಾಡಿಕೊಂಡಿದ್ದಾರೆ.

## ಸೌದಿಯಿಂದ ಬಂದಿಳಿದು ವಿಮಾನ ನಿಲ್ದಾಣದಲ್ಲೇ ದೋವಲ್, ಜೈಶಂಕರ್ ಜೊತೆ ಮೋದಿ ಮಾತುಕತೆ

**ಶ್ರೀನಗರ:** ಜಮ್ಮು-ಕಾಶ್ಮೀರದ ಅನಂತ್‌ನಾಗ್ನಿನ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರದ ಪರಿಸ್ಥಿತಿಯನ್ನು ಅವಲೋಕಿಸಲು, ಸೌದಿ ಅರೇಬಿಯಾದಿಂದ ಬಂದಿಳಿದ ಪ್ರಧಾನಿ ನರೇಂದ್ರ ಮೋದಿ ಇಂದು ಬೆಳಗ್ಗೆ ದೆಹಲಿ ವಿಮಾನ ನಿಲ್ದಾಣದಲ್ಲಿ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರೊಂದಿಗೆ ಸಭೆ ನಡೆಸಿದರು.

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಕೂಡ ಸಭೆಯಲ್ಲಿ ಭಾಗವಹಿಸಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಣಿವೆಯಲ್ಲಿ ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ನಡೆದ ಅತ್ಯಂತ ಭೀಕರ ದಾಳಿಯ ಬಗ್ಗೆ ದೇಶಾದ್ಯಂತ ಆಘಾತ ಮತ್ತು ಆಕ್ರೋಶ ವ್ಯಕ್ತವಾದ ಹಿನ್ನೆಲೆ, ಮೋದಿ ಹಿಂದಿರುಗಿದ ತಕ್ಷಣ ಅಧಿಕಾರಿಗಳು ಅವರಿಗೆ ಈ ಕುರಿತು ಮಾಹಿತಿ ನೀಡಿದರು.

ಮೃತರಲ್ಲಿ ಯುಎಇ ಮತ್ತು ನೇಪಾಳದ ಇಬ್ಬರು ವಿದೇಶಿಯರು ಮತ್ತು ಇಬ್ಬರು ಸ್ಥಳೀಯರು ಸೇರಿದ್ದಾರೆ ಎಂದು ಅವರು ಹೇಳಿದರು.



ಪತ್ನಿ ಎದುರೇ ಪತಿಯನ್ನ ಕೊಂದು ಮೋದಿಗೆ ಹೋಗಿ ಹೇಳು ಎಂದ ಉಗ್ರರು ಕೆಲವರ ಪ್ಯಾಂಟ್ ಬಿಚ್ಚಿಸಿ, ಐಡಿ ಪರಿಶೀಲಿಸಿ ಹಿಂದೂಗಳನ್ನು ಮಾತ್ರ ಗುರಿಯಾಗಿಸಿ ಉಗ್ರರ ದಾಳಿಯನ್ನು ಮೋದಿ ಗಂಭೀರವಾಗಿ ಪರಿಗಣಿಸಿದ್ದಾರೆ. ಹಾಗೆಯೇ ಗೃಹ ಸಚಿವ ಅಮಿತ್ ಶಾ ಶ್ರೀನಗರಕ್ಕೆ ಧಾವಿಸಿ ಭದ್ರತಾ ಕ್ರಮಗಳನ್ನು ಮುನ್ನಡೆಸಿದರು. ಈ ದಾಳಿಯ ಸಮಯದಲ್ಲಿ ಪುರುಷರ ಪ್ಯಾಂಟ್ ಬಿಚ್ಚಿಸಿ, ಐಡಿ ಪರಿಶೀಲಿಸಿ ಹಿಂದೂಗಳನ್ನು ಮಾತ್ರ ಗುರಿಯಾಗಿಸಿ ಈ ದಾಳಿ ನಡೆಸಲಾಗಿದೆ. ಪಾಕಿಸ್ತಾನದ ಸಿಒಎಸ್ ಅಸಿಮ್ ಮುನೀರ್ ಹಿಂದೂಗಳ ವಿರುದ್ಧ ವಾಗ್ದಾಳಿ ನಡೆಸುತ್ತಿರುವ ವಿಡಿಯೋ ಅಂತರ್ಜಾಲದಲ್ಲಿ ವೈರಲ್ ಆದ ಕೆಲವು ದಿನಗಳ ನಂತರ ಈ ದಾಳಿ ನಡೆದಿದೆ.

**ದಕ್ಷಿಣ ಕಾಶ್ಮೀರದ ಪಹಲ್ಗಾಮ್‌ನಲ್ಲಿರುವ ಪ್ರಮುಖ ಪ್ರವಾಸಿ ತಾಣದ ಮೇಲೆ ಭಯೋತ್ಪಾದಕರು ದಾಳಿ ನಡೆಸಿದ್ದು, ಕನಿಷ್ಠ 26 ಜನರು ಸಾವನ್ನಪ್ಪಿದ್ದಾರೆ. ಮೃತರಲ್ಲಿ ಬಹುತೇಕರು ಪ್ರವಾಸಿಗರಾಗಿದ್ದಾರೆ ಮತ್ತು ಹಲವು ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.**

## ಪ್ರಯಾಣ ದರ ಏರಿಕೆ ಮಾಡದಂತೆ ವಿಮಾನಯಾನ ಸಂಸ್ಥೆಗಳಿಗೆ ಕೇಂದ್ರ ಸೂಚನೆ

**ನವದೆಹಲಿ:** ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಶ್ರೀನಗರ ಮಾರ್ಗದಲ್ಲಿ ವಿಮಾನ ದರದಲ್ಲಿ ಏರಿಕೆಯಾಗದಂತೆ ನೋಡಿಕೊಳ್ಳುವಂತೆ ನಾಗರಿಕ ವಿಮಾನಯಾನ ಸಚಿವಾಲಯ ವಿಮಾನಯಾನ ಸಂಸ್ಥೆಗಳಿಗೆ ಸೂಚಿಸಿದೆ.

ಮತ್ತು ವಿಮಾನಯಾನ ಸಂಸ್ಥೆಗಳು ನಗರಕ್ಕೆ ಹೆಚ್ಚುವರಿ ವಿಮಾನಗಳನ್ನು ನಿರ್ವಹಿಸಲಿವೆ. ದಕ್ಷಿಣ ಕಾಶ್ಮೀರದ ಪಹಲ್ಗಾಮ್‌ನಲ್ಲಿರುವ ಪ್ರಮುಖ ಪ್ರವಾಸಿ ತಾಣದ ಮೇಲೆ ಭಯೋತ್ಪಾದಕರು ದಾಳಿ ನಡೆಸಿದ್ದು, ಕನಿಷ್ಠ 26 ಜನರು ಸಾವಿಗೀಡಾಗಿದ್ದಾರೆ ಮತ್ತು ಹಲವಾರು ಜನರು ಗಾಯಗೊಂಡಿದ್ದಾರೆ.

ಏರ್ ಇಂಡಿಯಾ ಮತ್ತು ಇಂಡಿಗೋ ಬುಧವಾರ ಶ್ರೀನಗರದಿಂದ ರಾಷ್ಟ್ರ ರಾಜಧಾನಿ ಮತ್ತು ಮುಂಬೈಗೆ ಒಟ್ಟು 4 ಹೆಚ್ಚುವರಿ ವಿಮಾನಗಳ ಸೇವೆ ಆರಂಭಿಸಿದೆ. ವಿಮಾನಯಾನ ಸಂಸ್ಥೆಗಳು ಟಿಕೆಟ್ ಮರುಹೊಂದಾಣಿಕೆ ಮತ್ತು ರದ್ದತಿ ಶುಲ್ಕಗಳನ್ನು ಸಹ ಮನ್ನಾ ಮಾಡಿವೆ.



ವಿಮಾನಯಾನ ಸಚಿವ ಕೆ ರಾಮಮೋಹನ್ ನಾಯ್ಡು ಎಲ್ಲಾ ವಿಮಾನಯಾನ ನಿರ್ವಾಹಕರೊಂದಿಗೆ ತುರ್ತು ಸಭೆ ನಡೆಸಿ, ಶ್ರೀನಗರ ಮಾರ್ಗದಲ್ಲಿ ಸರ್ಜ್ ಬೆಲೆ ಏರಿಕೆಯಾಗದಂತೆ ನೋಡಿಕೊಳ್ಳಲು ಸೂಚನೆ ನೀಡಿದ್ದಾರೆ. ಈ ಸೂಕ್ಷ್ಮ ಸಮಯದಲ್ಲಿ ಯಾವುದೇ ಪ್ರಯಾಣಿಕರಿಗೆ ಹೊರೆಯಾಗದಂತೆ ನೋಡಿಕೊಳ್ಳಲು ವಿಮಾನಯಾನ ಸಂಸ್ಥೆಗಳು ನಿಯಮಿತ ದರ ಮಟ್ಟವನ್ನು ಕಾಯ್ದುಕೊಳ್ಳಲು ನಿರ್ದೇಶಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಟ್ರಂಪ್, ಪುಟಿನ್, ಸೇರಿ ಜಾಗತಿಕ ನಾಯಕರ ಖಂಡನೆ

**ಮಾಸ್ಕೊ:** 28 ಜನರ ಸಾವಿಗೆ ಕಾರಣವಾದ ಜಮ್ಮು ಮತ್ತು ಕಾಶ್ಮೀರದ ಭಯೋತ್ಪಾದಕ ದಾಳಿಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಮತ್ತು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸೇರಿದಂತೆ ವಿಶ್ವ ನಾಯಕರು ಖಂಡಿಸಿದ್ದು, ಭಾರತದ ಜೊತೆಗೆ ಒಗ್ಗಟ್ಟು ಪ್ರದರ್ಶಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಜೊತೆ ದೂರವಾಣಿಯಲ್ಲಿ ಮಾತನಾಡಿದ ಟ್ರಂಪ್, ಭಯೋತ್ಪಾದಕ ದಾಳಿ ಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಘೋರ ದಾಳಿಯ ಅಪರಾಧಿಗಳನ್ನು ಶಿಕ್ಷಿಸಲು ಭಾರತಕ್ಕೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದ್ದಾರೆ.

ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಅಮಾಯಕರ ಜೀವ ಹಾನಿಗೆ ಟ್ರಂಪ್ ತೀವ್ರ ಸಂತಾಪ ಸೂಚಿಸಿದ್ದಾರೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಭಾರತ ಮತ್ತು ಅಮೆರಿಕ ಒಟ್ಟಾಗಿ ನಿಂತಿವೆ ಎಂದು ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಇದಕ್ಕೂ ಮುನ್ನ, ಟ್ರುತ್ ಸೋಷಿಯಲ್‌ನಲ್ಲಿ ಪೋಸ್ಟ್ ಮಾಡಿದ್ದ, ಟ್ರಂಪ್, ಕಾಶ್ಮೀರದಿಂದ ಆತಂಕಕಾರಿ ಸುದ್ದಿ ಬಂದಿದೆ. ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಭಾರತದೊಂದಿಗೆ ಅಮೆರಿಕ ಬಲವಾಗಿ ನಿಂತಿದೆ ಎಂದು ಹೇಳಿದ್ದರು.



**ಕ್ರೂರ ಅಪರಾಧಕ್ಕೆ ಯಾವುದೇ ಸಮರ್ಥನೆ ಇಲ್ಲ :** ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್, ಪಹಲ್ಯಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದು, ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ಜೊತೆ ಮಾತನಾಡಿದ್ದಾರೆ. ಕ್ರೂರ ಅಪರಾಧಕ್ಕೆ ಯಾವುದೇ ಸಮರ್ಥನೆ ಇಲ್ಲ. ಅಪರಾಧಿಗಳು ಅರ್ಹ ಶಿಕ್ಷೆಯನ್ನು ಎದುರಿಸಬೇಕಾಗುತ್ತದೆ ಎಂದು ಹೇಳಿದ್ದಾರೆ.

## ರಾಜ್ಯಸಭೆಗೆ ಕೆ. ಅಣ್ಣಾಮಲೈ, ಮೋದಿ ಸಂಪುಟದಲ್ಲಿ ಸಚಿವ ಸ್ಥಾನ?

**ಚೆನ್ನೈ:** 2026ರಲ್ಲಿ ತಮಿಳುನಾಡು ವಿಧಾನಸಭೆ ಚುನಾವಣೆ ನಡೆಯಲಿದೆ. ಚುನಾವಣೆಯಲ್ಲಿ ಡಿಎಂಕೆ ಸೋಲಿಸಲು ಬಿಜೆಪಿ ಹಾಗೂ ಎಐಎಡಿಎಂಕೆ ಮತ್ತೆ ಮೈತ್ರಿ ಮಾಡಿಕೊಂಡಿವೆ. ಬಿಜೆಪಿ ಅಧ್ಯಕ್ಷರಾಗಿದ್ದ ಕೆ. ಅಣ್ಣಾಮಲೈ ಅವರನ್ನು ಬದಲಾವಣೆ ಮಾಡಲಾಗಿದ್ದು, ರಾಜ್ಯದ ನೂತನ ಬಿಜೆಪಿ ಅಧ್ಯಕ್ಷರಾಗಿ ನೈನಾರ್ ನಾಗೇಂದ್ರನ್ ಅಧಿಕಾರವಹಿಸಿಕೊಂಡಿದ್ದಾರೆ. ಎಂಬುದು ಸದ್ಯದ ಪ್ರಶ್ನೆಯಾಗಿದೆ.

ಕೆ. ಅಣ್ಣಾಮಲೈಗೆ ರಾಷ್ಟ್ರಮಟ್ಟದ ಹುದ್ದೆಯನ್ನು ನೀಡಲಾಗುತ್ತದೆ ಎಂಬ ವರದಿಗಳ ನಡುವೆಯೇ ಅವರು ರಾಜ್ಯಸಭೆ ಚುನಾವಣೆಗೆ ಆಂಧ್ರ ಪ್ರದೇಶದಿಂದ ಸ್ಪರ್ಧೆ ಮಾಡಲಿದ್ದಾರೆ ಎಂಬ ಸುದ್ದಿಗಳು ಹಬ್ಬಿದೆ. ಆಂಧ್ರ ಪ್ರದೇಶದಿಂದ ಮೂವರು ರಾಜ್ಯಸಭಾ ಸದಸ್ಯರನ್ನು ಆಯ್ಕೆ ಮಾಡಲು ಮೇ 9ರಂದು ಚುನಾವಣೆ ನಡೆಯಲಿದೆ.

ಕೆ. ಅಣ್ಣಾಮಲೈ ಅವರನ್ನು ರಾಜ್ಯಸಭಾ ಸದಸ್ಯರಾಗಿ ಮಾಡಿ, ಪ್ರಧಾನಿ ನರೇಂದ್ರ ಮೋದಿ ಸಂಪುಟಕ್ಕೆ ಸೇರಿಸಿಕೊಳ್ಳಲಾಗುತ್ತದೆ ಎಂಬ ಸುದ್ದಿಗಳು ಕೇಳಿ ಬರುತ್ತಿವೆ. ರಾಜ್ಯಸಭಾ ಸದಸ್ಯರಾಗಿದ್ದ ವೈಎಸ್‌ಆರ್ ಕಾಂಗ್ರೆಸ್ ಪಕ್ಷದ ವಿಜಯಸಾಯಿ ರೆಡ್ಡಿ ಜನವರಲ್ಲಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಅವರ ಸದಸ್ಯತ್ವದ ಅವಧಿ 2028ರ ತನಕ ಇದೆ. ಆದ್ದರಿಂದ ಈಗ ಉಪ ಚುನಾವಣೆ ನಡೆಯುತ್ತಿದೆ.



ಈ ಸೀಟನ್ನು ಆಂಧ್ರ ಪ್ರದೇಶದಲ್ಲಿ ಅಧಿಕಾರದಲ್ಲಿರುವ ಟಿಡಿಪಿ-ಜನಸೇನಾ ಪಕ್ಷ ಬಿಜೆಪಿಗೆ ಬಿಟ್ಟುಕೊಡಲಿವೆ. ವೈಎಸ್‌ಆರ್ ಕಾಂಗ್ರೆಸ್‌ನ ಇಬ್ಬರು ಸದಸ್ಯರು ಈ ಹಿಂದೆ ರಾಜೀನಾಮೆ ನೀಡಿದ್ದರು. ಆಂಧ್ರ ಪ್ರದೇಶ ರಾಜ್ಯದಿಂದ ಮೂವರು ರಾಜ್ಯಸಭಾ ಸದಸ್ಯರನ್ನು ಆಯ್ಕೆ ಮಾಡಲು ಮೇ ತಿಂಗಳಿನಲ್ಲಿ ಉಪಚುನಾವಣೆ ನಡೆಯಲಿದೆ. ವಿಧಾನಸಭೆಯಲ್ಲಿ ಟಿಡಿಪಿ ಸರಳ ಬಹುಮತ ಹೊಂದಿದೆ. ಆದ್ದರಿಂದ 2 ಸೀಟುಗಳನ್ನು ಪಕ್ಷ ನಿರಾಯಾಸವಾಗಿ ಗೆಲ್ಲಲಿದೆ. ಅಮೇಥಿಯಲ್ಲಿ ಈ ಹಿಂದೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯನ್ನು ಸೋಲಿಸಿದ್ದ ಸ್ಮೃತಿ ಇರಾನಿ 2024ರ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ನ ಕಿಶೋರಿ ಲಾಲ್ ಶರ್ಮಾ ವಿರುದ್ಧ ಸೋಲು ಕಂಡಿದ್ದಾರೆ. ಅವರು ದೆಹಲಿ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ನಿರೀಕ್ಷೆ ಮಾಡಲಾಗಿತ್ತು. ಈಗ ಸ್ಮೃತಿ ಇರಾನಿ ಆಂಧ್ರ ಪ್ರದೇಶದಿಂದ ರಾಜ್ಯಸಭೆ ಚುನಾವಣೆಗೆ ಸ್ಪರ್ಧಿಸಲಿದ್ದಾರೆ ಎಂಬ ಸುದ್ದಿ ಹಬ್ಬಿದೆ. ಮಾಜಿ ಐಪಿಎಸ್ ಅಧಿಕಾರಿ ಕೆ. ಅಣ್ಣಾಮಲೈ ತಮಿಳುನಾಡಿನ ಪ್ರಭಾವಿ ನಾಯಕ. ರಾಜ್ಯದಲ್ಲಿ ಬಿಜೆಪಿಯ ಸಂಘಟನೆಯಲ್ಲಿ ಸಕ್ರಿಯವಾಗಿದ್ದಾರೆ.

ಆದರೆ ವಿಧಾನಸಭೆ ಚುನಾವಣೆಯಲ್ಲಿ ಅವರು ಸೋಲು ಕಂಡಿದ್ದಾರೆ. ಈಗ ಬಿಜೆಪಿ ಹಾಗೂ ಎಐಎಡಿಎಂಕೆ ಮೈತ್ರಿಯ ಕಾರಣ ಅಣ್ಣಾಮಲೈ ಪಕ್ಷದ ರಾಜ್ಯಾಧ್ಯಕ್ಷ ಸ್ಥಾನ ಕಳೆದುಕೊಂಡಿದ್ದು, ಅವರಿಗೆ ಬೇರೆ ಸ್ಥಾನ ನೀಡಲು ಪಕ್ಷ ಚಿಂತನೆ ನಡೆಸಿದೆ.

### ಏಪ್ರಿಲ್ 29 ಕೊನೆಯ ದಿನ

**ನಾಮಪತ್ರಗಳನ್ನು ಸಲ್ಲಿಕೆ ಮಾಡಲು ಏಪ್ರಿಲ್ 29 ಕೊನೆಯ ದಿನವಾಗಿದೆ. ಎನ್‌ಡಿಎ ಮೈತ್ರಿಕೂಟದ ಮಿತ್ರಪಕ್ಷವಾದ ಟಿಡಿಪಿ-ಜನಸೇನಾ ಒಂದು ಸ್ಥಾನವನ್ನು ಬಿಜೆಪಿಗೆ ನೀಡಿವೆ. ಈ ಒಂದು ಟಿಕೆಟ್‌ಗಾಗಿ ಕೆ. ಅಣ್ಣಾಮಲೈ, ಕೇಂದ್ರದ ಮಾಜಿ ಸಚಿವೆ ಸ್ಮೃತಿ ಇರಾನಿ ಹೆಸರು ಕೇಳಿ ಬರುತ್ತಿದೆ.**

## ಪ್ರವಾಸ ಮೊಟಕುಗೊಳಿಸಿದ ನಿರ್ಮಲಾ



**ನ್ಯೂಯಾರ್ಕ್:** ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ಉಗ್ರರು ನಡೆಸಿದ ದಾಳಿಯ ಬೆನ್ನಲೇ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಅಮೆರಿಕ ಹಾಗೂ ಪೆರು ಪ್ರವಾಸವನ್ನು ಮೊಟಕುಗೊಳಿಸಿದ್ದಾರೆ. ಸಾಧ್ಯವಾದಷ್ಟು ಶೀಘ್ರದಲ್ಲೇ ಭಾರತಕ್ಕೆ ವಾಪಸ್ ಆಗಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಆರು ದಿನಗಳ ಭೇಟಿ ಸಲುವಾಗಿ ಭಾನುವಾರವಷ್ಟೇ ಅಮೆರಿಕಕ್ಕೆ ಬಂದಿದ್ದ ನಿರ್ಮಲಾ, ಬಳಿಕ ಪೆರುವಿಗೆ ಐದು ದಿನಗಳ ಪ್ರವಾಸ ಕೈಗೊಳ್ಳಬೇಕಿತ್ತು. ಸಚಿವೆ ಪ್ರವಾಸ ಮೊಟಕುಗೊಳಿಸಿರುವ ಕುರಿತು ಹಣಕಾಸು ಸಚಿವಾಲಯ ಎಕ್ಸ್/ಟ್ವಿಟರ್‌ನನಲ್ಲಿ ಮಾಹಿತಿ ನೀಡಿದೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಅಮೆರಿಕ, ಪೆರು ಅಧಿಕೃತ ಭೇಟಿಯನ್ನು ಮೊಟಕುಗೊಳಿಸಿದ್ದಾರೆ. ಈ ಕಠಿಣ ಹಾಗೂ ದುರಂತದ ಸಂದರ್ಭದಲ್ಲಿ ನಮ್ಮವರೊಂದಿಗೆ ಇರಲು. ಸಾಧ್ಯವಾದಷ್ಟು ಬೇಗನೆ, ಲಭ್ಯವಿರುವ ವಿಮಾನದಲ್ಲಿ ಹಿಂದಿರುಗಲಿದ್ದಾರೆ' ಎಂದು ತಿಳಿಸಿದೆ.

ಕಾಶ್ಮೀರದ ಪಹಲ್ಗಾಮ್ ಪಟ್ಟಣದ ಸನಿಹದಲ್ಲಿನ ಹುಲ್ಲುಗಾವಲಿನಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾದಕರು ಮಂಗಳವಾರ ಗುಂಡಿನ ದಾಳಿ ನಡೆಸಿದ್ದರು. ಈ ವೇಳೆ 28 ಮಂದಿ ಪ್ರಾಣ ಕಳೆದುಕೊಂಡಿದ್ದು, ಕನಿಷ್ಠ 20 ಜನರು ಗಾಯಗೊಂಡಿದ್ದಾರೆ.

ಸೌದಿ ಅರೇಬಿಯಾಕ್ಕೆ ಭೇಟಿ ನೀಡಿದ್ದ ಪ್ರಧಾನಿ ನರೇಂದ್ರ ಮೋದಿ ಅವರು, ತಮ್ಮ ಎರಡು ದಿನಗಳ ಪ್ರವಾಸವನ್ನು ಮೊಟಕುಗೊಳಿಸಿ ಮಂಗಳವಾರ ರಾತ್ರಿಯೇ ದೆಹಲಿಗೆ ಮರಳಿದ್ದಾರೆ.

## ಸುಂಕ ಕಡಿತ ಟ್ರಂಪ್ ಸುಳಿವು: ಮಾತುಕತೆಗೆ ಚೀನಾ ಒಲವು

**ಬೀಜಿಂಗ್:** ಟ್ರಂಪ್ ಅವರು ಚೀನಾದ ಉತ್ಪನ್ನಗಳ ಮೇಲಿನ ಸುಂಕವನ್ನು ಗಣನೀಯವಾಗಿ ತಪ್ಪಿಸುವ ಸುಳಿವು ನೀಡಿದ ಮರುದಿನವೇ ಅಮೆರಿಕ ಜತೆಗೆ ವ್ಯಾಪಾರ ಮಾತುಕತೆಗೆ ಬಾಗಿಲು ತೆರೆದಿದೆ ಎಂದು ಚೀನಾ ಬುಧವಾರ ಹೇಳಿದೆ. ಟ್ರಂಪ್ ಅವರು ಎರಡನೇ ಬಾರಿಗೆ ಅಧ್ಯಕ್ಷರಾಗಿ ಅಧಿಕಾರಕ್ಕೆ ಮರಳಿದ ನಂತರ ಚೀನಾದ ಅನೇಕ ಉತ್ಪನ್ನಗಳ ಮೇಲೆ ಶೇ 145 ರಷ್ಟು ಹೆಚ್ಚುವರಿ ಸುಂಕ ವಿಧಿಸಿದ್ದಾರೆ.

ಚೀನಾ ಕೂಡ ಅಮೆರಿಕದ ಉತ್ಪನ್ನಗಳ ಮೇಲೆ ಶೇ 125ರಷ್ಟು ಪ್ರತಿ ಸುಂಕ ವಿಧಿಸುವ ಮೂಲಕ ಪತ್ರೀಕಾರ ಕ್ರಮ ತೆಗೆದುಕೊಂಡಿತ್ತು. ಆದರೆ, ಟ್ರಂಪ್ ಅವರ ಸುಂಕ ಕಡಿತ ಹೇಳಿಕೆ ಬೆನ್ನಲ್ಲೇ ವ್ಯಾಪಾರ ಮಾತುಕತೆಗಳಲ್ಲಿ ತೊಡಗಿಸಿಕೊಳ್ಳಲು ಸಿದ್ಧವಿರುವುದಾಗಿ ಚೀನಾ ಬುಧವಾರ ಪುನರುಚ್ಚರಿಸಿದೆ. ಚೀನಾದ ಉತ್ಪನ್ನಗಳ ಮೇಲೆ ಹೇರಿರುವ ಶೇ 145ರಷ್ಟು ಸುಂಕ ಹೆಚ್ಚಿನ ಮಟ್ಟದ್ದಾಗಿದೆ ಎಂದು ಒಪ್ಪಿಕೊಂಡಿರುವ ಟ್ರಂಪ್, ಇದು ಮುಂದೆ ಗಣನೀಯ ಪ್ರಮಾಣದಲ್ಲಿ ತಗ್ಗಲಿದೆ. ಆದರೆ, ಅದು ಶೂನ್ಯಕ್ಕೆ ಇಳಿಯುವುದಿಲ್ಲ.



ಅಂತಿಮವಾಗಿ, ಚೀನಾ ಒಪ್ಪಂದಕ್ಕೆ ಬರಬೇಕಾಗುತ್ತದೆ. ಇಲ್ಲದಿದ್ದರೆ ಅವರು ಅಮೆರಿಕದಲ್ಲಿ ವ್ಯವಹಾರ ಮಾಡಲು ಸಾಧ್ಯವಾಗದು' ಎಂದು ಮಂಗಳವಾರವಷ್ಟೇ ಹೇಳಿದ್ದರು.

ಸುಂಕ ಮತ್ತು ವ್ಯಾಪಾರ ಸಮರದಲ್ಲಿ ಯಾರೂ ವಿಜಯ ಸಾಧಿಸಲು ಸಾಧ್ಯವಿಲ್ಲ'ವೆಂದು ಚೀನಾ ಮೊದಲಿನಿಂದಲೂ ಪ್ರತಿಪಾದಿಸುತ್ತಾ ಬಂದಿದೆ. ವ್ಯಾಪಾರ ಸಂಬಂಧಿ ಮಾತುಕತೆಯ ಬಾಗಿಲುಗಳು ತೆರೆದಿವೆ ಎಂದು ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರ ಗುವೊ ಜಿಯಾಕುನ್ ಸುದ್ದಿಗೋಷ್ಠಿಯಲ್ಲಿ ಹೇಳಿದ್ದಾರೆ.

**ಅಮೆರಿಕದ ಫೆಡರಲ್ ರಿಸರ್ವ್ ಬ್ಯಾಂಕ್ ಅಧ್ಯಕ್ಷ ಜೆರೋಮ್ ಪೊವೆಲ್ ಅವರನ್ನು ವಜಾಗೊಳಿಸುವ ಉದ್ದೇಶವಿಲ್ಲ ಎಂದು ಟ್ರಂಪ್ ಅವರು ಮಂಗಳವಾರ ಪ್ರಕಟಿಸಿದ್ದಾರೆ. ಫೆಡರಲ್ ಮುಖ್ಯಸ್ಥರನ್ನು ವಜಾಗೊಳಿಸುವ ಉದ್ದೇಶ ನನಗಿಲ್ಲ. ಬಿಡ್ಡಿದರಗಳನ್ನು ತಗ್ಗಿಸುವ ವಿಷಯದಲ್ಲಿ ಅವರು ಹೆಚ್ಚು ಸಕ್ರಿಯರಾಗಬೇಕೆಂದು ಬಯಸುತ್ತೇನೆ. ಬಡ್ಡಿದರಗಳನ್ನು ತಗ್ಗಿಸಲು ಇದು ಸಕಾಲ. ಅವರು ಹಾಗೆ ಮಾಡದಿದ್ದರೆ ಅದೇ ಕೊನೆ ಎಂದಲ್ಲ ಎಂದು ಟ್ರಂಪ್ ಹೇಳಿದ್ದಾರೆ.**

## ಉಗ್ರರ ದಾಳಿ ಖಂಡಿಸಿದ ನೇಪಾಳ

**ಕಠ್ಮಂಡು:** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ನೇಪಾಳ ಪ್ರಧಾನಿ ಕೆ.ಪಿ.ಶರ್ಮಾ ಒಲಿ ಖಂಡಿಸಿದ್ದಾರೆ. ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಸಂತ್ರಸ್ತರಿಗೆ ಓಲಿ ತೀವ್ರ ಸಂತಾಪ ವ್ಯಕ್ತಪಡಿಸಿದರು. ನೇಪಾಳವು ಭಾರತದೊಂದಿಗೆ ದೃಢವಾಗಿ ನಿಲ್ಲುತ್ತದೆ ಮತ್ತು ಯಾವುದೇ ಮತ್ತು ಎಲ್ಲಾ ಭಯೋತ್ಪಾದಕ ಕೃತ್ಯಗಳನ್ನು ಬಲವಾಗಿ ಖಂಡಿಸುತ್ತದೆ ಎಂದು ಅವರು ಬರೆದಿದ್ದಾರೆ.

ಸಂತ್ರಸ್ತರಲ್ಲಿ ನೇಪಾಳಿ ಪ್ರಜೆಯ ವರದಿಗಳನ್ನು ಪರಿಶೀಲಿಸಲು ವಿವಿಧ ಏಜೆನ್ಸಿಗಳೊಂದಿಗೆ ನಿಕಟ ಸಮನ್ವಯವನ್ನು ಸ್ಥಾಪಿಸಲಾಗಿದೆ ಎಂದು ಪ್ರಧಾನಿ ಹೇಳಿದರು ಮತ್ತು ಸರ್ಕಾರದಿಂದ ಅಗತ್ಯವಿರುವ ಎಲ್ಲಾ ಸಹಾಯವನ್ನು ಒದಗಿಸುವ ಬದ್ಧತೆಯನ್ನು ವ್ಯಕ್ತಪಡಿಸಿದರು.

2019ರ ಪುಲ್ವಾಮಾ ದಾಳಿಯ ನಂತರ ಕಣಿವೆಯಲ್ಲಿ ನಡೆದ ಭೀಕರ ದಾಳಿಯಾಗಿದೆ. ಮೃತಪಟ್ಟ 26 ಜನರಲ್ಲಿ ಇಬ್ಬರು ವಿದೇಶಿಯರು ಯುಎಇ ಮತ್ತು ನೇಪಾಳದ ತಲಾ ಒಬ್ಬರು ಮತ್ತು ಇಬ್ಬರು ಸ್ಥಳೀಯರು ಸೇರಿದ್ದಾರೆ.

## ಇನ್ನೆರೆಡು ದಿನದಲ್ಲಿ ಪ್ರವಾಸಿಗರು ಸ್ವಸ್ಥಾನಕ್ಕೆ ಮರಳಲಿದ್ದಾರೆ ಎಂದ ಕೇಂದ್ರ ಸಚಿವ ಪ್ರಲ್ಹಾದ ಜೋಶಿ
# ಕಾಶ್ಮೀರದಿಂದ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ವಿಶೇಷ ವಿಮಾನ

**ಹೊಸದಿಲ್ಲಿ :** ಕಾಶ್ಮೀರ ಪ್ರವಾಸ ತೆರಳಿರುವ ಕನ್ನಡಿಗರನ್ನು ಭಯೋತ್ಪಾದಕ ದಾಳಿ ಹಿನ್ನೆಲೆಯಲ್ಲಿ ಸುರಕ್ಷಿತವಾಗಿ ಅವರವರ ಊರುಗಳಿಗೆ ಕರೆತರಲು ಸಕಲ ವ್ಯವಸ್ಥೆ ಕೈಗೊಳ್ಳಲಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದರು.

ದೆಹಲಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರು, ರಾತ್ರಿಯಿಂದಲೇ ಜಮ್ಮು-ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಮತ್ತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು, ಕನ್ನಡಿಗರೆಲ್ಲರನ್ನೂ ಅವರ ಊರುಗಳಿಗೆ ಸುರಕ್ಷಿತವಾಗಿ ತಲುಪಿಸಲು ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ಹೇಳಿದರು.

**ಇನ್ನೆರೆಡು ದಿನದಲ್ಲಿ ಎಲ್ಲರೂ ಸ್ವಸ್ಥಾನಗಳಿಗೆ :** ಮಂಗಳವಾರ ರಾತ್ರಿಯೇ ರಾಮ್ ಮೋಹನ್ ನಾಯ್ಡು ಅವರೊಂದಿಗೆ ಮಾತುಕತೆ ನಡೆಸಿದ್ದೇನೆ. ಕನ್ನಡಿಗರನ್ನು ಸುರಕ್ಷಿತವಾಗಿ ಮರಳಿ ಕರೆತರಲು ವ್ಯವಸ್ಥೆ ಕಲ್ಪಿಸಲಾಗಿದೆ. ವಿಶೇಷ ವಿಮಾನ ವ್ಯವಸ್ಥೆ ಸಹ ಮಾಡಲಾಗಿದೆ. ಸದ್ಯಕ್ಕೆ ಮುಂಬೈ ಮತ್ತು ದೆಹಲಿಗೆ ಪ್ರವಾಸಿಗರನ್ನು ರವಾನಿಸಲು ಸರ್ಕಾರ ವಿಮಾನ ವ್ಯವಸ್ಥೆ ಮಾಡಿದೆ. ಇನ್ನೆರೆಡು ದಿನಗಳಲ್ಲಿ ಎಲ್ಲಾ ಪ್ರವಾಸಿಗರನ್ನೂ ಅವರವರ ಸ್ವಸ್ಥಾನಗಳಿಗೆ ಸುರಕ್ಷಿತವಾಗಿ ಮರಳಿಸಲಾಗುತ್ತದೆ ಎಂದು ತಿಳಿಸಿದರು.

ಕರ್ನಾಟಕದ ಅನೇಕರು ಫಹಲ್ಗಾಮ್ ಪ್ರವಾಸಿ ತಾಣದಲ್ಲಿದ್ದು, ರಾಜ್ಯಕ್ಕೆ ಮರಳಲು ಬಯಸಿದ್ದರಿಂದ ಅವರೆಲ್ಲರನ್ನು ಕರೆತರಲು ವಿಶೇಷ ವಿಮಾನ ವ್ಯವಸ್ಥೆ ಮಾಡಲಾಗಿದೆ. ಅಲ್ಲದೇ, ಗ್ರಾಹಕ ವ್ಯವಹಾರಗಳ ಸಚಿವನಾಗಿ ವಿಮಾನಯಾನ ಕಂಪನಿಗಳು ಹೆಚ್ಚಿನ ಟಿಕೆಟ್ ದರ ಕಲ್ಪಿಸದಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದೇನೆ ಎಂದು ಜೋಶಿ ತಿಳಿಸಿದರು.

- **ಮೂವರು ಕನ್ನಡಿಗರ ಸಾವು, ಪಾರ್ಥೀವ ಶರೀರ ಸಾಗಿಸಲು ಕ್ರಮ ತೆಗೆದುಕೊಳ್ಳುವುದಾಗಿ ಜೋಶಿ ಭರವಸೆ**
- **ಪ್ರವಾಸಿಗರನ್ನು ದೆಹಲಿ, ಮುಂಬೈಗೆ ವಿಮಾನಯಾನದಲ್ಲಿ ರವಾನಿಸಲು ಕ್ರಮ**
- **ಇನ್ನೆರೆಡು ದಿನದಲ್ಲಿ ಪ್ರವಾಸಿಗರು ಸ್ವಸ್ಥಾನಕ್ಕೆ ಮರಳಲಿದ್ದಾರೆ ಎಂದ ಕೇಂದ್ರ ಸಚಿವ ಪ್ರಲ್ಹಾದ ಜೋಶಿ**



**ಕರೆತರಲು ಸಕಲ ವ್ಯವಸ್ಥೆ**

**ಜಮ್ಮು-ಕಾಶ್ಮೀರದ ಶಾಂತಿ ಕೆಡಿಸಲು ಷಡ್ಯಂತ್ರ:** ಜಮ್ಮು-ಕಾಶ್ಮೀರ ಭಾರತದ ಮುಕುಟದಂತಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಬಹು ದೊಡ್ಡ ಪ್ರವಾಸೋದ್ಯಮ ಕ್ಷೇತ್ರವನ್ನಾಗಿ ಅಭಿವೃದ್ಧಿಪಡಿಸಿದೆ. ಸ್ವಿಡ್ಜರ್ಲೆಂಡ್ ಗಿಂತಲೂ ಸುಂದರವಾಗಿದೆ ಎಂಬ ಭಾವನೆಯಿಂದ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಕಾಶ್ಮೀರಕ್ಕೆ ಭೇಟಿ ನೀಡುತ್ತಿದ್ದರು. ಇದನ್ನು ಸಹಿಸದೆ ಅಲ್ಲಿ ಅಶಾಂತಿ ಸೃಷ್ಟಿಸಿ ಪ್ರವಾಸೋದ್ಯಕ್ಕೆ ಪೆಟ್ಟು ನೀಡಲು ಭಯೋತ್ಪಾದನಾ ಚಟುವಟಿಕೆ ನಡೆಸಲಾಗಿದೆ ಎಂದು ಜೋಶಿ ಅಭಿಪ್ರಾಯಿಸಿದರು.

### ಭಯೋತ್ಪಾದನೆ ನಿಗ್ರಹಕ್ಕೆ ಇನ್ನಷ್ಟು ಕಠಿಣ ಕ್ರಮ

**ಕಣಿವೆ ರಾಜ್ಯ ಸೇರಿದಂತೆ ದೇಶದ ಎಲ್ಲೆಡೆಯೂ ಭಯೋತ್ಪಾದನಾ ನಿಗ್ರಹಕ್ಕೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ಕಟ್ಟುನಿಟ್ಟಿನ ಕ್ರಮ ಜರುಗಿಸಿದೆ. ಆದ್ದರಿಂದಲೇ ದೇಶದಲ್ಲಿ 2019ರಿಂದ ಈಚೆಗೆ ಭಯೋತ್ಪಾದನಾ ಚಟುವಟಿಕೆ ಇಲ್ಲವಾಗಿತ್ತು. ಫಹಲ್ಗಾಮ್ ಭಯೋತ್ಪಾದನಾ ದಾಳಿಯನ್ನು ಕೇಂದ್ರ ಸರ್ಕಾರ ಗಂಭೀರವಾಗಿ ತೆಗೆದುಕೊಂಡಿದ್ದು, ಇದರ ವಿರುದ್ಧ ಹೋರಾಡಲಿದೆ. ಭಾರತವನ್ನು ಶೂನ್ಯ ಭಯೋತ್ಪಾದನೆಯತ್ತ ಕೊಂಡೊಯ್ಯಲಿದೆ ಎಂದು ಸಚಿವ ಪ್ರಲ್ಹಾದ ಜೋಶಿ ವಿಶ್ವಾಸ ವ್ಯಕ್ತಪಡಿಸಿದರು.**

ಕಳೆದ ಐದಾರು ವರ್ಷಗಳಲ್ಲಿ ಜಮ್ಮು-ಕಾಶ್ಮೀರದ ಪ್ರವಾಸೋದ್ಯಮ ಅಭೂತಪೂರ್ವವಾಗಿ ಬೆಳೆದಿದೆ. ಇಲ್ಲಿನವರಿಗೆ ಪ್ರವಾಸೋದ್ಯಮದಿಂದ ಅತಿ ಹೆಚ್ಚು ಆದಾಯವಿದೆ. ಅಲ್ಲದೇ, ಲೋಕಸಭೆ, ವಿಧಾನಸಭೆ ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆ ಸಹ ಅತ್ಯಂತ ಶಾಂತಿಯುತವಾಗಿ ಯಶಸ್ವಿಯಾಗಿ ನಡೆದಿವೆ. ಜತೆಗೆ ಕೇಂದ್ರ ಸರ್ಕಾರದ ಅಭಿವೃದ್ಧಿ ಕಾರ್ಯಗಳು ಇವೆಲ್ಲ ಭಯೋತ್ಪಾದಕರ ಕಣ್ಣು ಕುಕ್ಕಿವೆ. ಅದರ ಪರಿಣಾಮವೇ ಭಯೋತ್ಪಾದನಾ ಕೃತ್ಯ ಎಂದು ಹೇಳಿದರು.

### ಮೂವರು ಕನ್ನಡಿಗರ ಸಾವು; ಪಾರ್ಥೀವ ಶರೀರ ಸಾಗಿಸಲು ಕ್ರಮ

**ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಕರ್ನಾಟಕದ ಮೂವರು ಮೃತಪಟ್ಟಿದ್ದು, ಇಬ್ಬರು ಗಾಯಗೊಂಡಿದ್ದಾರೆ ಎಂಬ ಮಾಹಿತಿಯಿದೆ. ಮೃತರ ಪಾರ್ಥೀವ ಶರೀರ, ಗಾಯಾಳುಗಳು-ಕುಟುಂಬಸ್ಥರನ್ನು ಹಾಗೂ ಪ್ರವಾಸಿಗರನ್ನು ಸ್ವಂತ ಊರು-ಮನೆಗಳಿಗೆ ತಲುಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಇದಕ್ಕಾಗಿ ಹೆಚ್ಚಿನ ವಿಮಾನ ವ್ಯವಸ್ಥೆ ಸಹ ಮಾಡಲಾಗಿದೆ ಎಂದು ಸಚಿವ ಪ್ರಲ್ಹಾದ ಜೋಶಿ ತಿಳಿಸಿದರು.**




ಆನ್‌ಲೈನ್ ಸಿನಿಮಾ ವಿಮರ್ಶೆಗಳ ಹೆಚ್ಚಳದಿಂದಾಗಿ, ಚಿತ್ರಮಂದಿರದ ಹೊರಗೆ ವಿಮರ್ಶೆ ಮಾಡುವುದನ್ನು ನಿಷೇಧಿಸಬೇಕೆಂಬ ಒತ್ತಾಯ ಕೇಳಿಬಂದಿದೆ. ಇದಕ್ಕೆ ಪ್ರತಿಕ್ರಿಯಿಸಿ ನಟ ನಾನಿ, ವಿಮರ್ಶೆಗಳನ್ನು ನಿಲ್ಲಿಸಲು ಸಾಧ್ಯವಿಲ್ಲ ಎಂದಿದ್ದಾರೆ.

ಆದರೆ, ಮುಂಜಾನೆ ಪ್ರದರ್ಶನದ ನಂತರವೇ ಚಿತ್ರದ ಯಶಸ್ಸು ಅಥವಾ ವೈಫಲ್ಯವನ್ನು ಘೋಷಿಸುವುದು ಸರಿಯಲ್ಲ ಎಂದು ಸಲಹೆ ನೀಡಿದ್ದಾರೆ.

# ಮುಟ್ಟಿನೋಡಿಕೊಳ್ಳೋ ಉತ್ತರ ಕೊಟ್ಟ ನಾನಿ

ಇತ್ತೀಚೆಗೆ ಆನ್‌ಲೈನ್‌ನಲ್ಲಿ ವಿಮರ್ಶೆ ಮಾಡುವವರ ಸಂಖ್ಯೆ ಹೆಚ್ಚಿದೆ. ಯೂಟ್ಯೂಬರ್‌ಗಳು ಪ್ರೇಕ್ಷಕರ ಎದುರು ಮೈಕ್ ಹಿಡಿದು ಸಿನಿಮಾ ಉತ್ತಮವಾಗಿ ಇದೆಯೋ ಅಥವಾ ಇಲ್ಲವೋ ಎಂಬ ಬಗ್ಗೆ ಕೇಳುತ್ತಾರೆ. ಅಲ್ಲಿಯೇ ಸಿನಿಮಾ ಹಿಟ್ ಅಥವಾ ಫ್ಲಾಪ್ ಎಂಬುದು ಕೂಡ ಘೋಷಣೆ ಆಗುತ್ತದೆ. ಈ ರೀತಿ ಮಾಡೋದು ಸರಿ ಅಲ್ಲ ಎಂಬುದು ಸಿನಿಮಾ ತಂಡದವರ ಅಭಿಪ್ರಾಯ. ಈ ಕಾರಣಕ್ಕೆ ಥಿಯೇಟರ್ ಹೊರಗೆ ಸಿನಿಮಾ ವಿಮರ್ಶೆ ಮಾಡೋದನ್ನು ಬ್ಯಾನ್ ಮಾಡಬೇಕು ಎನ್ನುವ ಆಗ್ರಹ ಕೇಳಿ ಬಂದಿದೆ. ಇದಕ್ಕೆ ನಾನಿ ಅವರು ಪ್ರತಿಕ್ರಿಯೆ ನೀಡಿದ್ದಾರೆ. ನಾನಿ ನಟನೆಯ 'ಹಿಟ್ 3' ಸಿನಿಮಾ ಮೇ 1ರಂದು ರಿಲೀಸ್ ಆಗುತ್ತಿದೆ.



# ಶೈನ್ ಟಾಮ್ ಚಾಕೊಗೆ ಕೊನೆ ಎಚ್ಚರಿಕೆ




## ಮಹಿಳೆಯ ಮೇಲೆ ದೌರ್ಜನ್ಯ ಡ್ರಗ್ಸ್ ಪ್ರಕರಣ

ಮಲಯಾಳಂ ಚಿತ್ರನಟ ಶೈನ್ ಟಾಮ್ ಚಾಕೊಗೆ ಕೇರಳ ಸಿನಿಮಾ ಕಲಾವಿದರ ಸಂಘ ಕೊನೆಯ ಎಚ್ಚರಿಕೆ ನೀಡಿದೆ. ಶೈನ್ ಟಾಮ್ ಚಾಕೊ ಇತ್ತೀಚೆಗೆ ಡ್ರಗ್ಸ್ ಪ್ರಕರಣದಲ್ಲಿ ಬಂಧಿತರಾಗಿದ್ದರು. ಅದರ ಜೊತೆಗೆ ನಟಿಯೊಬ್ಬರು ಶೈನ್ ವಿರುದ್ಧ ದುರ್ವರ್ತನೆಯ ಆರೋಪವನ್ನೂ ಸಹ ಮಾಡಿದ್ದರು. ಇದೇ ಕಾರಣಕ್ಕೆ ಚಾಕೊಗೆ ಕೊನೆಯ ಎಚ್ಚರಿಕೆ ನೀಡಲಾಗಿದೆ. ಮಲಯಾಳಂ ಚಿತ್ರರಂಗದ ತನ್ನ ಅದ್ಭುತ ಸಿನಿಮಾಗಳಿಂದ ದೇಶದ ಗಮನ ಸೆಳೆದಿದೆ. ಆದರೆ ಕಳೆದ ಕೆಲ ವರ್ಷಗಳಿಂದ ಮಲಯಾಳಂ ಚಿತ್ರರಂಗದಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ದೇಶದ ಚಿತ್ರರಂಗದ ಎದುರು ತಲೆ ತಗ್ಗಿಸುವಂತೆ ಮಾಡಿದೆ. ಮೊದಲಿಗೆ ಬಂದ ಹೇಮಾ ಕಮಿಟಿಯಿಂದಾಗಿ ಮಲಯಾಳಂ ಚಿತ್ರರಂಗದಲ್ಲಿ ಮಹಿಳೆಯರ ಸುರಕ್ಷತೆ ಬಗ್ಗೆ ಆತಂಕ ಪಡುವಂತೆ ಮಾಡಿತು. ಆ ಬಳಿಕ ಡ್ರಗ್ಸ್ ಪ್ರಕರಣ ಬೆಳಕಿಗೆ ಬಂತು. ಇತ್ತೀಚೆಗೆ ಸಹ ಮಲಯಾಳಂನ ಖ್ಯಾತ ನಟ ಶೈನ್ ಟಾಮ್ ಚಾಕೊ ಮಹಿಳೆಯ ಮೇಲೆ ದೌರ್ಜನ್ಯ ಮತ್ತು ಡ್ರಗ್ಸ್ ಪ್ರಕರಣ ಎರಡರಲ್ಲೂ ಆರೋಪಿಯಾಗಿ ಪೊಲೀಸರಿಂದಲೂ ಬಂಧಿತಗೊಂಡಿದ್ದರು. ಇದೀಗ ಮಲಯಾಳಂ ನಟನಿಗೆ ಚಿತ್ರರಂಗದ ಸಂಘ ಕೊನೆಯ ಎಚ್ಚರಿಕೆ ನೀಡಿದೆ. ಶೈನ್ ಟಾಮ್ ಚಾಕೊ ವಿರುದ್ಧ ನಟಿಯೊಬ್ಬರು ಮಲಯಾಳಂನ ಕಲಾವಿದರ ಸಂಘಕ್ಕೆ ದೂರು ನೀಡಿದ್ದರು.

# ಹತ್ಯಾಕಾಂಡ ಖಂಡಿಸಿದ ಶಾರುಖ್

ನಟ ಶಾರುಖ್ ಖಾನ್ ಅವರು ಪಹಲ್ಗಾಮ್ ದುರಂತದ ಬಗ್ಗೆ ಪ್ರತಿಕ್ರಿಯೆ ನೀಡಿದ್ದಾರೆ. ಉಗ್ರರ ದಾಳಿಯನ್ನು ಅವರು ಖಂಡಿಸಿದ್ದಾರೆ. ಒಂದು ರಾಷ್ಟ್ರವಾಗಿ ನಾವು ಒಗ್ಗಟ್ಟಿನಿಂದ ನಿಲ್ಲಬೇಕು ಎಂದು ಅವರು ಹೇಳಿದ್ದಾರೆ. ಶಾರುಖ್ ಖಾನ್ ಮಾತ್ರವಲ್ಲದೇ ಅನುಷ್ಕಾ ಶರ್ಮಾ, ಕಿಯಾರಾ ಅಡ್ವಾಣಿ, ಅಕ್ಷಯ್ ಕುಮಾರ್ ಮುಂತಾದವರು ಕೂಡ ಪ್ರತಿಕ್ರಿಯಿಸಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಿಂದ 28 ಮಂದಿ ಜೀವ ಕಳೆದುಕೊಂಡಿದ್ದಾರೆ. ಕಾಶ್ಮೀರಕ್ಕೆ ಪ್ರವಾಸಕ್ಕೆ ತೆರಳಿದ್ದವರನ್ನೇ ಟಾರ್ಗೆಟ್ ಮಾಡಿ ಹತ್ಯಾಕಾಂಡ ನಡೆಸಲಾಗಿದೆ. ಈ ಘಟನೆಯಲ್ಲಿ ಅಮಾಯಕರು ಜೀವ ಕಳೆದುಕೊಂಡಿದ್ದಾರೆ.

ಉಗ್ರರ ದಾಳಿಗೆ ಎಲ್ಲೆಡೆ ಖಂಡನೆ ವ್ಯಕ್ತವಾಗುತ್ತಿದೆ. ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಬಗ್ಗೆ ಶಾರುಖ್ ಖಾನ್ ಅವರು ಪ್ರತಿಕ್ರಿಯಿಸಿದ್ದಾರೆ. ಇನ್‌ಸ್ಟಾಗ್ರಾಮ್ ಸ್ಟೋರಿ ಹಾಗೂ ಎಕ್ಸ್ ಖಾತೆಯಲ್ಲಿ ಅವರು ಈ ಬಗ್ಗೆ ಪೋಸ್ಟ್ ಮಾಡಿದ್ದಾರೆ. 'ಪಹಲ್ಗಾಮ್‌ನಲ್ಲಿ ನಡೆದಿರುವ ವಿಶ್ವಾಸಘಾತುಕ ಕೃತ್ಯ ಮತ್ತು ಅಮಾನವೀಯ ಹಿಂಸಾಚಾರದ ಬಗ್ಗೆ ದುಃಖ ಮತ್ತು ಕೋಪವನ್ನು ವ್ಯಕ್ತಪಡಿಸಲು ಪದಗಳು ಸಾಲದು. ಇಂತಹ ಸಮಯದಲ್ಲಿ, ನಾವು ದೇವರ ಕಡೆಗೆ ನೋಡಿ, ಸಂತ್ರಸ್ತ ಕುಟುಂಬಗಳಿಗಾಗಿ ಪ್ರಾರ್ಥಿಸಬಹುದು ಮತ್ತು ನನ್ನ ಆಳವಾದ ಸಂತಾಪವನ್ನು ವ್ಯಕ್ತಪಡಿಸಬಹುದು. ಒಂದು ರಾಷ್ಟ್ರವಾಗಿ ನಾವು ಒಗ್ಗಟ್ಟಿನಿಂದ ಬಲವಾಗಿ ನಿಂತು ಈ ಘೋರ ಕೃತ್ಯದ ವಿರುದ್ಧ ನ್ಯಾಯವನ್ನು ಪಡೆಯೋಣ' ಎಂದು ಶಾರುಖ್ ಖಾನ್ ಬರೆದುಕೊಂಡಿದ್ದಾರೆ.



# ನಪುಂಸಕರು ಪಹಲ್ಗಾಮ್ ದಾಳಿ ಖಂಡಿಸಿದ ಕಂಗನಾ

ನಟಿ, ಬಿಜೆಪಿ ಸಂಸದೆ ಕಂಗನಾ ರನೌತ್ , ನಿನ್ನೆ ನಡೆದ ಪಹಲ್ಗಾಮ್ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಸರಣಿ ಪೋಸ್ಟ್‌ಗಳನ್ನು ಹಂಚಿಕೊಂಡಿರುವ ನಟಿ ಕಂಗನಾ, ತೀವ್ರ ಸಂಕಟ, ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ. 28 ಮಂದಿ ಪ್ರವಾಸಿಗರ ಸಾವಿಗೆ ಕಾರಣರಾದ ಭಯೋತ್ಪಾದಕರನ್ನು ನಪುಂಸಕರು ಎಂದು ನಟಿ ಕಂಗನಾ ಕರೆದಿದ್ದು, ಉಗ್ರರಿಗೆ ಧರ್ಮವಿದೆ, ಸಂತ್ರಸ್ತರಿಗೂ ಧರ್ಮವಿದೆ ಎಂದಿದ್ದಾರೆ. 'ಆ ದುರುಳರು ನಾಗರೀಕರ ಮೇಲೆ ದಾಳಿ ಮಾಡಿದ್ದಾರೆ. ಅವರನ್ನು ಕಾಪಾಡಿಕೊಳ್ಳಲು ಏನನ್ನೂ ಹೊಂದಿರದವರ ಮೇಲೆ ದಾಳಿ ಮಾಡಿ ನಪುಂಸಕತನ ಮೆರೆದಿದ್ದಾರೆ. ಇತಿಹಾಸದಲ್ಲಿ ಪ್ರತಿ ಯುದ್ಧವೂ ಸಹ ಯುದ್ಧಭೂಮಿಯಲ್ಲೇ ನಡೆದಿದೆ. ಆದರೆ ಈ ನಪುಂಸಕರು ಅಮಾಯಕರ ಮೇಲೆ ನಿರಸ್ತ್ರರಾಗಿರುವವರ ಮೇಲೆ ದಾಳಿ ಮಾಡಿದ್ದಾರೆ. ಯುದ್ಧಭೂಮಿಯ ಹೊರಗೆ ಕಾದಾಟ ಮಾಡುತ್ತಿರುವ ಈ ನಪುಂಸಕರ ಮೇಲೆ ಯುದ್ಧವಾದರೂ ಮಾಡುವುದು ಹೇಗೆ' ಎಂದು ಪ್ರಶ್ನೆ ಮಾಡಿದ್ದಾರೆ ಕಂಗನಾ.

ಮತ್ತೊಂದು ಪೋಸ್ಟ್‌ನಲ್ಲಿ 'ಭಯೋತ್ಪಾದಕರಿಗೆ ಧರ್ಮ ಇದೆ, ಸಂತ್ರಸ್ತರಿಗೂ ಧರ್ಮ ಇದೆ' ಎಂದಿದ್ದಾರೆ. ಭಯೋತ್ಪಾದಕರ ಧರ್ಮದ ಬಗ್ಗೆ ಬಹಿರಂಗವಾಗಿ ಹೇಳದೆ, ಮುಸ್ಲಿಂ ಭಯೋತ್ಪಾದಕರಿಂದ ಹಿಂದುಗಳು ದಶಕಗಳಿಂದಲೂ ಜೀವ ಕಳೆದುಕೊಳ್ಳುತ್ತಿದ್ದಾರೆ ಎಂದಿದ್ದಾರೆ.



# ಯಶ್ ಜೊತೆ ಇಲ್ಲ ಕ್ಲ್ಯಾಶ್

## 'ಟಾಕ್ಸಿಕ್'ಗೆ ಭಯಬಿದ್ದು ಹಿಂದೆ ಸರಿದ ಬನ್ಸಾಲಿ

ಕನ್ನಡ ಚಿತ್ರರಂಗದ ಬೆಳವಣಿಗೆಯನ್ನು ತೋರಿಸುವ ಒಂದು ಪ್ರಮುಖ ಘಟನೆ ಇತ್ತೀಚೆಗೆ ನಡೆದಿದೆ. ಬಾಲಿವುಡ್ ನಿರ್ಮಾಪಕ ಸಂಜಯ್ ಲೀಲಾ ಬನ್ಸಾಲಿ ಅವರು ತಮ್ಮ ಚಿತ್ರದ ರಿಲೀಸ್ ದಿನಾಂಕವನ್ನು ಬದಲಾಯಿಸಿದ್ದಾರೆ. ಯಶ್ ಅಭಿನಯದ 'ಟಾಕ್ಸಿಕ್' ಚಿತ್ರದ ಜೊತೆ ಕ್ಲಾಶ್ ಆಗುವುದನ್ನು ತಪ್ಪಿಸಲು ಈ ನಿರ್ಧಾರ ಮಾಡಿದ್ದಾರೆ ಎನ್ನಲಾಗಿದೆ. ಬೇರೆ ಭಾಷೆಯ ದೊಡ್ಡ ಚಿತ್ರಗಳು ಬರುತ್ತವೆ ಎಂದರೆ ಆ ಸಂದರ್ಭದಲ್ಲಿ ನಮ್ಮ ಸಿನಿಮಾಗಳನ್ನು ರಿಲೀಸ್ ಮಾಡಬೇಕೋ ಅಥವಾ ಬೇಡವೋ ಎಂಬ ಗೊಂದಲ ಮೂಡಿಸುವ ವಾತಾವರಣ ಸ್ಯಾಂಡಲ್‌ವುಡ್‌ನಲ್ಲಿ ಇತ್ತು. ಆದರೆ, ಈಗ ಕಾಲ ಬದಲಾಗಿದೆ. ಕನ್ನಡದ ಸಿನಿಮಾಗಳು ರಿಲೀಸ್ ಆಗುತ್ತವೆ ಎಂದರೆ ಬಾಲಿವುಡ್‌ನವರೂ ತಮ್ಮ ಚಿತ್ರವನ್ನು ರಿಲೀಸ್ ಮುಂದೂಡಿಕೊಳ್ಳುತ್ತಾರೆ. ಹಾಗಂತ ಇದು ಕಾಕಕ್ಕ-ಗುಬ್ಬಕ್ಕನ ಕಥೆ ಅಲ್ಲ. ಈ ರೀತಿ ನಿಜವಾಗಲೂ ನಡೆದಿದೆ. ಸಂಜಯ್ ಲೀಲಾ ಬನ್ಸಾಲಿ ಅವರು 'ಲವ್ ಆ ೦ಡ್ ವಾರ್' ಹೆಸರಿನ ಸಿನಿಮಾ ಮಾಡುತ್ತಿದ್ದಾರೆ. ಇದರಲ್ಲಿ ರಣಬೀರ್ ಕಪೂರ್, ವಿಕ್ಕಿ ಕೌಶಲ್ ಹಾಗೂ ಆಲಿಯಾ ಭಟ್ ಮುಖ್ಯ ಭೂಮಿಕೆಯಲ್ಲಿ ಇದ್ದಾರೆ. 2026ರ ಈದ್‌ಗೆ ಸಿನಿಮಾ ರಿಲೀಸ್ ಆಗಲಿದೆ ಎನ್ನುವ ಮಾಹಿತಿ ಇತ್ತು. ಈ ಸಂದರ್ಭದಲ್ಲಿ ಬಿಡುಗಡೆ ಹೊಂದಿದರೆ ಯಶ್ ನಟನೆಯ 'ಟಾಕ್ಸಿಕ್' ಚಿತ್ರದ ಜೊತೆ ಕ್ಲ್ಯಾಶ್ ಆಗಲಿದೆ. ಹೀಗಾಗಿ, ಬನ್ಸಾಲಿ ಈ ಬಗ್ಗೆ ಯೋಚಿಸುತ್ತಿದ್ದಾರೆ. 'ಲವ್ ಆಂಡ್ ವಾರ್' ಚಿತ್ರದ ಶೂಟ್ ಆರಂಭ ಆಗಿದೆ. ಎಲ್ಲವೂ ಅಂದುಕೊಂಡಂತೆ ನಡೆದರೆ ಚಿತ್ರವನ್ನು ಮಾರ್ಚ್‌ಗೆ ತರಬಹುದು. ಆದಾಗ್ಯೂ, ಬನ್ಸಾಲಿ ಅವರು ಈ ವಿಚಾರದಲ್ಲಿ ಮನಸ್ಸು ಮಾಡುತ್ತಿಲ್ಲ.

# ಭಯೋತ್ಪಾದಕ ದಾಳಿಗೆ ಪಾಕಿಸ್ತಾನಿ ಕ್ರಿಕೆಟಿಗರ ಆಕ್ರೋಶ

## ಯಾವಾಗಲೂ ಹಿಂದೂಗಳೇ ಏಕೆ'

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ಹಿಂದೂ ಯಾತ್ರಿಗಳ ಮೇಲೆ ನಡೆಸಿದ ದಾಳಿಯಿಂದ 28 ಜನರು ಮೃತಪಟ್ಟಿದ್ದಾರೆ. ಈ ಘಟನೆ ಜಾಗತಿಕ ಆಕ್ರೋಶಕ್ಕೆ ಕಾರಣವಾಗಿದೆ. ಪಾಕಿಸ್ತಾನದ ಮಾಜಿ ಕ್ರಿಕೆಟಿಗ ಡ್ಯಾನಿಶ್ ಕನೇರಿಯಾ ಈ ಘಟನೆಯನ್ನು ಖಂಡಿಸಿದ್ದು, ಸ್ಥಳೀಯರ ಬೆಂಬಲವಿಲ್ಲದೆ ಇಂತಹ ದಾಳಿಗಳು ಸಾಧ್ಯವಿಲ್ಲ ಎಂದು ಆರೋಪಿಸಿದ್ದಾರೆ.

ಭೂ ಲೋಕದ ಸ್ವರ್ಗ ಕಾಶ್ಮೀರ, ಎರಡು ದಿನಗಳಿಂದ ನರಕವಾಗಿ ಮಾರ್ಪಟ್ಟಿದೆ. ಕುಟುಂಬದೊಂದಿಗೆ ಪ್ರಸಿದ್ಧ ಪ್ರವಾಸಿ ತಾಣವಾದ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ಗೆ ತೆರಳಿದ್ದ ಹಿಂದೂಗಳ ಮಾರಣಹೋಮವಾಗಿದೆ. ಭಯೋತ್ಪಾದಕರ ಬಂದೂಕಿನ ಮೊರೆತಕ್ಕೆ 26 ಅಮಾಯಕ ಜೀವಗಳು ಪ್ರಾಣ ಬಿಟ್ಟಿವೆ. ಧರ್ಮ ಕೇಳಿ ಪ್ರವಾಸಿಗರನ್ನು ಕೊಂದ ಈ ಭಯೋತ್ಪಾದಕರ ಪೈಶಾಚಿಕ ಕೃತ್ಯಕ್ಕೆ ಭಾರತದಲ್ಲಿ ಮಾತ್ರವಲ್ಲದೆ ಪ್ರಪಂಚದಾದ್ಯಂತ ಆಕ್ರೋಶ ವ್ಯಕ್ತವಾಗಿದೆ. ಈ ಭಯೋತ್ಪಾದಕ ಹೀನ ಕೃತ್ಯವನ್ನು ಖಂಡಿಸಿರುವ ಪಾಕಿಸ್ತಾನದ ಮಾಜಿ ಕ್ರಿಕೆಟಿಗ ಡ್ಯಾನಿಶ್ ಕನೇರಿಯಾ ಕೂಡ ಈ ಘಟನೆಗೆ ಸ್ಥಳೀಯ ಜನರ ಬೆಂಬಲವೂ ಕಾರಣ ಎಂದು ಆರೋಪಿಸಿದ್ದಾರೆ.

**ಯಾವಾಗಲೂ ಹಿಂದೂಗಳೇ ಏಕೆ:** ಭಯೋತ್ಪಾದಕ ದಾಳಿಯ ವಿರುದ್ಧ ಆಕ್ರೋಶ ಹೊರಹಾಕಿರುವ ಪಾಕಿಸ್ತಾನದ ಮಾಜಿ ಕ್ರಿಕೆಟಿಗ ಡ್ಯಾನಿಶ್ ಕನೇರಿಯಾ, 'ಸ್ಥಳೀಯ ಕಾಶ್ಮೀರಿಗಳು ಈ ಭಯೋತ್ಪಾದಕ ದಾಳಿಗಳಿಗೆ ಏಕೆ ಬಲಿಯಾಗುವುದಿಲ್ಲ. ಭಯೋತ್ಪಾದಕರು ಎಂದಿಗೂ ಸ್ಥಳೀಯ ಕಾಶ್ಮೀರಿಗಳನ್ನು ಗುರಿಯಾಗಿಸಿಕೊಳ್ಳದೆ, ನಿರಂತರವಾಗಿ ಹಿಂದೂಗಳ ಮೇಲೆ ದಾಳಿ ಮಾಡುವುದೇಕೆ ಅದು ಕಾಶ್ಮೀರಿ ಪಂಡಿತರಾಗಿರಲಿ ಅಥವಾ ಭಾರತದಾದ್ಯಂತದ ಹಿಂದೂ ಪ್ರವಾಸಿಗರಾಗಿರಲಿ ಏಕೆಂದರೆ ಭಯೋತ್ಪಾದನೆಯನ್ನು ಹೇಗೆ ಮರೆಮಾಡಿದರೂ, ಅದೇ ಸಿದ್ಧಾಂತವನ್ನು ಅನುಸರಿಸುತ್ತದೆ. ಮತ್ತು ಇಡೀ ಜಗತ್ತು ಅದಕ್ಕೆ ಬೆಲೆ ತೆರುತ್ತಿದೆ'' ಎಂದು ಕನೇರಿಯಾ ತಮ್ಮ ಸೋಶಿಯಲ್ ಮೀಡಿಯಾ ಖಾತೆ 'ಎಕ್ಸ್' ನಲ್ಲಿ ಪೋಸ್ಟ್ ಮಾಡಿದ್ದಾರೆ.

ಇಂತಹ ಘಟನೆಗಳು ಸ್ಥಳೀಯ ಜನರ ಸಹಾಯವಿಲ್ಲದೆ ಜರುಗಲು ಸಾಧ್ಯವಿಲ್ಲ ಎಂದು ಮಾಡಿರುವ ಪೋಸ್ಟ್ ಅನ್ನು ರೀ ಪೋಸ್ಟ್ ಮಾಡಿರುವ ಕನೇರಿಯಾ ಈ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದಾರೆ.

**ದುಃಖ ವ್ಯಕ್ತಪಡಿಸಿದ ಹಫೀಜ್:** ಮತ್ತೊಂದೆಡೆ, ಪಾಕಿಸ್ತಾನ ಕ್ರಿಕೆಟ್ ತಂಡದ ಮಾಜಿ ನಾಯಕ ಮೊಹಮ್ಮದ್ ಹಫೀಜ್ ಕೂಡ ಪಹಲ್ಗಾಮ್ ಕೃತ್ಯದ ಬಗ್ಗೆ ದುಃಖ ವ್ಯಕ್ತಪಡಿಸಿದ್ದು, ತಮ್ಮ ಎಕ್ಸ್ ಖಾತೆಯಲ್ಲಿ 'ನನಗೆ ದುಃಖವಾಗಿದೆ, ನನ್ನ ಹೃದಯ ಮುರಿದಿದೆ.' ಎಂದು ಬರೆದುಕೊಂಡಿದ್ದಾರೆ.

**ಇದುವರೆಗೆ 28 ಜನರ ಸಾವು**

ಮಂಗಳವಾರ, ಏಪ್ರಿಲ್ 22 ರಂದು, ಕೆಲವು ಭಯೋತ್ಪಾದಕರು ಪಹಲ್ಗಾಮ್‌ನಲ್ಲಿ ಡಜನ್ಗಟ್ಟಲೆ ಪ್ರವಾಸಿಗರ ಮೇಲೆ ಇದ್ದಕ್ಕಿದ್ದಂತೆ ಗುಂಡು ಹಾರಿಸಿದ್ದಾರೆ. ಈ ವೇಳೆ ಭಯೋತ್ಪಾದಕರು, ಪ್ರವಾಸಿಗರ ಧರ್ಮದ ಬಗ್ಗೆ ಕೇಳಿ, ಅವರು ಹಿಂದೂ ಧರ್ಮದವರು ಎಂಬುದು ಗೊತ್ತಾಗುತ್ತಿದ್ದಂತೆ ಅವರ ಮೇಲೆ ಗುಂಡು ಹಾರಿಸಿ ಹತ್ಯೆ ಮಾಡಿದ್ದಾರೆ ಎಂಬ ಸುದ್ದಿ ಹೊರಬಿದ್ದಿದೆ. ಈ ಘೋರ ಘಟನೆಯಲ್ಲಿ ಇಲ್ಲಿಯವರೆಗೆ 28 ಜನರು ಸಾವನ್ನಪ್ಪಿದ್ದಾರೆ, ಅವರಲ್ಲಿ ಹೆಚ್ಚಿನವರು ಕಾಶ್ಮೀರಕ್ಕೆ ಪ್ರವಾಸಕ್ಕೆಂದು ಬಂದಿದ್ದ ಪ್ರವಾಸಿಗರಾಗಿದ್ದಾರೆ.



# ಹೈದರಾಬಾದ್‌ನಲ್ಲೂ ಹಿಟ್ ಮ್ಯಾನ್ ಶೋ!

## ನಿರಂತರ 4 ಗೆಲುವಿನೊಂದಿಗೆ ಅಂಕಪಟ್ಟಿಯಲ್ಲಿ ಆರ್‌ಸಿಬಿಗೆ ಮುಂಬೈ ಠಕ್ಕರ್!

ಟ್ರೆಂಟ್ ಬೌಲ್ಟ್ ಮಾರಕ ಬೌಲಿಂಗ್ ಮತ್ತು ಹಿಟ್ ಮ್ಯಾನ್ ರೋಹಿತ್ ಶರ್ಮಾ ಅವರ ಆಕರ್ಷಕ ಅರ್ಧಶತಕದ ನೆರವಿನಿಂದ ಮುಂಬೈ ಇಂಡಿಯನ್ಸ್ ತಂಡ ಸನ್ ರೈಸರ್ಸ್ ಹೈದರಾಬಾದ್ ತಂಡವನ್ನು 7 ವಿಕೆಟ್ ಗಳಿಂದ ಬಗ್ಗು ಬಡಿದಿದೆ. ಸತತ ನಾಲ್ಕನೇ ಗೆಲುವು ಕಂಡಿರುವ ಮುಂಬೈ ಪಡೆ ಇದೀಗ ಅಂಕಪಟ್ಟಿಯಲ್ಲೂ ವ್ಯಾಪಕ ಜಿಗಿತ ಕಂಡಿದೆ. 6ನೇ ಸ್ಥಾನದಲ್ಲಿದ್ದ ಹಾರ್ದಿಕ್ ಪಾಂಡ್ಯ ಬಳಗ ಇದೀಗ 9 ಪಂದ್ಯಗಳಲ್ಲಿ 5 ಗೆಲುವು ಮತ್ತು 4 ಸೋಲಿನೊಂದಿಗೆ 10 ಅಂಕಗಳನ್ನು ಕಲೆ ಹಾಕಿದ್ದು 3ನೇ ಸ್ಥಾನಕ್ಕೇರಿದೆ. ಹೀಗಾಗಿ ರಾಯಲ್ಸ್ ಚಾಲೆಂಜರ್ಸ್ ಬೆಂಗಳೂರು ತಂಡ 3ರಿಂದ 4ನೇ ಸ್ಥಾನಕ್ಕೆ ತಳ್ಳಲ್ಪಟ್ಟಿದೆ. ಮುಂಬೈ ವಿರುದ್ಧ ಪರಾಭವಗೊಂಡ ಸನ್ ರೈಸರ್ಸ್ ತಂಡ ಆಡಿರುವ 8 ಪಂದ್ಯಗಳಿಂದ 2 ಗೆಲುವಿನೊಂದಿಗೆ 9ನೇ ಸ್ಥಾನದಲ್ಲೇ ಮುಂದುವರಿದಿದೆ.

ಹೈದರಾಬಾದ್ ನ ರಾಜೀವ್ ಗಾಂಧಿ ಕ್ರೀಡಾಂಗಣದಲ್ಲಿ ಬುಧವಾರ ನಡೆದ ಪಂದ್ಯದಲ್ಲಿ ಗೆಲುವಿಗೆ 144 ರನ್ ಗಳ ಗುರಿ ಪಡೆದ ಮುಂಬೈ ಕೇವಲ 3 ವಿಕೆಟ್ ಕಳೆದುಕೊಂಡು ಇನ್ನೂ 26 ಎಸೆತಗಳು ಬಾಕಿ ಇರುವಂತೆ ಜಯಶಾಲಿ ಯಾಯಿತು.



## ಸನ್ ರೈಸರ್ಸ್ ಬ್ಯಾಟರ್‌ಗಳ ವೈಫಲ್ಯ

ಮುಂಬೈ ಇಂಡಿಯನ್ಸ್ ತಂಡದ ಆರಂಭಿಕ ರಾನ್ ರಿಕಲ್ಟನ್ ಅವರು ಬೇಗನೇ ಔಟಾದರೂ ರೋಹಿತ್ ಶರ್ಮಾ(70) ಮತ್ತು ವಿಲ್ ಜಾಕ್ಸ್(22) ತಂಡದ ಇನ್ನಿಂಗ್ಸ್ ಕಟ್ಟಿದರು. ವಿಲ್ ಜಾಕ್ಸ್ ವಿಕೆಟ್ ಪತನದ ಬಳಿಕ ಸೂರ್ಯಕುಮಾರ್ ಯಾದವ್ (40) ಅವರು ರೋಹಿತ್ ಶರ್ಮಾ ಅವರ ಜೊತೆ ಸೇರಿ ಹೈದರಾಬಾದ್ ಬೌಲರ್ ಗಳನ್ನು ಗೋಳು ಹೊಯ್ದುಕೊಂಡರು.

ಈ ಸೀಸನ್ ನಲ್ಲಿ 2ನೇ ಅರ್ಧಶತಕ ಬಾರಿಸಿದ ರೋಹಿತ್ ಶರ್ಮಾ 46 ಎಸೆತಗಳಿಂದ 8 ಬೌಂಡರಿ ಮತ್ತು 3 ಸಿಕ್ಸರ್ ಗಳನ್ನು ಒಳಗೊಂಡ 70 ರನ್‌ಗಳನ್ನು ಚಚ್ಚಿದರು.


ಇನ್ನು ಸೂರ್ಯಕುಮಾರ್ ಅವರು 19 ಎಸೆತಗಳಿಂದ 5 ಬೌಂಡರಿ ಮತ್ತು 2 ಸಿಕ್ಸರ್ ಗಳಿದ್ದ 40 ರನ್ ಗಳಿಸಿ ಅಜೇಯರಾಗುಳಿದರು. ಅಗ್ರಕ್ರಮಾಂಕದ ಟ್ರಾವಿಸ್ ಹೆಡ್ (0), ಇಶಾನ್ ಕಿಶನ್(1), ಅಭಿಷೇಕ್ ಶರ್ಮಾ(8)), ನಿತೀಶ್ ಕುಮಾರ್ ರೆಡ್ಡಿ(2), ಅನಿಕೇತ್ ವರ್ಮಾ(12) ಮೊದಲಾದ ಘಟಾನುಘಟಿ ಬ್ಯಾಟರ್ ಗಳು ಮುಂಬೈ ಬಿಗು ದಾಳಿಯ ಮುಂದೆ ತರಗೆಲೆಗಳಂತೆ ಉದುರಿದ್ದರಿಂದ ಹೈದರಾಬಾದ್ ತಂಡ ಕೇವಲ 35 ರನ್ ಗಳಿಗೆ 5 ವಿಕೆಟ್ ಕಳೆದುಕೊಂಡಿತ್ತು.

# ಝಹೀರ್-ಪಂತ್ ಮಾತಿನ ಚಕಮಕಿ

ಲಕ್ನೋ ಸೂಪರ್ ಜೈಂಟ್ಸ್ ತಂಡದಲ್ಲಿ ಎಲ್ಲವೂ ಸರಿಯಿಲ್ಲವಾ ಇಂತಹದೊಂದು ಪ್ರಶ್ನೆ ಹುಟ್ಟಿಕೊಳ್ಳಲು ಮುಖ್ಯ ಕಾರಣ ಐಪಿಎಲ್‌ನ 40ನೇ ಪಂದ್ಯ. ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧದ ಈ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಕೊನೆಯ ಬ್ಯಾಟರ್ ಆಗಿ ಕಣಕ್ಕಿಳಿದದ್ದು ನಾಯಕ ರಿಷಭ್ ಪಂತ್ . ರಿಷಭ್ ಪಂತ್ 7ನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಬಂದಿದ್ದು ಅಚ್ಚರಿಗೆ ಕಾರಣವಾಗಿತ್ತು. ಇದರ ಬೆನ್ನಲ್ಲೇ ಪಂತ್ ಅವರು ಲಕ್ನೋ ಸೂಪರ್ ಜೈಂಟ್ಸ್ ತಂಡದ ಮೆಂಟರ್ ಝಹೀರ್ ಖಾನ್ ಜೊತೆ ವಾಗ್ವಾದ ನಡೆಸುತ್ತಿರುವ ವಿಡಿಯೋವೊಂದು ವೈರಲ್ ಆಗಿದೆ.

ಮೇಲ್ಕ್ರಮಾಂಕಕ್ಕೆ ತನ್ನನ್ನು ಬ್ಯಾಟಿಂಗ್‌ಗೆ ಕಳುಹಿಸದಿರುವ ಬಗ್ಗೆ ರಿಷಭ್ ಪಂತ್, ಝಹೀರ್ ಖಾನ್ ಅವರೊಂದಿಗೆ ಆಕ್ರೋಶ ವ್ಯಕ್ತಪಡಿಸುತ್ತಿರುವಂತೆ ಈ ವಿಡಿಯೋದಲ್ಲಿ ಕಾಣಬಹುದು. ಈ ಮಾತಿನ ಚಕಮಕಿಯ ಬಳಿಕ ರಿಷಭ್ ಪಂತ್ 20ನೇ ಓವರ್‌ನಲ್ಲಿ ಬ್ಯಾಟಿಂಗ್‌ಗೆ ಆಗಮಿಸಿದ್ದರು. ಹೀಗಾಗಿಯೇ ಇದೀಗ ಲಕ್ನೋ ಸೂಪರ್ ಜೈಂಟ್ಸ್ ತಂಡದಲ್ಲಿ ಎಲ್ಲವೂ ಸರಿಯಿಲ್ಲವಾ ಎಂಬ ಪ್ರಶ್ನೆಯೊಂದು ಹುಟ್ಟಿಕೊಂಡಿದೆ.

ಇನ್ನು ಈ ಪಂದ್ಯದಲ್ಲಿ ಟಾಸ್ ಸೋತರೂ ಮೊದಲು ಬ್ಯಾಟ್ ಮಾಡಿದ ಲಕ್ನೋ ಸೂಪರ್ ಜೈಂಟ್ಸ್ ತಂಡವು 20 ಓವರ್‌ಗಳಲ್ಲಿ 159 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಡೆಲ್ಲಿ ಕ್ಯಾಪಿಟಲ್ಸ್ ತಂಡವು 17.5 ಓವರ್‌ಗಳಲ್ಲಿ 161 ರನ್ ಬಾರಿಸಿ 8 ವಿಕೆಟ್‌ಗಳ ಭರ್ಜರಿ ಗೆಲುವು ದಾಖಲಿಸಿದೆ.




# ಉಗ್ರರ ದಾಳಿಗೆ ಕ್ರಿಕೆಟಿಗರ ಆಕ್ರೋಶ

ಜಮ್ಮು ಮತ್ತು ಕಾಶ್ಮೀರದ ಅನಂತ್‌ನಾಗ್‌ನ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಿಂದಾಗಿ 26 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಈ ದಾಳಿಯನ್ನು ಖಂಡಿಸಿ ಟೀಮ್ ಇಂಡಿಯಾ ಕ್ರಿಕೆಟಿಗರಾದ ವಿರಾಟ್ ಕೊಹ್ಲಿ, ಮೊಹಮ್ಮದ್ ಸಿರಾಜ್, ಸೂರ್ಯಕುಮಾರ್ ಸೋಷಿಯಲ್ ಮೀಡಿಯಾ ಪೋಸ್ಟ್‌ಗಳನ್ನು ಹಂಚಿಕೊಂಡಿದ್ದಾರೆ.

ಪಹಲ್ಗಾಮ್‌ನಲ್ಲಿ ಅಮಾಯಕರ ಮೇಲೆ ನಡೆದ ಘೋರ ದಾಳಿಯಿಂದ ತೀವ್ರ ದುಃಖವಾಗಿದೆ. ಮೃತರ ಕುಟುಂಬಗಳಿಗೆ ಹೃತ್ಪೂರ್ವಕ ಸಂತಾಪಗಳು.

ಪ್ರಾಣ ಕಳೆದುಕೊಂಡ ಎಲ್ಲರ ಕುಟುಂಬಗಳಿಗೆ ಶಾಂತಿ ಮತ್ತು ಶಕ್ತಿ ನೀಡಲಿ ಮತ್ತು ಈ ಕ್ರೂರ ಕೃತ್ಯಕ್ಕೆ ನ್ಯಾಯ ದೊರಕಲಿ ಎಂದು ಪ್ರಾರ್ಥಿಸುತ್ತೇನೆ ಎಂದು ವಿರಾಟ್ ಕೊಹ್ಲಿ ತಮ್ಮ ಇನ್‌ಸ್ಟಾಗ್ರಾಮ್‌ನಲ್ಲಿ ಬರೆದುಕೊಂಡಿದ್ದಾರೆ. ಇನ್ನು ಈ ದಾಳಿ ಕುರಿತಾಗಿ ಟೀಮ್ ಇಂಡಿಯಾ ಆಟಗಾರ ಮೊಹಮ್ಮದ್ ಸಿರಾಜ್ ಕೂಡ ಇನ್‌ಸ್ಟಾದಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಂಡಿದ್ದು, All Eyes on pahalgam ಎಂಬ ಪೋಸ್ಟರ್ ಹಂಚಿಕೊಳ್ಳುವ ಮೂಲಕ ಉಗ್ರರ ದಾಳಿಯನ್ನು ಖಂಡಿಸಿದ್ದಾರೆ. ಪಹಲ್ಗಾಮ್‌ನಲ್ಲಿ ನಡೆದ ಹೇಡಿತನದ ದಾಳಿಯ ಸುದ್ದಿಯಿಂದ ಆಘಾತವಾಗಿದೆ. ಭಯೋತ್ಪಾದನೆಯ ವಿರುದ್ಧ ಒಗ್ಗಟ್ಟಿನಿಂದ ನಿಲ್ಲೋಣ. ಮೃತರ ಮತ್ತು ಅವರ ಕುಟುಂಬಗಳಿಗೆ ಶಕ್ತಿ ಮತ್ತು ನ್ಯಾಯಕ್ಕಾಗಿ ಪ್ರಾರ್ಥಿಸೋಣ ಎಂದು ಮುಂಬೈ ಇಂಡಿಯನ್ಸ್ ತಂಡದ ಆಟಗಾರ ಸೂರ್ಯಕುಮಾರ್ ಯಾದವ್ ಸೋಷಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ. ಇನ್ನು ಈ ದಾಳಿಯನ್ನು ಖಂಡಿಸಿ ಮುಂಬೈ ಇಂಡಿಯನ್ಸ್ ತಂಡದ ನಾಯಕ ಪಾಂಡ್ಯ ಕೂಡ ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್‌ವೊಂದನ್ನು ಹಂಚಿಕೊಂಡಿದ್ದಾರೆ. ಪಹಲ್ಗಾಮ್‌ನ ಸುದ್ದಿಯಿಂದ ಆಘಾತಗೊಂಡಿದ್ದೇನೆ. ಸಂತ್ರಸ್ತರು ಮತ್ತು ಅವರ ಕುಟುಂಬಗಳೊಂದಿಗೆ ನನ್ನ ಪರ ನಿಲ್ಲುವೆ ಎಂದು ಬರೆದುಕೊಂಡಿದ್ದಾರೆ.



# ತಲೆಬುಡವಿಲ್ಲದ ಉತ್ತರ ನೀಡಿದ ರಿಷಭ್ ಪಂತ್



ಐಪಿಎಲ್ 2025ರ 40ನೇ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡ ಜಯ ಸಾಧಿಸಿದೆ. ಲಕ್ನೋನ ಏಕಾನ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಲಕ್ನೋ ಸೂಪರ್ ಜೈಂಟ್ಸ್ ತಂಡವು 20 ಓವರ್‌ಗಳಲ್ಲಿ 1596 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಡೆಲ್ಲಿ ಕ್ಯಾಪಿಟಲ್ಸ್ ತಂಡವು 17.5 ಓವರ್‌ಗಳಲ್ಲಿ 161 ರನ್ ಬಾರಿಸಿ 8 ವಿಕೆಟ್‌ಗಳ ಗೆಲುವು ದಾಖಲಿಸಿದೆ. ಈ ಹೀನಾಯ ಸೋಲಿನ ಬಳಿಕ ಮಾತನಾಡಿದ ಲಕ್ನೋ ಸೂಪರ್ ಜೈಂಟ್ಸ್ ತಂಡದ ನಾಯಕ ರಿಷಭ್ ಪಂತ್, ಪಂದ್ಯವು ಹೀಗೆ ನಡೆಯುತ್ತದೆ, ಹೀಗೆ ಆಗುತ್ತದೆ ಎಂದು ಯಾರನ್ನೂ ದೂರನ್ನು ಸಾಧ್ಯವಿಲ್ಲ. ಏಕೆಂದರೆ ಎರಡನೇ ಇನಿಂಗ್ಸ್‌ನಲ್ಲಿ ಬ್ಯಾಟಿಂಗ್ ಸುಲಭವಾಗುತ್ತದೆ. ಹೀಗಾಗಿ ನಾವು ಸೋಲನುಭವಿಸಿದ್ದೇವೆ ಎಂದರು. ಲಕ್ನೋ ಪಂದ್ಯಗಳಲ್ಲಿ ಟಾಸ್ ದೊಡ್ಡ ಪಾತ್ರ ವಹಿಸುತ್ತಿದೆ. ಹೀಗಾಗಿ ಸೋಲಿಗೆ ನಾನು ನೆಪಗಳನ್ನು ಹುಡುಕುತ್ತಿಲ್ಲ. ಇದಾಗ್ಯೂ, ನಾವು ಈ ಪಂದ್ಯದಲ್ಲಿ 20 ರನ್‌ಗಳನ್ನು ಕಡಿಮೆ ಕಲೆಹಾಕಿದ್ದೆವು. ಇದು ಸಹ ಒಂದು ಕಾರಣ ಎಂದು ರಿಷಭ್ ಪಂತ್ ಹೇಳಿದ್ದಾರೆ. ಇನ್ನು ನೀವೇಕೆ 7ನೇ ಕ್ರಮಾಂಕದಲ್ಲಿ ಬ್ಯಾಟಿಂಗ್ ಮಾಡಿದ್ದೀರಿ ಎಂಬ ಪ್ರಶ್ನೆಗೆ ಉತ್ತರಿಸಿದ ಪಂತ್, ನಾವು ಸಂದರ್ಭಗಳ ಲಾಭವನ್ನು ಪಡೆಯಲು ಬಯಸಿದ್ದೆವು. ಅದಕ್ಕಾಗಿ ನಾನು ಕೆಳ ಕ್ರಮಾಂಕದಲ್ಲಿ ಬ್ಯಾಟ್ ಬೀಸಿದೆ ಎನ್ನುವ ಮೂಲಕ ಅಚ್ಚರಿ ಮೂಡಿಸಿದರು. ಈ ಪಿಚ್‌ನ ಸಂಪೂರ್ಣ ಲಾಭ ಪಡೆಯಲು ನಾವು ಅಬ್ದುಲ್ ಸಮದ್ ಅವರನ್ನು ಮೇಲಿನ ಕ್ರಮಾಂಕದಲ್ಲಿ ಕಳಿಸಿದೆವು. ಆ ಬಳಿಕ ಡೇವಿಡ್ ಮಿಲ್ಲರ್‌ಗೆ ಅವಕಾಶ ನೀಡಿದೆವು. ಆದರೆ ಅವರಿಂದ ನಿರೀಕ್ಷಿತ ಬ್ಯಾಟಿಂಗ್ ಮೂಡಿ ಬಂದಿರಲಿಲ್ಲ ಎಂದು ರಿಷಭ್ ಪಂತ್ ಹೇಳಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966